ಸಂಪುಟ: 05 ಸಂಚಿಕೆ: 66 ಪುಟಗಳು: 08 ಮಂಗಳವಾರ 20 ಮೇ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**
ಸಮರ್ಪಣೆಯೇ ಆಧ್ಯಾತ್ಮಿಕತೆಯ ರಹಸ್ಯ. ನಿಮ್ಮನ್ನು ನೀವು ಆಧ್ಯಾತ್ಮಿಕ ಮಾರ್ಗದಲ್ಲಿ ಸಮರ್ಪಣೆ ಮಾಡಿಕೊಂಡಷ್ಟು ಅಭಿವೃದ್ಧಿಯು ನಿಮಗೆ ಸಾಥ್ ನೀಡುವುದು.

# ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ



## ಮಳೆ ಅವಾಂತರಕ್ಕೆ ಜನ ಸುಸ್ತೋ ಸುಸ್ತು! ಅಗೆದಿಟ್ಟ ರಸ್ತೆ, ಮುಗಿದಿಲ್ಲ ಕಾಮಗಾರಿ... ಇದು 'ಗ್ರೇಟರ್' ಅಲ್ಲ 'ವಾಟರ್'

### ಬೆಂಗಳೂರನ್ನು ನೀರಲ್ಲಿ ಮುಳುಗಿಸಿದ ಸರ್ಕಾರ

ಬೆಂಗಳೂರನ್ನು ನೀರಲ್ಲಿ ಮುಳುಗಿಸಿ ಮೊದಲಿದ್ದ ಬೆಂಗಳೂರಿನ ಹೆಸರನ್ನು ಪ್ರವಾಹದಲ್ಲಿ ಅಳುಕಿಸಿ ಹಾಕಿದ ಸರ್ಕಾರ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ಬೆಂಗಳೂರಿಂದ ಅತ್ಯಧಿಕ ತೆರಿಗೆ ಪಡೆಯುವ ಸರ್ಕಾರ ಕಳೆದ ಎರಡು ವರ್ಷದಿಂದ ಮಳೆ ಪರಿಹಾರಕ್ಕಾಗಿ ನಮ್ಮ ಸರ್ಕಾರದ ಅವಧಿಯಲ್ಲಿ ನೀಡಿದ್ದ 2000 ಕೋಟಿ ಹಣ ಬಿಡುಗಡೆ ಮಾಡದೇ, ಸಿಲಿಕಾನ ಸಿಟಿ, ಶ್ರೀಮಂತ ಸಿಟಿ ಬೆಂಗಳೂರನ್ನು ಬಡ ಸಿಟಿ ಬೆಂಗಳೂರನ್ನಾಗಿ ಮಾಡಿದೆ ಇದು ಅತ್ಯಂತ ಖಂಡನೀಯ ಕೂಡಲೇ ಸರ್ಕಾರ ಎಚ್ಚೆತ್ತುಕೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

# ಮುಳುಗಿದ ಬೆಂಗಳೂರು ಎಲ್ಲೆಲ್ಲೂ ನೀರೋ ನೀರು


• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿ ಇದೀಗ ವಾಟರ್ ಸಿಟಿ ಆಗಿದೆ. ಒಂದೆರಡು ದಿನಗಳ ಮಳೆಗೆ ಜನರು ಹೈರಾಣಾಗಿದ್ದಾರೆ. ನಗರದ ರಸ್ತೆಗಳಲ್ಲಿ ವಾಹನ ಸವಾರರು ಪರದಾಡುತ್ತಿದ್ದಾರೆ. ಅಂಗಡಿ, ಮುಗ್ಗಟ್ಟುಗಳ ಮುಂದೆ ಅಗೆದಿಟ್ಟ ರಸ್ತೆಗಳು ಪಾದಾಚಾರಿಗಳು ಹಾಗೂ ಅಂಗಡಿ ಮಾಲೀಕರಿಗೆ ಇನ್ನಿಲ್ಲದ ಸಮಸ್ಯೆಯನ್ನು ನೀಡುತ್ತಿದೆ. ಬೆಂಗಳೂರು ಮಹಾನಗರವನ್ನು ಗ್ರೇಟರ್ ಬೆಂಗಳೂರು ಮಾಡಲು ಹೊರಟಿರುವ ಸರ್ಕಾರ ನಗರದ ಅಧೋಸ್ಥಿತಿಯಲ್ಲಿ ತುರ್ತು ಗಮನ ಹರಿಸಬೇಕಾಗಿದೆ.

**ಎಲ್ಲೆಲ್ಲಿ ಜಲಾವೃತ?:** ಬೆಂಗಳೂರಿನಲ್ಲಿ ಭಾನುವಾರ ಸುರಿದ ಧಾರಾಕಾರ ಮಳೆಯಿಂದಾಗಿ ರಾಜಕಾಲುವೆಗಳು ತುಂಬಿ ಹರಿಯುತ್ತಿವೆ. ಹಲವು ಕಟ್ಟಡಗಳಿಗೆ ನೀರು ನುಗ್ಗಿದೆ. ರಸ್ತೆಗಳು ಜಲಾವೃತವಾಗಿವೆ. ಶಾಂತಿನಗರದಲ್ಲಿರುವ ಸಿಸಿಬಿ ಕಚೇರಿಗೆ ಮಳೆ ನೀರು ನುಗ್ಗಿದೆ. ಕಚೇರಿಯ ಕೆಳಮಹಡಿಯಲ್ಲಿ ಮೊಣಕಾಲಿನ ವರೆಗೂ ನೀರು ನಿಂತಿದೆ. ಪರಿಣಾಮವಾಗಿ ಸಿಬ್ಬಂದಿ ಪರದಾಡುವಂತಾಯಿತು. ಅಷ್ಟೇ ಅಲ್ಲದೆ ಸಿಸಿಬಿ ಕಚೇರಿ ಕಡತಗಳಿಗೂ ಹಾನಿ ಉಂಟಾಗಿದೆ.

**ವಸತಿ ಪ್ರದೇಶಗಳಿಗೂ ನುಗ್ಗಿದ ನೀರು:** ಬೆಂಗಳೂರಿನಲ್ಲಿ ಭಾನುವಾರ ಸುರಿದ ಮಳೆಯಿಂದಾಗಿ ವಸತಿ ಪ್ರದೇಶಗಳಿಗೂ ನೀರು ನುಗ್ಗಿದೆ. ಹೊರಮಾವು ಬಳಿಕ ತಗ್ಗು ಪ್ರದೇಶದ ಮನೆಗಳಿಗೆ ಮಳೆ ನೀರು ನುಗ್ಗಿ ಸಾಕಷ್ಟು ಅವಾಂತರಗಳು ಸೃಷ್ಟಿಯಾಗಿವೆ. ದೈನಂದಿನ ಜನಜೀವನ ಅಸ್ತವ್ಯಸ್ಥಗೊಂಡಿದೆ. ಕಾವೇರಿ ನಗರ, ಸಂಪಂಗಿ ರಾಮನಗರದಲ್ಲೂ ಮಳೆಯಿಂದಾಗಿ ಅವಾಂತರಗಳಾಗಿವೆ. ಅನೇಕ ಮನೆಗಳಿಗೆ ನೀರು ನುಗ್ಗಿವೆ.

ಬಿಟಿಎಂ ಲೇಔಟ್, ಜಯನಗರ ಹಲವೆಡೆ ಮರಗಳು ಧರೆಗುರುಳಿವೆ. ಎಲೆಕ್ಟ್ರಾನಿಕ್ ಸಿಟಿ, ಬೊಮ್ಮನಹಳ್ಳಿ, ಬೆಳ್ಳಂದೂರುಗಳಲ್ಲಿ ರಸ್ತೆಯಲ್ಲಿ ನೀರು ನಿಂತಿದೆ. ಸಿಲ್ಕ್ ಬೋರ್ಡ್ ರಸ್ತೆಯಲ್ಲಿ ಟ್ರಾಫಿಕ್ ಸಮಸ್ಯೆ ಉಂಟಾಗಿದೆ.



**ವೈಟ್ ಟ್ಯಾಪಿಂಗ್ ಕಾಮಗಾರಿ ಅಸ್ತವ್ಯಸ್ಥ!:** ಬೆಂಗಳೂರಿನ ಅನೇಕ ಕಡೆಗಳಲ್ಲಿ ವೈಟ್ ಟ್ಯಾಪಿಂಗ್ ಕಾಮಗಾರಿ ನಡೆಯುತ್ತಿದೆ. ಹೀಗಾಗಿ ರಸ್ತೆಯ ಇಕ್ಕೆಲೆಗಳನ್ನು ಅಗೆಯಲಾಗಿದೆ. ಅಲ್ಲಲ್ಲಿ ಪ್ರಮುಖ ರಸ್ತೆಗಳನ್ನು ಮುಚ್ಚಲಾಗಿದೆ. ಹೀಗಾಗಿ ಪರ್ಯಾಯ ರಸ್ತೆಗಳಲ್ಲಿ ವಾಹನ ಸವಾರರು ವಾಹನ ಚಲಾಯಿಸಬೇಕಾದ ಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಎಲ್ಲೆಡೆ ವಾಹನಗಳ ದಟ್ಟಣೆ ಕಾಣಿಸುತ್ತಿದೆ.

**ಸರ್ಕಾರದ ವಿರುದ್ಧ ವಾಗ್ದಾಳಿ:** ಮಳೆ ಅವಾಂತರದ ವಿರುದ್ಧ ವಿಪಕ್ಷಗಳು ಸರ್ಕಾ ರದ ವಿರುದ್ಧ ವಾಗ್ದಾಳಿ ನಡೆಸುತ್ತಿವೆ. ಜಯನಗರ ಬಿಜೆಪಿ ಶಾಸಕ ಸಿ.ಕೆ.ರಾಮಮೂರ್ತಿ 'ಮಳೆಯಿಂದ ಜನರು ಬೀದಿಗೆ ಬರುವಂತಾಗಿದೆ. ಮನೆಗಳಲ್ಲಿ ನೀರು ತುಂಬಿದೆ. ಇದು ಗ್ರೇಟರ್ ಬೆಂಗಳೂರು ಅಲ್ಲ ವಾಟರ್ ಬೆಂಗಳೂರು ಆಗಿದೆ. ಜನರು ಶಾಪ ಹಾಕುತ್ತಿದ್ದಾರೆ. ಎಲ್ಲಿ ನೀರು ಬರುತ್ತದೆ ಎಂಬುವುದು ಅಧಿಕಾರಿಗಳಿಗೆ ಗೊತ್ತಿಲ್ಲವೇ? ಏಕೆ ಕ್ರಮ ಕೈಗೊಂಡಿಲ್ಲ?' ಎಂದು ಪ್ರಶ್ನಿಸಿದರು. ನಾವು ಶಾಸಕರು ನಿದ್ದೆ ಮಾಡಿಲ್ಲ. ಅಧಿಕಾರಿಗಳು ಆರಾಮವಾಗಿ ಮಲಗಿಕೊಂಡಿದ್ದಾರೆ. ಯಾವ ಅಧಿಕಾರಿಗಳು ರಸ್ತೆಗೆ ಇಳಿದಿಲ್ಲ. ಯುದ್ಧದ ಪರಿಸ್ಥಿತಿಯ ರೀತಿಯಲ್ಲಿ ಕೆಲಸ ಮಾಡಬೇಕು. ಕೇವಲ ಸಿಎಂ ಹಾಗೂ ಡಿಸಿಎಂ ಸಿಟಿ ರೌಂಡ್ಸ್ ಮಾಡಿ ಫೋಟೋ ತೆಗೆದುಕೊಳ್ಳುವುದರಲ್ಲಿ ಅರ್ಥವಿಲ್ಲ' ಎಂದು ವಾಗ್ದಾಳಿ ನಡೆಸಿದರು.

### ಬೆಂಗಳೂರಿಗೆ ಯೆಲ್ಲೋ ಅಲರ್ಟ್ ಘೋಷಣೆ

ರಾಜ್ಯದಲ್ಲಿ ಮುಂದಿನ ಒಂದು ವಾರ ಭಾರೀ ಮಳೆಯಾಗುವ ಸಾಧ್ಯತೆಯಿದ್ದು, ಬೆಂಗಳೂರಿಗೆ ಯೆಲ್ಲೋ ಅಲರ್ಟ್ ಹಾಗೂ ಕರಾವಳಿಗೆ ರೆಡ್ ಅಲರ್ಟ್ ಘೋಷಿಸಲಾಗಿದೆ. ಬೆಂಗಳೂರಿನಲ್ಲಿ ಇನ್ನೂ ಎರಡು ದಿನ ಭಾರೀ ಮಳೆಯಾಗುವ ಸಾಧ್ಯತೆಯಿದ್ದು, ಸೋಮವಾರ ಮತ್ತು ಮಂಗಳವಾರ (ಮೇ 20) ಯಲ್ಲೋ ಅಲರ್ಟ್ ಘೋಷಿಸಲಾಗಿದೆ. ಕರಾವಳಿ ಜಿಲ್ಲೆಗಳಿಗೆ ಮೂರು ದಿನ ರೆಡ್ ಅಲರ್ಟ್, ನಂತರದ ನಾಲ್ಕು ದಿನ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಇನ್ನೂ ಉತ್ತರ, ದಕ್ಷಿಣ ಒಳನಾಡಿಗೆ ರೆಡ್ ಅಲರ್ಟ್ ಘೋಷಿಸಲಾಗಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಬಾಗಲಕೋಟೆ, ಬೆಳಗಾವಿ, ಧಾರವಾಡ, ಹಾವೇರಿ, ಬಳ್ಳಾರಿ, ಹಾಸನ, ಕೊಡಗು, ಶಿವಮೊಗ್ಗ, ಚಿಕ್ಕಮಗಳೂರು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಹಾಗೂ ಗದಗ, ಕೊಪ್ಪಳ, ವಿಜಯಪುರ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಾಮರಾಜನಗರ, ಮೈಸೂರು, ಮಂಡ್ಯ, ರಾಮನಗರ, ಚಿಕ್ಕಬಳ್ಳಾಪುರ, ಕೋಲಾರ, ತುಮಕೂರು ಜಿಲ್ಲೆಗಳಿಗೆ ಯಲ್ಲೋ ಅಲರ್ಟ್ ಘೋಷಿಸಲಾಗಿದೆ. ರಾಜ್ಯಾದ್ಯಂತ ಗುಡುಗು, ಸಿಡಿಲು ಸಹಿತ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.



### ಸರ್ಕಾರದ ಸಮರ್ಥನೆ ಏನು?

ಮಳೆ ಅವಾಂತರದ ಹಿನ್ನೆಲೆಯಲ್ಲಿ ವಿಪಕ್ಷಗಳು ಟೀಕೆಗೆ ಪ್ರತಿಕ್ರಿಯೆ ನೀಡಿರುವ ಡಿಸಿಎಂ ಡಿಕೆ ಶಿವಕುಮಾರ್, 'ಬೆಂಗಳೂರಿನಲ್ಲಿ ಎಡೆಬಿಡದೆ ಸುರಿಯುತ್ತಿರುವ ಮಳೆಯ ಅನಾಹುತದಿಂದ ತೀವ್ರ ಕಳವಳಗೊಂಡಿದ್ದೇನೆ. ನಾನು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದೇನೆ ಮತ್ತು ನಾನು ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದೇನೆ. ಎಂದಿನಂತೆ, ನಾನು ಬೆಂಗಳೂರಿನಲ್ಲಿ ಮಳೆಯಿಂದ ಎದುರಾಗುವ ಸವಾಲುಗಳನ್ನು ಎದುರಿಸಲು ಮತ್ತು ಪರಿಹಾರವನ್ನು ನೀಡುವ ನಿಟ್ಟಿನಲ್ಲಿ ಹಗಲಿರುಳು ಕೆಲಸ ಮಾಡುತ್ತಿದ್ದೇನೆ' ಎಂದು ಹೇಳಿದ್ದಾರೆ. ನಾನು ಬಿಬಿಎಂಪಿ ವಾರ್ ರೂಮ್ ಮತ್ತು ಪ್ರವಾಹ ಪೀಡಿತ ಪ್ರದೇಶಗಳಿಗೆ ಖುದ್ದಾಗಿ ಭೇಟಿ ನೀಡಿ ಪರಿಶೀಲನೆ ನಡೆಸುತ್ತೇನೆ. ಈ ದಿನ ನಾವು ಎದುರಿಸುತ್ತಿರುವ ಸಮಸ್ಯೆಗಳು ಹೊಸದಲ್ಲ. ಹಿಂದಿನ ಸರ್ಕಾರಗಳ ಅವಧಿಯಲ್ಲಿ ಈ ಸಮಸ್ಯೆಗಳನ್ನು ನಿರ್ಲಕ್ಷಿಸಲಾಗಿದೆ. ಆದರೆ ನಾವು ಅವುಗಳನ್ನು ಪರಿಹರಿಸಲು ಕೆಲಸ ಮಾಡುತ್ತಿದ್ದೇವೆ' ಎಂದು ಸಮರ್ಥಿಸಿಕೊಂಡಿದ್ದಾರೆ.

### ಟೀಕೆಗೂ ಎಚ್ಚೆತ್ತ ಸಿಎಂ, ಡಿಸಿಎಂ





ವಿಪಕ್ಷಗಳ ಟೀಕೆಯ ಬೆನ್ನಲ್ಲೇ ಎಚ್ಚೆತ್ತುಕೊಂಡ ಸಿಎಂ ಸಿದ್ದರಾಮಯ್ಯ ಅವರು ಸಿಟಿ ರೌಂಡ್ಸ್ ಮಾಡಲು ನಿರ್ಧಾರ ಮಾಡಿದ್ದಾರೆ. ಆರಂಭದಲ್ಲಿ ಸಿಎಂ ಒಬ್ಬರೇ ಸಿಟಿ ರೌಂಡ್ಸ್ ಮಾಡುವುದು ನಿಗದಿಯಾಗಿತ್ತು. ಆದರೆ ಇದೀಗ ದಿಢೀರ್ ಆಗಿ ಪ್ಲ್ಯಾನ್ ಬದಲಾವಣೆ ಆಗಿದ್ದು ಸಿಎಂ ಸಿದ್ದರಾಮಯ್ಯ ಅವರ ಜೊತೆಗೆ ಡಿಸಿಎಂ ಡಿಕೆ ಶಿವಕುಮಾರ್ ಅವರು ಸಿಟಿ ರೌಂಡ್ಸ್ ಮಾಡಲಿದ್ದಾರೆ. ರಾತ್ರಿ ಸುರಿದ ಮಳೆಯಿಂದ ಹಾನಿಗೆ ಒಳಗಾಗಿರುವ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ. ಸಂಜೆ 4.30ಕ್ಕೆ ಗೃಹ ಕಚೇರಿ ಕೃಷ್ಣದಿಂದ ಇಬ್ಬರು ಜೊತೆಗೆ ಸಿಟಿ ರೌಂಡ್ಸ್‌ಗೆ ತೆರಳಲಿದ್ದಾರೆ.

### ಚಾಟಿ ಹಿಡಿದುಕೊಂಡು ಕೆಲಸ ಮಾಡಿಸಬೇಕು!



ಬೆಂಗಳೂರು ಅಭಿವೃದ್ಧಿ ಇಲಾಖೆ ಸಚಿವರಾಗಿರುವ ಡಿಸಿಎಂ ಡಿಕೆ ಶಿವಕುಮಾರ್ ಅವರು ಕೈಯಲ್ಲಿ ಚಾಟಿ ಹಿಡಿದಿಕೊಂಡು ಕೆಲಸ ಮಾಡಿಸಬೇಕು ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರು ಸಲಹೆ ನೀಡಿದ್ದಾರೆ. ಬೆಂಗಳೂರಲ್ಲಿ 132 ಮಿಲಿಮೀಟರ್ ನಷ್ಟು ಮಳೆಯಾಗಿದೆ. ಸಿದ್ದರಾಮಯ್ಯ ಸರ್ಕಾರದ ಕಾಲದಲ್ಲಿ ಬೆಂಗಳೂರು ನಗರದಲ್ಲಿ ಸ್ವಲ್ಪ ಮಟ್ಟಿಗೆ ರಾಜಕಾಲುವೆಗಳು ಆಗಿತ್ತು. ಆದರೆ ನಂತರ ಬಂದ ಸರ್ಕಾರ ಗಮನ ಹರಿಸಲಿಲ್ಲ ಎಂದು ಆರೋಪಿಸಿದರು. ಆದರೆ ಈಗಿನ ನಮ್ಮ ಸರ್ಕಾರ ವಿಶ್ವ ಬ್ಯಾಂಕ್ ನಿಂದ ಹಣ ಪಡೆದು ಕೆಲಸ ಮಾಡ್ತಿದ್ದಾರೆ ಎಂದ ಅವರು, ಬ್ರ್ಯಾಂಡ್ ಬೆಂಗಳೂರು ಹೆಸರು ಹಾಳಾಗುತ್ತಿದೆ ಎಂಬ ವಿಚಾರವಾಗಿ, 'ಮನುಷ್ಯ ತಪ್ಪು ಮಾಡಿದರೆ ಸರಿ ಮಾಡಬಹುದು, ಪ್ರಕೃತಿ ವಿಕೋಪ ಹೆಚ್ಚಾದಾಗ ಏನು ಮಾಡಬೇಕು?. 90 ಮಿಮೀಗಿಂತ ಹೆಚ್ಚು ಮಳೆ ಒಂದೇ ಬಾರಿ ಸುರಿದಾಗ ನೂರು ಕಡೆಗಳಲ್ಲಿ ನೀರು ನುಗ್ಗುತ್ತದೆ ಎಂದರು.

### ಮಹಿಳೆ ಸಾವು 5 ಲಕ್ಷ ಪರಿಹಾರ ಘೋಷಣೆ

ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಭಾನುವಾರ ಸುರಿದ ಮಹಾಮಳೆಗೆ ಕಾಂಪೌಂಡ್ ಗೋಡೆ ಕುಸಿದು ಸಾವನ್ನಪ್ಪಿದ ಮಹಿಳೆ ಕುಟುಂಬಕ್ಕೆ ರಾಜ್ಯ ಸರ್ಕಾರದಿಂದ 5 ಲಕ್ಷ ರೂ. ಪರಿಹಾರ ನೀಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಘೋಷಣೆ ಮಾಡಿದರು. ಬೆಂಗಳೂರಿನಲ್ಲಿ ಮಳೆ ಹಾನಿ ಪ್ರದೇಶಗಳು ಮತ್ತು ಅನಾಹುತಗಳ ಬಗ್ಗೆ ವಾರ್ ರೂಮ್‌ನಲ್ಲೇ ಅಧಿಕಾರಿಗಳಿಂದ ಮಾಹಿತಿ ಪಡೆದ ಬಳಿಕ ಸಿಎಂ ಮತ್ತು ಡಿಸಿಎಂ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು. ಈ ವೇಳೆ 5 ಲಕ್ಷ ರೂ. ಪರಿಹಾರ ನೀಡುವುದಾಗಿ ಘೋಷಣೆ ಮಾಡಿದರು. ಶಶಿಕಲಾ (35) ಮೃತ ಮಹಿಳೆ. ಬೆಳಗ್ಗೆ ವೈಟ್ ಫೀಲ್ಡ್‌ನ ಖಾಸಗಿ ಕಂಪನಿಯಲ್ಲಿ ಹೌಸ್ ಕೀಪಿಂಗ್ ಕೆಲಸಕ್ಕೆ ಹೋದಾಗ ದುರ್ಘಟನೆ ನಡೆದಿದೆ. ಕೆಲಸದ ಸ್ಥಳದಲ್ಲಿದ್ದ ಕಾಂಪೌಂಡ್ ಗೋಡೆ ಕುಸಿದು ಶಶಿಕಲಾ ಸಾವನ್ನಪ್ಪಿದ್ದಾರೆ. ಇಡೀ ರಾತ್ರಿ ಮಳೆಗೆ ಗೋಡೆ ನೆನೆದಿದ್ದರಿಂದ ಕುಸಿದು ಶಶಿಕಲಾ ಮೇಲೆ ಬಿದ್ದಿದೆ, ಪರಿಣಾಮ ಶಶಿಕಲಾ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ನಂತರ ವೈಟ್‌ಫೀಲ್ಡ್ ಪೊಲೀಸರು ಮೃತದೇಹವನ್ನ ಆಸ್ಪತ್ರೆಗೆ ರವಾನಿಸಿದ್ದಾರೆ. ಯಾದಗಿರಿಯ ಶಹಾಪುರ ಮೂಲದ ಶಶಿಕಲಾ ಕಳೆದ ಕೆಲವು ವರ್ಷಗಳಿಂದ ಬೆಂಗಳೂರಿನಲ್ಲಿ ವಾಸಿಸುತ್ತಿದ್ದರು. ಮೃತ ಶಶಿಕಲಾಗೆ ಇಬ್ಬರು ಪುಟ್ಟ ಮಕ್ಕಳಿದ್ದು, ಗಂಡ ಕೂಡ ಕೂಲಿ ಕೆಲಸ ಮಾಡುತ್ತಿದ್ದರು.





---

## 300 ವರ್ಷದ ಬಳಿಕ ತಿರುಪತಿಗೆ ಮೈಸೂರಿನಿಂದ 2 ಅಖಂಡ ದಾನ

• ಉದಯವಾಹಿನಿ, ಮೈಸೂರು

ಬರೋಬ್ಬರಿ ಮೂರು ಶತಮಾನಗಳ ಬಳಿಕ ತಿರುಮಲದ ವೆಂಕಟೇಶ್ವರ ದೇವಸ್ಥಾನಕ್ಕೆ ಮೈಸೂರು ಒಡೆಯರ್ ಮನೆತನದವರು ಎರಡು ಬೃಹತ್ ಬೆಳ್ಳಿಯ ದೀಪಗಳನ್ನು ಅರ್ಪಿಸಿದ್ದಾರೆ. ರಂಗನಾಯಕಲು ಮಂಟಪದಲ್ಲಿ ಮೈಸೂರು ರಾಜಮಾತೆ ಪ್ರಮೋದಾ ದೇವಿ ಹಾಗೂ ಮೈಸೂರು-ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಒಡೆಯರ್ ಬೆಳ್ಳಿಯ ದೀಪಗಳನ್ನು ತಿರುಮಲ ದೇವಸ್ಥಾನ ಮಂಡಳಿಗೆ ನೀಡಿದರು. ಒಂದೊಂದು ದೀಪ ಸುಮಾರು 50 ಕೆಜಿ ತೂಗುತ್ತಿದ್ದು, ನೂರಕ್ಕೂ ಹೆಚ್ಚು ಕೆಜಿ ಬೆಳ್ಳಿ ಬಳಸಿ ದೀಪಗಳನ್ನು ತಯಾರಿಸಲಾಗಿದೆ. ತಿರುಮಲ ದೇಗುಲದ ಗರ್ಭಗುಡಿಯಲ್ಲಿ ಬೆಳಗುವ ದೀಪಗಳು ಇವಾಗಿದ್ದು, ಸುಮಾರು 300 ವರ್ಷಗಳ ಹಿಂದೆ ಅಂದಿನ ಮಹಾರಾಜರು ಬೆಳ್ಳಿ ಅಖಂಡಗಳನ್ನು ದಾನ ಮಾಡಿದ್ದರು. ಈಗ ಮೂರು ಶತಮಾನಗಳ ಬಳಿಕ ಪ್ರಮೋದಾ ದೇವಿಯವರು ಬೆಳ್ಳಿಯ ಎರಡು ಅಖಂಡಗಳನ್ನು ವೆಂಕಟೇಶ್ವರನ ಸನ್ನಿಧಿಗೆ ನೀಡುವ ಮೂಲಕ ಸಂಪ್ರದಾಯವನ್ನು ಮುಂದುವರೆಸಿದ್ದಾರೆ.

## ಅವಹೇಳಕಾರಿ ಪದ ಬಳಕೆ ವಿಚಾರಣೆಗೆ ಸುಪ್ರೀಂ ತಡೆ

• ಉದಯವಾಹಿನಿ, ಬೆಂಗಳೂರು

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ವಿರುದ್ಧ ವಿಧಾನ ಪರಿಷತ್‌ನಲ್ಲಿ ಅವಹೇಳನಕಾರಿ ಪದ ಬಳಕೆ ಪ್ರಕರಣದಲ್ಲಿ ಆರೋಪಿ ಆಗಿರುವ ಬಿಜೆಪಿಯ ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ವಿರುದ್ಧ ವಿಚಾರಣೆಗೆ ಸುಪ್ರೀಂ ಕೋರ್ಟ್ ತಡೆ ನೀಡಿದೆ. ಪ್ರಕರಣದ ಸಂಬಂಧ ರಾಜ್ಯ ಸರ್ಕಾರಕ್ಕೆ ನೋಟಿಸ್ ನೀಡಿದೆ. ಶಾಸಕ ಸಿ.ಟಿ ರವಿ ವಿರುದ್ಧ ದಾಖಲಾಗಿದ್ದ ಪ್ರಕರಣವನ್ನು ರದ್ದುಗೊಳಿಸಲು ನಿರಾಕರಿಸಿದ ಕರ್ನಾಟಕ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಯನ್ನು ನ್ಯಾಯಮೂರ್ತಿ ಎಂ.ಎಂ ಸುಂದ್ರೇಶ್ ಮತ್ತು ನ್ಯಾಯಮೂರ್ತಿ ರಾಜೇಶ್ ಬಿಂದಾಲ್ ಅವರ ಪೀಠ ವಿಚಾರಣೆ ನಡೆಸಿತು. 2024ರ ಡಿ.19ರಂದು ವಿಧಾನ ಪರಿಷತ್ತಿನಲ್ಲಿ ಸಂಸತ್ತಿನ ಕಲಾಪಗಳ ಸಂದರ್ಭದಲ್ಲಿ ತಮ್ಮ ಹೇಳಿಕೆಗಳನ್ನು ನೀಡಲಾಗಿದೆ. ಹೀಗಾಗಿ, ಸದನದಲ್ಲಿ ಅವರ ನಡವಳಿಕೆಯ ಸಮಯದಲ್ಲಿ ಸಂಸತ್ತಿನ ಸದಸ್ಯರಿಗೆ ನೀಡಲಾದ ವಿನಾಯಿತಿಯ ಅಡಿಯಲ್ಲಿ ಅವರನ್ನು ರಕ್ಷಿಸಲಾಗಿದೆ ಎಂದು ಸಿಟಿ ರವಿ ಪರ ವಕೀಲರು ವಾದ ಮಂಡಿಸಿದರು.

## ವಿದೇಶದಲ್ಲಿ ಉದ್ಯೋಗದ ಆಮಿಷ, 300 ಮಂದಿಗೆ 9 ಕೋಟಿ ವಂಚನೆ!


• ಉದಯವಾಹಿನಿ, ಮಂಗಳೂರು

ನಗರದ ಬೆಂದೂರ್‌ವೆಲ್‌ನಲ್ಲಿ ಪ್ರೊಟೆಕ್ಟರ್ ಆಫ್ ಎಮಿಗ್ರೇಟ್ಸ್ (ಪಿಒಇ) ಕಚೇರಿಯಲ್ಲಿ ನೋಂದಣಿ ಇಲ್ಲದೆ ಕಾರ್ಯಾಚರಿಸುತ್ತಿದ್ದ ಖಾಸಗಿ ಏಜೆನ್ಸಿಯೊಂದು 300ಕ್ಕೂ ಅಧಿಕ ಮಂದಿಗೆ ವಿದೇಶದಲ್ಲಿ ಕೆಲಸ ಕೊಡಿಸುವ ನೆಪದಲ್ಲಿ 9 ಕೋಟಿ ರೂ. ತನಕ ವಂಚನೆ ಮಾಡಿದೆ ಎಂದು ದ.ಕ. ಜಿಲ್ಲಾ ಕಾಂಗ್ರೆಸ್ ಕಾರ್ಮಿಕ ಘಟಕದ ಅಧ್ಯಕ್ಷ ಲಾರೆನ್ಸ್ ಡಿಸೋಜ ಹೇಳಿದರು.

ವಿದೇಶದಲ್ಲಿ ಕೆಲಸಕ್ಕಾಗಿ ಅರ್ಜಿ ಹಾಕಿ ಮೋಸ ಹೋಗಿರುವ 50ಕ್ಕೂ ಅಧಿಕ ಸಂತ್ರಸ್ತರ ಜತೆ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು. ಬೆಂದೂರ್‌ವೆಲ್‌ನಲ್ಲಿ ಒಂದು ವರ್ಷದಿಂದೀಚೆಗೆ ಕಾರ್ಯಾಚರಿಸುತ್ತಿದ್ದ ಹಯರ್ ಗ್ಲೋ ಎಲಿಗೆಂಟ್ ಓವರ್‌ಸೀಸ್ ಇಂಟರ್‌ನ್ಯಾಷನಲ್ ಪ್ರೈ.ಲಿ. ಸಂಸ್ಥೆಯು ನ್ಯೂಜಿಲೆಂಡ್‌ನಲ್ಲಿರುವ ವಲರಿಸ್ ಎಂಬ ರಿಗ್ ಸಂಸ್ಥೆಯಲ್ಲಿ ಕೆಲಸ ಕೊಡಿಸುವುದಾಗಿ ನಂಬಿಸಿ ಜಿಲ್ಲೆಯ 185ಕ್ಕೂ ಅಧಿಕ ಮಂದಿಯಿಂದ ತಲಾ 1.65 ಲಕ್ಷ ರೂ.ನಿಂದ 1.80 ಲಕ್ಷ ರೂ.ವರೆಗೆ ಪಡೆದು ವಂಚಿಸಿದೆ.

**ನಿರ್ಲಕ್ಷ್ಯ ವಹಿಸಿದ ಪೊಲೀಸರ ಅಮಾನತು**

ಇತರ ಏಜೆಂಟ್‌ಗಳ ಮೂಲಕ ಜಿಲ್ಲೆಯ ಸುಮಾರು 60 ಮಂದಿಯಿಂದ ತಲಾ 2.5 ಲಕ್ಷ ರೂ.ನಿಂದ 3 ಲಕ್ಷ ರೂ.ವರೆಗೆ ಹಾಗೂ ಕೇರಳ, ತಮಿಳುನಾಡು, ಗೋವಾ, ಆಂಧ್ರ ಪ್ರದೇಶದ ಇತರ ಏಜೆನ್ಸಿಗಳ ಮೂಲಕ 55ಕ್ಕೂ ಅಧಿಕ ಮಂದಿಯಿಂದ ತಲಾ 5 ಲಕ್ಷ ರೂ.ಗೂ ಅಧಿಕ ಸೇರಿದಂತೆ ಅಂದಾಜು 9 ಕೋಟಿ ರೂ.ಗೂ ಅಧಿಕ ಮೊತ್ತ ಪಡೆದು ಮೋಸ ಮಾಡಿದೆ ಎಂದರು. ಉದ್ಯೋಗಾಕಾಂಕ್ಷಿಗಳು ಹಣವನ್ನು ಆನ್‌ಲೈನ್ ಮೂಲಕ ಸಂಸ್ಥೆಯ 14 ಬ್ಯಾಂಕ್ ಖಾತೆಗಳಿಗೆ ಪಾವತಿದ್ದಾರೆ. ನವೆಂಬರ್‌ನಲ್ಲಿ ಸಂಸ್ಥೆಯ ಗ್ರೆಟೆಲ್ ಕ್ವಾಡ್ರಸ್, ಅಶ್ವಿನಿ ಆಚಾರ್ಯ ಹಾಗೂ ಚೈತ್ರಾ ಎಂಬವರು ಸಂದರ್ಶನಕ್ಕೆ ಬರುವಂತೆ ತಿಳಿಸಿದ್ದರು. ನವೆಂಬರ್ ಕೊನೆಯ ವಾರದಲ್ಲಿ ಮೆಡಿಕಲ್ ಫಿಟ್‌ನೆಸ್ ತಪಾಸಣೆ ನಡೆಸಲಾಗಿತ್ತು. ಜನವರಿ ಮೊದಲ ವಾರದಲ್ಲಿ ಕೆಲಸಕ್ಕೆ ಸೇರಲು ಕಾಂಟ್ರ್ಯಾಕ್ಟ್‌ಗೆ ಸಹಿ ಹಾಕಲು ಕಚೇರಿಗೆ ಬರುವಂತೆ ತಿಳಿಸಿದ್ದರೆ, ಜನವರಿ ಕೊನೆಯ ವಾರದಲ್ಲಿ ವೀಸಾ ಪ್ರಕ್ರಿಯೆ ಪ್ರಾರಂಭಿಸಲಾಗಿತ್ತು. ಮಾರ್ಚ್ ಕೊನೆಯ ವಾರದಲ್ಲಿ ಇತರ ಪ್ರಕ್ರಿಯೆ ನಡೆಸಿ ಬಾಕಿ ಮೊತ್ತ ಪಾವತಿಸಲು ಸೂಚಿಸಲಾಗಿತ್ತು.



ಕೆಲವೊಮ್ಮೆ ತಡರಾತ್ರಿ ಕರೆ ಮಾಡಿ ಹಣ ಪಾವತಿಗೆ ಒತ್ತಾಯಿಸಿದಂತೆ ಉದ್ಯೋಗಾಕಾಂಕ್ಷಿಗಳು ಹಣವನ್ನು ಆನ್‌ಲೈನ್ ಮೂಲಕ ಪಾವತಿಸಿ ದ್ದರು. ಏಪ್ರಿಲ್ ಕೊನೆಯ ವಾರದಲ್ಲಿ ಕೊರಿಯರ್ ಮೂಲಕ ಉದ್ಯೋಗಾಂಕ್ಷಿಗಳ ವಿಳಾಸಕ್ಕೆ ಅವರ ಪಾಸ್‌ಪೋರ್ಟ್, ಪಾಸ್‌ಪೋರ್ಟ್ ಸೈಜ್ ಫೋಟೊ ಹಾಗೂ ಎನ್ವಲಪ್ ಕಳುಹಿಸಲಾಗಿತ್ತು. ಈ ಸಂದರ್ಭ ತಾವು ಮೋಸ ಹೋಗಿರುವುದು ಗೊತ್ತಾಗಿದೆ.

## ವಿದ್ಯುತ್ ಸಬ್ಸಿಡಿ ತಾರತಮ್ಯದಿಂದ ಕೂಡಿದೆ, ಅಸಂವಿಧಾನಿಕ

### • ಆರು ತಿಂಗಳಲ್ಲಿ ಮಾರ್ಗಸೂಚಿ ರೂಪಿಸಬೇಕೆಂದು ನ್ಯಾಯಾಲಯ ರಾಜ್ಯ ಸರ್ಕಾರಕ್ಕೆ ನಿರ್ದೇಶನ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರದ 2008ರ ವಿದ್ಯುತ್ ಸಬ್ಸಿಡಿ ನೀತಿಯು ತಾರತಮ್ಯದಿಂದ ಕೂಡಿದ್ದು, ಅದು ಅಸಂವಿಧಾನಿಕವೆಂದು ಘೋಷಿಸುವ ಮೂಲಕ ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ. ಜತೆಗೆ, ಸಬ್ಸಿಡಿ ನೀತಿಯನ್ನು ಪುನರ್‌ರೂಪಿಸಲು ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿದೆ.

**ಕರ್ನಾಟಕ ಹೈಕೋರ್ಟ್ ಮಹತ್ವದ ತೀರ್ಪು**




ಸೊಸೈಟಿ ರಚಿಸಿಕೊಂಡು ಏತ ನೀರಾವರಿ ವ್ಯವಸ್ಥೆ ಮೂಲಕ ಕೃಷಿ ಚಟುವಟಿಕೆ ನಡೆಸುತ್ತಿರುವ ರೈತರಿಗೂ ಸಬ್ಸಿಡಿ (ಕೃಷಿ ವಿದ್ಯುತ್ ದರಪಟ್ಟಿ ಪ್ರೋತ್ಸಾಹ ಧನ) ವಿಸ್ತರಿಸುವ ಸಂಬಂಧ ಹಾಲಿ ಇರುವ ಕಾನೂನು ಚೌಕಟ್ಟು ತಿದ್ದುಪಡಿ ಮಾಡಿ, ಆರು ತಿಂಗಳಲ್ಲಿ ಮಾರ್ಗಸೂಚಿ ರೂಪಿಸಬೇಕೆಂದು ನ್ಯಾಯಾಲಯ ರಾಜ್ಯ ಸರ್ಕಾರಕ್ಕೆ ನಿರ್ದೇಶಿಸಿದೆ.

ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಶ್ರೀಮಂತ (ತಾತ್ಯಾ) ಪಾಟೀಲ್ ನೀರು ಬಳಕೆದಾರರ ಸಂಘ ಮತ್ತು ರವಳನಾತ್ ಏತ ನೀರು ಬಳಕೆದಾರರ ಸಂಘಗಳು ಸಲ್ಲಿಸಿದ್ದ ಅರ್ಜಿಯನ್ನು ಧಾರವಾಡ ಪೀಠದಲ್ಲಿ ಆಲಿಸಿದ ನ್ಯಾಯಮೂರ್ತಿ ಸಚಿನ್ ಶಂಕರ್ ಮಗದುಮ್ ಅವರಿದ್ದ ಏಕಸದಸ್ಯ ಪೀಠ, ಈ ಆದೇಶ ನೀಡಿದೆ.

''ರೈತರು ಕ್ಷಮತೆ ಮತ್ತು ಸುಸ್ಥಿರತೆ ಹೆಚ್ಚಿಸಲು ಸೊಸೈಟಿ ಮಾಡಿಕೊಂಡಿದ್ದು, ಅವರನ್ನು ದಂಡಿಸುವುದು ಅಸಮರ್ಥನೀಯ ಕ್ರಮ. ಸೊಸೈಟಿಯಲ್ಲಿರುವ ರೈತರ ವಿದ್ಯುತ್ ಬಳಕೆಯು ನಿಗದಿತ ವಿದ್ಯುತ್ ಬಳಕೆದಾರರಗಿಂತ ಹೆಚ್ಚಾಗಿದೆ ಎಂಬ ಕಾರಣಕ್ಕೆ ಅವರಿಗೆ ಪ್ರೋತ್ಸಾಹಧನ ನಿರಾಕರಿಸುವುದು ಅಸಾಂವಿಧಾನಿಕ. ಇದು ತಾರತಮ್ಯದ ಕ್ರಮವಾಗಿದ್ದು, ಕೃಷಿ ಪ್ರೋತ್ಸಾಹ ಧನಗಳ ಉದ್ದೇಶಗಳಿಗೆ ಹೊಂದಿಕೆಯಾಗುವುದಿಲ್ಲ,'' ಎಂದು ತಿಳಿಸಿದೆ.

### ಪರಿಷ್ಕೃತ ಚೌಕಟ್ಟಿನ ಬಳಿಕ ವಿದ್ಯುತ್ ಸಬ್ಸಿಡಿ

ವಾದ - ಪ್ರತಿವಾದ ಆಲಿಸಿದ ನ್ಯಾಯಾಲಯ, ''ವಿದ್ಯುತ್ ಸಬ್ಸಿಡಿ ವಿಚಾರದಲ್ಲಿ ರೈತ ಸೊಸೈಟಿಗಳನ್ನು ವೈಯಕ್ತಿಕ ರೈತರಿಗೆ ಸಮನಾಗಿ ಕಾಣುವ ಸಂಬಂಧ ರಾಜ್ಯ ಸರ್ಕಾರ, ಹೆಸ್ಕಾಂ ಸೇರಿ ಸಕ್ಷಮ ಪ್ರಾಧಿಕಾರಗಳು ಪರಿಶೀಲಿಸಿ, ಹಾಲಿ ಇರುವ ನೀತಿಯ ಚೌಕಟ್ಟನ್ನು ತಿದ್ದುಪಡಿ ಮಾಡಬೇಕು. ರೈತ ಸೊಸೈಟಿಗಳಿಗೆ ಕೃಷಿ ಸಬ್ಸಿಡಿ ವಿಸ್ತರಿಸುವ ಸಂಬಂಧ ಆರು ತಿಂಗಳಲ್ಲಿ ಸೂಕ್ತ ಮಾರ್ಗಸೂಚಿ ರೂಪಿಸಬೇಕು. ಪರಿಷ್ಕೃತ ಚೌಕಟ್ಟಿನ ಬಳಿಕ ವಿದ್ಯುತ್ ಸಬ್ಸಿಡಿ ನೀಡುವ ಸಂಬಂಧ ಅರ್ಜಿದಾರರು ವಿಸ್ತೃತ ಮನವಿ ಸಲ್ಲಿಸಬಹುದು'' ಎಂದು ನ್ಯಾಯಪೀಠ ಆದೇಶಿಸಿದೆ. ''ಪ್ರತಿಯೊಬ್ಬ ರೈತನ ತಲಾದಾಯ ವಿದ್ಯುತ್ ಬಳಕೆ ಭೂಮಿ ಮಾಲೀಕತ್ವ ಅಥವಾ ಪ್ರತಿಯೊಬ್ಬ ಸದಸ್ಯರ ಸರಾಸರಿ ವಿದ್ಯುತ್ ಬಳಕೆ ಆಧರಿಸಿ ನೋಂದಾಯಿತ ರೈತ ಸೊಸೈಟಿಗಳಿಗೆ ವಿದ್ಯುತ್ ಬಳಕೆಗೆ ಸಂಬಂಧಿಸಿದ ಪ್ರೋತ್ಸಾಹ ಧನ ನೀಡುವ ಸಂಬಂಧ ಹಾಲಿ ಇರುವ ನೀತಿ ಪರಿಶೀಲಿಸಿ ಅದಕ್ಕೆ ತಿದ್ದುಪಡಿ ಮಾಡಬೇಕು'' ಎಂದೂ ನ್ಯಾಯಾಲಯ ಹೇಳಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,551/Gram24ct ₹8,755/Gram22ct | ಬೆಳ್ಳಿ: ₹98.00/Gram

# ಪ್ರಹ್ಲಾದ ಚರಿತ್ರೆ (ಪ್ರವಚನ)

• ಉದಯವಾಹಿನಿ, ಬೆಂಗಳೂರು




ಶ್ರೀ ಗುರು ರಾಘವೇಂದ್ರ, ಸೇವಾ ಸಮಿತಿಯ ವತಿಯಿಂದ ಮೇ 21 ರಿಂದ 31ರ ವರೆಗೆ ಪ್ರತಿದಿನ ಸಂಜೆ 7-00ಕ್ಕೆ ವಿದ್ವಾನ್ ಶ್ರೀ ಬಿ. ಚಂದ್ರಶೇಖರ ಆಚಾರ್ಯ ಅವರಿಂದ ಪ್ರಹ್ಲಾದ ಚರಿತ್ರೆ ವಿಷಯವಾಗಿ ಧಾರ್ಮಿಕ ಪ್ರವಚನ ಏರ್ಪಡಿಸಿದೆ. ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 6ನೇ ಅಡ್ಡರಸ್ತೆ, ಪ್ರಕಾಶನಗರ, ಬೆಂಗಳೂರು-560021

# ಸರ್ಕಾರಿ ಆಸ್ಪತ್ರೆಗಳಲ್ಲೂ ಕೀಮೋಥೆರಪಿ ಸೌಲಭ್ಯ ಒದಗಿಸಲು ನಿರ್ಧಾರ

• ಉದಯವಾಹಿನಿ, ಬೆಂಗಳೂರು

ಬಡ, ಮಧ್ಯಮ ವರ್ಗದ ಜನರಿಗಾಗಿ ಸರ್ಕಾರಿ ಆಸ್ಪತ್ರೆಗಳಲ್ಲೂ ಇನ್ನು ಕ್ಯಾನ್ಸರ್ ರೋಗಿಗಳಿಗೆ ಕೀಮೋಥೆರಪಿ ಸೌಲಭ್ಯ ಒದಗಿಸಲು ರಾಜ್ಯ ಸರ್ಕಾರ ನಿರ್ಧರಿಸಿದ್ದು, ಶೀಘ್ರದಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರಿನಲ್ಲಿ ಇದಕ್ಕೆ ಚಾಲನೆ ನೀಡಲಿದ್ದಾರೆಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು. ಸ್ಪರ್ಶ್ ಆಸ್ಪತ್ರೆ ಸಮೂಹ ಸಂಸ್ಥೆಯು ನಗರದ ಹೆಣ್ಣೂರು ರಸ್ತೆಯಲ್ಲಿ ನೂತನವಾಗಿ ಆರಂಭಿಸಿದ ವಿಶೇಷ ಚಿಕಿತ್ಸಾ ಸೌಲಭ್ಯಗಳ 300 ಹಾಸಿಗೆಯ ಸ್ಪರ್ಶ್ ಆಸ್ಪತ್ರೆ ಶಾಖೆ ಉದ್ಘಾಟಿಸಿ



ಸಚಿವರು ಮಾತನಾಡಿದರು. ಮೇ 23 ರಂದು ಮೈಸೂರಿನಲ್ಲಿ ಸಿದ್ದರಾಮಯ್ಯ ಅವರು ಇದಕ್ಕೆ ಚಾಲನೆ ನೀಡಲಿದ್ದು, ನಂತರ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಸರ್ಕಾರ ಡೇ ಕೇರ್ ಕಿಮೋಥೆರಪಿ ಕೇಂದ್ರಗಳನ್ನು ತೆರೆಯಲಿದೆ. ಕ್ಯಾನ್ಸರ್ ಚಿಕಿತ್ಸೆಯನ್ನು ಜನರಿಗೆ ಹತ್ತಿರ ತರುವ ಗುರಿಯನ್ನು ಈ ಕೇಂದ್ರಗಳು ಹೊಂದಿವೆ ಎಂದು ಹೇಳಿದರು. ಕ್ಯಾನ್ಸರ್‌ನಿಂದ ಬಳಲುವ ರೋಗಿಗಳು ತಮ್ಮ ಚಿಕಿತ್ಸೆಗೆ ಲಕ್ಷಾಂತರ ವ್ಯಯಿಸುವುದು ಅನಿವಾರ್ಯವಾಗಿದೆ. ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆಗೆ ಹೆಚ್ಚಿನ ಸೌಕರ್ಯ ಇರುವುದರಿಂದ ಬಡವರು ಸಹ ಅಲ್ಲಿಗೆ ತೆರಳುತ್ತಾರೆ ಹಾಗೂ ಬಡರೋಗಿಗಳು ಕಿಮೋಥೆರಪಿಗೆ ಸಾವಿರಾರು ರುಪಾಯಿ ವ್ಯಯಿಸುತ್ತಿದ್ದಾರೆ. ಸರ್ಕಾರಿ ಆಸ್ಪತ್ರೆಯಲ್ಲೂ ಈ ಸೌಲಭ್ಯ ಒದಗಿಸಿದರೆ ಸಾಕಷ್ಟು ಜನರು ಬರುವಂತಾಗುತ್ತದೆ. ಈ ನಿಟ್ಟಿನಲ್ಲಿ ಸರ್ಕಾರಿ ಆಸ್ಪತ್ರೆಯಲ್ಲಿ ಕಿಮೋಥೆರಪಿ ಸೌಲಭ್ಯ ಕಲ್ಪಿಸಲು ಮುಂದಾಗಿದ್ದು, ಶೀಘ್ರವೇ ಈ ಸೇವೆಗೆ ಚಾಲನೆ ಸಿಗಲಿದೆ ಎಂದರು. ಇದೇ ವೇಳೆ ಸಂಶೋಧನೆಯ ಅಗತ್ಯವನ್ನ ಒತ್ತಿ ಹೇಳಿದ ಸಚಿವರು, ರೋಗನಿರ್ಣಯ ಮತ್ತು ಚಿಕಿತ್ಸೆಯನ್ನು ಕೈಗೆಟುಕುವಂತೆ ಮಾಡಲು ಖಾಸಗಿ ಆಸ್ಪತ್ರೆಗಳು ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿ ಹೆಚ್ಚಿನ ಹೂಡಿಕೆ ಮಾಡಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಸುತ್ತೂರು ಮಠದ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು, ವೈದ್ಯಕೀಯ ಶಿಕ್ಷಣ ಸಚಿವ ಶರಣ್ ಪ್ರಕಾಶ್ ಪಾಟೀಲ್ ಮತ್ತು ಸಂಸದ ಬಸವರಾಜ ಬೊಮ್ಮಾಯಿ ಸೇರಿದಂತೆ ಹಲವಾರು ಗಣ್ಯರು ಭಾಗವಹಿಸಿದ್ದರು.

# ಮೇ 28ರಿಂದ ವಿಕಲಚೇತನರ ವೈದ್ಯಕೀಯ ತಪಾಸಣೆ ಕೆಇಎ

• ಉದಯವಾಹಿನಿ, ಬೆಂಗಳೂರು

ಇಂಜಿನಿಯರಿಂಗ್, ವೈದ್ಯಕೀಯ ಕೋರ್ಸ್ ಸೇರಿದಂತೆ ಇತರ ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕೆ ಸಲ್ಲಿಸಿದ ಸಿಇಟಿ ಅರ್ಜಿಯಲ್ಲಿ ವಿಕಲಚೇತನರ ಕೋಟಾ ಕ್ಲೇಮ್ ಮಾಡಿರುವ ಅಭ್ಯರ್ಥಿಗಳ ವೈದ್ಯಕೀಯ ತಪಾಸಣೆ ಮೇ 28ರಿಂದ ಮೂರು ದಿನ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಚೇರಿಯಲ್ಲಿ ನಡೆಯಲಿದೆ.

ಮೇ 28ರಿಂದ 30ರವರೆಗೆ ವೈದ್ಯಕೀಯ ತಪಾಸಣೆ ನಡೆಯಲಿದೆ. ಇದಕ್ಕೆ ಸೂಕ್ತ ದಿನಾಂಕ ಮತ್ತು ಸಮಯವನ್ನು ಮುಂಗಡವಾಗಿ ಕಾಯ್ದಿರಿಸಲು ಮೇ 26ರಂದು ಕೆಇಎ ವೆಬ್‌ಸೈಟ್‌ನಲ್ಲಿ ಲಿಂಕ್ ಬಿಡುಗಡೆ ಮಾಡಲಾಗುವುದು ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

## ಬಮುಲ್ ನಿರ್ದೇಶಕರಾಗಿ
# ಡಿಕೆ ಸುರೇಶ್ ಅವಿರೋಧ ಆಯ್ಕೆ!

• ಉದಯವಾಹಿನಿ, ಬೆಂಗಳೂರು

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಕಿರಿಯ ಸಹೋದರ, ಮಾಜಿ ಸಂಸದ ಡಿ.ಕೆ. ಸುರೇಶ್ ಅವರು ಕನಕಪುರದಿಂದ ಬಮುಲ್ ಬೆಂಗಳೂರು ಹಾಲು ಒಕ್ಕೂಟ ಲಿಮಿಟೆಡ್ ನಿರ್ದೇಶಕರಾಗಿ ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ. ಬಮುಲ್ ಬೆಂಗಳೂರು ಹಾಲು ಒಕ್ಕೂಟ ಲಿಮಿಟೆಡ್ ನಿರ್ದೇಶಕ ಸ್ಥಾನಕ್ಕೆ ಡಿಕೆ.ಸುರೇಶ್ ಅವರು ನಾಮಪತ್ರ ಸಲ್ಲಿಸಿದ್ದರು. ಇತರರ ಆಕಾಂಕ್ಷಿಗಳು ಸಲ್ಲಿಸಿದ ನಾಮಪತ್ರಗಳು ಅಮಾನ್ಯವಾಗಿದ್ದ ಹಿನ್ನೆಲೆಯಲ್ಲಿ ಸುರೇಶ್ ಅವರು



ಅವಿರೋಧ ಆಯ್ಕೆಯಾಗಿದ್ದಾರೆ. ಬಮುಲ್ ನಿರ್ದೇಶಕರಾಗಿ ಸುರೇಶ್ ಅವರು ಆಯ್ಕೆಯಾಗಿರುವುದು ಕರ್ನಾಟಕ ಹಾಲು ಸಹಕಾರಿ ಕ್ಷೇತ್ರದ ಮೇಲೆ ಹಿಡಿತ ಸಾಧಿಸಲು ಕೆಎಂಎಫ್ ಅಧ್ಯಕ್ಷರಾಗಲು ಒಂದು ಮೆಟ್ಟಿಲು ಮುಂದೆ ಸಾಗಿದಂತಾಗಿದೆ. ಇದೀಗ ಅಧ್ಯಕ್ಷ ಹುದ್ದೆ ಮೇಲೆ ಕಣ್ಣಿಟ್ಟಿರುವ ಸುರೇಶ್ ಅವರು, ಬೆಂಬಲ ಪಡೆಯುವ ಸಲುವಾಗಿ ವಿವಿಧ ತಾಲ್ಲೂಕುಗಳಿಂದ ತಮ್ಮ ಬೆಂಬಲಿಗರನ್ನು ನಿರ್ದೇಶಕರನ್ನಾಗಿ ಮಾಡುವತ್ತ ಗಮನಹರಿಸಲಿದ್ದಾರೆಂದು ಮೂಲಗಳಿಂದ ತಿಳಿದುಬಂದಿದೆ. ಈ ನಡುವೆ ಬಮುಲ್ ನಿರ್ದೇಶಕರಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಸುರೇಶ್ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ ಅವರ ಆಶೀರ್ವಾದ ಪಡೆದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಪ್ತ ಮತ್ತು ಕೆಎಂಎಫ್ ಅಧ್ಯಕ್ಷ ಭೀಮಾ ನಾಯಕ್ ಅವರು ಕೂಡ ಈ ಹುದ್ದೆಗೆ ಸ್ಪರ್ಧೆಯಲ್ಲಿರುವುದಾಗಿ ಹೇಳಿದ್ದು, ಬಳ್ಳಾರಿಯಿಂದ ನಿರ್ದೇಶಕ ಹುದ್ದೆಗೆ ಸ್ಪರ್ಧಿಸುವುದಾಗಿ ಹೇಳಿದ್ದಾರೆ. ಕರ್ನಾಟಕ ಹೈಕೋರ್ಟ್ ತೀರ್ಪಿನ ನಂತರ ಶೀಘ್ರದಲ್ಲೇ ಚುನಾವಣೆ ನಡೆಯುವ ಸಾಧ್ಯತೆಯಿದೆ ಎಂದು ತಿಳಿದುಬಂದಿದೆ.

# ರೈಲು ನಿರ್ಮಾಣಕ್ಕೆ ಕಡಿಮೆ ವೆಚ್ಚ ಮೆಟ್ರೋ ದುಬಾರಿ

## 56.6 ಕಿ.ಮೀ ಉದ್ದದ ಈ ಮಾರ್ಗದ ಕಾರ್ಯಸಾಧ್ಯತಾ ವರದಿ ಈಗಾಗಲೇ ಸಲ್ಲಿಕೆ

• ಉದಯವಾಹಿನಿ, ಬೆಂಗಳೂರು

ಇತ್ತೀಚೆಗೆ ಬೆಂಗಳೂರು, ತುಮಕೂರಿನ ನಡುವೆ ಮೆಟ್ರೋ ರೈಲು ಮಾರ್ಗದ ಯೋಜನೆ ಚುರುಕು ಪಡೆದಿದೆ. 56.6 ಕಿ.ಮೀ ಉದ್ದದ ಈ ಮಾರ್ಗದ ಕಾರ್ಯಸಾಧ್ಯತಾ ವರದಿ ಈಗಾಗಲೇ ಸಲ್ಲಿಕೆಯಾಗಿದೆ. ಆದರೆ, ಈ ಯೋಜನೆಯ ವೆಚ್ಚ ಉದ್ದೇಶದ ಬಗ್ಗೆ ಪರ ವಿರೋಧ ಮಾತುಗಳು ಕೇಳಿಬಂದಿದೆ. ಖಾಸಗಿ ಸಂಸ್ಥೆಯೊಂದು ಈ ಮಾರ್ಗದ ಕಾರ್ಯಸಾಧ್ಯತಾ ವರದಿಯನ್ನು ಬಿಎಂಆರ್‌ಸಿಎಲ್‌ಗೆ ಸಲ್ಲಿಸಿದೆ. ಬಿಎಂಆರ್‌ಸಿಎಲ್ ಅದನ್ನು ಸರ್ಕಾರಕ್ಕೆ ಕಳುಹಿಸಿದೆ. ಈ ಮಾರ್ಗದಲ್ಲಿ 25 ಎತ್ತರದ ನಿಲ್ದಾಣಗಳು ಇರಲಿದ್ದು, ಸಂಸ್ಥೆ ಪ್ರಕಾರ ಇದು ಬೆಂಗಳೂರು, ತುಮಕೂರು ನಡುವಿನ ಪ್ರಯಾಣವನ್ನು ಸುಲಭಗೊಳಿಸುವ ಗುರಿಯನ್ನು ಹೊಂದಿದೆ. ಇದೀಗ ವರದಿಯನ್ನು ಸರ್ಕಾರವು ಪರಿಶೀಲಿಸುತ್ತಿದೆ. ಸರ್ಕಾರ ಒಪ್ಪಿಗೆ ನೀಡಿದ ನಂತರ ಕೇಂದ್ರ ಸರ್ಕಾರದಿಂದ ಅನುಮತಿ ಪಡೆಯಬೇಕಾಗುತ್ತದೆ. ನಂತರ ಕಾಮಗಾರಿ ಪ್ರಾರಂಭವಾಗಲಿದೆ.



**ವಿರೋಧ ಯಾಕೆ:** ಈ ಯೋಜನೆಗೆ ಈಗಾಗಲೇ ವಿರೋಧ ವ್ಯಕ್ತವಾಗಿದೆ. ಬೆಂಗಳೂರು ಕೇಂದ್ರದ ಸಂಸದ ಪಿಸಿ ಮೋಹನ್ ಅವರು ಈ ಯೋಜನೆಯನ್ನು ಟೀಕಿಸಿದ್ದಾರೆ. ತುಮಕೂರಿಗೆ ಉಪನಗರ ರೈಲು ಅಂದರೆ ಸಬ್ ಅರ್ಬನ್ ಮಾರ್ಗ ನಿರ್ಮಿಸಲು ಪ್ರತಿ ಕಿಲೋಮೀಟರ್‌ಗೆ 100-150 ಕೋಟಿ ರೂಪಾಯಿ ವೆಚ್ಚವಾಗುತ್ತದೆ. ಆದರೆ, ಮೆಟ್ರೋ ಮಾರ್ಗಕ್ಕೆ ಸುಮಾರು 350 ಕೋಟಿ ರೂಪಾಯಿ ವೆಚ್ಚವಾಗುತ್ತದೆ ಎಂದು ಅವರು ಹೇಳಿದ್ದಾರೆ. ಅಂದರೆ ಕಡಿಮೆ ವೆಚ್ಚದಲ್ಲಾಗುವ ಉಪನಗರ ರೈಲು ಯೋಜನೆ ಬಿಟ್ಟು, ದುಬಾರಿ ಮೆಟ್ರೋ ನಿರ್ಮಾಣಕ್ಕೆ ಸರ್ಕಾರ ಮುಂದಾಗಿದೆ ಎಂದು ವಿರೋಧಿಸಿದ್ದಾರೆ. ಅವರ ಪ್ರಕಾರ, ಇದು ಸಂಪರ್ಕವನ್ನು ಸುಧಾರಿಸುವ ಉದ್ದೇಶ ಹೊಂದಿಲ್ಲ. ಬದಲಿಗೆ, ರಿಯಲ್ ಎಸ್ಟೇಟ್ ಮೌಲ್ಯವನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ಇದು ಸಾರ್ವಜನಿಕ ಸಾರಿಗೆ ಪರಿಹಾರವಲ್ಲ. ರಾಜ್ಯ ಸರ್ಕಾರವು ರಿಯಲ್ ಎಸ್ಟೇಟ್‌ನಿಂದ ಲಾಭ ಪಡೆಯಲು ನೋಡುತ್ತಿದೆ. ನಿಜವಾಗಿ ಬೇಕಾದುದನ್ನು ನಿರ್ಮಿಸುವ ಬದಲು, ಕೇಮದ್ರ ಸರ್ಕಾರದ ಉಪನಗರ ರೈಲು ಯೋಜನೆಯನ್ನು ತಪ್ಪಿಸುವ ಅಪಾಯವಿದೆ ಎಂದು ಅವರು ಟೀಕಿಸಿದ್ದಾರೆ. ಸಂಸದ ಪಿಸಿ ಮೋಹನ್ ಟ್ವೀಟ್‌ಗೆ ಪ್ರತಿಕ್ರಿಯೆ ನೀಡಿರುವ ಸಾರ್ವಜನಿಕರು ಕೋರಮಂಗಲ, ದೊಮ್ಮಲೂರು, ಸದಾಶಿವನಗರ, ಚಾಮರಾಜಪೇಟೆಯಂತಹ ಪ್ರಮುಖ ಬೆಂಗಳೂರಿನ ಪ್ರದೇಶಗಳಿಗೇ ಮೆಟ್ರೋ ಸಂಪರ್ಕ ಇನ್ನೂ ಸಿಕ್ಕಿಲ್ಲ ಎಂದು ಟೀಕಿಸಿದ್ದಾರೆ. ಇನ್ನು ಕೆಲವರು ಮೆಟ್ರೋ ಕನೆಕ್ಟಿವಿಟಿಯಿಂದ ತುಮಕೂರು ಕೂಡಾ ಸ್ಯಾಟಲೈಟ್ ಟೌನ್ ಆಗಿ ಬೆಳೆಯಲು ಸಾಧ್ಯವಾಗುತ್ತದೆ. ಇದರಿಂದ ಬೆಂಗಳೂರಲ್ಲಿರುವ ಜನರ ಒತ್ತಡ ಕಡಿಮೆ ಆಗಲಿದೆ ಎಂದೂ ಹೇಳಿದ್ದಾರೆ. ಮತ್ತೆ ಕೆಲವರು ಸರ್ಕಾರ ದುಡ್ಡು ಮಾಡುವಂತಹ ಯೋಜನೆ ಮಾತ್ರ ಕೈಗೆತ್ತಿಕೊಳ್ಳುತ್ತದೆ ಎಂದೂ ವಿರೋಧಿಸಿದ್ದಾರೆ.

> ತುಮಕೂರಿನಲ್ಲಿ ಇಂಡಸ್ಟ್ರಿಯಲ್ ಹಬ್ ಮಾಡಿದ್ದೇವೆ. ದಿನನಿತ್ಯ ಸಾವಿರಾರು ಜನ ತುಮಕೂರು ಬೆಂಗಳೂರು ನಡುವೆ ಪ್ರಯಾಣ ಮಾಡ್ತಾರೆ. ತುಮಕೂರು ಬೆಂಗಳೂರು ರಸ್ತೆಯಲ್ಲಿ ಟ್ರಾಫಿಕ್ ಹೆಚ್ಚಾಗ್ತಿದೆ. ನಾವೇ ಒಮ್ಮೊಮ್ಮೆ ಓಡಾಡೋಕೆ ಎರಡು ಮೂರು ಘಂಟೆ ಬೇಕಾಗುತ್ತೆ. ಅವರು ಸಂಸದರು ಅಂತರಾಷ್ಟ್ರೀಯ ವಿಚಾರ ತಿಳಿದುಕೊಂಡಿದ್ದಾರೆ ಅಂದುಕೊಂಡಿದ್ದೇನೆ ಎಂದರು.

ಇನ್ನು ಕೆಲವರು ಬಿಡದಿ, ಹೊಸಕೋಟೆ, ನೆಲಮಂಗಲಕ್ಕೆ ಮೆಟ್ರೋ ಸಂಪರ್ಕ ಓಕೆ, ಆದರೆ ತುಮಕೂರಿಗೆ ಮೆಟ್ರೋ ಸಂಪೂರ್ಣ ವ್ಯರ್ಥ ಎಂದಿದ್ದಾರೆ. ತುಮಕೂರು ಜನರಿಗೆ ಸೌಕರ್ಯ ಕೊಡುವುದು ಸರಿ ಆದರೆ ಬೆಂಗಳೂರಿಗರಿಗೆ ಇರುವ ಟ್ರಾಫಿಕ್ ಸಮಸ್ಯೆ, ರಸ್ತೆಗಳ ಸಮಸ್ಯೆ ಮೊದಲು ಸರಿಪಡಿಸಿ ಎಂದು ಆಗ್ರಹಿಸಿದ್ದಾರೆ. ಇನ್ನು ಕೆಲವರು ಮುಂಬೈ ರೀತಿಯ ಉಪನಗರ ರೈಲು ಯೋಜನೆ ಬೆಂಗಳೂರಿಗೆ ಬೇಕು ಎಂದಿದ್ದಾರೆ. ಜನರ ತೆರಿಗೆ ಹಣದ ಪೋಲು ಎಂದೂ ಕಿಡಿಕಾರಿದ್ದಾರೆ. ಸಂಸದ ತೇಜಸ್ವಿ ಸೂರ್ಯ ಕೂಡಾ ಈ ಯೋಜನೆ ಬಗ್ಗೆ ಕಿಡಿಕಾರಿದ್ದರು. ಸರ್ಕಾರದ ಸ್ಟುಪಿಡ್ ಯೋಜನೆ ಎಂದ ಅವರು, ಮೊದಲು ಬೆಂಗಳೂರಿನ ಬಾಕಿ ಉಳಿದಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಲಿ ಎಂದು ಆಗ್ರಹಿಸಿದ್ದರು. ಬೆಂಗಳೂರಿನ ಇಬ್ಬರು ಸಂಸದರಿಗೆ ಇದರ ಬಗ್ಗೆ ಗೊತ್ತಿಲ್ಲ. ಸ್ಟುಪಿಡಿಟಿ ಅಂತ ಏನೇನೋ ಹೇಳಿದ್ದಾರೆ.

# ರೆಸಿಡೆನ್ಸಿ ರಸ್ತೆ ಬಂದ್: ವಾಹನ ಸವಾರರ ಪರದಾಟ




• ಉದಯವಾಹಿನಿ, ಬೆಂಗಳೂರು

ವೈಟ್ ಟಾಪಿಂಗ್ ಕಾಮಗಾರಿಗಾಗಿ ರೆಸಿಡೆನ್ಸಿ ರಸ್ತೆಯಲ್ಲಿ ಆಶೀರ್ವಾದಂ ಜಂಕ್ಷನ್‌ನಿಂದ ಬ್ರಿಗೇಡ್ ರಸ್ತೆಯ ಜಂಕ್ಷನ್ ವರೆಗೆ ವಾಹನ ಸಂಚಾರ ಬಂದ್ ಮಾಡಲಾಗಿದೆ. ಇದರಿಂದ ದ್ವಿಚಕ್ರ ವಾಹನ ಸವಾರರು, ವಾಹನ ಚಾಲಕರು ಪರದಾಡುತ್ತಿದ್ದಾರೆ. ನಗರದ ಕೇಂದ್ರ ವಲಯದ ರೆಸಿಡೆನ್ಸಿ ರಸ್ತೆಯು ಪ್ರಮುಖ ಮಾರ್ಗವಾಗಿದ್ದು, ಮೇ 31ರ ವರೆಗೆ ವಾಹನ ಸಂಚಾರ ಬಂದ್ ಮಾಡಲಾಗಿದೆ. ಪರ್ಯಾಯ ಮಾರ್ಗ ಕಲ್ಪಿಸಲಾಗಿದೆ. ಶನಿವಾರ ರಾತ್ರಿ ಎರಡು ತಾಸಿಗೂ ಹೆಚ್ಚು ಕಾಲ ವಾಹನಗಳು ರೆಸಿಡೆನ್ಸಿ ರಸ್ತೆಯ ಮೇಲೇತುವೆಯಲ್ಲಿ ಸಾಲುಗಟ್ಟಿ ನಿಂತಿದ್ದವು. ಅಂಬುಲೆನ್ಸ್‌ಗಳೂ ದಟ್ಟಣೆಯಲ್ಲಿ ಸಿಲುಕಿದ್ದವು. ಭಾನುವಾರ ಸಹ ಇದೇ ಪರಿಸ್ಥಿತಿ ಇತ್ತು. ಎರಡು ಬದಿಯಲ್ಲೂ ಬ್ಯಾರಿಕೇಡ್ ಹಾಕಿ ವಾಹನ ಸಂಚಾರಕ್ಕೆ ಪರ್ಯಾಯ ಮಾರ್ಗ ಕಲ್ಪಿಸಲಾಗಿದ್ದು, ಆ ಮಾರ್ಗದಲ್ಲಿ ವಾಹನಗಳು ಸಾಲುಗಟ್ಟಿ ನಿಲ್ಲುತ್ತಿವೆ. ಸೇಂಟ್ ಮಾರ್ಕ್ ರಸ್ತೆ, ಮ್ಯೂಸಿಯಂ ರಸ್ತೆ, ಬ್ರಿಗೇಡ್ ರಸ್ತೆಯಲ್ಲಿ ದಟ್ಟಣೆ ಉಂಟಾಗಿದೆ. **ಸಂಚಾರ ಸಲಹೆ:** ರಿಚ್ಮಂಡ್ ಜಂಕ್ಷನ್, ರಿಚ್ಮಂಡ್ ಮೇಲೇತುವೆ, ಸೇಂಟ್ ಮಾರ್ಕ್ಸ್ ರಸ್ತೆ ಕಡೆಯಿಂದ ರೆಸಿಡೆನ್ಸಿ ರಸ್ತೆಯಲ್ಲಿ ಬಂದು ಎಚ್ಎಎಲ್, ಮಾರತ್ತಹಳ್ಳಿ ಕಡೆಗೆ ಸಂಚರಿಸುವ ವಾಹನ ಸವಾರರು, ಆಶೀರ್ವಾದಂ ಜಂಕ್ಷನ್ ಹಾಗೂ ಅನಿಲ್ ಕುಂಬ್ಳೆ ಜಂಕ್ಷನ್ ಮೂಲಕ ಮುಂದಕ್ಕೆ ಸಾಗಬಹುದು ಎಂದು ಸಂಚಾರ ಪೊಲೀಸರು ತಿಳಿಸಿದ್ದಾರೆ.

# ಫುಟ್‌ಪಾತ್ ಮೇಲೆ ತಂದೆಯೊಂದಿಗೆ ಮಲಗಿದ್ದ ಮಗು ಅಪಹರಣ

• ಉದಯವಾಹಿನಿ, ಬೆಂಗಳೂರು



ಬೌರಿಂಗ್, ಲೇಡಿ ಕರ್ಜನ್ ಆಸ್ಪತ್ರೆಯ ಹೊರಗಿನ ಫುಟ್‌ಪಾತ್‌ನಲ್ಲಿ ತನ್ನ ತಂದೆಯ ಪಕ್ಕದಲ್ಲಿ ಮಲಗಿದ್ದ ಒಂದು ವರ್ಷ ನಾಲ್ಕು ತಿಂಗಳ ಗಂಡು ಮಗುವನ್ನು ಗುರುವಾರ ಮುಂಜಾನೆ ಅಪಹರಿಸಲಾಗಿದೆ ಎಂದು ಆರೋಪಿಸಲಾಗಿದೆ. ಈ ಸಂಬಂಧ ಕಮರ್ಷಿಯಲ್ ಸ್ಟ್ರೀಟ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಬಾಲಕನನ್ನು ರಾಜಸ್ಥಾನ ಮೂಲದ ರೋಹಿತ್ ಎಂದು ಗುರುತಿಸಲಾಗಿದೆ. ರೋಹಿತ್‌ನ ತಂದೆ ಮುಖೇಶ್ ತನ್ನ ಪತ್ನಿ ಮತ್ತು ನಾಲ್ಕು ವರ್ಷದ ಮಗಳೊಂದಿಗೆ ನಗರಕ್ಕೆ ಬಂದಿದ್ದರು. ಕುಟುಂಬವು ಶಿವಾಜಿನಗರ ಬಸ್ ನಿಲ್ದಾಣ, ಸುತ್ತಮುತ್ತ ಬಲೂನ್‌ಗಳನ್ನು ಮಾರಾಟ ಮಾಡುತ್ತಿತ್ತು, ಫುಟ್‌ಪಾತ್‌ಗಳಲ್ಲಿ ಮಲಗುತ್ತಿತ್ತು. ಗುರುವಾರ ಬೆಳಗಿನ ಜಾವ 2 ಗಂಟೆ ಸುಮಾರಿಗೆ ಮುಖೇಶ್ ಎಚ್ಚರವಾದಾಗ, ತನ್ನ ಮಗ ರೋಹಿತ್ ಕಾಣೆಯಾಗಿದ್ದಾನೆಂದು ತಿಳಿದು ಗಾಬರಿಗೊಂಡಿದ್ದಾನೆ, ಮಗುವನ್ನು ಎಲ್ಲಾ ಕಡೆ ಹುಡುಕಿದರೂ ಎಲ್ಲೂ ಸಿಗಲಿಲ್ಲ. ನಂತರ ಕಾಣೆಯಾದ ವ್ಯಕ್ತಿಯ ದೂರು ದಾಖಲಿಸಲು ಪೊಲೀಸ್ ಠಾಣೆಗೆ ಸಂಪರ್ಕಿಸಿದನು ಎಂದು ಪೊಲೀಸರು ತಿಳಿಸಿದ್ದಾರೆ.

> ಆಸ್ಪತ್ರೆಯ ಒಳಗೆ ಮತ್ತು ಸುತ್ತಮುತ್ತಲಿನ ಸಿಸಿಟಿವಿ ದೃಶ್ಯಗಳನ್ನು ವಿಶ್ಲೇಷಿಸಿದ ನಂತರ, ಮಹಿಳೆಯೊಬ್ಬರು ರೋಹಿತ್‌ನನ್ನು ಎತ್ತಿಕೊಂಡು ಸ್ಥಳದಿಂದ ಪರಾರಿಯಾಗುತ್ತಿರುವುದು ಕಂಡುಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆಕೆಯ ಗುರುತು ಪತ್ತೆ ಹಚ್ಚುವ ಪ್ರಯತ್ನಗಳು ನಡೆಯುತ್ತಿವೆ ಎಂದು ಪೊಲೀಸರು ತಿಳಿಸಿದ್ದಾರೆ.

# ಕಾರಿಡಾರ್‌ನಲ್ಲಿ ಶೂ ರಯಾಕ್ ಇಟ್ಟಿದ್ದಕ್ಕೆ ನಿವಾಸಿಯೊಬ್ಬರಿಗೆ 24 ಸಾವಿರ ರೂ. ದಂಡ!


• ಉದಯವಾಹಿನಿ, ಬೆಂಗಳೂರು

ನಗರದ ಅಪಾರ್ಟ್‌ಮೆಂಟ್‌ವೊಂದರ ಕಾರಿಡಾರ್‌ನಲ್ಲಿ ಸುಮಾರು ಎಂಟು ತಿಂಗಳ ಕಾಲ ಶೂ ರಯಾಕ್ ಇಟ್ಟಿದ್ದ ವ್ಯಕ್ತಿಗೆ ಅಲ್ಲಿನ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘವು 24 ಸಾವಿರ ರೂ. ದಂಡ ವಿಧಿಸಿದೆ. ಎಲೆಕ್ಟ್ರಾನಿಕ್ ಸಿಟಿಯ ಒಂದನೇ ಹಂತದ ಪ್ರೆಸ್ಟೀಜ್ ಸನ್‌ರೈಸ್ ಪಾರ್ಕ್ ಅಪಾರ್ಟ್‌ಮೆಂಟ್‌ನಲ್ಲಿ ಈ ಘಟನೆ ನಡೆದಿದೆ. ಅಲ್ಲದೆ, ಯಾವುದೇ ನಿವಾಸಿಯು ತಮ್ಮ ಜಾಗ ಹೊರತುಪಡಿಸಿ ಅಪಾರ್ಟ್‌ಮೆಂಟ್‌ನ ಕಾಮನ್ ಏರಿಯಾದ ಕಾರಿಡಾರ್‌ಗಳಲ್ಲಿ ಶೂ ರಯಾಕ್ ಸೇರಿದಂತೆ ಯಾವುದೇ ವಸ್ತುಗಳನ್ನು ಇಟ್ಟರೆ, ಅಂಥವರಿಗೆ ದಿನಕ್ಕೆ 100 ರೂ. ದಂಡ ವಿಧಿಸುವ ಪರಿಪಾಠವನ್ನು ಅನುಸರಿಸಲಾಗುತ್ತಿದೆ. ಇದೀಗ ಆ ದಂಡದ ಮೊತ್ತವನ್ನು 200 ರೂ.ಗಳಿಗೆ ಹೆಚ್ಚಳ ಮಾಡುವ ಬಗ್ಗೆಯೂ ಸಂಘವು ಚಿಂತನೆ ನಡೆಸಿದೆ.

ಈ ವಸತಿ ಸಂಕೀರ್ಣದಲ್ಲಿ 1046 ಫ್ಲ್ಯಾಟ್‌ಗಳಿದ್ದು, ಶೇ 50ಕ್ಕೂ ಅಧಿಕ ನಿವಾಸಿಗಳು ತಮ್ಮ ಮನೆಯ ಶೂ ರ್ಯಾಕ್, ಪಾಟ್‌ಗಳು ಹಾಗೂ ಇನ್ನಿತರ ಬೇಡವಾದ ವಸ್ತುಗಳನ್ನು ಕಾಮನ್ ಏರಿಯಾಗಳಲ್ಲಿ ಇಡುತ್ತಿರುವುದು ಕಂಡುಬಂದಿತ್ತು. ಅಗ್ನಿಶಾಮಕ ನಿಯಮಗಳ ಪ್ರಕಾರ ದೊಡ್ಡ ದೊಡ್ಡ ಅಪಾರ್ಟ್‌ಮೆಂಟ್‌ಗಳಲ್ಲಿ ತುರ್ತು ಸಂದರ್ಭಗಳಲ್ಲಿ ಕಾರ್ಯಾಚರಣೆಗಳನ್ನು ನಡೆಸಲು ಕಾರಿಡಾರ್‌ಗಳು ಮುಕ್ತವಾಗಿರಬೇಕು. ಯಾವುದೇ ಅಡೆತಡೆ ಇರಬಾರದೆಂಬ ನಿಯಮವಿದೆ. ಆದರೆ ಅದನ್ನು ನಿವಾಸಿಗಳು ಪಾಲನೆ ಮಾಡುತ್ತಿರಲಿಲ್ಲ. ಹಾಗಾಗಿ ನಿಯಮಾವಳಿಗೆ ವಿರುದ್ಧವಾಗಿದ್ದ ಶೂ ರಯಾಕ್, ಪಾಟ್‌ಗಳು ಸೇರಿದಂತೆ ಎಲ್ಲಾ ವಸ್ತುಗಳನ್ನು ತೆಗೆಯುವಂತೆ ಸಂಘವು ಎಲ್ಲಾ ನಿವಾಸಿಗಳನ್ನು ಹಲವು ಬಾರಿ ಸಂಪರ್ಕ ಮಾಡಿ ಮನವಿ ಮಾಡಿತ್ತು.

ಸುಮಾರು ಅರ್ಧದಷ್ಟು ನಿವಾಸಿಗಳು ಸಮುದಾಯ ಮಾರ್ಗಸೂಚಿಗಳನ್ನು ಉಲ್ಲಂಘಿಸಿ ತಮ್ಮ ಫ್ಲಾಟ್‌ಗಳ ಹೊರಗೆ ವಸ್ತುಗಳನ್ನು ಇರಿಸಿದ್ದಾರೆ ಎಂದು ಕಂಡುಬಂತು. ಅವರಿಗೆಲ್ಲಾ ನೋಟಿಸ್ ನೀಡಲಾಯಿತು.

ನಂತರ ಸಂಭಾಷಣೆಗಳು ನಡೆದವು. ಎರಡು ತಿಂಗಳ ಗಡುವನ್ನು ನಿಗದಿ ಪಡಿಸಲಾಯಿತು. ಮೊದಲಿಗೆ ವಿರೋಧ ಕಂಡು ಬಂದರೂ ನಿಧಾನವಾಗಿ, ನಾಲ್ಕು ವಾರಗಳಲ್ಲಿ ಒಂದೊಂದಾಗಿ, ಎಲ್ಲರೂ ಪಾಲಿಸಿದರು. ಜತೆಗೆ ಎಲ್ಲಾ ನಿವಾಸಿಗಳಿಗೆ ಕಾರಿಡಾರ್‌ಗಳಲ್ಲಿ ಇಟ್ಟಿರುವ ತಮ್ಮ ವಸ್ತುಗಳನ್ನು ತೆಗೆದುಕೊಳ್ಳಲು ಎರಡು ತಿಂಗಳು ಕಾಲಾವಕಾಶವನ್ನೂ ನೀಡಲಾಗಿತ್ತು. ಆರಂಭದಲ್ಲಿ ಕೆಲ ನಿವಾಸಿಗಳು ಇದಕ್ಕೆ ತೀವ್ರ ಪ್ರತಿರೋಧ ವ್ಯಕ್ತಪಡಿಸಿದರು.



> ನಂತರ ಸಂಘದ ಸತತ ನೋಟಿಸ್‌ಗೆ ಹೆದರಿ, ತಮ್ಮ ಶೂ ರಯಾಕ್ ಮತ್ತಿತರ ವಸ್ತುಗಳನ್ನು ಕಾಮನ್ ಏರಿಯಾದ ಕಾರಿಡಾರ್‌ಗಳಿಂದ ತೆಗೆದು ತಮ್ಮ ಸ್ವಂತ ಜಾಗದಲ್ಲಿಟ್ಟುಕೊಂಡಿದ್ದರು. ಆದರೆ, ಒಬ್ಬ ನಿವಾಸಿ ಮಾತ್ರ ತೀವ್ರ ಪ್ರತಿರೋಧವೊಡ್ಡಿ, ಕಾರಿಡಾರ್‌ನಲ್ಲಿದ್ದ ಶೂ ರಯಾಕ್ ತೆಗೆದಿರಲಿಲ್ಲ. ಆಗ ಸಂಘವು ದಿನಕ್ಕೆ 100 ರೂ.ನಂತೆ ದಂಡ ಪಾವತಿಸುವಂತೆ ಆ ನಿವಾಸಿಗೆ ನೋಟಿಸ್ ನೀಡಿತ್ತು. ಅದಕ್ಕೆ ಆ ನಿವಾಸಿ ಮೊದಲಿಗೆ 15 ಸಾವಿರ ರೂ.ಗಳನ್ನು ಸಂಘಕ್ಕೆ ಪಾವತಿಸಿ ಈವರೆಗಿನ ಉಲ್ಲಂಘನೆಗೆ ಹಾಗೂ ಭವಿಷ್ಯದ ಉಲ್ಲಂಘನೆಗೆ ಸೇರಿಸಿ ದಂಡ ಕಟ್ಟಿರುವುದಾಗಿ ಹೇಳಿದ್ದರು.

# ಮ್ಯಾನೇಜರ್ ಕಿರುಕುಳ: ಕೆರೆಗೆ ಹಾರಿ ಬೆಂಗಳೂರಿನ ಟೆಕ್ಕಿ ಆತ್ಮಹತ್ಯೆ

• ಉದಯವಾಹಿನಿ, ಬೆಂಗಳೂರು

ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಟೆಕ್ಕಿಯೊಬ್ಬರು ಆತ್ಮಹತ್ಯೆ ಮಾಡಿಕೊಂಡ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ನಿಖಿಲ್ ಸೋಮವಂಶಿ ಆತ್ಮಹತ್ಯೆ ಮಾಡಿಕೊಂಡ ಟೆಕ್ಕಿ. ಅಗರ ಕೆರೆಯಲ್ಲಿ ಶವ ಪತ್ತೆಯಾಗಿದ್ದು ಕೆಲಸದ ಒತ್ತಡದಿಂದ ಆತ್ಮಹತ್ಯೆ ಮಾಡಿಕೊಂಡ ಶಂಕೆ ವ್ಯಕ್ತವಾಗಿದೆ. ನಿಖಿಲ್ ಐಐಎಸ್‌ಸಿ ಪದವೀಧರನಾಗಿದ್ದು ಕೋರಮಂಗಲದ ಕಂಪನಿಯೊಂದರಲ್ಲಿ ಕೆಲಸ ಮಾಡುತ್ತಿದ್ದರು. ಈಗ ಅಸಹಜ ಸಾವು ಪ್ರಕರಣದ ಹೆಚ್‌ಎಸ್‌ಆರ್ ಲೇಔಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಿದ್ದಾರೆ. ನಿಖಿಲ್ ಸೋಮವಂಶಿ ಆತ್ಮಹತ್ಯೆಗೆ ಮ್ಯಾನೇಜರ್ ನೀಡಿದ ಟಾರ್ಚರ್ ಕಾರಣ ಎಂದು ಸಹದ್ಯೋಗಿಗಳು ಸಾಮಾಜಿಕ ಜಾಲತಾಣದಲ್ಲಿ ಆರೋಪಿಸಿದ್ದಾರೆ. ನಿಖಿಲ್ ಕಾಲೇಜು ದಿನಗಳಿಂದಲೇ ಅತ್ಯುತ್ತಮ ವಿದ್ಯಾರ್ಥಿಯಾಗಿದ್ದರು. ಆದರೆ ಅಮೆರಿಕ ಮೂಲದ ಮ್ಯಾನೇಜರ್ ಹೊಸದಾಗಿ ಸೇರಿದ ಉದ್ಯೋಗಿಗಳಿಗೆ ಬಹಳ ಕಿರುಕುಳ ನೀಡುತ್ತಿದ್ದರು. ಈ ಕಿರುಕುಳದಿಂದ ಬೇಸತ್ತು ಹಲವು ಮಂದಿ ರಾಜೀನಾಮೆ ನೀಡಿದ್ದಾರೆ ಎಂದು ದೂರಿದ್ದಾರೆ.


ಕಂಪನಿ ನಷ್ಟದಲ್ಲಿತ್ತು, ಉದ್ಯೋಗಿಗಳು ರಾಜೀನಾಮೆ ನೀಡಿದ್ದರು. ಹೀಗಾಗಿ ಕೆಲಸದ ಒತ್ತಡ ಜಾಸ್ತಿ ಇತ್ತು. ಈ ಕಾರಣಕ್ಕೆ ಮ್ಯಾನೇಜರ್ ಉದ್ಯೋಗಿಗಳಿಗೆ ಕಿರುಕುಳ ನೀಡುತ್ತಿದ್ದರು ಎಂದು ಆರೋಪಿಸಿದ್ದಾರೆ.

# ಸಮೀಕ್ಷಾ ಕಾರ್ಯ ತ್ವರಿತವಾಗಿ ಪೂರ್ಣಗೊಳಿಸಿ: ಅಧಿಕಾರಿಗಳಿಗೆ ಬಿಬಿಎಂಪಿ ಸೂಚನೆ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಪರಿಶಿಷ್ಟ ಜಾತಿ ಜನಸಂಖ್ಯೆ ಹೆಚ್ಚಿರುವ ಪ್ರದೇಶಗಳಿಗೆ ಗಣತಿದಾರರಿಗೆ ನಿಯೋಜಿಸಿ, ಸಮೀಕ್ಷಾ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಮುಖ್ಯ ಆಯುಕ್ತ ಮಹೇಶ್ವರ ರಾವ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಪರಿಶಿಷ್ಟ ಜಾತಿ ಸಮೀಕ್ಷೆಗೆ ಸಂಬಂಧಿಸಿದ ನಡೆದ ವರ್ಚುವಲ್ ಸಭೆಯಲ್ಲಿ ಮಾತನಾಡಿದ ಅವರು, ಎಂಟು ವಲಯಗಳ ವಲಯ ಆಯುಕ್ತರು ಪ್ರತಿದಿನವೂ ಸಮೀಕ್ಷೆ ಕಾರ್ಯವನ್ನು ಮೇಲ್ವಿಚಾರಣೆ ಮಾಡಬೇಕು, ವಿಸ್ತೃತ ಸಮಯದೊಳಗೆ ಸಮೀಕ್ಷಾ ಕಾರ್ಯವನ್ನು ಪೂರ್ಣಗೊಳಿಸಬೇಕು ಎಂದು ಹೇಳಿದರು. ಸರ್ಕಾರ ಸಮೀಕ್ಷೆ ಅವಧಿಯಲ್ಲಿ ಮೇ 17 ರಿಂದ 25ರವರೆಗೆ ವಿಸ್ತರಣೆ ಮಾಡಲಾಗಿದ್ದು, ಈ ಅವಧಿಯಲ್ಲಿ ಸಮೀಕ್ಷೆ ಕಾರ್ಯ ಪೂರ್ಣಗೊಳ್ಳಬೇಕು ಎಂದು ತಿಳಿಸಿದರು. ಕರ್ನಾಟಕ ಸರ್ಕಾರ, ಸಮಾಜ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ 8 ವಲಯಗಳಲ್ಲಿ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ ಕಾರ್ಯವು ಮೇ 5 ರಿಂದ 23ನೇ ಮೇ 2025 ರವೆರೆಗೆ ನಡೆಯಲಿದೆ. ಅದರಂತೆ, ಪಾಲಿಕೆ ಸಮನ್ವಯ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಕಲ್ಯಾಣ ವಿಭಾಗದ ವಿಶೇಷ ಆಯುಕ್ತರಾದ ಸುರಳ್ಕರ್ ವಿಕಾಸ್ ಕಿಶೋರ್ ರವರ ನೇತೃತ್ವದಲ್ಲಿ, ಪರಿಷಿಷ್ಟ ಜಾತಿ ಸಮುದಾಯದವರು ಸಮೀಕ್ಷಾ ಕಾರ್ಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ನಿಟ್ಟಿನಲ್ಲಿ ಮೇ 15 ರಿಂದ ಮೇ 20 ರವರೆಗೆ 6 ದಿನಗಳ ಕಾಲ ಎಲ್ಲಾ 8 ವಲಯಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.




> ಸಮೀಕ್ಷೆಯ ಬಿಬಿಎಂಪಿಯ ಸಮನ್ವಯ ಸಮಿತಿ ಸದಸ್ಯ ಕಾರ್ಯದರ್ಶಿ ಹಾಗೂ ಕಲ್ಯಾಣ ವಿಭಾಗದ ವಿಶೇಷ ಆಯುಕ್ತ ಸುರಳರ್‌ವಿಕಾಸ್ ಕಿಶೋರ್ ಮಾತನಾಡಿ, ಸಮೀಕ್ಷಾ ಕಾರ್ಯ ಕಡಿಮೆಯಾಗುತ್ತಿರುವ ಕಡೆಗಳಲ್ಲಿ ಹೆಚ್ಚುವರಿ ಗಣತಿದಾರರನ್ನು ನಿಯೋಜಿಸಿಕೊಂಡು ತ್ವರಿತವಾಗಿ ಸಮೀಕ್ಷಾ ಕಾರ್ಯವನ್ನು ಪೂರ್ಣಗೊಳಿಸುವಂತೆ ಹೇಳಿದರು. ಬಿಬಿಎಂಪಿ ವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷಾ ಕಾರ್ಯದಲ್ಲಿ ನಾಗರಿಕರು ಸಕ್ರಿಯವಾಗಿ ಪಾಲ್ಗೊಳ್ಳುವ ಉದ್ದೇಶದಿಂದ ನಗರದ 8 ವಲಯಗಳಲ್ಲಿ ಬೀದಿ ನಾಟಕ, ಧ್ವನಿವರ್ಧಕ ಹಾಗೂ ಕರಪತ್ರಗಳನ್ನು ಹಂಚುವ ಮುಖಾಂತರ ಅರಿವು ಮೂಡಿಸುವ ಕಾರ್ಯಗಳು ಹಮ್ಮಿಕೊಳ್ಳಲಾಗಿದೆ.

# ಅಭಿವೃದ್ಧಿ ಪ್ರಾಧಿಕಾರ ಬೆಂಗಳೂರು ನಗರ ಶ್ರೇಷ್ಠವಾಗಿಸುತ್ತದೆಯೇ?

## ಕಳೆದ 76 ವರ್ಷಗಳಲ್ಲಿ, ವಿಶೇಷವಾಗಿ 1990ರ ದಶಕದ ಅಂತ್ಯ 2000ರ ದಶಕದ ಆರಂಭ, ಹಲವಾರು ಪಟ್ಟು ಹೆಚ್ಚಾಗಿ 1.3 ಕೋಟಿಗೆ ಏರಿದೆ

• ಉದಯವಾಹಿನಿ, ಬೆಂಗಳೂರು


1949 ರಲ್ಲಿ, ಎರಡು ಪ್ರತ್ಯೇಕ ಪುರಸಭೆಗಳನ್ನು ವಿಲೀನಗೊಳಿಸಿ ಬೆಂಗಳೂರು ನಿಗಮ (ಬಿಸಿಸಿ) ರಚನೆಯಾಯಿತು. ಅಂದು ಸುಮಾರು 7.5 ಲಕ್ಷ ಜನಸಂಖ್ಯೆಯಿತ್ತು. ಆದರೆ ಕಳೆದ 76 ವರ್ಷಗಳಲ್ಲಿ, ವಿಶೇಷವಾಗಿ 1990 ರ ದಶಕದ ಅಂತ್ಯ 2000ರ ದಶಕದ ಆರಂಭದಲ್ಲಿ ಐಟಿ ಬೆಳವಣಿಗೆಯ ನಂತರ, ಬೆಂಗಳೂರಿನ ಜನಸಂಖ್ಯೆಯು ಹಲವಾರು ಪಟ್ಟು ಹೆಚ್ಚಾಗಿ 1.3 ಕೋಟಿಗೆ ಏರಿದೆ, ಇದು ಕೆಟ್ಟ ರಸ್ತೆಗಳು, ತೆರವುಗೊಳಿಸದ ಕಸ, ಮಳೆಗಾಲದಲ್ಲಿ ಪ್ರವಾಹ ಗುಂಡಿಗಳು ಸೇರಿದಂತೆ ಇನ್ನೂ ಅನೇಕ ಸಮಸ್ಯೆಗಳನ್ನು ಸೃಷ್ಟಿಸಿದೆ. 1989 ರಲ್ಲಿ ಬಿಸಿಸಿ ನಂತರ ಬೆಂಗಳೂರು ಮಹಾನಗರ ಪಾಲಿಕೆ ಮತ್ತು 2007ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಎಂದು ಹೆಸರಿಸಲಾಯಿತು, ನಿಗಮದ ಮಿತಿಗಳು ದೊಡ್ಡದಾಗಿ ವಿಸ್ತಾರವಾಯಿತು. ಹೆಚ್ಚಿನ ಸಂಖ್ಯೆಯ ವಾರ್ಡ್‌ಗಳನ್ನು ಸೇರಿಸಲಾಯಿತು ಮತ್ತು ಈಗ ಗ್ರೇಟರ್ ಬೆಂಗಳೂರು ಪ್ರಾಧಿಕಾರವಾಗಿದೆ.

**ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಜಾರಿ**

ಈಗ, ರಾಜ್ಯ ಸರ್ಕಾರವು ಈ ಪ್ರದೇಶವನ್ನು ಏಳು ಪುರಸಭೆ ನಿಗಮಗಳಾಗಿ ವಿಂಗಡಿಸಲು ಪ್ರಸ್ತಾಪಿಸಿದೆ ಆದರೆ ಮೂರು ಅಥವಾ ಐದು ಸಣ್ಣ ನಿಗಮಗಳಿಗೆ ಹೋಗುವ ಸಾಧ್ಯತೆಯಿದೆ. ಇದರೊಂದಿಗೆ, ಸಣ್ಣ ಪುರಸಭೆಗಳನ್ನು ವಿಲೀನಗೊಳಿಸುವ ಮೂಲಕ ಬಿಸಿಸಿ ರಚನೆಯಾದ ಕಾರಣ ಇದು ಪೂರ್ಣಗೊಳ್ಳಬಹುದು.

ಕರ್ನಾಟಕದ 2024-25ರ ಆರ್ಥಿಕ ಸಮೀಕ್ಷೆಯ ಪ್ರಕಾರ, ಏಳು ವಿಭಾಗಗಳನ್ನು ಹೊಂದಿರುವ ಬಿಸಿಸಿ, ತರುವಾಯ 50 ವಿಭಾಗಗಳಿಗೆ ನಂತರ ವಾರ್ಡ್‌ಗಳು ಎಂದು ಕರೆಯಲಾಯಿತು) ಏರಿತು.

ನಗರದ ಜನಸಂಖ್ಯೆ ಹೆಚ್ಚಾದಂತೆ, ಬಿಸಿಸಿ/ಬಿಎಂಪಿ 1991 ರಲ್ಲಿ 87 ವಾರ್ಡ್‌ಗಳನ್ನು ಮತ್ತು 1995 ರಲ್ಲಿ 100 ವಾರ್ಡ್‌ಗಳನ್ನು ಸೇರಿಸಿತು. 2007 ರಲ್ಲಿ, ಇದು ಬಿಬಿಎಂಪಿ ಯಾದಾಗ ಅದನ್ನು 198 ವಾರ್ಡ್‌ಗಳಿಗೆ ಹೆಚ್ಚಿಸಲಾಯಿತು ಮತ್ತು ಏಳು ನಗರ ಪುರಸಭೆಗಳು, ಒಂದು ತಾಲ್ಲೂಕು ಪುರಸಭೆ ಮತ್ತು 110 ಹಳ್ಳಿಗಳನ್ನು ಸೇರಿಸಲಾಯಿತು. ಕಳೆದ ಎರಡೂವರೆ ದಶಕಗಳಲ್ಲಿ ಬೆಂಗಳೂರು ಹೆಚ್ಚಿನ ಜನಸಂಖ್ಯೆ, ವಾಹನ ಬೆಳವಣಿಗೆಗೆ ಸಾಕ್ಷಿಯಾಗಿದೆ, ಆದರೆ ಈ ವರ್ಷಗಳಲ್ಲಿ, ಕೇವಲ 15 ವರ್ಷಗಳ ಕಾಲ ಮಾತ್ರ ಪರಿಷತ್ತು ಇತ್ತು. ಇದರರ್ಥ, ಸುಮಾರು 10 ವರ್ಷಗಳ ಕಾಲ, ನಗರದ ನಾಗರಿಕ ಸಮಸ್ಯೆಗಳನ್ನು ಮುಖ್ಯವಾಗಿ ಅಧಿಕಾರಿಗಳು ನಿರ್ವಹಿಸುತ್ತಿದ್ದರು, ಕೌನ್ಸಿಲರ್‌ಗಳಲ್ಲ.




ಸೆಪ್ಟೆಂಬರ್ 2020 ರಿಂದ, ಬೆಂಗಳೂರಿನಲ್ಲಿ ಪರಿಷತ್ತು ಇಲ್ಲ ಮತ್ತು ಹಿರಿಯ ಐಎಎಸ್ ಅಧಿಕಾರಿಗಳು ನಿರ್ವಹಿಸುತ್ತಿದ್ದಾರೆ. ಹಿರಿಯ ಅಧಿಕಾರಿಯೊಬ್ಬರು ಹೇಳುವ ಪ್ರಕಾರ, ಸಣ್ಣ ನಿಗಮಗಳ ವಿಭಜನೆ, ವಾರ್ಡ್‌ಗಳ ವಿಂಗಡಣೆ, ಈ ವಾರ್ಡ್‌ಗಳಿಗೆ ಕೌನ್ಸಿಲರ್‌ಗಳ ಮೀಸಲಾತಿ ಸೇರಿದಂತೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆಯು ಕನಿಷ್ಠ ಆರರಿಂದ ಎಂಟು ತಿಂಗಳುಗಳನ್ನು ತೆಗೆದುಕೊಳ್ಳುತ್ತದೆ, ಅಥವಾ ಯಾವುದೇ ಕಾನೂನು ಅಡೆತಡೆಗಳಿದ್ದರೆ ಇನ್ನೂ ಹೆಚ್ಚು ಸಮಯ ತೆಗೆದುಕೊಳ್ಳುತ್ತದೆ. ಇದರರ್ಥ ಕಾರ್ಪೊರೇಷನ್ ಚುನಾವಣೆಗಳು ಶೀಘ್ರದಲ್ಲೇ ನಡೆಯುವ ಸಾಧ್ಯತೆಯಿಲ್ಲ ಹೀಗಾಗಿ ನಗರವು ಹೆಚ್ಚಿನ ಸಮಯದವರೆಗೆ ಕೌನ್ಸಿಲ್ ಇಲ್ಲದೆ ಮುಂದುವರಿಯುತ್ತದೆ. ಕೌನ್ಸಿಲರ್‌ಗಳ ಅನುಪಸ್ಥಿತಿಯಲ್ಲಿ, ಶಾಸಕರು, ಸಂಸದರು ಮತ್ತು ಅಧಿಕಾರಿಗಳ ಮೇಲೆ ಹೊರೆ ಹೆಚ್ಚಾಗಿದೆ. ಕೌನ್ಸಿಲ್ ಇಲ್ಲದೆ, ಬೆಂಗಳೂರಿಗೆ ಅನೇಕ ಕೇಂದ್ರ ಅನುದಾನಗಳು ಬಂದಿಲ್ಲ ಎಂದು ತಿಳಿಸಿವೆ. ಅಮೃತ್ ಮತ್ತು 15 ನೇ ಹಣಕಾಸು ಆಯೋಗದಂತಹ ಯೋಜನೆಗಳ ಅಡಿಯಲ್ಲಿ, ನಗರ ಸ್ಥಳೀಯ ಸಂಸ್ಥೆಗಳಿಗೆ ಅನುದಾನ ಸಿಗುತ್ತದೆ. ಕೊನೆಯ ಬಾರಿಗೆ ಬಿಬಿಎಂಪಿ ಅದನ್ನು 2021 ರಲ್ಲಿ ಸ್ವೀಕರಿಸಿತು. ವಿರೋಧ ಪಕ್ಷದ ನಾಯಕ ಆರ್ ಅಶೋಕ ನಗರವನ್ನು ಸಣ್ಣ ಪುರಸಭೆಗಳಾಗಿ ವಿಭಜಿಸಲು ಗ್ರೇಟರ್ ಅನ್ನು ಕ್ವಾರ್ಟರ್ ಎಂದು ಕರೆದರು. ಇದು ಚುನಾವಣೆಗಳನ್ನು ಮುಂದೂಡಲು ರಾಜ್ಯ ಸರ್ಕಾರದ ತಂತ್ರವಾಗಿದೆ ಎಂದು ಬಿಜೆಪಿ ಆರೋಪಿಸಿದ್ದಾರೆ. ಆದರೆ, ಉಪಮುಖ್ಯಮಂತ್ರಿ ಬೆಂಗಳೂರು ಅಭಿವೃದ್ಧಿ ಸಚಿವ ಡಿಕೆಶಿ ಮುಂದಿನ ನಾಲ್ಕು ತಿಂಗಳಲ್ಲಿ ಚುನಾವಣೆ ನಡೆಯಲಿದೆ ಎಂದು ಹೇಳಿದ್ದಾರೆ. ಮಾಜಿ ಉಪಮೇಯರ್, ಬಿಜೆಪಿ ನಾಯಕ ಹರೀಶ್ ಎಸ್ ಅವರ ಪ್ರಕಾರ, ಪಕ್ಷವು ನ್ಯಾಯಾಲಯಕ್ಕೆ ಹೋಗಲು ಸಜ್ಜಾಗಿದೆ. ಅಸ್ತಿತ್ವದಲ್ಲಿರುವ ಬಿಬಿಎಂಪಿಯ ವಿಭಜನೆಯು ವೈಫಲ್ಯಕ್ಕೆ ಒಂದು ಮಾದರಿಯಾಗಿದೆ. ದೆಹಲಿಯಲ್ಲಿ, ನಾಗರಿಕ ಪ್ರಾಧಿಕಾರವನ್ನು ಮೂರು ನಿಗಮಗಳನ್ನಾಗಿ ಮಾಡಲಾಯಿತು ಮತ್ತು ಅದು ವಿಫಲವಾದ ನಂತರ, ಅವುಗಳನ್ನು ಒಂದಾಗಿ ವಿಲೀನಗೊಳಿಸಲಾಯಿತು. ಬಿಬಿಎಂಪಿ ಅಸ್ತಿತ್ವಕ್ಕೆ ಬಂದಾಗಿನಿಂದ, ನಗರವನ್ನು ಏಕರೂಪವಾಗಿ ಅಭಿವೃದ್ಧಿ ಪಡಿಸಲು ನಾವು 1 ಲಕ್ಷ ಕೋಟಿ ರೂ.ಗಳನ್ನು ಖರ್ಚು ಮಾಡಿದ್ದೇವೆ, ರಸ್ತೆಗಳು, ಘನತ್ಯಾಜ್ಯ ನಿರ್ವಹಣೆ ಮತ್ತು ಇತರ ಸೇವೆಗಳಿಗೆ ಹಣವನ್ನು ಖರ್ಚು ಮಾಡಲಾಗಿದೆ. ಈಗ ಅವರು ಈ ನಿಗಮಗಳನ್ನು ವಿಭಜಿಸಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಜಾರಿಗೆ ತರಲು ಬಯಸುತ್ತಾರೆ. ಇದು ಸಂವಿಧಾನದ 74 ನೇ ತಿದ್ದುಪಡಿಯ ಉಲ್ಲಂಘನೆಯಾಗಿದೆ. ಅಸ್ತಿತ್ವದಲ್ಲಿರುವ ವಾರ್ಡ್‌ಗಳಲ್ಲಿ, ಪ್ರತಿ ವಾರ್ಡ್‌ನ ಜನಸಂಖ್ಯೆಯು ಕೆಲವು ಸಾವಿರದಿಂದ 1 ಲಕ್ಷಕ್ಕಿಂತ ಹೆಚ್ಚು ಬದಲಾಗುತ್ತದೆ, ಆದರೆ ವಾರ್ಡ್ ಅನುದಾನಗಳು ಈ ವಾರ್ಡ್‌ಗಳಿಗೆ ಒಂದೇ ಆಗಿರುತ್ತವೆ, ಹೀಗಾಗಿ ಅನ್ಯಾಯವಾಗಿದೆ ಎಂದು ಅಧಿಕಾರಿಗಳು ಹೇಳಿದರು.

> ಟಿಎನ್‌ಐಇ ಜೊತೆ ಮಾತನಾಡಿದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ (ನಗರಾಭಿವೃದ್ಧಿ) ತುಷಾರ್ ಗಿರಿ ನಾಥ್, ಮೇ 15 ರಿಂದ ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ (ಜಿಬಿಜಿಎ) ಅನುಷ್ಠಾನದೊಂದಿಗೆ, ಕರ್ನಾಟಕ ಮುನ್ಸಿಪಲ್ ಕಾರ್ಪೊರೇಷನ್ ಕಾಯ್ದೆ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕಾಯ್ದೆಯಂತಹ ಎಲ್ಲಾ ಇತರ ಕಾಯ್ದೆಗಳು ಅಸ್ತಿತ್ವದಲ್ಲಿಲ್ಲ ಎಂದು ಹೇಳಿದರು.

# ರಾಜ್ಯ ದಿವಾಳಿ, ಖಜಾನೆಯಲ್ಲಿ ಹಣವಿಲ್ಲ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಕ್ಕಬಳ್ಳಾಪುರ

ರಾಜ್ಯ ಸರ್ಕಾರ ದಿವಾಳಿಯಾಗಿದೆ. ಖಜಾನೆಯಲ್ಲಿ ಹಣವಿಲ್ಲ, ಇಂತಹ ಸಮಯದಲ್ಲಿ ಹೊಸಪೇಟೆಯಲ್ಲಿ ಕಾಂಗ್ರೆಸ್‌ನವರು ಸಾಧನಾ ಸಮಾವೇಶ ನಡೆಸಲು ಹೊರಟಿದ್ದಾರೆ ಎಂದು ಬಿಜೆಪಿ ರಾಜ್ಯ ವಕ್ತಾರ ಚಂದ್ರಶೇಖರ್ ಎಚ್.ಎನ್ ವಾಗ್ದಾಳಿ ನಡೆಸಿದರು. ನಗರದಲ್ಲಿ ಸೋಮವಾರ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಕ್ರಮಗಳು ನಡೆಯುತ್ತಿಲ್ಲ, ಯಾವುದೇ ಇಲಾಖೆಗಳಿಗೂ ಅನುದಾನ ದೊರೆಯುತ್ತಿಲ್ಲ, ಅಗತ್ಯ ವಸ್ತುಗಳ ಬೆಲೆ ಹೆಚ್ಚಳವಾಗಿದೆ. ಆದರೆ ಕಾಂಗ್ರೆಸ್ ಸರ್ಕಾರ ಮಾತ್ರ ಸಮಾವೇಶ ಮಾಡಲು ಮುಂದಾಗಿದೆ ಎಂದರು.

ಗುತ್ತಿಗೆದಾರರಲ್ಲಿ ಮೀಸಲಾತಿ ನೀಡುವ ಮೂಲಕ ಅಲ್ಪಸಂಖ್ಯಾತರ ಓಲೈಕೆಗೆ ಕಾಂಗ್ರೆಸ್ ಮುಂದಾಗಿದೆ. ಪೊಲೀಸ್ ಠಾಣೆಗಳಿಗೆ ಕಲ್ಲು ತೂರಾಟ ನಡೆಯುವ ಸ್ಥಿತಿ ಬಂದಿದೆ. ನಾಲಾಯಕ್ ಗೃಹ ಸಚಿವರು ಎಂದು ಟೀಕಿಸಿದರು.

ರಾಜ್ಯ ಸರ್ಕಾರ ಮತಕ್ಕಾಗಿ ಮುಸ್ಲಿಮರನ್ನು ಓಲೈಸುತ್ತಿದೆ. ಕಾಂಗ್ರೆಸ್ ಶಾಸಕ ಕೊತ್ತೂರು ಮಂಜುನಾಥ್ ಸೇನಾ ಕಾರ್ಯಾಚರಣೆಯನ್ನೇ ಅವಮಾನಿಸುವ ರೀತಿ ಮಾತನಾಡುತ್ತಾರೆ. ಇದು ಕಾಂಗ್ರೆಸ್‌ನ ದೇಶ ವಿರೋಧಿ ಮನಸ್ಥಿತಿ ತೋರುತ್ತದೆ ಎಂದರು. ರಾಜ್ಯದಲ್ಲಿ 6,380 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ. ಕೇವಲ 30ರಿಂದ 40ರಷ್ಟು ಕೆಎಸ್‌ಆರ್‌ಟಿಸಿ ಬಸ್‌ಗಳು ದುರಸ್ತಿಗೆ ಬಂದಿದ್ದು ಅವುಗಳ ರಿಪೇರಿ ಆಗಿಲ್ಲ. ಮಕ್ಕಳ ಅಪೌಷ್ಟಿಕತೆ ನಿವಾರಣೆಗೂ ಸರ್ಕಾರ ಮುಂದಾಗಿಲ್ಲ. ಅಧಿಕಾರಕ್ಕೆ ಬಂದು ಎರಡು ವರ್ಷವಾದರೂ ವಿವಿಧ ಸಮುದಾಯಗಳ ಅಭಿವೃದ್ಧಿ ನಿಗಮಕ್ಕೆ ಹಣ ನೀಡಿಲ್ಲ ಎಂದು ದೂರಿದರು.


### ರಾಜ್ಯ ಸರ್ಕಾರ ಏನು ಸಾಧನೆ ಮಾಡಿದೆ ಎಂದು ಸಾಧನಾ ಸಮಾವೇಶ ಮಾಡ್ತಿದೆ: ವಿಶ್ವನಾಥ್

# ನಿಮಗೂ ಬಿಜೆಪಿಯವರಿಗೂ ಯಾವುದೇ ವ್ಯತ್ಯಾಸವಿಲ್ಲ

• ಉದಯವಾಹಿನಿ, ಮೈಸೂರು

**ಬರೀ ಸುಳ್ಳು ಬುಟಾಟಿಕೆ**

ರಾಜ್ಯ ಸರ್ಕಾರ ಏನು ಸಾಧನೆ ಮಾಡಿದೆ ಎಂದು ಸಾಧನಾ ಸಮಾವೇಶ ಮಾಡುತ್ತಿದ್ದೀರ? ಹೇಳಿ ಕೊಳ್ಳುವಂತಹ ಯಾವ ಸಾಧನೆ ಮಾಡಿದ್ದೀರ? ಮುಖ್ಯಮಂತ್ರಿಗಳೇ ನಿಮ್ಮ ಸ್ವಂತ ಜಿಲ್ಲೆಯಲ್ಲಿ ಏನು ಅಭಿವೃದ್ಧಿ ಮಾಡಿದ್ದೀರ ಹೇಳಿ? ಬರೀ ಹೆಲಿಕಾಪ್ಟರ್‌ನಲ್ಲಿ ಓಡಾಡಿರುವುದೇ ನಿಮ್ಮ ಸಾಧನೆಯಾ? ನಿಮ್ಮ ಅಧಿಕಾರಾವಧಿಯಲ್ಲಿ ಹೆಲಿಕಾಪ್ಟರ್‌ನಲ್ಲಿ ಓಡಾಡಲು ಎಷ್ಟು ಹಣ ಖರ್ಚು ಮಾಡಿದ್ದೀರಾ ಎಂಬುದನ್ನು ಸಾಧನಾ ಸಮಾವೇಶದಲ್ಲಿ ತಿಳಿಸಬೇಕು ಎಂದು ಎಂಎಲ್‌ಸಿ ಎಚ್. ವಿಶ್ವನಾಥ್ ಮೈಸೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ವಾಗ್ದಾಳಿ ನಡೆಸಿದರು. ನಿಮ್ಮಿಂದ ಎಷ್ಟು ಸರ್ಕಾರಿ ಅಧಿಕಾರಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂಬುದನ್ನು ತಿಳಿಸಬೇಕು. ಮುಡಾ ಹಗರಣದ ಬಗ್ಗೆಯೂ ತಿಳಿಸಬೇಕು. ಇಲ್ಲದಿದ್ದರೆ ನಾವು ಕೂಡ ಸಮಾವೇಶ ಮಾಡಿ ನಿಮ್ಮ ವೈಫಲ್ಯಗಳನ್ನು ಜನರ ಮುಂದಿಡುತ್ತೇವೆ. ನಿಮ್ಮ ವೈಫಲ್ಯಗಳನ್ನು ಮರೆ ಮಾಚಲು, ಜನರ ಗಮನ ಬೇರೆಡೆಗೆ ಸೆಳೆಯಲು ಸಾಧನಾ ಸಮಾವೇಶ ಮಾಡುತ್ತಿದ್ದೀರಿ. ಸಾಧನಾ ಸಮಾವೇಶದಲ್ಲಿ ಸಿಎಂ ಸೇರಿದಂತೆ ಎಲ್ಲಾ ಸಚಿವರ ಆಸ್ತಿಯ ವಿವರಗಳನ್ನು ಬಹಿ ರಂಗಪಡಿಸಬೇಕು. ಸರ್ಕಾರದ ಹಣದಲ್ಲಿ ಸಾಧನಾ ಸಮಾವೇಶ ಮಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ನಿಮಗೂ ಬಿಜೆಪಿ ಯವರಿಗೂ ಯಾವುದೇ ವ್ಯತ್ಯಾಸವಿಲ್ಲ, ನಾನು ಸಹ ಬಿಜೆಪಿಯಲ್ಲಿದ್ದವನು. ಬಿಜೆಪಿ ಸರ್ಕಾರ ಬರಲು ಕಾರಣನಾದವನು. ಯಡಿಯೂರಪ್ಪ ಅವಧಿಯಲ್ಲಿ ಜಿಂದಾಲ್‌ಗೆ ಭೂಮಿ ಕೊಡಲು ನಾವು ತಡೆ ಹಾಕಿದ್ವಿ. ಕಳೆದ ಮೂರು ತಿಂಗಳಲ್ಲಿ ನೀವು ಮಾಡಿದ್ದೇನು ಸಿದ್ದರಾಮಯ್ಯನವರೇ? ಜನಾರ್ದನರೆಡ್ಡಿಗೂ ನಿಮಗೂ ಯಾವುದೇ ವ್ಯತ್ಯಾಸವಿಲ್ಲ. ಜನರ ವಿಶ್ವಾಸ ಕಳೆದುಕೊಂಡಿರುವ ನೀವು ಸಾಧನಾ ಸಮಾವೇಶ ಮಾಡುತ್ತಿದ್ದೀರಾ? ನೀವು ಬರೀ ಸುಳ್ಳು ಬುಟಾಟಿಕೆ ಮಾಡುತ್ತಿದ್ದೀರಿ. ಬಿಜೆಪಿಯವರು ಕೂಡ ಬರೀ ಸುಳ್ಳು ಹೇಳಿ ಮನೆಗೆ ಹೋದರು ಎಂದರು. ರಾಜ್ಯದ ನೀರಾವರಿ ಯೋಜನೆಗಳು ಕುಂಟುತ್ತಾ ಸಾಗಿವೆ. ಕಿಕ್ ಬ್ಯಾಕ್ ಪಡೆಯಲು ನೀರಾವರಿ ಇಲಾಖೆ ಇಟ್ಟುಕೊಂಡಿದ್ದಾರೆ. ಶ್ರೀರಾಮ ಸಕ್ಕರೆ ಕಾರ್ಖಾನೆಯ ಸ್ಥಿತಿ ಏನಾಗಿದೆ? ಜನರ ತೆರಿಗೆ ಹಣವನ್ನು ಪೋಲು ಮಾಡುತ್ತಿದ್ದಾರೆ. ಇದು ಹುಚ್ಚರ ಸರ್ಕಾರವಾಗಿದೆ. ಯಾವುದೇ ಮಾನದಂಡವಿಲ್ಲದೇ ಎಲ್ಲರಿಗೂ 2 ಸಾವಿರ ಕೊಡ್ತಿದ್ದಾರೆ. ಇದನ್ನು ಹುಚ್ಚರ ಸರ್ಕಾರ ಅನ್ನದೇ ಇನ್ನೇನು ಹೇಳಬೇಕು ಎಂದು ಟೀಕಿಸಿದರು. ಭಾರತ ಪಾಕಿಸ್ತಾನದ ವಿರುದ್ಧ ನಡೆಸಿದ ಸಮರಕ್ಕೆ ಕಾಂಗ್ರೆಸ್ ನಾಯಕರು ಸಾಕ್ಷ್ಯ ಕೇಳುತ್ತಿರುವ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಸಿದ್ದರಾಮಯ್ಯ ಒಂದು ದಿನ ಪಾಕಿಸ್ತಾನದ ಪರ ಮಾತಾಡ್ತಾರೆ. ಮತ್ತೊಂದು ದಿನ ಭಾರತದ ಪರ ಮಾತಾಡ್ತಾರೆ. ಇಂತಹ ಸನ್ನಿವೇಶದಲ್ಲಿ ಎಲ್ಲರೂ ಒಗ್ಗಟ್ಟಾಗಿರ ಬೇಕು. ಸಿದ್ದರಾಮಯ್ಯ ಕುರುಬರಿಗೂ ಏನನ್ನು ಮಾಡಲಿಲ್ಲ.ಸಿದ್ದರಾಮಯ್ಯ ಗಂಭೀರವಾಗಿ ಆಡಳಿತ ನಡೆಸುತ್ತಿಲ್ಲ ಎಂದರು.



**ಸಮರ್ಪಣೆ ಸಂಕಲ್ಪ ಸಮಾವೇಶ**

**ರಾಜ್ಯ ಸರಕಾರ ಎರಡು ವರ್ಷಗಳ ಸಾಧನೆಗಳನ್ನು ಬಿಂಬಿಸುವ ಸಮರ್ಪಣೆ ಸಂಕಲ್ಪ ಸಮಾವೇಶ ಹಿನ್ನೆಲೆ ವಿಜಯನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಭವ್ಯ ವೇದಿಕೆ ನಿರ್ಮಾಣ ಭರದಿಂದ ಸಾಗಿದೆ. ಮೇ 20 ರಂದು ರಾಜ್ಯದ ಎಲ್ಲಾ ರಸ್ತೆಗಳು ಹೊಸಪೇಟೆಯತ್ತ ಎನ್ನುವಂತೆ ಸಮಾವೇಶ ಭಾರಿ ಮಹತ್ವ ಪಡೆದಿದೆ. ಈ ಕಾರ್ಯಕ್ರಮದ ಯಶಸ್ವಿಗೆ ಜಿಲ್ಲಾಡಳಿತವೇ ಟೊಂಕ ಕಟ್ಟಿ ನಿಂತಿದೆ. ಸಾಧನಾ ಸಮಾವೇಶದ ಬಗ್ಗೆ ಎಂಎಲ್‌ಸಿ ಎಚ್ ವಿಶ್ವನಾಥ್ ಮೈಸೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ವಾಗ್ದಾಳಿ ನಡೆಸಿದರು.**

# ಪಟ್ಟಣಕ್ಕೆ ಉಪಲೋಕಾಯುಕ್ತ ಬಿ.ವೀರಪ್ಪ ಭೇಟಿ ಪರಿಶೀಲನೆ

• ಉದಯವಾಹಿನಿ, ಕೆ.ಆರ್.ಪೇಟೆ


ಉದಯವಾಹಿನಿ ಚಿತ್ರ

ರಾಜ್ಯದ ಉಪ ಲೋಕಾಯುಕ್ತರಾದ ಬಿ.ವೀರಪ್ಪ ಅವರು ಸೋಮವಾರ ಕೆ.ಆರ್.ಪೇಟೆ ಪಟ್ಟಣದಲ್ಲಿ ಮಿಂಚಿನ ಸಂಚಲನ ನಡೆಸಿ ಅವ್ಯವಸ್ಥೆಗಳ ಅವಲೋಕನ ನಡೆಸಿ ಸಾರ್ವಜನಿಕರಿಂದ ಕುಂದುಕೊರತೆಗಳನ್ನು ಆಲಿಸಿದರು. ಪಟ್ಟಣದ ದುಂಡಶೆಟ್ಟಿ ಲಕ್ಷ್ಮಮ್ಮ ಸ್ಮಾರಕ ಸಾರ್ವಜನಿಕ ಆಸ್ಪತ್ರೆ, ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣ, ಸಾರ್ವಜನಿಕ ಶೌಚಾಲಯ, ಪುರಸಭೆ ವ್ಯಾಪ್ತಿಯ ವಿವಿಧ ಬಡಾವಣೆಗಳು ಸೇರಿದಂತೆ ಮೀನಿನ ಮಾರುಕಟ್ಟೆಗೆ ಭೇಟಿ ನೀಡಿ ಅಶುಚಿತ್ವ ತಾಂಡವ ಆಡುತ್ತಿರುವುದನ್ನು ಕಣ್ಣಾರೆ ಕಂಡು ಮುಖ್ಯಾಧಿಕಾರಿ ನಟರಾಜ್ ಅವರನ್ನು ತರಾಟೆಗೆ ತೆಗೆದುಕೊಂಡರು.

ಪಟ್ಟಣದಿಂದ ಮೈಸೂರು ನಗರಕ್ಕೆ ಬೆಳಿಗ್ಗೆ ಹಾಗೂ ಸಂಜೆಯ ಸಮಯದಲ್ಲಿ ಪ್ರಯಾಣಿಕರು ಸಂಚರಿಸಲು ಇರುವ ಬಸ್ಸುಗಳ ಕೊರತೆಯ ಬಗ್ಗೆ ಸಾರ್ವಜನಿಕರು ಲೋಕಾಯುಕ್ತರ ಗಮನ ಸೆಳೆದು ಬಸ್ ವ್ಯವಸ್ಥೆ ಮಾಡಿಸಿಕೊಡುವಂತೆ ಅವಲತ್ತುಕೊಂಡರು. ಬಸ್ ನಿಲ್ದಾಣದಲ್ಲಿ ಅಶುಚಿತ್ವ ತುಂಬಿ ತುಳುಕುತ್ತಿರುವ ಬಗ್ಗೆ ವಿಭಾಗೀಯ ಸಾರಿಗೆ ಅಧಿಕಾರಿ ರವಿ ಅವರನ್ನು ತರಾಟೆಗೆ ತೆಗೆದುಕೊಂಡರಲ್ಲದೆ ಮೀನಿನ ಮಾರುಕಟ್ಟೆಯ ತ್ಯಾಜ್ಯ ನೀರು ಸೇರಿದಂತೆ ಪಟ್ಟಣದ ಒಳಚರಂಡಿಯ ತ್ಯಾಜ್ಯ ನೀರು ಚನ್ನಪ್ಪನ ಕಟ್ಟೆಯ ನೀರಿನ ಮೂಲಕ ಹೊಸಹೊಳಲು ಕೆರೆ ಹಾಗೂ ಪಟ್ಟಣದ ಶ್ರವಣಬೆಳಗೊಳ ರಸ್ತೆಯ ಕಡೆಯಿಂದ ಕಲುಷಿತ ನೀರು ದೇವಿರಮ್ಮಣ್ಣಿ ಕೆರೆಗೆ ಸೇರುತ್ತಿರುವ ಬಗ್ಗೆ ಪಟ್ಟಣದ ನಿವಾಸಿಗಳು ದೂರು ನೀಡಿದ ಹಿನ್ನೆಲೆಯಲ್ಲಿ ಪುರಸಭೆಯ ಮುಖ್ಯಾಧಿಕಾರಿ ನಟರಾಜ್ ಹಾಗೂ ಹೆಲ್ತ್ ಇನ್ಸ್‌ಪೆಕ್ಟರ್ ಅಶೋಕ್ ಅವರನ್ನು ತರಾಟೆಗೆ ತೆಗೆದುಕೊಂಡರು.

ಬಸ್ ನಿಲ್ದಾಣದೊಳಗಿನ ಅವ್ಯವಸ್ಥೆಯ ಬಗ್ಗೆ ತೀವ್ರ ಆಕ್ರೋಶಗೊಂಡ ಉಪ ಲೋಕಾಯುಕ್ತರು ನೀನು ಡಿಪೋ ಮ್ಯಾನೇಜರ್ ಅಲ್ಲ, ಡ್ಯಾಮೇಜರ್, ನಿನ್ನ ಮನೆಯ ಆವರಣವನ್ನು ಹೀಗೆ ಗಬ್ಬಾಗಿ ಇಟ್ಕೋತೀಯ, ನಾಚಿಕೆ ಆಗ್ಬೇಕು ನಿನ್ನ ಕಾರ್ಯವೈಖರಿಗೆ ಎಂದು ಸಾರಿಗೆ ಅಧಿಕಾರಿಯನ್ನು ಛೇಡಿಸಿದರು. ತಮ್ಮ ಕೆ.ಆರ್.ಪೇಟೆ ಪಟ್ಟಣದ ಭೇಟಿಯ ಸಮಯದಲ್ಲಿ ಸಾರ್ವಜನಿಕರು ನೀಡಿದ ದೂರುಗಳು ಹಾಗೂ ಸಾರ್ವಜನಿಕ ಕುಂದುಕೊರತೆಗಳ ಬಗ್ಗೆ ವಿವರವಾದ ವರದಿಯನ್ನು ಕಳಿಸಿಕೊಡುವಂತೆ ಸ್ಥಳದಲ್ಲಿದ್ದ ತಹಶೀಲ್ದಾರ್ ಲೆಫ್ಟಿನೆಂಟ್ ಕರ್ನಲ್ ಡಾ.ಅಶೋಕ್ ಅವರಿಗೆ ನಿರ್ದೇಶನ ನೀಡಿದರು.

**ಸಾರ್ವಜನಿಕ ಆಸ್ಪತ್ರೆಯಲ್ಲಿ ರೋಗಿಗಳ ಆರೋಗ್ಯ, ಚಿಕಿತ್ಸೆಯ ಬಗ್ಗೆ ಕಾಳಜಿ ವಹಿಸದ ವೈದ್ಯರು, ಸ್ವಚ್ಛತೆ ಕಾಪಾಡದ ಸಿಬ್ಬಂದಿ ಗಳ ಕಾರ್ಯವೈಖರಿಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಉಪ ಲೋಕಾಯುಕ್ತ ಬಿ. ವೀರಪ್ಪ, ಕೆ.ಆರ್.ಪೇಟೆ ಪುರಸಭೆ, ಕೆ.ಆರ್.ಪೇಟೆ ಬಸ್ ಡಿಪೋ ಮ್ಯಾನೇಜರ್, ಸಾರ್ವಜನಿಕ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿಗಳ ವಿರುದ್ಧ ಸುಮೋಟೋ ಕೇಸ್ ದಾಖಲಿಸುವುದಾಗಿ ಪತ್ರಕರ್ತರಿಗೆ ತಿಳಿಸಿದರು.**

# ರಸ್ತೆ ದುರಸ್ಥಿಗೆ ಆಗ್ರಹ

• ಉದಯವಾಹಿನಿ, ಮಾಲೂರು

ತಾಲ್ಲೂಕಿನ ಮಾಲೂರು- ಹೊಸೂರು ಮುಖ್ಯ ರಸ್ತೆ ಬೃಹದಾರಕರದ ಹಳ್ಳ ಕೊಳ್ಳಗಳಿಂದ ಕೂಡಿ ಹದಗೆಟ್ಟು ಹಲವಾರು ವಾಹನ ಸವಾರರು ತಮ್ಮ ಜೀವವನ್ನು ಅಂಗೈಯಲ್ಲಿಟ್ಟುಕೊಂಡು ಓಡಾಡುವ ಪರಿಸ್ಥಿತಿ ಇದ್ದರು. ಸ್ಥಳಿಯ ಆಡಳಿತ ಮತ್ತು ಇಲಾಖೆ ಅಧಿಕಾರಿಗಳು ರಸ್ತೆಯಲ್ಲಿನ ಗುಂಡಿ ಮುಚ್ಚಿ ಅನುಕೂಲ ಕಲ್ಪಿಸುವಲ್ಲಿ ವಿಫಲರಾಗಿದ್ದು ವಾಹನ ಸವಾರರ ಜೀವಕ್ಕೆ ಬೆಲೆ ಇಲ್ಲದಂತಾಗಿದೆ ಎಂದು ಸ್ವಾಭಿಮಾನಿ ಜನತಾ ಪಕ್ಷದ ಸಂಸ್ಥಾಪಕ ಅಧ್ಯಕ್ಷ ಹೂಡಿ ವಿಜಯ್ ಕುಮಾರ್ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.


ಉದಯವಾಹಿನಿ ಚಿತ್ರ

ತಾಲ್ಲೂಕಿನ ಸಂಪಂಗೆರೆ ಗಡಿಯಿಂದ ಮಾಲೂರು ಮುಖ್ಯ ರಸ್ತೆಯಲ್ಲಿ ಬೃಹದಾಕಾರದ ಬಿದ್ದಿರುವ ಹಳ್ಳಕೊಳ್ಳಗಳಿಗೆ ಸ್ವಾಭಿಮಾನಿ ಜನತಾ ಪಕ್ಷದ ವತಿಯಿಂದ ವೆಟ್ ಮಿಕ್ಸ್ ಹಾಕಿ ಹಳ್ಳ ಕೊಳ್ಳಗಳನ್ನು ಮುಚ್ಚುವ ಕಾರ್ಯ ಕೈಗೊಂಡು ಮಾತನಾಡಿದರು. ಮಾಲೂರು-ಹೊಸೂರು ಮುಖ್ಯ ರಸ್ತೆಯು ಅಂತರಾಜ್ಯ ಸಂಪರ್ಕ ಕಲ್ಪಿಸುವ ರಸ್ತೆಯಾಗಿದ್ದು. ಈ ರಸ್ತೆಯು ಸುಮಾರು 2 ವರ್ಷಗಳಿಂದೆ ರಸ್ತೆ ಅಭಿವೃದ್ಧಿಯಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದು ಆದರೆ ಸ್ಥಳೀಯ ನಿವಾಸಿಗಳು ಸಂಪಂಗೆರೆ ಗಡಿ ಭಾಗದಲ್ಲಿ ರಸ್ತೆ ಅಭಿವೃದ್ಧಿ ಆಗಿಲ್ಲ ಎಂದು ಹೇಳುತ್ತಿದ್ದಾರೆ.

ಈ ಬಗ್ಗೆ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಸರಿಯಾದ ಮಾಹಿತಿ ಇಲ್ಲ ಈ ಕಾಮಗಾರಿಯ ವರ್ಕ್ ಆರ್ಡರ್ ಕೊಡಿ ಎಂದರೆ ನೀಡಲು ಹಿಂಜರಿಯುತ್ತಿದ್ದು. ಇದು ಅಂತರಾಜ್ಯ ಸಂಪರ್ಕ ಕಲ್ಪಿಸುವ ಮುಖ್ಯ ರಸ್ತೆ ಆಗಿರುವುದರಿಂದ ಪ್ರತಿನಿತ್ಯ ಸಾವಿರಾರು ವಾಹನಗಳು ಸಂಚರಿಸುತ್ತವೆ. ಇತ್ತೀಚಿನ ದಿನಗಳಲ್ಲಿ ಈ ರಸ್ತೆಯಲ್ಲಿ ಹಲವಾರು ಅಪಘಾತಗಳು ಸಂಭವಿಸಿದ್ದು, ಅಮಾಯಕ ಶಾಲಾ ಮಕ್ಕಳು ಬಿದ್ದು ಕಾಲು ಮುರಿದಿರುವ ಘಟನೆ ನಡೆದಿದೆ. ಹಾಗೇ ಬೃಹದಾಕಾರದ ಲಾರಿ ಬಿದ್ದಿದೆ.

ಈ ರೀತಿ ಹಲವಾರು ಜನರು ಬಿದ್ದಿ ಕೈ, ಕಾಲು, ಜೀವ ಕಳೆದು ಕೊಂಡಿರುವ ಘಟನೆಗಳು ನಡೆದಿದ್ದು ಈ ಭಾಗದ ಸಾರ್ವಜನಿಕರು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ಹಲವಾರು ಬಾರಿ ಮನವಿ ಮಾಡಿದರು ಸಾರ್ವಜನಿಕರಿಗೆ ಸ್ಪಂದಿಸದೆ ಇರುವುದು ದುರಂತ ಎಂದರು.

# ತ್ಯಾಜ್ಯ ಘಟಕ ಕೈ ಬಿಡಲು ಆಗ್ರಹ

• ಉದಯವಾಹಿನಿ, ರಾಮನಗರ


ಉದಯವಾಹಿನಿ ಚಿತ್ರ

ತಾಲ್ಲೂಕಿನ ಹರೀಸಂದ್ರ ಗ್ರಾಮದ ಬಳಿ ರಾಮನಗರ ನಗರಸಭೆ, ಬಿಡದಿ ಪುರಸಭೆ ವತಿಯಿಂದ ನಿರ್ಮಾಣವಾಗುತ್ತಿರುವ ತ್ಯಾಜ್ಯ ನಿರ್ವಹಣಾ ಘಟಕ ವಿರೋಧಿಸಿ, ಸ್ಥಳೀಯ ರೈತರು, ವಿವಿಧ ಸಂಘಟನೆಗಳು, ಬಿಜೆಪಿ-ಜೆಡಿಎಸ್ ಪಕ್ಷಗಳು ಸಹಯೋಗದಲ್ಲಿ ಕಸಬಾ ಹೋಬಳಿ ಬಂದ್ ಮಾಡಿ ಆಕ್ರೋಶ ವ್ಯಕ್ತ ಪಡಿಸಿದರು. ಬೆಳಿಗ್ಗೆ ಚಿಕ್ಕೇಗೌಡನದೊಡ್ಡಿಯಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಬೈಕ್‌ಗಳು, ಆಟೋ, ಕಾರುಗಳಲ್ಲಿ ಹೋಬಳಿ ವ್ಯಾಪ್ತಿಯ ಸುಗ್ಗನಹಳ್ಳಿ, ಹರಿಸಂದ್ರ, ಬಿಳಗುಂಬ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ ಸಂಚರಿಸಿ ಘಟಕದ ವಿರುದ್ಧ ಜಾಗೃತಿ ಮೂಡಿಸಿದರು. ಬೇಡ ಬೇಡ ಕಸದ ಘಟಕ ಬೇಡ' ಎಂದು ಘೋಷಣೆಗಳನ್ನು ಕೂಗಿದರು. ಅಲ್ಲಲ್ಲಿ ರಸ್ತೆ ನಡೆಸಿದ್ದಲ್ಲದೆ, ಸ್ಥಳೀಯ ಶಾಸಕರ ವಿರುದ್ಧ ಧಿಕ್ಕಾರ ಕೂಗಿದರು. ಈ ಮೇಲೆ ಮಾತನಾಡಿದ ಮುಖಂಡ ಚಂದ್ರಶೇಖರ್, ತ್ಯಾಜ್ಯ ಘಟಕ ನಿರ್ಮಾಣವಾದರೆ ಸುತ್ತಮುತ್ತಲಿನ ಗ್ರಾಮಸ್ಥರಿಗೆ ತೊಂದರೆಯಾಗಲಿದೆ. ಕೃಷಿ, ತೋಟ ಗಾರಿಕೆ, ಹೈನುಗಾರಿಕೆ ಮೇಲೆ ಪರಿಣಾಮ ಬೀರಲಿದೆ. ತ್ಯಾಜ್ಯ ಗಬ್ಬುನಾತ ಬೀರುವುದರಿಂದ ಗ್ರಾಮಸ್ಥರು ನಿತ್ಯ ದುರ್ನಾತ ಅನುಭವಿಸಬೇಕು. ಸಾಂಕ್ರಾಮಿಕ ರೋಗಗಳು ಶುರುವಾಗಲಿವೆ' ಎಂದು ಆತಂಕ ವ್ಯಕ್ತಪಡಿಸಿದರು. ಮುಖಂಡ ರಾಮಕೃಷ್ಣಯ್ಯ ಮಾತನಾಡಿ, ಇಪ್ಪತ್ತು ಎಕರೆಯಲ್ಲಿ ನಿರ್ಮಾಣವಾಗಲಿರುವ ತ್ಯಾಜ್ಯ ಘಟಕದಿಂದಾಗಿ ಇಡೀ ಪರಿಸರಕ್ಕೆ ಧಕ್ಕೆಯಾಗಲಿದೆ. ಆರಂಭದಿಂದಲೂ ಸ್ಥಳೀಯರು ಘಟಕ ವಿರೋಧಿಸುತ್ತಲೇ ಇದ್ದಾರೆ.

ಈಗಾಗಲೇ ಪಾದಯಾತ್ರೆ ಸಹ ಮಾಡಿದ್ದೇವೆ. ಆದರೂ, ಶಾಸಕರ ಕುಮ್ಮಕ್ಕಿನಿಂದ ಘಟಕ ನಿರ್ಮಾಣ ಕೆಲಸ ನಡೆಯುತ್ತಿದೆ. ಕೂಡಲೇ ಕಾಮಗಾರಿ ನಿಲ್ಲಿಸಬೇಕು. ಇಲ್ಲದಿದ್ದರೆ ಹೋರಾಟ ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

**ಈ ಭಾಗದ ಪರಿಸರಕ್ಕೂ ಧಕ್ಕೆ**

**ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಸಬ್ಬಕೆರೆ ಶಿವಲಿಂಗಪ್ಪ, ನಗರ, ಪಟ್ಟಣದ ಕಸವನ್ನು ಹಳ್ಳಿಗೆ ತಂದು ಹಾಕಿದರೆ, ಈ ಭಾಗದಲ್ಲಿ ಸಮಸ್ಯೆಗಳು ಉದ್ಭವಿಸುತ್ತವೆ. ಕೃಷಿ ಚಟುವಟಿಕೆ ಸೇರಿದಂತೆ ಈ ಭಾಗದ ಪರಿಸರಕ್ಕೂ ಧಕ್ಕೆಯಾಗುತ್ತದೆ. ಹಾಗಾಗಿ, ಘಟಕವನ್ನು ಕೈ ಬಿಡಬೇಕು ಎಂದು ಒತ್ತಾಯಿಸಿದರು.**

# ರೈಲ್ವೆ ಟಿಕೆಟ್ ಕೌಂಟರ್ ಮುಂಭಾಗ ಪ್ರತಿಭಟನೆ

• ಉದಯವಾಹಿನಿ, ಬಂಗಾರಪೇಟೆ


ಉದಯವಾಹಿನಿ ಚಿತ್ರ

ರೈಲ್ವೆ ಟಿಕೇಟ್ ಕೌಂಟರ್‌ನಲ್ಲಿ ಯುಪಿಐ ಪೇಮೆಂಟ್‌ಗಳನ್ನು ಮಾತ್ರ ಬಳಸುತ್ತಿದ್ದು, ನಗದು ರಹಿತ ಸೇವೆ ಇಲ್ಲದೆ ಇರುವುದು ವಿಷಾಧನೀಯ ಸಂಗತಿಯಾಗಿದೆ ಎಂದು ಜಿಲ್ಲಾಧ್ಯಕ್ಷ ಟಿ.ಎನ್.ರಾಮೇಗೌಡ ಅವರು ಆಕ್ರೋಶ ವ್ಯಕ್ತಪಡಿಸಿ ಸ್ಟೇಷನ್ ವ್ಯವಸ್ಥಾಪಕರಿಗೆ ಮನವಿ ಸಲ್ಲಿಸಿದರು.

ಪಟ್ಟಣದ ರೈಲ್ವೆ ಟಿಕೆಟ್ ಕೌಂಟರ್ ಮುಂಭಾಗ ಪ್ರತಿಭಟನೆ ಹಮ್ಮಿಕೊಂಡು ಮಾತನಾಡಿದ ಅವರು, ಪ್ರತಿನಿತ್ಯ ಅವಿದ್ಯಾವಂತರು, ವಿದ್ಯಾರ್ಥಿಗಳು, ವೃದ್ದರು, ವಿಕಲ ಚೇತನರಿಗೆ, ಸಾರ್ವಜನಿಕರಿಗೆ ನಗದು ಸಹಿತ ಟಿಕೇಟ್ ಇಲ್ಲದೆ ಪ್ರಯಾಣಿಸುವ ಪರಿಸ್ಥಿತಿ ಎದುರಾಗಿದೆ.

ನಗದು ನೀಡಿ ಟಿಕೇಟ್ ಖರೀದಿಸಲು ಹೋದಾಗ ನಗದು ರಹಿತ ಟೀಕೇಟ್ ಸೌಲಭ್ಯ ಇರುವುದಾಗಿ ಹೇಳಿ ವಾಪಸ್ಸು ಕಳುಹಿಸುತ್ತಿರುವುದು ನಾಚಿಕೆಗೇಡಿನ ಸಂಗತಿಯಾಗಿದೆ. ಎಲ್ಲರ ಬಳಿಯಲ್ಲಿ ಸ್ಮಾರ್ಟ್ ಫೋನ್ ಇರುವುದಿಲ್ಲ, ಇದ್ದರೂ ಯುಪಿಐ ವಹಿವಾಟು ಇರುವುದಿಲ್ಲ. ಆಗಾಗಿ ಫೋನ್ ಪೇ, ಗೂಗಲ್‌ಪೇ, ಭಾರತ್‌ಪೇ ಇಲ್ಲದೆ ಪ್ರಯಾಣಿಕರು ಪರದಾಡುವಂತಹ ಸ್ಥಿತಿ ನಿರ್ಮಾಣವಾಗಿರುತ್ತದೆ ಎಂದರು.

ಕೆಲವೊಂದು ರೈಲುಗಳಲ್ಲಿ ಮೂಲಭೂತ ಸೌಲಭ್ಯ ಮರೀಚಿಕೆಯಾಗಿದೆ. ಪ್ರತಿನಿತ್ಯ ಸುಮಾರು 30ಸಾವಿರ ಜನ ಬೆಂಗಳೂರಿಗೆ ಕೆಲಸಕ್ಕೆಂದು ಓಡಾಡುತ್ತಿದ್ದಾರೆ. ಆದರೆ ರೈಲಿನಲ್ಲಿ ಶೌಚಾಲಯ ವ್ಯವಸ್ಥೆ, ಹಾಗು ನೀರಿನ ವ್ಯವಸ್ಥೆ ಇಲ್ಲದೆ ಪ್ರಯಾಣಿಕರು ಪರದಾಡುತ್ತಿದ್ದಾರೆ. ರೈಲ್ವೆ ಇಲಾಖೆಯಲ್ಲಿ ಕೋಟ್ಯಾಂತರ ರೂಗಳ ಅನುದಾನ ಇದ್ದರೂ ಮೂಲಭೂತ ಸೌಲಭ್ಯಕ್ಕೆ ಬಳಸುತ್ತಿಲ್ಲ. ಆದ್ದರಿಂದ ಈ ಕೂಡಲೇ ಜಾರಿಗೆ ಬರುವಂತೆ, ನಗದು ಸಹಿತ ಟಿಕೇಟ್ ನೀಡಲು ಹಾಗೂ ಯಥಾಸ್ಥಿತಿ ಕಾಪಾಡಬೇಕೆಂದು ಆಗ್ರಹಿಸಿದರು.

# ನಿವೃತ್ತಿ ಉಪಧನ ಜಾರಿಗೆ ಒತ್ತಾಯ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರಿಗೆ 2011-12ರಿಂದ ಜಾರಿಯಾಗುವಂತೆ ನಿವೃತ್ತಿ ಉಪಧನವನ್ನು ನೀಡಬೇಕೆಂದು ರಾಜ್ಯ ಅಂಗನವಾಡಿ ಕಾರ್ಯಕರ್ತೆಯರ ಮಹಾ ಮಂಡಳಿ ಜಿಲ್ಲಾಕಾರ್ಯದರ್ಶಿ ಬಿ.ನಾಗರತ್ನಮ್ಮ ಸರ್ಕಾರವನ್ನು ಒತ್ತಾಯಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ತಾಲ್ಲೂಕಿನ ಅಂಗನವಾಡಿ ಕೇಂದ್ರಗಳು ಪ್ರಾರಂಭವಾಗಿ 48 ವರ್ಷಗಳು ಕಳೆದಿವೆ. ಕಾರ್ಯಕರ್ತೆಯರು 150 ರೂ, ಸಹಾಯಕಿಯರು 50 ರೂ ಗೌರವ ಧನ ಪಡೆದು ಕಾರ್ಯನಿರ್ವಹಿಸಿದ್ದು, ಬಿ.ಎಸ್. ಯಡಿಯೂರಪ್ಪ ಅವರ ಅವಧಿಯಲ್ಲಿ 2011ರ ಮಾರ್ಚ್‌ನಲ್ಲಿ ಕಾರ್ಯಕರ್ತೆಯರಿಗೆ 50 ಸಾವಿರ, ಸಹಾಯಕಿಯರಿಗೆ 30 ಸಾವಿರಗಳನ್ನು ನಿವೃತ್ತಿ ಇಡಿಗಂಟನ್ನು ನೀಡುವ ಜೊತೆಗೆ ಏಪ್ರಿಲ್ 2011ರಿಂದ ಎನ್‌ಪಿಎಸ್ ವ್ಯವಸ್ಥೆಯನ್ನು ಜಾರಿಗೊಳಿಸಿದ್ದರು ಎಂದರು. ತಾಲೂಕಿನಲ್ಲಿ ಇದುವರೆಗೂ 129 ಜನ ಕಾರ್ಯಕರ್ತೆಯರು, ಸಹಾಯಕಿಯರು ಸೇವೆ ಸಲ್ಲಿಸಿ ನಿವೃತ್ತಿಯಾಗಿರುತ್ತಾರೆ. 1972ರ ಅಡಿ ನಿವೃತ್ತಿ ಉಪಧನ ಪಡೆಯಬಹುದೆಂದು ಸುಪ್ರಿಂ ಕೋರ್ಟ್ ಮಹತ್ವದ ತೀರ್ಪನ್ನು ನೀಡಿದೆ.


ಉದಯವಾಹಿನಿ ಚಿತ್ರ

ಆದರೆ ರಾಜ್ಯಸರ್ಕಾರ 2023-24ರಲ್ಲಿ ನಿವೃತ್ತಿಯಾದವರಿಗೆ ಮಾತ್ರ ಗ್ರ್ಯಾಚ್ಯುಟಿ ಹಣ ನೀಡಿತ್ತು. ಇದರಿಂದ 2011ರ ಮಾರ್ಚ್‌ನಿಂದ ನಿವೃತ್ತಿ ಯಾದ ಎಲ್ಲರಿಗೂ ನಿವೃತ್ತಿ ಹಣ ಕೊಡಬೇಕೆಂದು ಸಮಿತಿಯಿಂದ ಮುಖ್ಯಕಾರ್ಯದರ್ಶಿಗಳ, ಮಂತ್ರಿಗಳ ಜೊತೆ ಸಭೆಗಳನ್ನು ನಡೆಸಿದಾಗ 2011 ರಿಂದ ನಿವೃತ್ತಿಯಾದ ಎಲ್ಲರಿಗೂ ನಿವೃತ್ತಿ ಹಣ ನೀಡು ತ್ತೇವೆಂದು ಭರವಸೆ ನೀಡಿದ್ದರು ಎಂದು ತಿಳಿಸಿದರು. ಆದರೆ ಸರ್ಕಾರವು ಮಾರ್ಚ್‌ನಲ್ಲಿ ಆದೇಶವೊಂದನ್ನು ಹೊರಡಿಸಿ 2023 ಏಪ್ರಿಲ್ 01 ರಿಂದ 2024ರ ಮಾರ್ಚ್ 30 ರವರೆಗೆ ಮಾತ್ರ ಉಪಧನ ನೀಡಿದ ಸರ್ಕಾರವು ಕೊಟ್ಟ ಮಾತನ್ನು ತಪ್ಪಿದೆ. ಇದರಿಂದ ರಾಜ್ಯದ 20 ಸಾವಿರ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರಿಗೆ ಅನ್ಯಾಯವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

**ಕನಿಷ್ಟ ಗೌರವಧನ ಪಡೆದು ತಾವು ಸಲ್ಲಿಸಿರುವ ಸೇವೆಯನ್ನು ಪರಿಗಣಿಸಿ ಸರ್ಕಾರವು 2011ರಿಂದ ನಿವತ್ತರಾದ ಎಲ್ಲಾ ಕಾರ್ಯಕರ್ತೆಯರು, ಸಹಾಯಕಿಯರಿಗೆ ಉಪಧನ ಒದಗಿಸಬೇಕಿದೆ. ಅಲ್ಲದೆ ಕೆಲಸ ಬಿಟ್ಟ ಹಾಗೂ ಅಕಾಲಿಕವಾಗಿ ಮರಣ ಹೊಂದಿದವರನ್ನು ಪರಿಗಣಿಸಬೇಕಾಗಿ ಸರ್ಕಾರವನ್ನು ಒತ್ತಾಯಿಸಿದರು.**

# ಮದ್ದೂರು ಮಾರುಕಟ್ಟೆಗೆ ಬರ್ತಾ ಇಲ್ಲ ಎಳನೀರು


## ಮೂರು ವರ್ಷಗಳಿಂದ ಮಳೆ ವೈಫಲ್ಯ, ಜಲಕ್ಷಾಮದಿಂದ ಎಳನೀರು ಪೂರೈಕೆ ಪ್ರಮಾಣ ಗಣನೀಯ ಕುಸಿತ

• ಉದಯವಾಹಿನಿ, ಮದ್ದೂರು

ದಕ್ಷಿಣ ಏಷ್ಯಾದಲ್ಲಿಯೇ ಅತಿ ಹೆಚ್ಚು ಎಳನೀರು ವಹಿವಾಟು ನಡೆಯುವ ಮದ್ದೂರು ಎಪಿಎಂಸಿ ಎಳನೀರು ಮಾರುಕಟ್ಟೆಯಲ್ಲಿ ಪ್ರಸಕ್ತ ವರ್ಷ ಎಳನೀರು ಪೂರೈಕೆ ಪ್ರಮಾಣ ಗಣನೀಯ ಕುಸಿದಿದೆ. ಮೂರು ವರ್ಷಗಳ ಹಿಂದಿನ ಮಳೆ ವೈಫಲ್ಯ, ಜಲ ಕ್ಷಾಮ, ಬರದ ಹಿನ್ನೆಲೆಯಲ್ಲಿ ಪ್ರಸಕ್ತ ವರ್ಷ ತೆಂಗಿನ ಇಳುವರಿ ನಿರೀಕ್ಷೆಗೂ ಮೀರಿ ಏರಿಳಿತ ಕಂಡಿದೆ. ಪ್ರಸ್ತುತ ನಿರೀಕ್ಷಿತ ಮಟ್ಟದ ಫಸಲು ಇಲ್ಲದ ಪರಿಣಾಮ ತೆಂಗಿನಕಾಯಿ, ಎಳನೀರಿಗೆ ದುಪ್ಪಟ್ಟು ಬೆಲೆ ಬಂದಿದೆ. ತೆಂಗಿನಕಾಯಿ ತಲಾ 40 ರಿಂದ 60 ರೂ.ಗೆ ಮಾರಾಟವಾಗುತ್ತಿದೆ. ಎಳನೀರು ಮಾರುಕಟ್ಟೆಯಲ್ಲೇ 40 ರಿಂದ 52 ರೂ.ಗೆ ಮಾರಾಟವಾಗುತ್ತಿದೆ. ಕಾರಣ, ಪೂರೈಕೆ ಪ್ರಮಾಣ ಕುಸಿದಿರುವುದು.

**ತೆಂಗಿನಕಾಯಿಗೂ ಬೆಲೆ ದುಪ್ಪಟ್ಟು**

ಮದ್ದೂರು ಎ.ಪಿ.ಎಂ.ಸಿ ಮಾರುಕಟ್ಟೆಯಲ್ಲಿ ಪ್ರಸ್ತುತ ವರ್ಷ ಬೇಸಿಗೆ ಹಂಗಾಮಿನ ಎಳನೀರು ವಹಿವಾಟು ಕಳೆದ ಮೂರು ದಶಕಗಳಿಗೆ ಹೋಲಿಸಿದ್ದಲ್ಲಿ ತೀರಾ ಕಡಿಮೆಯಾಗಿದೆ. ಮದ್ದೂರು ತಾಲ್ಲೂಕಿನಲ್ಲಿ ಸಾವಿರಾರು ಎಕರೆ ತೆಂಗು ಬೆಳೆ ಪ್ರದೇಶವಿದ್ದು, ನೆರೆಯ ಕೊಳ್ಳೇಗಾಲ, ತುಮಕೂರು, ರಾಮನಗರ, ಮೈಸೂರು ಮತ್ತಿತರೆಡೆಗಳಿಂದ ಮದ್ದೂರು ಮಾರು ಕಟ್ಟೆಗೆ ಹಿಂದಿನಿಂದಲೂ ಎಳನೀರು ಪೂರೈಕೆಯಾಗುತ್ತಿತ್ತು. ಜತೆಗೆ ನೆರೆಯ ತಮಿಳುನಾಡು ರಾಜ್ಯದ ಗಡಿ ಪ್ರದೇಶದಿಂದಲೂ ಮದ್ದೂರಿಗೆ ಎಳನೀರಿನ ಪೂರೈಕೆ ನಿರಂತರವಾಗಿತ್ತು. ಆದರೆ ಮೂರು ವರ್ಷಗಳಿಂದೀಚೆಗೆ ತೆಂಗಿನ ಮರಕ್ಕೆ ಕಪ್ಪುತಲೆ ಹುಳು, ನುಸಿಪೀಡೆ ಬಾಧೆ ಮತ್ತು ಮೂರು ವರ್ಷಗಳ ನಿರಂತರ ಬರದ ನಡುವೆ ಎದುರಾದ ಜಲಕ್ಷಾಮ ತೆಂಗಿನ ಬೇಸಾಯದ ಬುಡವನ್ನೇ ಅಲುಗಾಡಿಸಿದೆ.ಅಳಿದುಳಿದಿರುವ ತೆಂಗಿನ ಮರಗಳು ಪ್ರಸಕ್ತ ಚೇತರಿಸಿಕೊಂಡಿವೆಯಾದರೂ ಫಸಲು ಮಾತ್ರ ಇಲ್ಲವಾಗಿದ್ದು, ತೆಂಗಿನ ಉತ್ಪನ್ನಗಳ ದರ ದ್ವಿಗುಣಕ್ಕೆ ಹಾದಿ ಮಾಡಿಕೊಟ್ಟಿವೆ. ಒಟ್ಟಾರೆ ಮದ್ದೂರು ಎ.ಪಿ.ಎಂ.ಸಿ ಎಳನೀರು ಮಾರುಕಟ್ಟೆಯು ತನ್ನ ಅಸ್ತಿತ್ವದ 30 ವರ್ಷಗಳ ತರುವಾಯ ನಿರೀಕ್ಷಿತ ಮಟ್ಟದಲ್ಲಿ ಎಳನೀರು ಪೂರೈಕೆಯಾಗದೆ ಸಂಕಷ್ಟಕ್ಕೆ ಸಿಲುಕಿದೆ. ಹೊರ ರಾಜ್ಯಗಳಿಗೆ ತೆರಳುವ ಎಳನೀರು ಪೂರೈಕೆಗೂ ದರ ಹೆಚ್ಚಳದ ಬಿಸಿ ತಟ್ಟಿದ್ದು, ವ್ಯಾಪಾರಸ್ಥರ ಆತಂಕವನ್ನು ಇಮ್ಮಡಿಗೊಳಿಸಿದೆ.



**ಬದುಕು ಅತಂತ್ರ, ಭೀತಿ:** ಮದ್ದೂರು ಎ.ಪಿ.ಎಂ.ಸಿ ಮತ್ತು ಗುಡಿಗೆರೆ ಉಪ ಪ್ರಾಂಗಣದ ಎ.ಪಿ.ಎಂ.ಸಿ. ವಾರ್ಡ್ ಗಳಲ್ಲಿವರ್ತಕರು, ಹಮಾಲಿಗಳು ಒಳಗೊಂಡಂತೆ ಸಾವಿರಾರು ಕಾರ್ಮಿಕರು, ವ್ಯಾಪಾರಸ್ಥರು ತಮ್ಮ ಬದುಕು ಕಟ್ಟಿಕೊಂಡಿದ್ದಾರೆ. ಸಾವಿರಾರು ಮಂದಿ ಪ್ರತ್ಯಕ್ಷವಾಗಿ, ಪರೋಕ್ಷವಾಗಿ ತಮ್ಮ ವೃತ್ತಿಗೆ ತೆಂಗಿನ ಮರಗಳು, ಕೃಷಿ ಮತ್ತು ವ್ಯಾಪಾರ ವಹಿವಾಟನ್ನು ಅವಲಂಬಿಸಿದ್ದು, ಪ್ರಸಕ್ತ ದರ ಏರಿಕೆ ಇವರ ದೈನಂದಿನ ಬದುಕಿಗೂ ಆತಂಕ ತಂದೊಡ್ಡಿದೆ.


ಉದಯವಾಹಿನಿ ಚಿತ್ರ

**ಮದ್ದೂರು ತಾಲ್ಲೂಕು ಸೇರಿದಂತೆ ಮಂಡ್ಯ ಜಿಲ್ಲಾದ್ಯಂತ ತೆಂಗಿನ ಬೆಳೆಗೆ ಎದುರಾಗಿರುವ ನುಸಿಪೀಡೆ ಬಾಧೆ ಸಾಕಷ್ಟು ಸಂಕಷ್ಟ ತಂದೊಡ್ಡಿದೆ. ಜಿಲ್ಲಾಡಳಿತ, ತಾಲ್ಲೂಕು ಆಡಳಿತ ನಷ್ಟ ಹೊಂದಿರುವ ತೆಂಗಿನ ತೋಟಗಳ ಸಮೀಕ್ಷೆ ನಡೆಸಿ ಸೂಕ್ತ ಪರಿಹಾರ ವಿತರಿಸುವ ಜತೆಗೆ ರೈತರ ಪ್ರತಿ ಶಾಖೆಗೂ ಭೇಟಿ ನೀಡಿ ಪ್ರಾತ್ಯಕ್ಷಿಕೆ ನಡೆಸಬೇಕಾದ ಅನಿವಾರ್ಯತೆ ಇದೆ**

**-ಎಸ್.ಸಿ.ಚಿಕ್ಕಣ್ಣ , ಸೋಮನಹಳ್ಳಿ**

**ವರ್ಷಾನುವರ್ಷ ಬೇಸಿಗೆ ಬಿಸಿಲು ಹೆಚ್ಚುವ ಜತೆಗೆ ಮಾರುಕಟ್ಟೆಗೆ ಎಳನೀರು ಆವಕ ಕುಸಿಯುತ್ತಿದೆ. ಇತ್ತೀಚಿನ ದಿನಗಳಲ್ಲಿ ಕಪ್ಪುತಲೆ ಹುಳು, ನುಸಿಪೀಡೆ ಬಾಧೆ ತೆಂಗಿನ ಮರಗಳನ್ನು ಕಾಡುತ್ತಿದೆ. ಇದರ ಪರಿಹಾರಕ್ಕಾಗಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ತೋಟಗಾರಿಕೆ ಇಲಾಖೆ ಅಧಿಕಾರಿಗಳೊಡನೆ ಚರ್ಚಿಸಲು ತೀರ್ಮಾನಿಸಲಾಗಿದೆ**

**-ಲತಾಕುಮಾರಿ, ಕಾರ್ಯದರ್ಶಿ, ಎ.ಪಿ.ಎಂ.ಸಿ.**

**ಕೇವಲ 1 ಸಾವಿರ ಇಳುವರಿ:** ಪ್ರತಿನಿತ್ಯ ಮದ್ದೂರು ಎಳನೀರು ಮಾರುಕಟ್ಟೆಯಿಂದ ರಾಜಧಾನಿ ಬೆಂಗಳೂರು ಸೇರಿದಂತೆ ನೆರೆ ರಾಜ್ಯಗಳಾದ ಮಹಾರಾಷ್ಟ್ರ, ತೆಲಂಗಾಣ, ಆಂಧ್ರಪ್ರದೇಶ, ಗೋವಾ, ದಿಲ್ಲಿ ಮತ್ತಿತರ ರಾಜ್ಯಗಳಿಗೆ ನಿತ್ಯ 40 ರಿಂದ 50 ಲಾರಿಗಳಲ್ಲಿ ಲೋಡ್ ಗಟ್ಟಲೇ ಎಳನೀರು ರವಾನೆಯಾಗುತ್ತಿದೆ.

ಆದರೆ ಪೂರೈಕೆ ಕುಸಿತದಿಂದ ವಹಿವಾಟು ಮತ್ತು ವ್ಯಾಪಾರಸ್ಥರ ಸ್ಥಿತಿ ಹೇಳತೀರದಾಗಿದೆ. 3 ರಿಂದ 5 ಸಾವಿರ ಎಳನೀರು ಸಿಗುತ್ತಿದ್ದ ತೋಟದಲ್ಲಿ ಕೇವಲ 1 ಸಾವಿರ ಇಳುವರಿ ಸಿಗುತ್ತಿದ್ದು, ರೈತರನ್ನು ಇನ್ನಷ್ಟು ಸಂಕಷ್ಟಕ್ಕೆ ದೂಡಿದೆ.

## ಮಿನಿ ನ್ಯೂಸ್

### ಚಿಕ್ಕನಾಯಕನಹಳ್ಳಿಯ ಮೂವರು ರಸ್ತೆ ಅಪಘಾತದಲ್ಲಿ ಸಾವು

• ಉದಯವಾಹಿನಿ, ತುಮಕೂರು

ಆಂಧ್ರಪ್ರದೇಶದ ಕರ್ನೂಲ್ ಬಳಿ ಭಾನುವಾರ ರಾತ್ರಿ ಸಂಭವಿಸಿದ ಕಾರು ಅಪಘಾತದಲ್ಲಿ ತುಮಕೂರು ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಕೆಂಕೆರೆ ಗ್ರಾಮದ ನಿವಾಸಿಗಳಾದ ನವೀನ್, ಸಂತೋಷ್, ಲೋಕೇಶ್ ಮೃತಪಟ್ಟಿದ್ದಾರೆ ಇದರಲ್ಲಿ ಕೆಂಕೆರೆ ನವೀನ್ ಚಿಕ್ಕನಾಯಕನಹಳ್ಳಿ, ಸ್ಥಳೀಯ ಬಿಜೆಪಿ ಮುಖಂಡರಾಗಿದ್ದು, ತಾಲ್ಲೂಕು ಪಂಚಾಯಿತಿಯ ಮಾಜಿ ಅಧ್ಯಕ್ಷ ಆಗಿದ್ದರು. ಸಂತೋಷ್ ಕೂಡಾ ಬಿಜೆಪಿ ಜಿಲ್ಲಾ ಘಟಕದ ಕಾರ್ಯದರ್ಶಿ ಆಗಿದ್ದರು. ಸಂತೋಷ್ ಹುಟ್ಟುಹಬ್ಬದ ಆಚರಣೆಗಾಗಿ ಆಂಧ್ರ ಪ್ರದೇಶದ ಪ್ರವಾಸಕ್ಕೆ ಒಟ್ಟು 6 ಮಂದಿ ತೆರಳಿದ್ದರು. ಮಂತ್ರಾಲಯ ದರ್ಶನ ಮುಗಿಸಿ ಶ್ರೀಶೈಲಕ್ಕೆ ಹೋಗುವ ದಾರಿಯಲ್ಲಿ ಅಪಘಾತ ಆಗಿದೆ. ಕರ್ನೂಲ್ ಬಳಿ ಕಾರು ರಸ್ತೆ ವಿಭಜಕಕ್ಕೆ ಡಿಕ್ಕಿಯಾಗಿದೆ.

ಈ ಪೈಕಿ ತೀವ್ರವಾಗಿ ಗಾಯವಾದ ಮೂವರು ಸ್ಥಳದಲ್ಲಿಯೇ ಮೃತಪಟ್ಟಿದ್ದು, ಇನ್ನು ಮೂವರಿಗೆ ಗಾಯಗಳಾಗಿವೆ.

### ಕೆಎಸ್‌ಆರ್‌ಟಿಸಿ ಬಸ್ ಪಲ್ಟಿ; ಪಿಎಸ್‌ಐ ಸೇರಿ ಇಬ್ಬರ ಸಾವು, ನಾಲ್ವರು ಗಂಭೀರ

• ಉದಯವಾಹಿನಿ, ರಾಮನಗರ

ಬೆಂಗಳೂರು- ಕನಕಪುರ ರಸ್ತೆಯಲ್ಲಿ ಸೋಮವಾರ ಬೆಳಗ್ಗೆ ಕೆಎಸ್ ಆರ್‌ಟಿಸಿ ಬಸ್ ಮೋರಿಗೆ ಪಲ್ಟಿಯಾಗಿ, ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಸೇರಿ ಇಬ್ಬರು ಮೃತಪಟ್ಟಿದ್ದಾರೆ. ನಾಲ್ವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಎಲೆಕ್ಟ್ರಾನಿಕ್ ಸಿಟಿ ಸಂಚಾರ ಪೊಲೀಸ್ ಠಾಣೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಪಿಎಸ್‌ಐ ನಾಗರಾಜ್, ಮತ್ತೊಬ್ಬ ನಾಗರಿಕರು ಮೃತರು. ಗಾಯಾಳುಗಳ ಪೈಕಿ ಒಬ್ಬರನ್ನು ನಿಮ್ಹಾನ್ಸ್ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಮೂವರನ್ನು ದಯಾನಂದ ಸಾಗರ್ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ಬಸ್ಸು ಬೆಳಗ್ಗೆ ಕನಕಪುರದಿಂದ ಬೆಂಗಳೂರಿಗೆ ಹೋಗುತ್ತಿತ್ತು. ಕಗ್ಗಲೀಪುರ ಠಾಣೆ ಸಮೀಪ ನಿಯಂತ್ರಣ ಕಳೆದು ಕೊಂಡ ಚಾಲಕ, ರಸ್ತೆ ವಿಭಜಕದ ಮೇಲೆ ಹತ್ತಿಸಿದ್ದಾನೆ. ಪಕ್ಕದ ರಸ್ತೆಗೆ ನುಗ್ಗಿದ ಬಸ್, ಎದುರಿಗೆ ಬಂದ ನಾಗರಾಜ್, ಮತ್ತೊಬ್ಬರು ಇದ್ದ ಬೈಕ್‌ಗೆ ಡಿಕ್ಕಿ ಹೊಡೆದು, ಪಕ್ಕದ ಹಳ್ಳಕ್ಕೆ ಬಿದ್ದಿದೆ.

### ಸಚಿವ ಸ್ಥಾನ ನೀಡುವ ಭರವಸೆ ಇದೆ ರುದ್ರಪ್ಪ ಲಮಾಣಿ

• ಉದಯವಾಹಿನಿ, ಮೈಸೂರು

ಸಚಿವನಾಗಲು ನನಗೂ ಆಸೆ ಇದೆ. ನಾನು ಕೂಡ ಸಚಿವ ಸ್ಥಾನದ ಪ್ರಬಲ ಆಕಾಂಕ್ಷಿ ಎಂದು ಉಪ ಸಭಾಪತಿ ರುದ್ರಪ್ಪ ಲಮಾಣಿ ಹೇಳಿದರು.

ಮೈಸೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಳೆದ ಅವಧಿಯಲ್ಲೇ ನಾನು ಸಚಿವನಾಗಬೇಕಿತ್ತು. ನಮ್ಮ ಸಮುದಾಯ ಚುನಾವಣೆಯಲ್ಲಿ ನಿರಂತರವಾಗಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುತ್ತಾ ಬಂದಿದೆ. ಆ ಸಮುದಾಯದ ಪ್ರತಿನಿಧಿಯಾಗಿ ನಾನಿದ್ದೇನೆ. ಹೀಗಾಗಿ ಸಚಿವ ಸ್ಥಾನ ನನಗೆ ನೀಡುತ್ತಾರೆ ಎನ್ನುವ ಭರವಸೆ ಇದೆ ಎಂದರು.

ಕಳೆದ ಸಂಪುಟದಲ್ಲಿ ಸಚಿವ ಸ್ಥಾನದ ಲಿಸ್ಟ್‌ನಲ್ಲಿ ನನ್ನ ಹೆಸರಿತ್ತು. ಅಂತಿಮ ಕ್ಷಣದಲ್ಲಿ ಹೆಸರನ್ನು ಬದಲಿಸಲಾಯಿತು. ಪಕ್ಷದ ನಾಯಕರು ನನ್ನನ್ನು ಮನವೊಲಿಸಿ ಉಪಸಭಾಪತಿ ಸ್ಥಾನ ನೀಡಿದರು. ಮುಂದಿನ ಸಂಪುಟದಲ್ಲಿ ಸ್ಥಾನ ನೀಡುವುದಾಗಿ ಭರವಸೆ ನೀಡಿದ್ದರು. ಈ ಹಿನ್ನೆಲೆಯಲ್ಲಿ ನನಗೆ ಸಚಿವ ಸ್ಥಾನ ನೀಡುವ ಭರವಸೆ ಇದೆ ಎಂದು ತಿಳಿಸಿದರು.

ಯಾವಾಗ ಸಂಪುಟ ವಿಸ್ತರಣೆ ಆಗುತ್ತದೆಯೊ ಅಂದೇ ಸಚಿವ ಸ್ಥಾನ ನೀಡಲಿ. ಎಲ್ಲರಿಗೂ ಆಸೆ ಇರುವಂತೆ ನನಗೂ ಸಚಿವನಾಗುವ ಆಸೆ ಇದೆ ಎಂದು ಇಚ್ಛೆ ವ್ಯಕ್ತಪಡಿಸಿದರು.

### ಅಪ್ರಾಪ್ತ ಬಾಲಕಿ ಹತ್ಯೆ ಕೇಸ್‌ಗೆ ಟ್ವಿಸ್ಟ್ ರೈಲು ಡಿಕ್ಕಿ ಹೊಡೆದು ಸಾವು

• ಉದಯವಾಹಿನಿ, ರಾಮನಗರ

ಬಿಡದಿಯಲ್ಲಿ ಅಪ್ರಾಪ್ತ ಬಾಲಕಿ ಹತ್ಯೆ ಕೇಸ್‌ಗೆ ಟ್ವಿಸ್ಟ್ ಸಿಕ್ಕಿದ್ದು, ರೈಲು ಡಿಕ್ಕಿ ಹೊಡೆದು ಬಾಲಕಿ ಮೃತಪಟ್ಟಿರುವುದು ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಬಿಡದಿಯ ಹೋಬಳಿಯ ಭದ್ರಾಪುರ ಗ್ರಾಮದಲ್ಲಿ ಅಪ್ರಾಪ್ತ ಬಾಲಕಿ ಖುಷಿಯನ್ನು ಹತ್ಯೆ ಮಾಡಲಾಗಿದೆ ಎಂದು ಆರೋಪಿಸಲಾಗಿತ್ತು. ಬಿಡದಿ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದರು. ಪೊಲೀಸರು ಬಾಲಕಿಯ 32 ಬಗೆಯ ಸ್ಯಾಂಪಲ್ಸ್‌ಗಳನ್ನು ಎಫ್‌ಎಸ್‌ಎಲ್‌ಗೆ ಕಳುಹಿಸಿದ್ದರು. ಬಳಿಕ ಎಫ್‌ಎಸ್‌ಎಲ್ ವರದಿಯಲ್ಲಿ ಬಾಲಕಿಯ ಮೇಲೆ ಅತ್ಯಾಚಾರ ನಡೆದಿಲ್ಲ ಎಂಬುದು ದೃಢವಾಗಿತ್ತು. ಇದೀಗ ಬಾಲಕಿಯ ಮರಣೋತ್ತರ ಪರೀಕ್ಷೆಯ ವರದಿ ಪೊಲೀಸರ ಕೈ ಸೇರಿದ್ದು, ಮರಣೋತ್ತರ ಪರೀಕ್ಷೆಯಲ್ಲಿ ಹೆಡ್ ಇಂಜುರಿಯಿಂದ ಬಾಲಕಿ ಸಾವನ್ನಪ್ಪಿರುವುದು ದೃಢವಾಗಿದೆ. ರೈಲು ಡಿಕ್ಕಿಯಾದ ಪರಿಣಾಮ ಬಾಲಕಿ ತಲೆಗೆ ತೀವ್ರ ಪೆಟ್ಟು ಬಿದ್ದು ಮೃತಪಟ್ಟಿದ್ದಾಳೆ ಎಂದು ವರದಿಯಲ್ಲಿ ತಿಳಿದುಬಂದಿದೆ. ಅಲ್ಲದೇ ರೈಲು ಡಿಕ್ಕಿಯಾಗಿರುವ ದೃಶ್ಯವು ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ.

### ಹಿನ್ನೀರಿನಲ್ಲಿ ಮುಳುಗಿ ಮೂವರು ಯುವತಿಯರ ಸಾವು

• ಉದಯವಾಹಿನಿ, ಮಾಗಡಿ

ತಾಲ್ಲೂಕಿನ ವೈ.ಜಿ. ಗುಡ್ಡ ಜಲಾಶಯದ ಹಿನ್ನೀರಿನಲ್ಲಿ ಮುಳುಗಿ ಯುವತಿಯರು ಮೃತಪಟ್ಟಿರುವ ಘಟನೆ ಸೋಮವಾರ ನಡೆದಿದೆ. ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿ ನಿವಾಸಿಗಳಾದ ಭಾರ್ಗವಿ(22), ರಮ್ಯ(20) ಹಾಗೂ ಮಧು (25) . ವೈ.ಜಿ. ಗುಡ್ಡ ಗ್ರಾಮದಲ್ಲಿ ನಡೆದಿದ್ದ ಹಬ್ಬದ ಸಲುವಾಗಿ ಸಂಬಂಧಿಕರ ಮನೆಗೆ ಯುವತಿಯರು ಬಂದಿದ್ದರು. ಮಧ್ಯಾಹ್ನ ಮನೆಯಿಂದ ಏಳು ಮಂದಿ ಸಮೀಪದ ಜಲಾಶಯಕ್ಕೆ ಭೇಟಿ ನೀಡಿದ್ದರು. ಹಿನ್ನೀರಿಗೆ ಇಳಿದು ಆಟವಾಡುತ್ತಿದ್ದ ಯುವತಿಯರ ಪೈಕಿ, ಒಬ್ಬರು ನೀರಿನ ಸೆಳೆತಕ್ಕೆ ಸಿಲುಕಿ ಮುಳುಗತೊಡಗಿದ್ದಾರೆ. ಮುಳುಗುತ್ತಿದ್ದ ಯುವತಿಯನ್ನು ರಕ್ಷಿಸಲು ಉಳಿದಿಬ್ಬರು ಮುಂದಾಗಿದ್ದಾರೆ. ಆಗ ಅವರು ಸಹ ನೀರಿನ ಸೆಳೆತಕ್ಕೆ ಸಿಲುಕಿ ಮುಳುಗತೊಡಗಿದ್ದಾರೆ. ಕಣ್ಣೆದುರಿಗೆ ಕುಟುಂಬದ ಯುವತಿಯರು ಮುಳುಗುತ್ತಿದ್ದನ್ನು ಕಂಡು ಉಳಿದವರು ನೆರವಿಗಾಗಿ ಕೂಗಿಕೊಂಡಿದ್ದಾರೆ. ಸ್ಥಳಕ್ಕೆ ಸ್ಥಳೀಯರು ಬರುವಷ್ಟರಲ್ಲಿ ಮೂವರು ಯುವತಿಯರು ನೀರು ಪಾಲಾಗಿದ್ದಾರೆ ಎಂದು ಪೊಲೀಸರು ತಿಳಿಸಿದರು.

ವಿಷಯ ತಿಳಿದು ಸ್ಥಳಕ್ಕೆ ತೆರಳಿ ಮೂವರು ಯುವತಿಯರನ್ನು ಶವವನ್ನು ನೀರಿನಿಂದ ಮೇಲಕ್ಕೆತ್ತಿ, ಮಾಗಡಿ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಲಾಯಿತು. ಘಟನೆ ಕುರಿತು ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ಪೊಲೀಸರು ಹೇಳಿದರು. ಸ್ಥಳಕ್ಕೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರಾಮಚಂದ್ರಯ್ಯ ಹಾಗೂ ಇತರರು ಭೇಟಿ ನೀಡಿ ಪರಿಶೀಲಿಸಿದರು.

ಅಂತರಾಳದಿಂದ..
EDITORIAL

# ರಾಷ್ಟ್ರಪತಿ ಎತ್ತಿರುವ ಪ್ರಶ್ನೆಗಳು ರಾಜಕೀಯ ಪ್ರೇರಿತ


ರಾಜ್ಯಪಾಲರು ಮತ್ತು ರಾಷ್ಟ್ರಪತಿಯವರು ರಾಜ್ಯಗಳ ಮಸೂದೆಗಳಿಗೆ ಅಂಕಿತ ಹಾಕುವುದಕ್ಕೆ ಕಾಲಮಿತಿ ನಿಗದಿಪಡಿಸಿ ಸುಪ್ರೀಂ ಕೋರ್ಟ್ ಏಪ್ರಿಲ್‌ನಲ್ಲಿ ನೀಡಿದ ತೀರ್ಪಿಗೆ ಸಂಬಂಧಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕೆಲವು ಪ್ರಶ್ನೆಗಳನ್ನು ಕೇಳಿದ್ದಾರೆ. ತೀರ್ಪಿಗೆ ಸಂಬಂಧಿಸಿ ಕೇಂದ್ರ ಸರ್ಕಾರಕ್ಕೆ ಕೆಲವು ಸ್ಪಷ್ಟನೆ ಬೇಕಾಗಿದೆ ಎಂಬುದು ಇದರಿಂದ ಮೇಲ್ನೋಟಕ್ಕೆ ತಿಳಿಯುತ್ತದೆ. ಆದರೆ, ರಾಷ್ಟ್ರಪತಿಯವರ ಪ್ರಶ್ನೆಗಳನ್ನು ಗಮನಿಸಿದರೆ ಕೇಂದ್ರ ಸರ್ಕಾರವು ತೀರ್ಪನ್ನು ಒಪ್ಪಿಲ್ಲ ಎಂಬುದು ಸ್ಪಷ್ಟವಾಗುತ್ತದೆ. ಈ ಪ್ರಶ್ನೆಗಳಿಗೆ ಸಂಬಂಧಿಸಿ ಪ್ರಕ್ರಿಯಾತ್ಮಕ, ಕಾನೂನಾತ್ಮಕ ಮತ್ತು ಇತರ ಅಂಶಗಳು ಎದ್ದು ಕಾಣುತ್ತವೆ. ಆದರೆ, ರಾಷ್ಟ್ರಪತಿ ಎತ್ತಿರುವ ಪ್ರಶ್ನೆಗಳು ಮೂಲಭೂತವಾಗಿ ರಾಜಕೀಯ ನಿರ್ದೇಶಿತ. ರಾಜಕೀಯವಾಗಿ ಬಿಜೆಪಿಯನ್ನು ವಿರೋಧಿಸುವ ಪಕ್ಷಗಳ ಆಳ್ವಿಕೆ ಇರುವ ರಾಜ್ಯಗಳ ರಾಜ್ಯಪಾಲರು ಮಸೂದೆಗಳನ್ನು ಅನಿರ್ದಿಷ್ಟ ಅವಧಿಗೆ ತಡೆಹಿಡಿಯುವುದು ಈ ತೀರ್ಪಿನಿಂದಾಗಿ ಅಸಾಧ್ಯವಾಗಿದೆ. ಹಾಗೆಯೇ ರಾಷ್ಟ್ರಪತಿಯವರನ್ನೂ ಈ ವ್ಯಾಪ್ತಿಗೆ ತರಲಾಗಿದೆ. ಈ ರಾಜಕಾರಣಕ್ಕೆ ಅನುಗುಣವಾಗಿ ಪ್ರಶ್ನೆಗಳನ್ನು ರೂಪಿಸಲಾಗಿದೆ.



ಇದು ಕೇಂದ್ರ ಸರ್ಕಾರದ ರಾಜಕಾರಣವೂ ಹೌದು. ರಾಷ್ಟ್ರಪತಿಯವರ ಪ್ರಶ್ನೆಗಳನ್ನು ನ್ಯಾಯಾಲಯವು ಪರಿಗಣನೆಗೆ ತೆಗೆದುಕೊಳ್ಳಬಹುದು. ಆದರೆ, ನ್ಯಾಯಾಲಯ ನೀಡಿರುವ ತೀರ್ಪು ರಾಜ್ಯಪಾಲರು ಸ್ವೇಚ್ಛೆಯಿಂದ ವರ್ತಿಸುವುದಕ್ಕೆ ಕಡಿವಾಣ ಹಾಕಿ ಒಕ್ಕೂಟ ವ್ಯವಸ್ಥೆಯನ್ನು ಬಲಪಡಿಸಿದೆ. ರಾಜ್ಯಪಾಲರಿಗೆ ಪರಮಾಧಿಕಾರ ಇಲ್ಲ ಎಂದು ನ್ಯಾಯಾಲಯ ಘೋಷಿಸಿದೆ. ರಾಜ್ಯಪಾಲರ ಹುದ್ದೆಗಿಂತ ಚುನಾಯಿತ ಸರ್ಕಾರಕ್ಕೆ ಹೆಚ್ಚಿನ ಅಧಿಕಾರ ಇದೆ ಎಂದೂ ಹೇಳಿದೆ. ರಾಜ್ಯಪಾಲರಿಗೆ ಕಾಲಮಿತಿ ಹೇರಬಹುದು ಎಂಬ ಅಂಶ ಸಂವಿಧಾನದಲ್ಲಿ ಇಲ್ಲ, ಹಾಗಾಗಿ, ಕಾಲಮಿತಿ ಹೇರುವುದೇ ಎಂಬುದನ್ನು ನ್ಯಾಯಾಲಯವು ಪರಿಶೀಲನೆಗೆ ಒಳಪಡಿಸಬೇಕು. ರಾಷ್ಟ್ರಪತಿಯವರ ಅಧಿಕಾರಗಳು, ಸ್ಥಾನವನ್ನು ತೀರ್ಪು ದುರ್ಬಲಗೊಳಿಸಿದೆಯೇ ಎಂಬುದನ್ನೂ ಪರಿಶೀಲನೆಗೆ ಒಳಪಡಿಸಬೇಕಿದೆ. ಸಂಬಂಧಪಟ್ಟ ಇತರ ಅಂಶಗಳನ್ನು ಕೂಡ ಪರಿಶೀಲಿಸಬೇಕು. ತೀರ್ಪನ್ನು ಮರುಪರಿಶೀಲನೆಗೆ ಒಳಪಡಿಸಬೇಕು ಎಂದು ಸರ್ಕಾರವು ನ್ಯಾಯಾಲಯವನ್ನು ಕೋರಿಲ್ಲ. ಬದಲಿಗೆ ಕೋರ್ಟ್ ಮುಂದೆ ರಾಷ್ಟ್ರಪತಿಯವರ ಪ್ರಶ್ನೆಗಳನ್ನು ಇರಿಸಿದ್ದಾರೆ. ಮರುಪರಿಶೀಲನಾ ಅರ್ಜಿಯನ್ನು ತೀರ್ಪು ನೀಡಿದ ಪೀಠವೇ ವಿಚಾರಣೆ ನಡೆಸುತ್ತದೆ. ಸಾಮಾನ್ಯವಾಗಿ ತನ್ನ ಹಿಂದಿನ ತೀರ್ಪಿಗೆ ಪೀಠವು ಬದ್ಧವಾಗಿರುತ್ತದೆ. ರಾಷ್ಟ್ರಪತಿಯವರು ಎತ್ತಿರುವ ಪ್ರಶ್ನೆಗಳಿಗೆ ನ್ಯಾಯಾಲಯವು ಪ್ರತಿಕ್ರಿಯೆ ನೀಡಬೇಕೆಂದೇನಿಲ್ಲ. ಬಾಬರಿ ಮಸೀದಿ ವಿವಾದ ಕುರಿತಂತೆ ಅಭಿಪ್ರಾಯ ವ್ಯಕ್ತಪಡಿಸಲು ಈ ಹಿಂದೊಮ್ಮೆ ನ್ಯಾಯಾಲಯ ನಿರಾಕರಿಸಿತ್ತು. ನ್ಯಾಯಾಲಯದ ಅಭಿಪ್ರಾಯಕ್ಕೆ ಸರ್ಕಾರ ಅಥವಾ ಸಂಸತ್ತು ಬದ್ಧವಾಗಿರಬೇಕಿಲ್ಲ. ರಾಷ್ಟ್ರಪತಿಯವರು ಎತ್ತಿರುವ ಪ್ರಶ್ನೆಗಳ ಕುರಿತು ನ್ಯಾಯಾಲಯದ ಅಭಿಮತ ಏನೇ ಆಗಿದ್ದರೂ ಅದು ತೀರ್ಪಿನ ಮೇಲೆ ಪರಿಣಾಮ ಬೀರುವುದಿಲ್ಲ, ತೀರ್ಪು ಊರ್ಜಿತವಾಗಿಯೇ ಇರುತ್ತದೆ. ಹಾಗಾಗಿ, ರಾಷ್ಟ್ರಪತಿಯವರ ಪ್ರಶ್ನೆಗಳು ಅಸ್ಪಷ್ಟವಾಗಿಯೇ ಉಳಿಯುತ್ತವೆ ಮತ್ತು ಪ್ರಶ್ನೆಗಳನ್ನು ಎತ್ತಿರುವುದು ರಾಜಕೀಯ ಪ್ರೇರಿತ ಎಂಬ ಸಂದೇಹಕ್ಕೆ ಪುಷ್ಟಿ ಕೊಡುತ್ತದೆ. ರಾಷ್ಟ್ರಪತಿಯವರು ಎತ್ತಿರುವ ಎಲ್ಲಾ ಪ್ರಶ್ನೆಗಳಿಗೂ ವಿಸ್ತೃತ ತೀರ್ಪಿನಲ್ಲಿ ಅಥವಾ ನ್ಯಾಯಾಲಯವು ಈ ಹಿಂದೆ ನೀಡಿದ್ದ ತೀರ್ಪಿನಲ್ಲಿ ಉತ್ತರ ಕೊಡಲಾಗಿದೆ ಎಂಬುದನ್ನೂ ಗಮನಿಸಬೇಕು.

**ರಾಜ್ಯಪಾಲರ ಅಧಿಕಾರ, ರಾಜ್ಯಪಾಲರು ಮತ್ತು ರಾಷ್ಟ್ರಪತಿಯವರಿಗೆ ಮಸೂದೆಗೆ ಅಂಕಿತ ನೀಡಲು ನ್ಯಾಯಾಲಯ ನೀಡಿದ ಕಾಲಮಿತಿ, ರಾಷ್ಟ್ರಪತಿಯವರ ಅಧಿಕಾರದಂತಹ ಹಲವು ವಿಚಾರಗಳಿಗೆ ಸಂಬಂಧಿಸಿ 14 ಪ್ರಶ್ನೆಗಳನ್ನು ಕೇಳಲಾಗಿದೆ. ತಮಿಳುನಾಡು ರಾಜ್ಯಪಾಲ ಆರ್.ಎನ್. ರವಿ ಅವರು 10 ಮಸೂದೆಗಳನ್ನು ಅನಿರ್ದಿಷ್ಟಾವಧಿಗೆ ತಡೆಹಿಡಿದಿರುವುದು ತಪ್ಪು ಮತ್ತು ಕಾನೂನುಬಾಹಿರ ಎಂದು ಸುಪ್ರೀಂ ಕೋರ್ಟ್ ಹೇಳಿತ್ತು. ಆ ಮಸೂದೆಗಳಿಗೆ ರಾಜ್ಯಪಾಲರ ಅಂಕಿತ ದೊರೆತಿದೆ ಎಂದು ಭಾವಿಸಬೇಕು ಎಂದು ಕೋರ್ಟ್ ಹೇಳಿದೆ. ಈ ತೀರ್ಪಿನ ಕುರಿತು ಕೇಂದ್ರ, ಸರ್ಕಾರವು ತನ್ನ ನಿಲುವನ್ನು ಸ್ಪಷ್ಟಪಡಿಸಿಲ್ಲ.**

# ರಾಮಾಯಣ



## ದಶರಥ ಕೌಸಲ್ಯಾ ದೇವಿಯರ ಸಂವಾದ

• ಹಿಂದಿನ ಸಂಚಿಕೆಯಿಂದ **78ನೆಯ ಅಧ್ಯಾಯ**


ಆಮೇಲೆ ಕೌಸಲ್ಯಾದೇವಿಯು ತನ್ನ ಪತಿಯಾದ ದಶರಥರಾಯನನ್ನು ನೋಡಿ ಈ ಪ್ರಕಾರ ಗೋಳಾಡಿದಳು ಮಹಾರಾಜ, ಮೂರುಲೋಕಗಳಲ್ಲಿಯೂ ಕೀರ್ತಿವಂತರಾದ ಅರಸುಗಳೆಲ್ಲರಿಗೂ ನೀನು ಪ್ರಧಾನನಾದ ಕೀರ್ತಿವಂತನು ಶ್ರೀರಾಮನು ಸಮಸ್ತರೊಡನೆಯೂ ಪ್ರಿಯೋಕ್ತಿಗಳನ್ನೇ ನುಡಿಯುವವನು. ಸಮಸ್ತಪ್ರಾಣಿಗಳಲ್ಲಿಯೂ ದಯೆಯುಳ್ಳವನು. ಲಕ್ಷ್ಮಣನು ಅತಿ ಪರಾಕ್ರಮಿ. ಅಂಥ ರಾಮಲಕ್ಷ್ಮಣರು ಸೀತಾದೇವಿಯೊಡನೆ ವನದಲ್ಲಿ ಹೇಗೆ ತಾನೆ ದುಃಖವನ್ನನುಭವಿಸುವರು ಸುಕುಮಾರಾಂಗಿಯಾಗಿ ಯೌವನಸ್ಥೆಯಾದ ಸೀತಾದೇವಿಯು ಇಲ್ಲಿ ಸುಖವನ್ನು ಅನುಭವಿಸಿಕೊಂಡಿದ್ದಳು. ಈಗ ವನದಲ್ಲಿ ಅತಿಶೀತ ಅತ್ಯುಷ್ಣಗಳನ್ನು ಹೇಗೆ ತಾನೆ ಸಹಿಸಿಯಾಳು ಮನೆಯಲ್ಲಿ ಅನೇಕ ಷಡ್ರಸೋಪೇತವಾದ ಆಹಾರವನ್ನು ತೆಗೆದುಕೊಂಡು ಸುಖವಾಗಿದ್ದ ಆ ದೇವಿಯು ವನದಲ್ಲಿ ಕಂದ ಮೂಲ ಫಲಾಹಾರಗಳನ್ನು ಮಾಡಿಕೊಂಡು ಹೇಗಿರುವಳು ಗೀತಾ ವೀಣಾ ಮೃದಂಗ ಮೊದಲಾದವುಗಳ ಮಂಗಳಸ್ವರಗಳನ್ನು ಕೇಳಿಕೊಂಡಿದ್ದ ಸೀತಾದೇವಿಯು ವನವಾಸದಲ್ಲಿ ಭಯಂಕರವಾದ ತೋಳ ವ್ಯಾಘ್ರ ದುಷ್ಟಮೃಗಗಳ ಕಠೋರವಾದ ಧ್ವನಿಗಳನ್ನು ಹೇಗೆ ಕೇಳುವಳು ಸಿಂಹ ಮೊದಲಾದ ಲಕ್ಷ್ಮಣಸಮೇತನಾದ ಶ್ರೀರಾಮನು ನಿಡಿದಾದ ಭುಜಗಳನ್ನು ತಲೆದಿಂಬು ಮಾಡಿಕೊಂಡು ಎಲ್ಲಿ ಹೇಗೆ ಶಯನ ಮಾಡುವನು ಪದ್ಮದಂತೆ ಸುಂದರವಾದ ರಘುನಾಥನ ಮುಖವನ್ನು ಯಾವಾಗ ಕಾಣುವೆನು ಆಕಟಕಟಾ ನನ್ನ ಎದೆಯು ವಜ್ರಶಿಲೆಗೆ ಸಮಾನವಾದದ್ದು. ಅಲ್ಲದಿದ್ದರೆ ಶ್ರೀರಾಮನು ಹೋದ ತತ್ ಕ್ಷಣದಲ್ಲಿಯೇ ಅನೇಕ ತುಂಡುಗಳಾಗಿ ಒಡೆದುಹೋಗುತ್ತಿತ್ತು. ಮಹಾರಾಜ, ನನ್ನ ಮಕ್ಕಳನ್ನೂ ಸೊಸೆಯನ್ನೂ ಹೊರಡಿಸಿದೆ. ನಿನ್ನಿಂದ ಹೊರಡಿಸಲ್ಪಟ್ಟ ಅವರು ದೈನ್ಯದಿಂದ ವನದಲ್ಲಿ ಸಂಚರಿಸುತ್ತಿದ್ದಾರೆ. ನನ್ನ ಭಾಗ್ಯದಿಂದ ಶ್ರೀರಾಮನು ಹದಿನಾಲ್ಕು ವರುಷಗಳನ್ನು ತೀರಿಸಿ ಹದಿನೈದನೆಯ ವರುಷದಲ್ಲಿ ತಿರುಗಿಬಂದರೂ ಭರತನು ಅನುಭವಿಸಿದ ರಾಜ್ಯ ಕೋಶಗಳನ್ನು ಎಂದಿಗೂ ಬಯಸನು.

ಶ್ರಾದ್ಧದಲ್ಲಿ ತಮ್ಮ ಬಂಧುಗಳಾದ ಬ್ರಾಹ್ಮಣರಿಗೆ ಮೊದಲು ಬಡಿಸಿ ಆಮೇಲೆ ಶಿಷ್ಟರನ್ನು ಭೋಜನಕ್ಕೆ ಬರಹೇಳಿದರೆ, ದೇವತೆಗಳು ಶ್ರಾದ್ಧದಲ್ಲಿಯ ಅನ್ನವನ್ನು ಮುಟ್ಟದಂತೆ, ಆ ಶಿಷ್ಟರಾದ ಬ್ರಾಹ್ಮಣರು ಆ ಅನ್ನವನ್ನು ಮುಟ್ಟರು. ತಮ್ಮನು ಆಳಿದ ರಾಜ್ಯವನ್ನು ಅಣ್ಣನು ಬಯಸುವುದು ಹೀನಕಾರ್ಯ. ಲೋಕದಲ್ಲಿ ಸಿಂಹರಾಜನು ಇತರ ಮೃಗಗಳ ಆಹಾರವನ್ನು ಬಯಸುವುದುಂಟೆ ಆದ್ದರಿಂದ ಪುರುಷೋತ್ತಮನಾದ ಶ್ರೀರಾಮನು ತಮ್ಮನು ಅನುಭವಿಸಿದ ರಾಜ್ಯವನ್ನು ಅಂಗೀಕರಿಸಲಾರನು. ಒಂದು ಯಜ್ಞದಲ್ಲಿ ಹೋಮಾರ್ಥವಾಗಿ ಸಂವಾದಿಸಲ್ಪಟ್ಟ ಹವಿಸ್ಸು ದರ್ಭೆ ಪುರೋಡಾಶ ಆಜ್ಯ ಯೂಪಸ್ತಂಭಗಳು ಮತ್ತೊಂದು ಯಾಗಕ್ಕೆ ಸಲ್ಲವು. ಕನಿಷ್ಠನಾದ ಭರತನು ಅನುಭವಿಸಿದ ರಾಜ್ಯ ಕೋಶಗಳು ಶ್ರೀರಾಮನಿಗೆ ಅನುಭವಯೋಗ್ಯವಲ್ಲ. ತನ್ನ ಬಾಲವನ್ನು ಹಿಡಿದೆಳೆದರೆ ವ್ಯಾಘ್ರವು ಯಾವ ರೀತಿಯಲ್ಲಿ ಸಹಿಸಲಾರದೋ ಆ ರೀತಿಯಲ್ಲಿ ವನಕ್ಕೆ ಕಳುಹಿಸಿದ ಅವಮಾನವನ್ನು ರಘುನಾಥನು ಸಹಿಸಲಾರನು. ಸಕಲ ಲೋಕದವರೂ ಕೂಡಿಯಾದರೂ ಯುದ್ಧದಲ್ಲಿ ಶ್ರೀರಾಮನಿಗೆ ಭಯವನ್ನುಂಟುಮಾಡಲಾರರು. ಧರ್ಮಮಾರ್ಗವನ್ನು ಕೈಗೊಂಡು ಲೋಕಧರ್ಮ ರಹಸ್ಯವನ್ನು ಬಲ್ಲ ಶ್ರೀರಾಮನು ಧರ್ಮಮಾರ್ಗದಲ್ಲಿಯೇ ನಡೆಯಬಲ್ಲನು. ಆತನು ಮಹಾ ಬಲವಂತನಾದವನು. ಚಿನ್ನದ ಮುಲಾಮುಮಾಡಿದ ಅಂಬುಗಳನ್ನು ತೊಟ್ಟು ಪ್ರಳಯಕಾಲಾಗ್ನಿಯಂತೆ ಸಮಸ್ತ ಲೋಕಗಳನ್ನೂ ದಹಿಸಬಲ್ಲನು. **ಮುಂದುವರಿಯುವುದು...**



☛ ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

# ಜೀವನದ ಕಹಿ ಸತ್ಯ



ಯಾರೂ ತಪ್ಪಾಗಿ ಅರ್ಥೈಸಿಕೊಳ್ಳ ಬೇಡಿ. ಬಂದಿದ್ದೇವೆ ಅಂದ ಮೇಲೆ ಹೋಗಿಯೇ ಹೋಗುತ್ತೇವೆ, ಎನ್ನುವುದೂ ನಿಶ್ಚಯವೇ ಇಬ್ಬರಲ್ಲಿ ಯಾರಾದರೂ ಒಬ್ಬರು ಮೊದಲು ಹೋಗಬೇಕು ಅದು ಗಂಡನಿಗೂ ಅವನಿಗೂ ಗೊತ್ತು, ಹೆಂಡತಿಗೂ ಅವಳಿಗೂ ಗೊತ್ತು ಗಂಡನಿಗೆ ತನ್ನ ಹೆಂಡತಿಯ ಕಾಳಜಿ, ಅವಳು ಎಂದಿಗೂ ಬ್ಯಾಂಕಿಗೆ ಹೋಗಲಿಲ್ಲ, ಅಂಚೆ ಕಚೇರಿಗೂ ಇಲ್ಲ, ನಿಗಮಕ್ಕೂ ಇಲ್ಲ, ಯಾವುದೇ ಬಿಲ್ಲು ಪಾವತಿಗೆ ಇಲ್ಲ, ವಿಮಾ ಕಚೇರಿಗೂ ಇಲ್ಲ ಆನ್‌ಲೈನ್ ಬ್ಯಾಂಕಿಂಗ್ ಬರುವುದಿಲ್ಲ ಇದೆಲ್ಲಾ ಅವಳಿಗೆ ಹೇಗೆ ಸಾಧ್ಯವಾದೀತು ಹೆಂಡತಿಗೋ ಗಂಡನ ಚಿಂತೆ ಬೆಳಿಗ್ಗೆ ಎದ್ದಾಕ್ಷಣ ಅವನಿಗೆ ಶುಂಠಿ ಏಲಕ್ಕಿ ಚಹಾ ಬೇಕು, ಒಳ್ಳೆಯ ಬಿಸ್ಕತ್ತಿನ ಜೊತೆ ಅದು ಇಲ್ಲದೆ ಬೆಳಗಿನ ನಡೆದಾಟ ಸಾಧ್ಯವಿಲ್ಲ ಹಿಂತಿರುಗಲು ಬಿಸಿ ಉಪಹಾರ, ಅವರಿಗೆ ಅವರ ಬಟ್ಟೆಗಳೂ ಬೇಗ ಸಿಗುವುದಿಲ್ಲ ಮಧ್ಯಾಹ್ನದ ಊಟ, ವಿಶ್ರಾಂತಿ ಸಂಜೆಯ ಪ್ರತ್ಯೇಕ ಮೆನು ಎಲ್ಲವೂ ಕ್ರಮದಲ್ಲಿರ ಬೇಕು ನಾನಿಲ್ಲದೆ ಹೋದಾಗ ಇದನೆಲ್ಲ ಅವರು ಹೇಗೆ ನಿಭಾಯಿಸಿಯಾರು ಒಂದು ದಿನ ಅವನು ಅವಳನ್ನು ಬ್ಯಾಂಕಿಗೆ ಕರೆದೊಯ್ದ, ಅವಳಿಂದಲೇ ಎಟಿಎಂನಿಂದ ಹಣ ತೆಗೆಸಿದ, ಮದುವೆಯ ದಿನಾಂಕದ ಪಿನ್ ಹಾಕಿಸಿದ ಸ್ನೇಹಿತರಿಗೆ ಹೇಳಿದ, ನಾನು ಇಲ್ಲದಿದ್ದರೆ ಸ್ವಲ್ಪ ಹೆಂಡತಿಯೂ ಕಾಯಿಲೆಯ ಸುಳ್ಳು ನೆಪದಲ್ಲಿ ಮಲಗಿದಳು, ಪತಿಯಿಂದ ತಿಂಡಿ, ಚಾ ಮಾಡಿಸಿದಳು ತುಂಬಾ ಚೆನ್ನಾಗಿ ಆಗಿದೆ.

ಮೆಚ್ಚುಗೆಯ ತೋರಿದಳು ಈಗ ಪತಿ ಪತ್ನಿಯನ್ನು ಎಲ್ಲಾ ಕಡೆ ಕರೆದೊಯ್ದ, ಅಡುಗೆ ಗ್ಯಾಸ್ ಕಾದಿರಿಸುವುದು, ನೋಂದಣಿ, ಬಿಲ್ಲುಗಳ ಪಾವತಿ, ಎಲ್ಲವನು ತಿಳಿಹೇಳಿದ.

ಪತ್ನಿಯಿಂದ ಅನ್ನ, ಸಾರು, ಸಾಂಬಾರು, ಖಿಚಡಿ ಮಾಡಲು ಕಲಿಯಲು ತೊಡಗಿದ ಈಗ ಗಂಡ ಮತ್ತು ಹೆಂಡತಿ ಇಬ್ಬರಿಗೂ ಸಮಾಧಾನ, ನಿಶ್ಚಿಂತೆ, ಸಂತೋಷ ಯಾವಾಗ ಬೇಕಾದರೂ ಹೊರಡಲು ಸಿದ್ಧ ಸ್ನೇಹಿತರೇ, ಜೀವನದ ಆರಂಭದ ಹಾಗೆ, ಜೀವನದ ಅಂತ್ಯಕ್ಕೂ ಸಾಕಷ್ಟು ಸಿದ್ಧತೆ ಬೇಕು. ಇದಿಲ್ಲದಿದ್ದರೆ ಜೀವನ ಸಂಗಾತಿಗೆ ತುಂಬಾ ತೊಂದರೆ. ಯಾಕೆಂದರೆ ಯಾರ ಸರದಿ ಮೊದಲೋ ಯಾರಿಗೂ ತಿಳಿಯದು. ವೃದ್ಧಾಪ್ಯಕ್ಕೆ ಒಳ್ಳೆಯ ಹೆಸರಿದೆ, ಯಾರೋ ಹೇಳುತ್ತಾರೆ ಸನ್ಯಾಸ ಆಶ್ರಮ,

ಇನ್ನಾರೋ ವಾನಪ್ರಸ್ಥಾಶ್ರಮ ಎನ್ನುತ್ತಾರೆ, ಆದರೆ ನಾನು ಆನಂದಾಶ್ರಮ ಅನ್ನುತ್ತೇನೆ ವೃದ್ಧಾಪ್ಯದಲ್ಲಿ ನಾವು ಹೇಗಿರಬೇಕು ನೀವು ಮನೆಯಲ್ಲಿದ್ದರೆ, ಒಂದು ಆಶ್ರಮದಂತೆ ನೀವು ಆಶ್ರಮದಲ್ಲಿದ್ದರೆ, ಮನೆಯಲ್ಲಿದ್ದಂತೆ ಎಲ್ಲಿಯೂ ಗೊಂದಲ ಮಾಡಿಕೊಳ್ಳದಿರಿ ಹಳೆಯ ನೆನಪುಗಳನ್ನು ಮೆಲುಕು ಹಾಕಬೇಡಿ ನಮ್ಮ ಕಾಲದಲ್ಲಿ ಎಂದು ಹೇಳಬೇಡಿ.

ಅವಮಾನವಾದರೆ ತೋರಿಸಬೇಡಿ. ಮಾತು ಉದ್ದಕ್ಕೆ ಎಳೆಯದಿರಿ, ಸಂತೋಷವನ್ನು ಕಾಪಾಡಿ ಎಲ್ಲರೊಂದಿಗೆ ಸ್ನೇಹದಿಂದಿರಿ ಕೋಪ ಮತ್ತು ದುರಾಸೆಯನ್ನು ದೂರ ಓಡಿಸಿ, ಯಾವಾಗಲೂ ಆನಂದ ಅನುಭವಿಸಿ. ವೃದ್ಧಾಪ್ಯವೂ ಒಳ್ಳೆಯದೇ ಕನ್ನಡಕದಿಂದ ಚೆನ್ನಾಗಿ ಕಾಣಿಸುತ್ತದೆ, ಹೊಸ ಹಲ್ಲುಗಳಿಂದ ಸುಲಭದಲ್ಲಿ ಅಗಿಯಬಹುದು, ಶ್ರವಣ ಸಾಧನದಿಂದ ಚೆನ್ನಾಗಿ ಕೇಳಿಸುತ್ತದೆ

ಉದ್ಯಾನಕ್ಕೆ ಹೋಗಿ, ಮತ್ತೆ ಹಿಂತಿರುಗಿ, ದೇವಸ್ಥಾನಕ್ಕೆ ಹೋಗಿ, ಭಜನೆ ಮಾಡಿ. ಟಿವಿ ನೋಡಿ, ಒಳ್ಳೆಯ ಧಾರಾವಾಹಿ ನೋಡಿ ಮಕ್ಕಳೆದುರು ಸುಮ್ಮನಿರಿ, ಮೊಮ್ಮಕ್ಕಳೊಡನೆ ಆಟವಾಡಿ, ಹೆಂಡತಿ ಜೊತೆ ಹುಸಿ ಜಗಳವಾಡಿ, ಸ್ನೇಹಿತರನ್ನು ಕರೆದು ಮಾತನಾಡುತ್ತಲೇ ಇರಿ, ಮನಸ್ಸಾದರೆ ತಿರುಗಾಟಕ್ಕೆ ಹೋಗಿ, ಹೆಂಡತಿಯ ವಸ್ತುಗಳನ್ನು ಎತ್ತಿ ಇಡುತ್ತಿರಿ. ಹಾಡಬೇಕೆನ್ನಿಸಿದರೆ ಹಾಡಿ, ಒಬ್ಬರೇ ಇದ್ದಾಗ ನೃತ್ಯ ಮಾಡಿ, ಯಾರಾದರೂ ನೋಡಿದರೆ, ವ್ಯಾಯಾಮವೆನ್ನಿ ಆಯಾಸವಾದರೆ ಕುಳಿತುಕೊಳ್ಳಿ ಬೇಸರ ವಾದರೆ ಮಲಗಿ ಮನೆಯಲ್ಲಿ ಒಂಟಿಯಾದರೆ ಅಡುಗೆ ಮನೆಗೆ ಹೋಗಿ ಬೆಣ್ಣೆ ಸ್ವಚ್ಛ ಮಾಡಿ, ಮಕ್ಕಳ ಉಪಾಹಾರದ ರುಚಿ ನೋಡಿ, ನಿಮಗೆ ಬೇಕೆನಿಸಿದರೆ ಸಕ್ಕರೆಯೂ ತಿನ್ನಿ, ಹಳೆಯ ಅಂಗಿ ಹಾಕಿ ನೋಡಿ, ತಲೆ ಕೂದಲು ಸ್ವಲ್ಪ ಬಾಚಿ, ಕನ್ನಡಿಯೂ ಸುಳ್ಳುಗಾರ ಎನ್ನಿ, ಯಾರೂ ಇಲ್ಲದಿದ್ದರೆ ಅದರ ಕನ್ನಡಿ ಮುಂದೆ ಚೇಷ್ಟೆಯ ಮುಖ ಮಾಡಿ.

ಮಧುರ ಸಂಗೀತ ಬಹಳಷ್ಟು ಸಂಗ್ರಹಿಸಿ ಕೇಳಿ, ಪಂಕ್ತಿಯಲಿ ಕುಳಿತು ಚೆನ್ನಾಗಿ ಊಟ ಮಾಡಿ, ಒಟ್ಟಾಗಿ ಕೂತು ಪಟ್ಟಾಗಿ ಹರಟೆ ಹೊಡೆಯಿರಿ, ಜೀವನದ ಮಜವ ಲೂಟಿ ಮಾಡಿ ಕೊನೆಯ ಮಾತು ಎಲ್ಲವನ್ನೂ ಆಸ್ವಾದಿಸುತ್ತ, ಮೆಚ್ಚುತ್ತ, ತೃಪ್ತ ಮನದಿಂದ ಆನಂದ ಅನುಭವಿಸುತ್ತ, ಮೆತ್ತಗೆ ನೀವಾಗಿ ಜಾರಿಹೋಗಿ, ದೂರ ಹೋಗಿ, ಮಾಗಿದ ಎಲೆಯು ಉದುರಿದ ಹಾಗೆ ಸದ್ದಿಲ್ಲದೆ ಹೊರಟುಬಿಡಿ ಒಂದು ದಿನ

**ಎಲ್ಲಾ ಹಿರಿಯ ನಾಗರಿಕರಿಗೆ**

# ವಿಟಮಿನ್ ಮಾತ್ರೆಗಳನ್ನು ಅತಿಯಾ ಸೇವಿಸುತ್ತೀರಾ ಹುಷಾರ್



ವಿಟಮಿನ್‌ಗಳು ನಮ್ಮ ದೇಹಕ್ಕೆ ಅಗತ್ಯವಾಗಿ ಬೇಕಾದ ಪೋಷಕಾಂಶಗಳು. ಶರೀರ ಆರೋಗ್ಯವಾಗಿರಲು ಮಾತ್ರವಲ್ಲ, ತನ್ನ ಕೆಲಸವನ್ನು ಮಾಡಿಕೊಳ್ಳಲು ಸಹ ಜೀವಸತ್ವಗಳ ಅಗತ್ಯವಿದೆ. ಆಹಾರದ ಮೂಲಕ ದೊರೆಯುವ ಈ ಸತ್ವಗಳು ಸಾಕಾಗದು ಎನಿಸಿದ ಬಹಳಷ್ಟು ಮಂದಿ ವಿಟಮಿನ್ ಪೂರಕಗಳನ್ನು ಸೇವಿಸುತ್ತಾರೆ. ಇದಕ್ಕೆ ವೈದ್ಯರ ಸಲಹೆ ಅಗತ್ಯ. ಪೂರಕಗಳನ್ನು ತಮ್ಮಷ್ಟಕ್ಕೆ ಇಷ್ಟ ಬಂದಂತೆ ಸೇವಿಸಿದರೆ ಸಮಸ್ಯೆಗಳಾಗಬಹುದು. ಕಾರಣ, ವಿಟಮಿನ್ ಅತಿಯಾದರೆ ಅದರಿಂದ ದೇಹಕ್ಕೆ ಅನುಕೂಲತೆ ಬದಲಿಗೆ ಅನಾನುಕೂಲಗಳು ಹೆಚ್ಚಾಗುತ್ತವೆ. ಜೀವಸತ್ವಗಳಲ್ಲಿ ಕೆಲವು ನೀರಿನಲ್ಲಿ ಸುಲಭವಾಗಿ ಕರಗುವಂತವು. ಇನ್ನೂ ಕೆಲವು ಕೊಬ್ಬಿನಲ್ಲಿ ಕರಗಬಲ್ಲವು. ನೀರಲ್ಲಿ ಕರಗಬಲ್ಲ ಸಿ ವಿಟಮಿನ್ನಂಥವು ಕೊಂಚ ಹೆಚ್ಚಾದರೆ ಅತಿಯಾದ ದುಷ್ಪರಿಣಾಮಗಳೇನು ಆಗುವುದಿಲ್ಲ. ಕಾರಣ. ಇವು ಹೆಚ್ಚಾದಷ್ಟು ಮೂತ್ರದಲ್ಲಿ ಹೊರಗೆ ಹೋಗಿಬಿಡುತ್ತದೆ. ಆದರೆ ಕೊಬ್ಬಿನಲ್ಲಿ ಕರಗಬಲ್ಲ ವಿಟಮಿನ್ ಎ. ಡಿ, ಇ ಮತ್ತು ಕೆ–ನಂಥವು ಸಮಸ್ಯೆಗಳು ತರಬಲ್ಲವು. ಏಕೆಂದರೆ, ದೇಹದ ಕೊಬ್ಬಿನ ಕೋಶಗಳಲ್ಲಿ ಉಳಿಯುವ ಇವನ್ನು ದೇಹದಿಂದ ವರ್ಜಿಸುವುದು ಕಷ್ಟವಾಗಿಬಿಡಬಹುದು. ಯಾವ ವಿಟಮಿನ್ ಅತಿಯಾದರೆ' ಆರೋಗ್ಯದ ಮೇಲಿನ ಯಾವ ರೀತಿ ವ್ಯತಿರಿಕ್ತ ಪರಿಣಾಮ ಉಂಟಾಗಬಹುದು ಎಂದು ತಿಳಿಯೋಣ

**ವಿಟಮಿನ್ ಎ:** ಯಾವುದೇ ಜೀವಸತ್ವಗಳು ಆಹಾರದ ಮೂಲಕ ದೇಹ ಸೇರಿದರೆ ಹೆಚ್ಚು ಸುರಕ್ಷಿತ. ಹಾಗಲ್ಲದೆ ಪೂರಕಗಳನ್ನು ಸೇವಿಸುವಾಗ ಮಾತ್ರ ಎಚ್ಚರಬೇಕು. ವಿಟಮಿನ್ ಪೂರಕಗಳ ಮೂಲಕ ದೇಹದ ಒಳಹೊಕ್ಕುವ ಎ ಜೀವಸತ್ವ ಅತಿಯಾದಲ್ಲಿ ತಲೆನೋವು, ತಲೆಸುತ್ತು, ಹೊಟ್ಟೆ ತೊಳೆಸುವುದು, ಚರ್ಮದ ಕಿರಿಕಿರಿ, ಮೂಳೆ ಮತ್ತು ಕೀಲುಗಳಲ್ಲಿ ನೋವುನಂತಹ ಸಮಸ್ಯೆಗಳು ಬಾಧಿಸುತ್ತವೆ. ಇದು ವಿಪರೀತವಾಗಿ ಹೆಚ್ಚಾದಲ್ಲಿ ದೃಷ್ಟಿದೋಷ. ಮೂಳೆಗಳಲ್ಲಿ ಉರಿಯೂತ, ಕೂದಲು ಉದುರುವುದು. ಚರ್ಮ ಒಣಗುವುದು. ಯಕೃತ್‌ಗೆ ಹಾನಿ ಯಂತಹ ಅಪಾಯಗಳು ಇರುತ್ತವೆ.

**ವಿಟಮಿನ್ ಡಿ :** ವಿಟಮಿನ್ ಡಿಗೆ ಸೂರ್ಯನ ಕಿರಣಗಳೇ ಅತ್ಯುತ್ತಮ ಮೂಲ. ವಿಟಮಿನ್ ಡಿ ಕೊರತೆ. ಉಂಟಾದಾಗ ಪೂರಕಗಳ ಸೇವನೆಗೆ ವೈದ್ಯರು ಸಲಹೆ ನೀಡಬಹುದು. ಅದಿಲ್ಲದಿದ್ದರೆ, ಹೊಟ್ಟೆ ತೊಳೆಸುವುದು, ವಾಂತಿ, ಅಶಕ್ತತೆ ಕಾಡಬಹುದು. ಒಂದೊಮ್ಮೆ ಪೂರಕಗಳ ಮುಖಾಂತರ ವಿಟಮಿನ್ ಡಿ ದೇಹದಲ್ಲಿ ಹೆಚ್ಚಾದಲ್ಲಿ ರಕ್ತದಲ್ಲಿ ಕ್ಯಾಲಿಯಂ ಮಟ್ಟ ಏರಿಕೆ ಯಾಗಬಹುದು ಅಥವಾ ಕಿಡ್ನಿ ತೊಂದರೆಗಳು ಹೆಚ್ಚು ಕಾಡಬಹುದು.

**ವಿಟಮಿನ್ ಇ:** ವಿಟಮಿನ್ ಅಧಿಕವಾದರೆ ಆಗುವ ಅಡ್ಡ ಪರಿಣಾಮಗಳು ತೀವ್ರವಾಗುವ ಸಾಧ್ಯತೆ ಹೆಚ್ಚು. ಇದು ಕಾಡುವುದು ಆಂತರಿಕ ರಕ್ತಸ್ರಾವದ ರೂಪದಲ್ಲಿ. ನೈಸರ್ಗಿಕವಾಗಿ ರಕ್ತ ಹೆಪ್ಪುಗಟ್ಟುವ ಸಾಧ್ಯತೆಯಲ್ಲಿ ಹೆಚ್ಚುವರಿ ವಿಟಮಿನ್ ಇ ಅಡ್ಡಗಾಲು ಹಾಕುತ್ತದೆ. ಇದರಿಂದ ಹೆಮೊರೇಜ್‌ಗಳ ಭೀತಿ ಹೆಚ್ಚಬಹುದು. ಇದಲ್ಲದೆ, ದುಷ್ಪರಿಣಾಮ ಸೌಮ್ಯ ಸ್ವರೂಪದಲ್ಲಿದ್ದರೆ, ವಾಂತಿ, ಡಯರಿಯ, ಹೊಟ್ಟೆ ನೋವು, ತಲೆನೋವು, ಅಲರ್ಜಿಯ ಸೂಚನೆಗಳು ಕಾಡಬಹುದು.

**ವಿಟಮಿನ್ ಕೆ:** ಬೇರೆ ಜೀವಸತ್ವಗಳಿಗೆ ಹೋಲಿಸಿದರೆ ವಿಟಮಿನ್ ಕೆ ಪೂರಕಗಳ ಮೂಲಕ ದೇಹ ಸೇರುವುದು ತೀರಾ ವಿರಳ. ಆದಾಗ್ಯೂ ಕೆ ಜೀವಸತ್ವ ಹೆಚ್ಚಾದರೆ ಕೆಂಪು ರಕ್ತಕಣಗಳ ಮೇಲೆ ಪ್ರತಿಕೂಲ ಪರಿಣಾಮ ಬೀರಿ, ಯಕೃತ್ ಗೂ ತೊಂದರೆ ನೀಡಬಹುದು. ರಕ್ತ ನೀರಾಗುವಂಥ ಔಷಧಿ ಸೇವಿಸುವವರಲ್ಲಿ, ಈ ಔಷಧಿಯ ಪರಿಣಾಮದಲ್ಲೂ ವಿಟಮಿನ್ ಕೆ ಅಡ್ಡಗಾಲು ಹಾಕುತ್ತದೆ

**ವಿಟಮಿನ್ ಸಿ ಮತ್ತು ವಿಟಮಿನ್ ಬಿ :** ಈವರೆಗೆ ಹೇಳಿದ ಜೀವಸತ್ವಗಳೆಲ್ಲವೂ ಕೊಬ್ಬಿನಲ್ಲಿ ಕರಗುವಂಥವು. ಆದರೆ ವಿಟಮಿನ್ ಸಿ ಮತ್ತು ವಿಟಮಿನ್ ಬಿ ಎರಡೂ ಸಹ ನೀರಿನಲ್ಲಿ ಕರಗಬಲ್ಲ ಜೀವಸತ್ವಗಳು.

**ವಿಟಮಿನ್ ಸಿ:** ಆಸ್ಕಾರ್ಬಿಕ್ ಆಮ್ಲವೆಂದೂ ಕರೆಯಲಾಗುವ ವಿಟಮಿನ್ ಸಿ ಹೆಚ್ಚಾದರೆ ಸಾಮಾನ್ಯವಾಗಿ ಮೂತ್ರದ ಮೂಲಕ ದೇಹದಿಂದ ಹೊರಹೋಗುತ್ತದೆ. ಈ ಮಿತಿಯನ್ನೂ ಮೀರಿ ವಿಟಮಿನ್ ಸಿ ಸೇವಿಸಿದರೆ, ಜೀರ್ಣಾಂಗಗಳ ತೊಂದರೆ ಬಾಧಿಸಬಹುದು. ಇನ್ನೂ ಹೆಚ್ಚಾದರೆ ಮೂತ್ರಪಿಂಡಗಳಲ್ಲಿ ಕಲ್ಲುಗಳು ಉಂಟಾಗಬಹುದು.

# ಸನಾತನ ರಾಷ್ಟ್ರ ಶಂಖನಾದ
## ಮಹೋತ್ಸವಕ್ಕೆ 20 ಸಾವಿರ ಭಕ್ತರ ಉಪಸ್ಥಿತಿ



☛ ಉದಯವಾಹಿನಿ ಚಿತ್ರ

• ಉದಯವಾಹಿನಿ, ಫೊಂಡಾ, ಗೋವಾ

(ಸಚ್ಚಿದಾನಂದ ಪರಬ್ರಹ್ಮ ಡಾ. ಆಠವಲೆನಗರಿ) – ಸ್ವತಃ ಸಾಧನೆ ಮಾಡುವುದು ವ್ಯಷ್ಟಿ ಸಾಧನೆ, ಆದರೆ ಸಮಾಜವನ್ನು ಸಾಧನೆಯಲ್ಲಿ ತೊಡಗಿಸುವುದು ಸಮಷ್ಟಿ ಸಾಧನೆ. ಸನಾತನ ಸಂಸ್ಥೆಯು ಸಮಷ್ಟಿ ಸಾಧನೆಯನ್ನು ಕಲಿಸುತ್ತದೆ. ಅದಕ್ಕಾಗಿಯೇ ಇಂದು ಸನಾತನದ 131 ಸಾಧಕರು ಸಂತ ಪದವಿಯನ್ನು ಅಲಂಕರಿಸಿದ್ದಾರೆ ಮತ್ತು 1 ಸಾವಿರ ಸಾಧಕರು ಮುಂದಿನ 10 ವರ್ಷಗಳಲ್ಲಿ ಸಂತರಾಗಲಿದ್ದಾರೆ! ಸಮಾಜವೆಲ್ಲವೂ ಸಾತ್ವಿಕವಾದರೆ, ಹಿಂದೂ ರಾಷ್ಟ್ರದ ಸ್ಥಾಪನೆ ಶೀಘ್ರದಲ್ಲೇ ಆಗುತ್ತದೆ. ಹಿಂದೂ ರಾಷ್ಟ್ರದ ಸ್ಥಾಪನೆ ಸಮಷ್ಟಿ ಸಾಧನೆಯಾಗಿದೆ, ಅದಕ್ಕಾಗಿ ಎಲ್ಲರೂ ಸಾಧನೆ ಮಾಡಬೇಕು ಎಂದು ಹೇಳಲು ಸಮಾಜಕ್ಕೆ ಹೋಗಬೇಕು, ಎಂದು ಸನಾತನ ಸಂಸ್ಥೆಯ ಸಂಸ್ಥಾಪಕರಾದ ಸಚ್ಚಿದಾನಂದ ಪರಬ್ರಹ್ಮ ಡಾ. ಜಯಂತ ಬಾಳಾಜಿ ಆಠವಲೆ ಅವರು ಮಾರ್ಗದರ್ಶನ ಮಾಡಿದರು. ಅವರು ಗೋವಾ ಇಂಜಿನಿಯರಿಂಗ್ ಕಾಲೇಜಿನ ಮೈದಾನದಲ್ಲಿ ಸನಾತನ ರಾಷ್ಟ್ರ ಶಂಖನಾದ ಮಹೋತ್ಸವದಲ್ಲಿ ಮಾರ್ಗದರ್ಶನ ಮಾಡುತ್ತಿದ್ದರು. ಈ ಸಂದರ್ಭದಲ್ಲಿ 20 ಸಾವಿರಕ್ಕೂ ಹೆಚ್ಚು ಸಾಧಕರು ಮತ್ತು ಹಿಂದೂಗಳು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಸಚ್ಚಿದಾನಂದ ಪರಬ್ರಹ್ಮ ಡಾ. ಜಯಂತ ಆಠವಲೆ ಅವರ ಪತ್ನಿ ಡಾ. (ಸೌ.) ಕುಂದಾ ಜಯಂತ ಆಠವಲೆ ಅವರ ವಂದನೀಯ ಉಪಸ್ಥಿತಿ ಇತ್ತು.

**ವಿವಿಧ ಸಂಪ್ರದಾಯಗಳು, ಸಂತರು ಗಣ್ಯರಿಂದ ಸಚ್ಚಿದಾನಂದ ಪರಬ್ರಹ್ಮ ಡಾ. ಆಠವಲೆ ಅವರಿಗೆ ಸನ್ಮಾನ**

**ಇಂದೋರ್‌ನ ಶ್ರೀ ಸದ್ಗುರು ಅನಂತಾನಂದ ಸಾಯಿಶ್ ಶೈಕ್ಷಣಿಕ ಏವಂ ಪಾರಮಾರ್ಥಿಕ ಟ್ರಸ್ಟ್‌ನಿಂದ ಟ್ರಸ್ಟಿ ಶ್ರೀ. ಗಿರೀಶ್ ದೀಕ್ಷಿತ್, ಇತರ ಪದಾಧಿಕಾರಿಗಳು, ಪ.ಪೂ. ರಾಮಾನಂದ ಮಹಾರಾಜರ ಸೊಸೆ ಸೌ. ಶಿಲ್ಪಾ ನಿರಗುಡ್ಕರ್ ಅವರು ಸಚ್ಚಿದಾನಂದ ಪರಬ್ರಹ್ಮ ಡಾ. ಜಯಂತ ಆಠವಲೆ, ಅವರ ಪತ್ನಿ ಪೂ. (ಡಾ.) ಸೌ. ಕುಂದಾ ಆಠವಲೆ ಅವರನ್ನು ವಿಶೇಷವಾಗಿ ಸನ್ಮಾನಿಸಿದರು, ಸಂತ ಭಕ್ತರಾಜ ಮಹಾರಾಜ, ಪ.ಪೂ. ಅನಂತಾನಂದ ಸಾಯಿಶ್ ಅವರ ಭಾವಚಿತ್ರವಿರುವ ಬೆಳ್ಳಿಯ ನಾಣ್ಯವನ್ನು ಉಡುಗೊರೆಯಾಗಿ ನೀಡಿದರು. ಈ ಸಂದರ್ಭದಲ್ಲಿ ಅಂತರ್ಯೋಗ ಫೌಂಡೇಶನ್‌ನ ಅಧ್ಯಕ್ಷ ಆಚಾರ್ಯ ಉಪೇಂದ್ರಜಿ ಮತ್ತು ಸೌ. ನೀತಾ, ಹಾಗೂ ಭಾಗ್ಯನಗರದ ತಿರುಮಲ ತಿರುಪಮ್ ಕಂಪನಿಯ ಸಂಸ್ಥಾಪಕ ಶ್ರೀ. ನಂಗುನೇರಿ ಚಂದ್ರಶೇಖರ್ ಅವರು ಸಹ ಸಚ್ಚಿದಾನಂದ ಪರಬ್ರಹ್ಮ ಡಾ. ಆಠವಲೆ ಅವರನ್ನು ಸನ್ಮಾನಿಸಿದರು.**

**ಸಮಾಜದಲ್ಲಿ ಹೆಚ್ಚೆಚ್ಚು ಜನರು ಸಾತ್ವಿಕ ಮನೋ ಭಾವದವರಾದರೆ ಹಿಂದೂ ರಾಷ್ಟ್ರ ಖಚಿತ !**

ಸಮಾಜದ ವೈದ್ಯರು ಕೇವಲ ದೈಹಿಕ ಮತ್ತು ಮಾನಸಿಕ ಕಾಯಿಲೆಗಳಿಗೆ ಔಷಧ ನೀಡುತ್ತಾರೆ; ಆದರೆ ದುಷ್ಟ ಶಕ್ತಿಗಳ ತೊಂದರೆ ಸೇರಿದಂತೆ ಅನೇಕ ರೋಗಗಳು ಸ್ವಭಾವದೋಷ, ಪ್ರಾರಬ್ಧ, ಪೂರ್ವಜರ ತೊಂದರೆಗಳಿಂದ ಉಂಟಾಗುತ್ತವೆ. ಇದು ಅವರಿಗೆ ತಿಳಿದಿರುವುದಿಲ್ಲ. ಆದ್ದರಿಂದ ತೊಂದರೆಗಳಿಗೆ ಅವರಲ್ಲಿ ಯಾವುದೇ ಪರಿಹಾರಗಳಿಲ್ಲ. ಪರಿಣಾಮವಾಗಿ, ದುಷ್ಟ ಶಕ್ತಿಗಳ ತೊಂದರೆಯನ್ನು ನಿವಾರಿಸಲು ನಾಮಜಪ ಅಂದರೆ ಸಾಧನೆಯನ್ನು ಮಾಡಬೇಕು. 'ಹಿಂದೂ' ಎಂಬ ಪದದ ಅರ್ಥ 'ಹಿನಾನಿ ಗುಣಾನಿ ದುಷಯತಿ ಇತಿ ಹಿಂದೂ' ಅಂದರೆ ತನ್ನಲ್ಲಿರುವ ದೋಷಗಳನ್ನು ದೂರ ಮಾಡುತ್ತಾನೆ, ಅವನೇ ಹಿಂದೂ. ಸಮಾಜದಲ್ಲಿ ಹೆಚ್ಚೆಚ್ಚು ಜನರು ಸಾತ್ವಿಕ ಮನೋಭಾವದವರಾದರೆ, ಹಿಂದೂ ರಾಷ್ಟ್ರ ಖಚಿತವಾಗಿ ಬರುತ್ತದೆ. ಈಗ ಆಪತ್ಕಾಲ, ಮೂರನೇ ಮಹಾಯುದ್ಧ ಸಂಭವಿಸಲಿದೆ, ಇದಕ್ಕಾಗಿ ನಾವು ನಮ್ಮನ್ನು ಸಿದ್ಧಪಡಿಸಿಕೊಳ್ಳಬೇಕು. ಆಪತ್ಕಾಲದಲ್ಲಿ ಉಂಟಾಗುವ ಯುದ್ಧದಂತಹ ಪರಿಸ್ಥಿತಿಯಲ್ಲಿ ನಾಗರಿಕರು ವಿವಿಧ ತೊಂದರೆಗಳನ್ನು ಎದುರಿಸಬೇಕಾಗುತ್ತದೆ. ಆ ಸಮಯದಲ್ಲಿ ನಾವು ಅವರಿಗೆ ಸಹಾಯ ಮಾಡಬೇಕಾಗುತ್ತದೆ. ಅದಕ್ಕೆ ನಾವು ಈಗಿನಿಂದಲೇ ತಯಾರಿ ನಡೆಸಬೇಕು. ಈ ಸಿದ್ಧತೆಯೇ ಸಮಷ್ಟಿ ಸಾಧನೆ. ಸನಾತನ ರಾಷ್ಟ್ರದ ಸ್ಥಾಪನೆಯೇ ಹಿಂದೂ ರಾಷ್ಟ್ರದ ಸ್ಥಾಪನೆ ಎಂದು ಅವರು ಹೇಳಿದರು. ಈ ಸಂದರ್ಭದಲ್ಲಿ ಅನಂತಕೋಟಿ ಬ್ರಹ್ಮಾಂಡನಾಯಕ ರಾಜಾಧಿರಾಜ.. ಶ್ರೀ ಗುರುಕೃಪಾಧಿಪತಿ ಸಚ್ಚಿದಾನಂದ ಪರಬ್ರಹ್ಮ ಡಾ. ಜಯಂತ ಆಠವಲೆಜಿ ಕಿ ಜೈ ಎಂಬ ವಿಸ್ತೃತ ಬಿರುದಾವಳಿಯನ್ನು ವಾಚಿಸಲಾಯಿತು. ಸಚ್ಚಿದಾನಂದ ಪರಬ್ರಹ್ಮ ಡಾ. ಆಠವಲೆ ಅವರ ಹಿರಿಯ ಸಹೋದರ ಪೂ. ಅನಂತ ಆಠವಲೆ ಅವರು ತಮ್ಮ ಸಂದೇಶದಲ್ಲಿ, ಸಚ್ಚಿದಾನಂದ ಪರಬ್ರಹ್ಮ ಡಾ. ಆಠವಲೆ ಅವರ ಜನ್ಮದಿನದ ನಿಮಿತ್ತ ಎಲ್ಲಾ ಸಂಕಲ್ಪಗಳು, ವಿಶೇಷವಾಗಿ ಧರ್ಮ ಸಂಸ್ಥಾಪನೆ ಮತ್ತು ಸನಾತನ ರಾಷ್ಟ್ರ ಸ್ಥಾಪನೆಯ ಸಂಕಲ್ಪಗಳು ಸಿದ್ಧಿಸಲಿ ಎಂದು ಹಾರೈಸಿದರು. ಹಾಗೆಯೇ ಪೂ. (ಡಾ.) ಕುಂದಾ ಆಠವಲೆ ಅವರು, ಸನಾತನದ ಕಾರ್ಯಕ್ಕೆ ದೊರೆಯುತ್ತಿರುವ ಈ ಕೀರ್ತಿ ನಮ್ಮ ಗುರು ಪ.ಪೂ. ಭಕ್ತರಾಜ ಮಹಾರಾಜರ ಕೃಪೆಯ ಫಲವೇ ಆಗಿದೆ ಎಂದು ಹೇಳಿದರು.

# ಟ್ರೇಡಿಂಗ್ ಜಾಹೀರಾತು: ಟೆಕಿಗೆ ರೂ.2.39 ಕೋಟಿ ವಂಚನೆ

• ಉದಯವಾಹಿನಿ, ಬೆಂಗಳೂರು



☛ ಉದಯವಾಹಿನಿ ಚಿತ್ರ

ಷೇರು ಮಾರುಕಟ್ಟೆ ಜಾಹೀರಾತು ನಂಬಿ ಸಾಫ್ಟ್‌ವೇರ್ ಎಂಜಿನಿಯರ್ ರೊಬ್ಬರು ರೂ. 2.39 ಕೋಟಿ ಹೂಡಿಕೆ ಮಾಡಿ ವಂಚನೆಗೆ ಒಳಗಾಗಿದ್ದಾರೆ.

ಟೆಕಿ ನೀಡಿದ ದೂರಿನ ಮೇರೆಗೆ ವೈಟ್‌ಫೀಲ್ಡ್ ಸಿಇಎನ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಜನವರಿ 21ರಂದು 41 ವರ್ಷದ ಟೆಕಿ, ಫೇಸ್‌ಬುಕ್ ನೋಡುತ್ತಿದ್ದ ವೇಳೆ ಆಲಿಸ್ ಬ್ಲೂ ಎಂಬ ಟ್ರೇಡಿಂಗ್ ವ್ಯವಹಾರದ ಜಾಹೀರಾತು ಕಾಣಿಸಿಕೊಂಡಿತು. ಅದರ ಮೇಲೆ ಕ್ಲಿಕ್ ಮಾಡಿದಾಗ ಅಲಿಸ್ ಬ್ಲೂ ವಾಟ್ಸ್ ಆ್ಯಪ್ ಗ್ರೂಪ್‌ಗೆ ಜಾಯಿನ್ ಆಗಿದ್ದರು. ಇದರಲ್ಲಿ ಪೂಜಾ ಶೈನ್ ಎಂಬಾಕೆ ಟೆಕಿಗೆ ಕರೆ ಮಾಡಿ, ಷೇರು ಮಾರುಕಟ್ಟೆಯಲ್ಲಿ ಹೂಡಿಕೆ ಮಾಡಿದರೆ ಹೆಚ್ಚಿನ ಲಾಭಾಂಶ ಸಿಗಲಿದೆ ಎಂದು ನಂಬಿಸಿದ್ದಳು. ಆಕೆಯ ಸೂಚನೆಯಂತೆ ಲಿಂಕ್ ಬಳಸಿ ಅಪ್ಲಿಕೇಷನ್ ಡೌನ್ ಲೋಡ್ ಮಾಡಿಕೊಂಡು, ಮೊದಲು 50 ಸಾವಿರ ಹೂಡಿಕೆ ಮಾಡಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಹೆಚ್ಚಿನ ಹಣ ಹೂಡಿಕೆ ಮಾಡಿದರೆ ಅಧಿಕ ಕಮಿಷನ್ ಸಿಗಲಿದೆ ಎಂಬ ವಂಚಕರ ಮಾತು ನಂಬಿದ ಟೆಕಿ, ಅವರು ಸೂಚಿಸಿದ ವಿವಿಧ ಬ್ಯಾಂಕ್ ಖಾತೆಗೆ ಹಂತ ಹಂತವಾಗಿ ಹಣ ವರ್ಗಾವಣೆ ಮಾಡಿದ್ದರು. ಇದಕ್ಕೆ ಪ್ರತಿಯಾಗಿ ಅಪ್ಲಿಕೇಷನ್‌ನಲ್ಲಿ ಲಾಭಾಂಶ ಬಂದಿರುವುದರ ಬಗ್ಗೆ ತೋರಿಸಲಾಗಿತ್ತು ಎಂದು ಹೇಳಿದ್ದಾರೆ. ಲಾಭಾಂಶ ಪಡೆಯಲು ಟೆಕಿ ಪ್ರಯತ್ನಿಸಿದಾಗ ಸಾಧ್ಯವಾಗಲಿಲ್ಲ. ಈ ಬಗ್ಗೆ ಕರೆ ಮಾಡಿ ವಿಚಾರಿಸಿದಾಗ ಮತ್ತಷ್ಟು ಹಣ ಪಾವತಿ ಮಾಡಬೇಕಿದೆ ಎಂದು ವಂಚಕರು ಹೇಳಿದ್ದಾರೆ. ಆಗ ಮತ್ತೆ ಲಕ್ಷಾಂತರ ರೂಪಾಯಿ ಹಣ ವರ್ಗಾವಣೆ ಮಾಡಿದ್ದಾರೆ.

ಆಗಲೂ ಸಾಧ್ಯವಾಗಲಿಲ್ಲ. ಅಷ್ಟು ಹೊತ್ತಿಗೆ ರೂ. 2.39 ಕೋಟಿ ಹೂಡಿಕೆ ಮಾಡಲಾಗಿತ್ತು. ಹೂಡಿಕೆ ಬಗ್ಗೆ ಸಲಹೆ ಕೊಡುತ್ತಿದ್ದವರಿಗೆ ಕರೆ ಮಾಡಿದಾಗ ಅವರು ಸಂಪರ್ಕಕ್ಕೆ ಸಿಗಲಿಲ್ಲ ಎಂದು ತಿಳಿಸಿದ್ದಾರೆ. ಸಂತ್ರಸ್ತನ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಳ್ಳಲಾಗಿದೆ. ವಂಚಕರ ಬ್ಯಾಂಕ್ ಖಾತೆಗಳ ವಿವರ ಪಡೆದು ತನಿಖೆ ಕೈಗೊಳ್ಳಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ.

# ಸೂಕ್ತ ತನಿಖೆಗೆ ಪಂಜಾಬ್ ಸರ್ಕಾರಕ್ಕೆ ದಿನೇಶ್ ಗುಂಡೂರಾವ್ ಒತ್ತಾಯ

• ಉದಯವಾಹಿನಿ, ಬೆಂಗಳೂರು



ಧರ್ಮಸ್ಥಳ ಮೂಲದ ವಿದ್ಯಾರ್ಥಿನಿ ಆಕಾಂಕ್ಷ ಪಂಜಾಬ್ ನಲ್ಲಿ ಮೃತಪಟ್ಟಿರುವುದು ಅತ್ಯಂತ ನೋವಿನ ಸಂಗತಿ. ಆಕಾಂಕ್ಷ ನಿಗೂಢ ಸಾವಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಸೂಕ್ತ ತನಿಖೆ ನಡೆಸುಂತೆ ನಾನು ಪಂಜಾಬ್ ಸರ್ಕಾರವನ್ನು ಒತ್ತಾಯಿಸುತ್ತೇನೆ ಎಂದು ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಆಕಾಂಕ್ಷ ಸಾವಿನ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಇದೊಂದು ಅಸಹಜ ಸಾವು ಎಂಬುದು ಮೇಲ್ನೋಟಕ್ಕೆ ಎದ್ದು ಕಾಣುತ್ತದೆ.

ಉಪನ್ಯಾಸಕ ಮ್ಯಾಥ್ಯೂ ಅವರ ಕಿರುಕುಳದಿಂದ ಆಕಾಂಕ್ಷ ಸಾವಿಗೀಡಾಗಿದ್ದಾರೆ ಎಂದು ಅವರ ಕುಟುಂಬ ವರ್ಗದವರು ಆರೋಪಿಸಿದ್ದಾರೆ.

ಪ್ರಕರಣ ಕುರಿತು ನಾನು ರಾಜ್ಯ ಮುಖ್ಯ ಕಾರ್ಯದರ್ಶಿಯವರೊಂದಿಗೆ ಚರ್ಚೆ ನಡೆಸಿ ದ್ದೇನೆ ಎಂದು ಹೇಳಿಕೊಂಡಿದ್ದಾರೆ.

ಪಂಜಾಬ್ ಸರ್ಕಾರದೊಂದಿಗೆ ನಿರಂತರ ಸಂಪರ್ಕ ದಲ್ಲಿದ್ದು, ಆಕಾಂಕ್ಷ ಮೃತದೇಹವನ್ನು ಕುಟುಂಬ ವರ್ಗದವರಿಗೆ ಹಸ್ತಾಂತರಿಸುವ ನಿಟ್ಟಿನಲ್ಲಿ ಕ್ರಮ ವಹಿಸುವಂತೆ ಸೂಚನೆ ನೀಡಿದ್ದೇನೆ.

ಅಲ್ಲದೇ ಆಕಾಂಕ್ಷ ನಿಗೂಡ ಸಾವಿನ ಕುರಿತು ಸೂಕ್ತ ತನಿಖೆ ನಡೆಸುವ ನಿಟ್ಟಿನಲ್ಲಿ ಪಂಜಾಬ್ ಸರ್ಕಾರದ ಮುಖ್ಯಕಾರ್ಯದರ್ಶಿ ಅವರೊಂದಿಗೆ ಮಾತನಾಡುವಂತೆ ಸೂಚಿಸಿದ್ದೇನೆ. ಈ ನಿಟ್ಟಿನಲ್ಲಿ ಪಂಜಾಬ್ ಸರ್ಕಾರದ ಮುಖ್ಯ ಕಾರ್ಯದರ್ಶಿಯವರೊಂದಿಗೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಚರ್ಚೆ ನಡೆಸಿದ್ದಾರೆ ಎಂದು ತಿಳಿಸಿದ್ದಾರೆ. ಪಂಜಾಬ್‌ನ ಜಲಂಧರ್ ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಾಗಿದೆ. ಆಕಾಂಕ್ಷ ಅವರ ಕುಟುಂಬದ ಬೆಂಬಲಕ್ಕೆ ರಾಜ್ಯ ಸರ್ಕಾರ ನಿಲ್ಲಲಿದ್ದು, ಸರ್ಕಾರದಿಂದ ಅಗತ್ಯ ಸಹಕಾರ ಕಲ್ಪಿಸಲಾಗುವುದು ಎಂದು ಅವರು ಮಾಹಿತಿ ಹಂಚಿಕೊಂಡಿದ್ದಾರೆ.



**ಏನಿದು ಪ್ರಕರಣ:** ಧರ್ಮಸ್ಥಳದ ಬೊಳಿಯೂರು ನಿವಾಸಿ ಆಕಾಂಕ್ಷ ಎಸ್ ನಾಯರ್ 6 ತಿಂಗಳ ಹಿಂದೆ ದೆಹಲಿಯ ಸ್ಪೈಸ್ ಜೆಟ್ ಏರೋಸ್ಪೇಸ್‌ನಲ್ಲಿ ಕೆಲಸ ನಿರ್ವಹಿಸುತ್ತಿದ್ದಳು. ಹೆಚ್ಚಿನ ತರಬೇತಿಗೆ ಜರ್ಮನಿಗೆ ತೆರಳಲು ತಯಾರಿ ನಡೆಡಸಿದ್ದ ಆಕಾಂಕ್ಷ ಕೆಲವು ಶೈಕ್ಷಣಿಕ ದಾಖಲೆಗಳನ್ನು ಶುಕ್ರವಾರ ಪಂಜಾಬ್‌ನ ಲವ್ಲಿ ಪ್ರೊಫೆಷನಲ್ ಯೂನಿವರ್ಸಿಟಿಗೆ ತೆರಳಿದ್ದಳು. ಬಳಿಕ ಕಾಲೇಜಿನ ನಾಲ್ಕನೇ ಮಹಡಿಯಿಂದ ಬಿದ್ದು ಸಾವನ್ನಪ್ಪಿದ್ದಳು.

ಈ ಪ್ರಕರಣಕ್ಕೆ ಟ್ವಿಸ್ಟ್ ಸಿಕ್ಕಿದ್ದು, ಪ್ರೇಮ ವೈಫಲ್ಯದಿಂದ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎನ್ನಲಾಗಿದೆ. ಈ ಸಂಬಂಧ ಆತ್ಮಹತ್ಯೆಗೆ ಪ್ರೇರಣೆ ಆರೋಪದ ಮೇಲೆ ಯುನಿವರ್ಸಿಟಿಯ ಪ್ರೊಫೆಸರ್ ಮ್ಯಾಥ್ಯೂ ವಿರುದ್ಧ ಪಂಜಾಬ್‌ನ ಜಲಂಧರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕ ಕಾಲ | ಮಧ್ಯಾಹ್ನ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ನೀವು ಇತರರೊಡನೆ ನಿಮ್ಮ ಖುಷಿಯ ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದಂತೆ ನಿಮ್ಮ ಆರೋಗ್ಯ ಅರಳುತ್ತದೆ. ಆದರೆ ಇದನ್ನು ನಿರ್ಲಕ್ಷಿಸುವುದು ನಿಮಗೆ ತೊಂದರೆ ತರುತ್ತದೆ.

**ವೃಷಭ** ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ – ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ.

**ಮಿಥುನ** ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ಹಣದ ಕೊರತೆ ಇಂದು ನಿಮ್ಮ ಮನೆಯಲ್ಲಿ ಅಪಶ್ರುತಿಗೆ ಕಾರಣವಾಗಬಹುದು.

**ಕರ್ಕಾಟಕ** ನಿಮ್ಮ ಪ್ರೀತಿಯ ಸಂಬಂಧ ಮಾಂತ್ರಿಕ ತಿರುವು ಪಡೆಯುತ್ತಿದೆ. ಸುಮ್ಮನೇ ಅದನ್ನು ಅನುಭವಿಸಿ. ನಿಮ್ಮ ಪಾಲುದಾರರು ಅವರ ಮಾತು ನಡೆಸದಿದ್ದರೆ ಬೇಸರಿಸಿಕೊಳ್ಳಬೇಡಿ.

**ಸಿಂಹ** ಸ್ನೇಹಿತರೊಂದಿಗಿನ ಸಂಜೆ ಆಹ್ಲಾದಕರವಾಗಿದ್ದರೂ ವಿಪರೀತ ತಿನ್ನುವುದು ಮತ್ತು ಹಾರ್ಡ್ ಡ್ರಿಂಕ್ ಗಳ ಬಗ್ಗೆ ಎಚ್ಚರಿಕೆಯಿಂದಿರಿ. ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು.

**ಕನ್ಯಾ** ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ. ಕುಟುಂಬದ ಜೊತೆಗೆ ಸಾಮಾಜಿಕ ಚಟುವಟಿಕೆಗಳು ತುಂಬ ಸಂತೋಷಕರವಾಗಿರುತ್ತವೆ.

**ತುಲಾ** ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ನಿಮ್ಮ ಮೂಲಕ ಹಣವನ್ನು ಉಳಿಸಲು ಮಾಡಲಾಗಿರುವ ಪ್ರಯತ್ನವು ಇಂದು ವಿಫಲವಾಗಬಹುದು.

**ವೃಶ್ಚಿಕ** ನೀವಿದರಿಂದ ಏನೂ ಗಳಿಸುವುದಿಲ್ಲ. ನಿಮ್ಮ ಅಭ್ಯಾಸವನ್ನು ಬದಲಾಯಿಸಿಕೊಳ್ಳುವುದೊಳ್ಳೆಯದು. ನಿಮ್ಮ ಪ್ರೇಮಿಯ ಜೊತೆ ಹೊರಹೋದಾಗ ನಿಮ್ಮ ರೂಪ ಮತ್ತು ವರ್ತನೆಯಲ್ಲಿ ನೈಜತೆಯಿರಲಿ.

**ಧನಸ್ಸು** ಧ್ಯಾನ ಮತ್ತು ಯೋಗವನ್ನು ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗಾಗಿ ಆಚರಿಸಬೇಕು. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು.

**ಮಕರ** ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ.

**ಕುಂಭ** ನೀವು ನಿಮಗಾಗಿ ಸಾಕಷ್ಟು ಸಮಯ ಹೊಂದಿರುವುದರಿಂದ ಒಳ್ಳೆಯ ಆರೋಗ್ಯದ ಸಲುವಾಗಿ ಒಂದು ಧೀರ್ಘ ನಡಿಗೆಗೆ ಹೋಗಿ. ನೀವು ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ.

**ಮೀನ** ನೀವು ಪ್ರೀತಿಯ ಮನೋಭಾವದಲ್ಲಿರುತ್ತೀರಿ ಮತ್ತು ಅದಕ್ಕೆ ಅವಕಾಶಗಳೂ ಸಾಕಷ್ಟಿರುತ್ತವೆ. ಸಹೋದ್ಯೋಗಿಗಳು ನಿಮಗೆ ಕೆಲಸದಲ್ಲಿ ಕ್ರಿಯಾತ್ಮಕ ಮತ್ತು ಪ್ರಗತಿಪರ ಬದಲಾವಣೆಯನ್ನು ಮಾಡಲು ಬೆಂಬಲಿಸುತ್ತಾರೆ.

## ಅಗರಖೇಡ ಗ್ರಾ.ಪಂ ಗೆ ಬೀಗ ಹಾಕಿ ಪ್ರತಿಭಟನೆ

• ಉದಯವಾಹಿನಿ, ಇಂಡಿ

ತಾಲ್ಲೂಕಿನ ಅಗರಖೇಡ ಗ್ರಾ.ಪಂ ಗೆ ಗ್ರಾಮಸ್ಥರು ಬೀಗ ಹಾಕಿ, ಮುಳ್ಳು ಹಚ್ಚಿ, ಸಿಬ್ಬಂದಿಯನ್ನು ಹೊರಹಾಕಿ ಪ್ರತಿಭಟನೆ ನಡೆಸಿದರು.

ಗ್ರಾಮದ ವಾರ್ಡ ನಂ 1 ರಲ್ಲಿ ರಸ್ತೆ ಸುಧಾರಣೆ, ಇಲ್ಲದೆ ಜನರು ನಡೆದಾಡುವದಕ್ಕೂ ತುಂಬಾ ತೊಂದರೆಯಾಗುತ್ತಿದೆ. ಹಾಗೂ ಯಾವದೇ ವಾಹನಗಳನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಲು ಆಗುತ್ತಿಲ್ಲ. ಮತ್ತು ಕುಡಿಯುವ ನೀರಿನ ತೊಂದರೆ ಇದೆ, ವ್ಯವಸ್ಥೆ ಸರಿಯಾಗಿ ಇಲ್ಲ ಹೆಣ್ಣು ಮಕ್ಕಳು ಬಹಿರ್ದೇಶೆಗೆ ಹೋಗಲು ತುಂಬಾ ತೊಂದರೆ ಇದೆ. ಗ್ರಾಮಸ್ಥರು ಹಲವಾರು ಭಾರಿ ಮೌಖಿಕವಾಗಿ ಮತ್ತು ಲಿಖಿತ ರೂಪದಲ್ಲಿ ಮನವಿ ಮಾಡಿದರೂ ಗ್ರಾ.ಪಂ ಯವರು ಸ್ಪಂದಿಸುತ್ತಿಲ್ಲ. ಹೀಗಾಗಿ ಸಾರ್ವಜನಿಕರು ಗ್ರಾ.ಪಂ ಬೀಗ ಹಾಕಿ ರಸ್ತೆ ಸಂಚಾರ ಬಂದು ಮಾಡಿ ಪ್ರತಿಭಟನೆ ನಡೆಸಿದರು. ಬಾಬಾಗೌಡ ಪಾಟೀಲ, ಮೌಲಾ ಬೀಜಲಿ, ಪ್ರಭುಗೌಡ ಪಾಟೀಲ, ತುಕಾರಾಮ ಭೋಸಲೆ, ವಿನಾಯಕ ಪಾಟೀಲ, ತಿಪ್ಪಣ್ಣ ಕೌಲಗಿ, ಯಲ್ಲಾಲಿಂಗ ಕೌಲಗಿ, ಸಮೀರ ಕೋರಬು, ಶ್ರೀಶೈಲ ಪಾರೇಕರ, ಚಂದು ಪಾರೇಕರ,ಇಮಾಮಸಾಬ ಮುಲ್ಲಾ, ಅರುಗೌಡ ಪಾಟೀಲ,ಪ್ರಕಾಶ ಪಾಟೀಲ,ಕಾಂತು ಕೋಟಿ, ಇಮಾಮಸಾಬ ಕೊರಬು,ಆರಿಫ್ ಅಗರಖೇಡ, ಆರೀಫ್ ಮುಲ್ಲಾ ಮತ್ತಿತರಿದ್ದರು.



ಉದಯವಾಹಿನಿ ಚಿತ್ರ

**ಸಿಬ್ಬಂದಿಯನ್ನು ಹೊರಹಾಕಿ ಪ್ರತಿಭಟನೆ**

### ದಾವಣಗೆರೆ–ಚಿತ್ರದುರ್ಗ–ತುಮಕೂರು ನೂತನ ರೈಲ್ವೆ ಮಾರ್ಗದ ಕಾಮಗಾರಿಯ ಪ್ರಗತಿ ಪರಿಶೀಲನಾ ಸಭೆ

## ಹಿರಿಯೂರು–ಚಳ್ಳಕೆರೆ ಹೊಸ ರೈಲ್ವೆ ಮಾರ್ಗಕ್ಕೆ ಮನವಿ

• ಉದಯವಾಹಿನಿ, ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನಿಂದ ಚಳ್ಳಕೆರೆ ತಾಲ್ಲೂಕ್ಲಿಗೆ ಹೊಸದಾಗಿ ರೈಲ್ವೆ ಸಂಪರ್ಕ ಕಲ್ಪಿಸಲು ಹೊಸ ರೈಲ್ವೇ ಮಾರ್ಗ ಯೋಜನೆ ರೂಪಿಸಿ ಅನುಷ್ಠಾನಗೊಳಿಸಬೇಕು ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಮನವಿ ಮಾಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕೇಂದ್ರ ರೈಲ್ವೆ ಖಾತೆ ಹಾಗೂ ಜಲಶಕ್ತಿ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರ ಅಧ್ಯಕ್ಷತೆಯಲ್ಲಿ ಜರುಗಿದ ದಾವಣಗೆರೆ–ಚಿತ್ರದುರ್ಗ–ತುಮಕೂರು ನೂತನ ರೈಲ್ವೆ ಮಾರ್ಗದ ಕಾಮಗಾರಿಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಅವರು ಈ ಮನವಿ ಸಲ್ಲಿಸಿದರು.

ಚಿತ್ರದುರ್ಗ ಜಿಲ್ಲೆಯಲ್ಲಿ ಹೊಸದಾಗಿ ದಾವಣಗೆರೆ – ಚಿತ್ರದುರ್ಗ–ತುಮಕೂರು ನೇರ ರೈಲ್ವೇ ಯೋಜನೆಯ ಕಾಮಗಾರಿಯು ಪ್ರಾರಂಭವಾಗಿರುವುದು ಜಿಲ್ಲೆಯ ಜನತೆಗೆ ಸಂತೋಷದ ವಿಷಯವಾಗಿರುತ್ತದೆ.

ಈ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿಗೆ ರೈಲ್ವೇ ಸಂಪರ್ಕ ಕಲ್ಪಿಸಲಾಗುತ್ತಿದ್ದು, ಅದೇ ರೀತಿ ಚಿತ್ರದುರ್ಗ ಜಿಲ್ಲೆಯ, ಹೊಳಲ್ಕೆರೆ, ಹೊಸದುರ್ಗ ಮತ್ತು ಚಳ್ಳಕೆರೆ ತಾಲ್ಲೂಕಿಗೆ ಈಗಾಗಲೇ ವಿವಿಧ ರೀತಿಯಲ್ಲಿ ರೈಲ್ವೇ ಸಂಪರ್ಕ ಕಲ್ಪಿಸಲಾಗಿದ್ದು, ಹಿರಿಯೂರು ತಾಲ್ಲೂಕಿನಿಂದ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿಗೆ ಇದುವರೆವಿಗೂ ಯಾವುದೇ ರೈಲ್ವೆ ಸಂಪರ್ಕ ಕಲ್ಪಿಸಿರುವುದಿಲ್ಲ. ಇದರಿಂದ ಚಳ್ಳಕೆರೆ ಮತ್ತು ಹಿರಿಯೂರು ತಾಲ್ಲೂಕಿನ ಮಧ್ಯ ಭಾಗದ ಸಾರ್ವಜನಿಕರ, ರೈತರ ಉತ್ಪನ್ನಗಳಿಗೆ ಹಾಗೂ ಇತರ ಕೃಷಿಯೇತರ ಉತ್ಪನ್ನಗಳಿಗೆ ಸಾಗಣೆ ಮಾಡಲು ತೊಂದರೆಯಾಗುತ್ತಿದ್ದು ಅಲ್ಲದೇ ಸಾರ್ವಜನಿರು ಸಹ ರೈಲ್ವೆ ಸೇವೆಯಿಂದ ವಂಚಿತರಾಗಿದ್ದು, ಅವರು ಬೆಂಗಳೂರಿಗೆ ಮತ್ತು ಉತ್ತರ ಭಾರತದ ನಗರಗಳಿಗೆ ಸಂಪರ್ಕ ಕೈಗೊಳ್ಳಬೇಕಾದಲ್ಲಿ ಚಳ್ಳಕೆರೆಯಿಂದ ಬಸ್ ಮೂಲಕ ಬೆಂಗಳೂರಿಗೆ ತೆರಳಿ ಅಲ್ಲಿಂದ ಉತ್ತರ ಭಾರತದ ನಗರಗಳಿಗೆ ರೈಲು ಮೂಲಕ ತೆರಳುತ್ತಿದ್ದು ಇದರಿಂದ ಅಧಿಕ ಆರ್ಥಿಕ ವೆಚ್ಚವಾಗುತ್ತಿದೆ. ಹೀಗಾಗಿ ಚಳ್ಳಕೆರೆ ಹಾಗೂ ಹಿರಿಯೂರು ಮಧ್ಯ ಭಾಗದ ಸಾರ್ವಜನಿಕರಿಗೆ ಹಾಗೂ ರೈತರಿಗೆ ಮತ್ತು ಮಕ್ಕಳ ಉನ್ನತ ವಿದ್ಯಾಭ್ಯಾಸಕ್ಕೆ ಅನುಕೂಲ ಕಲ್ಪಿಸುವ ದೃಷ್ಟಿಯಿಂದ ಹಿರಿಯೂರು ತಾಲ್ಲೂಕಿನಿಂದ ಚಿತ್ರುದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿಗೆ ಹೊಸದಾಗಿ ರೈಲ್ವೇ ಸಂಪರ್ಕ ಕಲ್ಪಿಸಲು ಹೊಸ ರೈಲ್ವೇ ಮಾರ್ಗ ಯೋಜನೆ ರೂಪಿಸುವುದು ಅತ್ಯವ್ಯಶಕವಾಗಿದೆ.

ಈ ಸಂದರ್ಭದಲ್ಲಿ ಸಂಸದ ಗೋವಿಂದ ಎಂ. ಕಾರಜೋಳ, ಶಾಸಕರಾದ ಟಿ.ರಘುಮೂರ್ತಿ, ಡಾ.ಎಂ.ಚಂದ್ರಪ್ಪ, ಕೆ.ಸಿ.ವೀರೇಂದ್ರ ಪಪ್ಪಿ, ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ರೈಲ್ವೆ ಇಲಾಖೆ ಮುಖ್ಯ ಆಡಳಿತಾಧಿಕಾರಿ (ನಿರ್ಮಾಣ) ಅಜಯ್ ಶರ್ಮಾ, ವಿಭಾಗೀಯ ರೈಲ್ವೆ ವ್ಯವಸ್ಥಾಪಕ (ಡಿಜಿಎಂ) ಮುದಿತ್ ಮಿತ್ತಲ್, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಷಿ, ನೇರ ರೈಲ್ವೆ ಯೋಜನೆ ವಿಶೇಷ ಭೂಸ್ವಾಧೀನಾಧಿಕಾರಿ ವೆಂಕಟೇಶ್, ಸೇರಿದಂತ ರೈಲ್ವೆ ಇಲಾಖೆ ಅಧಿಕಾರಿಗಳು ಇದ್ದರು.



ಉದಯವಾಹಿನಿ ಚಿತ್ರ

**ರೈಲ್ವೆ ಕಾರ್ಗೋ ಕಾರಿಡಾರ್ ನಿರ್ಮಾಣಕ್ಕೆ ಕ್ರಮ**

> **ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನಿಂದ ಚಳ್ಳಕೆರೆ ತಾಲ್ಲೂಕಿಗೆ ಹೊಸದಾಗಿ ರೈಲ್ವೇ ಸಂಪರ್ಕ ಕಲ್ಪಿಸಲು ಹೊಸ ರೈಲ್ವೆ ಮಾರ್ಗ ಯೋಜನೆ ರೂಪಿಸಿ ತುರ್ತಾಗಿ ಅನುಷ್ಟಾನಗೊಳಿಸುವ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳವಂತೆ ಸಚಿವ ಡಿ. ಸುಧಾಕರ್ ಅವರು ಮನವಿ ಮಾಡಿದರು.**

**ಭರವಸೆ**

**ಚಳ್ಳಕೆರೆ ಶಾಸಕ ಟಿ. ರಘುಮೂರ್ತಿ ಅವರು ಕೂಡ ಇದೇ ವಿಷಯದ ಬಗ್ಗೆ ಕೇಂದ್ರ ರೈಲ್ವೆ ಸಚಿವ ವಿ. ಸೋಮಣ್ಣ ಅವರಿಗೆ ಮನವಿ ಮಾಡಿ, ಹಿರಿಯೂರು–ಚಳ್ಳಕೆರೆ ನೂತನ ರೈಲ್ವೆ ಮಾರ್ಗ ಕೈಗೊಳ್ಳಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿದರು. ಮನವಿ ಸ್ವೀಕರಿಸಿದ ಸಚಿವ ಸೋಮಣ್ಣ ಪ್ರತಿಕ್ರಿಯಿಸಿ, ಈ ಕುರಿತು ರೈಲ್ವೆ ಅಧಿಕಾರಿಗಳೊಂದಿಗೆ ಸಾಧ್ಯಾಸಾಧ್ಯತೆಗಳ ಬಗ್ಗೆ ಪರಿಶೀಲಿಸಿ, ರೈಲ್ವೆ ಕಾರ್ಗೋ ಕಾರಿಡಾರ್ ನಿರ್ಮಾಣಕ್ಕೆ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.**

## ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶಕ್ಕೆ ಅನ್ಲೈನ್ ಅರ್ಜಿ ಅಹ್ವಾನ

• ಉದಯವಾಹಿನಿ, ಚಿಂಚೋಳಿ



ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ 2025–26ನೇ ಸಾಲಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿಧ್ಯಾರ್ಥಿಗಳಿಗೆ ಆನ್ಲೈನ್ ಅರ್ಜಿ ಅಹ್ವಾನಿಸಲಾಗಿದೆ ಎಂದು ತಾಲ್ಲೂಕಾ ಬಿಸಿಎಂ ಕಲ್ಯಾಣಾಧಿಕಾರಿ ಅನುಸೋಯಾ ಚವ್ಹಾಣ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟನೆ ಹೊರಡಿಸಿದ ಅವರು,ಈಗಾಗಲೇ ಇದನ್ನು ಪ್ರಚಾರಪಡಿಸಲು ಎಲ್ಲಾ ಸರ್ಕಾರಿ ಶಾಲೆಗಳ ನಾಮಫಲಕಗಳಲ್ಲಿ ಪ್ರಕಟನೆ ಅಂಟಿಸಲು ಇಲಾಖೆಯ ಜಿಲ್ಲೆಯ ಅಧಿಕಾರಿಗಳು ಸೂಚಿಸಲಾಗಿದೆ. ಮೇ 16ರಿಂದ ಜೂನ್ 16ರವರೆಗೆ ಹೊಸ ವಿಧ್ಯಾರ್ಥಿಗಳು ಆನ್ಲೈನ್ನಲ್ಲಿ ಅರ್ಜಿ ಸಲ್ಲಿಸಬಹುದು,ಆನ್ಲೈನ್ ಬಂದಿರುವ ಅರ್ಜಿಗಳು ಜೂನ್ 20ರಂದು ತಾಲ್ಲೂಕಾ ಬಿಸಿಎಂ ಕಲ್ಯಾಣಾಧಿಕಾರಿಗಳು ಪರಿಶೀಲನೆ ಮಾಡಲಿದ್ದಾರೆ. ಜೂನ್ 23 ರಂದು ತಾಲ್ಲೂಕಾ ಸಮಿತಿ ಮೂಲಕ ಆಯ್ಕೆಯಾದ ವಿದ್ಯಾರ್ಥಿಗಳ ಆಯ್ಕೆ ಪಟ್ಟಿ ಪ್ರಕಟ ಮಾಡಲಿದ್ದೇವೆ,ಜೂನ್ 30ರಂದು ಆಯ್ಕೆಯಾದ ವಿಧ್ಯಾರ್ಥಿಗಳು ವಿಧ್ಯಾರ್ಥಿ ನಿಲಯಗಳಿಗೆ ಪ್ರವೇಶ ಪಡೆಯಲು ನಿಗಧಿಪಡಿಸಲಾಗಿದೆ ಎಂದರು.

## ಸಬ್ ರಿಜಿಸ್ಟರ್ ಕಚೇರಿಯಲ್ಲಿ ತುಂಬಿರುವ ಭ್ರಷ್ಟಾಚಾರ ಮುಕ್ತ ಯಾವಾಗ

• ಉದಯವಾಹಿನಿ, ಬಳ್ಳಾರಿ



ಭಷ್ಟಾಚಾರ ಮುಕ್ತ ಬಳ್ಳಾರಿ ಮಾಡುವುದಾಗಿ ಸ್ಥಳೀಯ ಶಾಸಕರು ಹೇಳಿದಾಗ ಸಂತೋಷವಾಗಿತ್ತು. ಆದರೆ ಅವರ ಆಡಳಿತದಲ್ಲಿ, ಮರಳು, ಸಬ್ ರಿಜಿಸ್ಟರ್ ಕಚೇರಿ, ಆರ್ ಟಿ ಓ ಕಚೇರಿ ಎಲ್ಲದರಲ್ಲೂ ಭ್ರಷ್ಟಾಚಾರ ತುಂಬಿ ತುಳುಕುತ್ತಿದೆಂದು ಮಾಜಿ ಶಾಸಕ ಗಾಲಿ ಸೋಮಶೇಖರ್ ರೆಡ್ಡಿ ಆರೋಪಿಸಿದ್ದಾರೆ.

ಅವರಿಂದು ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿ ಮಾತನಾಡುತ್ತ. ಕನಿಷ್ಟ ಪಕ್ಷ ನಗರದ ರಸ್ತೆಗಳ ಗುಂಡಿಗಳನ್ನು ಮುಚ್ಚುತ್ತಿಲ್ಲ. ಉಸ್ತುವಾರಿ ಸಚಿವರನ್ನು ಹುಡುಕಬೇಕಿದೆ. ಕಳೆದ ಎಂಟು ತಿಂಗಳಿಂದ ಇತ್ತ ತಿರುಗಿ ನೀಡುತ್ತಿಲ್ಲ. ಸ್ಥಳೀಯ ಶಾಸಕರು ಇದ್ದ ಸರ್ಕಲ್‌ಗಳನ್ನು ತೆಗೆಯುವುದು ಹೊಸದಾಗಿ ಮಾಡುವುದು ಇದು ತೊಗಲಕ್ ರೀತಿಯ ಸರ್ಕಾರ ಆಗಿದೆ ಎಂದು ಭರತ್ ರೆಡ್ಡಿ ಹೆಸರೇಳದೆ ಟೀಕಿಸಿದರು. ಬುಡಾದಲ್ಲಿ ನಡೆದ ಹಗರಣದಿಂದ ರಿಯಲ್ ಎಸ್ಟೇಟ್ ನವರು ಆತ್ಮಹತ್ಯೆ ಮಾಡಿಕೊಳ್ಳುವ ಪರಿಸ್ಥಿತಿ ಬಂದಿದೆ.

ಶೂನ್ಯ ಅಭಿವೃದ್ಧಿಯ ಈ ಸರ್ಕಾರದಿಂದ ಮುಂದೆಯೂ ಅಭಿವೃದ್ಧಿ ನಿರೀಕ್ಷೆ ಇಲ್ಲ. ಅವರವರ ಮನಸ್ತಾಪದಿಂದ ಸರ್ಕಾರ ಬಿದ್ದರೆ ಒಳಿತು ಎಂದರು.

## ಪುಸ್ತಕ ಗೋದಾಮಿಗೆ ಬೆಂಕಿ: 2 ಲಕ್ಷ ಪುಸ್ತಕಗಳು ಭಸ್ಮ

• ಉದಯವಾಹಿನಿ, ಕಲಬುರಗಿ

ಆಳಂದ ಪಟ್ಟಣದಲ್ಲಿ ಶಿಕ್ಷಣ ಇಲಾಖೆಗೆ ಸೇರಿದ ಪುಸ್ತಕ ಗೋದಾಮಿಗೆ ಮಧ್ಯಾಹ್ನ ಬೆಂಕಿ ತಗುಲಿದ ಘಟನೆ ನಡೆದಿದೆ. ಪ್ರಸಕ್ತ ಸಾಲಿಗೆ 4ರಿಂದ 8ನೇ ತರಗತಿಗೆ ವಿವಿಧ ಶಾಲೆಗಳಿಗೆ ವಿತರಣೆಗಾಗಿ ದಾಸ್ತಾನು ಮಾಡಿದ್ದ ಪುಸ್ತಕ ಕೋಣೆಗೆ ಬೆಂಕಿ ತಗುಲಿ ಭಾರೀ ನಷ್ಟವಾಗಿದೆ. ಘಟನೆ ಯಲ್ಲಿ ಒಂದು ಕೋಣೆಯಲ್ಲಿನ ಸುಮಾರು 2 ಲಕ್ಷಕ್ಕೂ ಅಧಿಕ ಪುಸ್ತಕಗಳು ಸಂಪೂರ್ಣವಾಗಿ ಸುಟ್ಟು ಭಸ್ಮವಾಗಿದ್ದು. ಒಟ್ಟು 1 ಕೋಟಿ ರೂ.ಗೂ ಹೆಚ್ಚಿನ ನಷ್ಟ ಸಂಭವಿಸಿದೆ ಎಂದು ಅಂದಾಜಿಸಲಾಗಿದೆ. ಅಲ್ಲದೆ ಇನ್ನೊಂದು ಕೋಣೆಯಲ್ಲಿ ಪುಸ್ತಕಗಳು ಸುರಕ್ಷಿತವಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.



ಉದಯವಾಹಿನಿ ಚಿತ್ರ

ಘಟನೆಯ ಸುದ್ದಿ ತಿಳಿಯುತ್ತಿದ್ದಂತೆ ಸ್ಥಳೀಯ ಅಗ್ನಿ ಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸಲು ಪ್ರಯತ್ನ ನಡೆಸಿದರೂ, ಬೆಂಕಿಯ ತೀವ್ರತೆಯಿಂದಾಗಿ ಯಶಸ್ವಿಯಾಗಲಿಲ್ಲ. ಶಾಲೆಗಳಿಗೆ ವಿತರಣೆಯಾಗಬೇಕಿದ್ದ ಪಠ್ಯಪುಸ್ತಕಗಳು, ಕಲಿಕಾ ಸಾಮಗ್ರಿಗಳು ಮತ್ತು ಇತರ ಶೈಕ್ಷಣಿಕ ದಾಖಲೆಗಳು ಬೆಂಕಿಗೆ ಆಹುತಿಯಾಗಿವೆ ಎನ್ನಲಾಗಿದೆ.

## ವಿವಿಧ ಅಭಿವೃದ್ಧಿ ಕಾಮಗಾರಿಗೆ ಕೆ.ಸಿ. ವೀರೇಂದ್ರ ಪಪ್ಪಿ ಚಾಲನೆ

• ಉದಯವಾಹಿನಿ, ಚಿತ್ರದುರ್ಗ

ಚಿತ್ರದುರ್ಗ ನಗರಸಭೆಯ ಘನತ್ಯಾಜ್ಯ ವಸ್ತು ವಿಲೇವಾರಿ ಘಟಕ ನಿರ್ಮಾಣ ಹಾಗೂ ವಾರ್ಡ್ ನಂ. 35ರಲ್ಲಿನ ವಿವಿಧ ಮೂಲಭೂತ ಸೌಕರ್ಯ ನಿರ್ಮಾಣದ ಕಾಮಗಾರಿಗಳಿಗೆ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅವರು ಚಾಲನೆ ನೀಡಿದರು.

ನಗರಸಭೆಯ ಘನತ್ಯಾಜ್ಯ ವಸ್ತು ವಿಲೇವಾರಿ ಘಟಕದಲ್ಲಿ 3.22 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸುತ್ತಿರುವ ಒಣ ತ್ಯಾಜ್ಯ ಸಂಸ್ಕರಣಾ ಘಟಕದ ಎಂಆರ್ಎಫ್(Material Recovery Fascility) ಕಾಮಗಾರಿಗೆ ಶಾಸಕ ವೀರೇಂದ್ರ ಪಪ್ಪಿ ಅವರು ಗುದ್ದಲಿ ಪೂಜೆ ನೆರವೇರಿಸಿದರು. ಒಣ ತ್ಯಾಜ್ಯ ವಸ್ತು ಸಂಸ್ಕರಣೆ ಘಟಕ ನಿರ್ಮಾಣವಾದ ನಂತರ, ಪ್ರತಿದಿನ ನಗರ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ಒಣ ತ್ಯಾಜ್ಯದಲ್ಲಿ ಮರು ಬಳಕೆ ವಸ್ತುಗಳಾದ ಪ್ಲಾಸ್ಟಿಕ್ ಕವರ್, ನ್ಯೂಸ್ ಪೇಪರ್, ಪ್ಲಾಸ್ಟಿಕ್ ಬಾಟಲ್, ರಟ್ಟು ಕ್ಯಾನ್, ಲೋಹದ ವಸ್ತುಗಳು ಇತ್ಯಾದಿಗಳನ್ನು 20 ಹೆಚ್ಚು ವಿಧವಾಗಿ ಇಲ್ಲಿ ವಿಂಗಡಿಸಲಾಗುವುದು. ಪ್ರಸ್ತುತ ಘನತ್ಯಾಜ್ಯ ವಸ್ತು ವಿಲೇವಾರಿ ಘಟಕದಲ್ಲಿ ಸುಮಾರು 20 ವರ್ಷಗಳಿಂದ ಶೇಖರಣೆಯಾಗಿರುವ ಅಂದಾಜು 90 ಸಾವಿರ ಟನ್ ಗಳಷ್ಟು ತ್ಯಾಜ್ಯವನ್ನು ಸಂಸ್ಕರಿಸಿ ವಿಲೇವಾರಿ ಮಾಡಲು ರೂ.755 ಲಕ್ಷಗಳಿಗೆ ಟೆಂಡರ್ ಕರೆದಿದ್ದು, ಅನುಮೋದನೆಯ ಹಂತದಲ್ಲಿರುತ್ತದೆ. ಅನುಮೋದನೆಯ ನಂತರ ಈಗಾಗಲೇ ಸಂಗ್ರಹವಾಗಿರುವ ಘನತ್ಯಾಜ್ಯ ಒಂದು ವರ್ಷದಲ್ಲಿ ವಿಲೇಗೊಳಿಸಲಾಗುವುದು.

ಇದರಿಂದ ಈಗಾಗಲೇ ಸಂಗ್ರಹವಾಗಿರುವ ಸುಮಾರು 10 ಎಕರೆಯಷ್ಟು ಜಾಗ ಮರು ಉಪಯೋಗಕ್ಕೆ ಬಳಸಬಹುದಾಗಿದೆ.

ಒಣ ತ್ಯಾಜ್ಯ ವಸ್ತು ವಿಲೇವಾರಿ ಘಟಕ ಪ್ರಾರಂಭವಾದ ನಂತರ ತ್ಯಾಜ್ಯವು ಶೇಖರಣೆಯಾಗದಂತೆ ಸಂಪೂರ್ಣವಾಗಿ ವಿಂಗಡಿಸಿ ಸಂಸ್ಕರಿಸಿ ಪರಿಸರ ಮಾಲಿನ್ಯವಾಗದಂತೆ ವಿಲೇವಾರಿ ಮಾಡಲಾಗುವುದು ಎಂದು ಸಹಾಯಕ ಕಾರ್ಯಪಾಲಕ ಅಭಿಯಂತರ (ಪರಿಸರ) ಜೆ. ಜಾಫರ್ ಸಾಬ್ ಇವರು ಶಾಸಕರಿಗೆ ಮಾಹಿತಿ ನೀಡಿದರು.

ಪೌರಾಯುಕ್ತೆ ಎಂ.ರೇಣುಕಾ, ನಗರಸಭೆ ಸದಸ್ಯ ಹೆಚ್.ಎನ್.ಮಂಜುನಾಥ, ಸಹಾಯಕ ಕಾರ್ಯಪಾಲಕ ಅಭಿಯಂತರರಾದ ರಾಜು, ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಸೈಯದ್ ನಸ್ರುಲ್ಲಾ, ನಗರಸಭೆ ಸದಸ್ಯರುಗಳಾದ ಎಸ್. ಭಾಸ್ಕರ್ ರವರು, ತಾರಕೇಶ್ವರಿ, ಗೋಪ್ಪೆ ಮಂಜುನಾಥ, ಮೊಹಮ್ಮದ್ ದಾವುದ್, ಎಸ್ ಜಯಪ್ಪ ಹಾಗೂ ನಾಮ ನಿರ್ದೇಶಿತ ಸದಸ್ಯ ಶಬ್ಬೀರ್ ಸೇರಿದಂತೆ ನಗರಸಭೆಯ ಸಿಬ್ಬಂದಿ ವರ್ಗದವರು ಹಾಗೂ ಸ್ಥಳೀಯ ಸಾರ್ವಜನಿಕರು ಹಾಜರಿದ್ದರು.



ಉದಯವಾಹಿನಿ ಚಿತ್ರ

**50 ಲಕ್ಷ ರೂ.ಅನುದಾನ**

**ಬಳಿಕ, 2023– 24 ನೇ ಸಾಲಿನ ಮುಖ್ಯಮಂತ್ರಿಗಳ ವಿಶೇಷ ಅನುದಾನದ ಸುಮಾರು 50 ಲಕ್ಷ ರೂ.ಗಳ ಅನುದಾನದಲ್ಲಿ ಸಾರ್ವಜನಿಕರಿಗೆ ಮೂಲಭೂತ ಸೌಕರ್ಯ ಕಲ್ಪಿಸುವ ಉದ್ದೇಶದಿಂದ ಅನುಮೋದನೆಯಾದ ಸಿಸಿ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಗೆ ವಾರ್ಡ್ ನಂಬರ್ 35ರಲ್ಲಿ ಶಾಸಕ ವೀರೇಂದ್ರ ಪಪ್ಪಿ ಅವರು ಗುದ್ದಲಿ ಪೂಜೆ ನೆರವೇರಿಸಿದರು.**

## ಹೆಚ್ಚಿದ ಒಂಟಿ ಸಲಗದ ಹಾವಳಿ

• ಉದಯವಾಹಿನಿ, ನರಸಿಂಹರಾಜಪುರ

ತಾಲ್ಲೂಕಿನ ಕಡಹಿನಬೈಲು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಹಲವು ದಿನಗಳಿಂದ ಒಂಟಿ ಸಲಗದ ಹಾವಳಿ ಹೆಚ್ಚಾಗಿದೆ ಎಂದು ಗ್ರಾಮಸ್ಥರು ದೂರಿದ್ದಾರೆ.

ಹಗಲಿನಲ್ಲಿ ಕಾಡಿನಲ್ಲಿ ಸೇರಿಕೊಳ್ಳುವ ಒಂಟಿ ಸಲಗವು ರಾತ್ರಿಯಾಗುತ್ತಿದ್ದಂತೆ ಗ್ರಾಮಸ್ಥರ ಮನೆ ಅಂಗಳಕ್ಕೆ ಬಂದು ದಾಂಧಲೆ ಮಾಡುತ್ತದೆ. ಮನೆ ಸುತ್ತಮುತ್ತಲಿನ ಬಾಳೆ, ತೆಂಗು, ಹಲಸಿನ ಬೆಳೆಯನ್ನು ನಾಶ ಮಾಡುತ್ತಿದೆ. ಮನೆಯ ಬಾಗಿಲನ್ನೂ ತಳ್ಳಿ ಭಯಗೊಳಿಸುತ್ತದೆ ಎಂದು ಗ್ರಾಮಸ್ಥರು ತಿಳಿಸಿದರು.

ಗ್ರಾಮದ ವ್ಯಾಪ್ತಿಯ ಅರಣ್ಯದಲ್ಲಿ 10ಕ್ಕೂ ಹೆಚ್ಚು ಕಾಡಾನೆಗಳ ಹಿಂಡು ಇದ್ದು, ಅವುಗಳು ತೊಂದರೆ ನೀಡುತ್ತಿಲ್ಲ. ಒಂಟಿ ಸಲಗದ ಇವುಗಳ ಜೊತೆಗೂ ಸೇರುತ್ತಿಲ್ಲ. ಮಡಬೂರು ಗ್ರಾಮದಲ್ಲಿ ರೈತರೊಬ್ಬರನ್ನು ಇದೇ ಒಂಟಿ ಸಲಗ ಕೊಂದು ಹಾಕಿದ ಎಂದು ಗ್ರಾಮಸ್ಥರು ತಿಳಿಸಿದ್ದಾರೆ. ಅರಣ್ಯ ಇಲಾಖೆಯವರು ಕಾಡಾನೆಗಳನ್ನು ಅಭಯಾರಣ್ಯಕ್ಕೆ ಓಡಿಸಿ ಸಮಸ್ಯೆ ಬಗೆಹರಿಸಬೇಕೆಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ. ಮುದುಕೂರು ಗ್ರಾಮದಿಂದ ಕಾಡಾನೆಗಳನ್ನು ಅಭಯಾರಣ್ಯದತ್ತ ಓಡಿಸಲು ಕ್ರಮಕೈಗೊಳ್ಳಲಾಗಿದೆ. ಒಂಟಿ ಸಲಗವನ್ನು ಓಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ವಲಯ ಅರಣ್ಯಾಧಿಕಾರಿ ಪ್ರವೀಣ್ ಕುಮಾರ್ ತಿಳಿಸಿದರು.

## 4 ತಿಂಗಳು ಸೈಂಟ್ ಮೇರಿಸ್‌ಗೆ ಪ್ರವೇಶ ನಿಷೇಧ

• ಉದಯವಾಹಿನಿ, ಉಡುಪಿ

ಮುಂಗಾರು ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಮತ್ತು ಪ್ರವಾಸಿಗರ ಸುರಕ್ಷತೆಯ ಹಿನ್ನೆಲೆ ಉಡುಪಿ ಜಿಲ್ಲಾಡಳಿತವು ಮಲ್ಪೆಯ ಜನಪ್ರಿಯ ಪ್ರವಾಸಿ ತಾಣವಾದ ಸೈಂಟ್ ಮೇರಿಸ್ ದ್ವೀಪಕ್ಕೆ ಪ್ರವೇಶವನ್ನು ನಿಷೇಧಿಸಿದೆ.

ಈ ನಿಷೇಧವು ಮೇ 16 ರಿಂದ ಜಾರಿಗೆ ಬಂದಿದೆ. ನಾಲ್ಕು ತಿಂಗಳ ಕಾಲ ಈ ನಿರ್ಬಂಧವು ಜಾರಿಯಲ್ಲಿರುತ್ತದೆ. ಈ ಸಮಯದಲ್ಲಿ ಎಲ್ಲಾ ಜಲಸಾಹಸ ಕ್ರೀಡೆಗಳನ್ನು ಸಹ ಸ್ಥಗಿತಗೊಳಿಸಲಾಗುವುದು. ಸಮುದ್ರದ ಅಲೆಗಳು ತೀವ್ರಗೊಳ್ಳುತ್ತಿರುವುದರಿಂದ ಮತ್ತು ಗಾಳಿಯ ವೇಗ ಹೆಚ್ಚುತ್ತಿರುವುದರಿಂದ, ಪ್ರವಾಸೋದ್ಯಮ ಇಲಾಖೆಯು ಈ ಮುನ್ನೆಚ್ಚರಿಕಾ ಕ್ರಮವನ್ನು ತೆಗೆದುಕೊಂಡಿದೆ. ಈ ನಿಷೇಧವು ಸೆಪ್ಟೆಂಬರ್ 15 ರವರೆಗೆ ಜಾರಿಯಲ್ಲಿರುತ್ತದೆ.

ಬೇಸಿಗೆ ರಜೆ ಹಿನ್ನೆಲೆಯಲ್ಲಿ ಸಾವಿರಾರು ಪ್ರವಾಸಿಗರು ಮಲ್ಪೆ ಕಡಲತೀರಕ್ಕೆ ಭೇಟಿ ನೀಡುತ್ತಿರುವುದರಿಂದ ದ್ವೀಪಕ್ಕೆ ಪ್ರವಾಸಿ ಬೋಟ್ ಹಾಗೂ ಜಲಸಾಹಸ ಕ್ರೀಡೆಗೆ ಕೆಲವು ದಿನಗಳ ಮಟ್ಟಿಗೆ ಅವಕಾಶ ನೀಡಬೇಕೆಂಬ ಒತ್ತಾಯ ಕೇಳಿಬಂದಿದೆ. ಆದರೆ ಹಿಂದಿನ ವರ್ಷದಂತೆ ಪ್ರವಾಸಿಗರ ಸುರಕ್ಷತೆಗಾಗಿ ಮೇ 16 ರಿಂದ ಸೈಂಟ್ ಮೇರಿಸ್ ಪ್ರವೇಶ ನಿಷೇಧವು ಅವಶ್ಯಕವಾಗಿದೆ ಎಂದು ಜಿಲ್ಲಾಡಳಿತ ತಿಳಿಸಿದೆ.

ಸಾಮಾನ್ಯವಾಗಿ ಮುಂಗಾರು ಅವಧಿಯಲ್ಲಿ ಪಶ್ಚಿಮ ಕರಾವಳಿಯಲ್ಲಿ ದೋಣಿ ವಿಹಾರ ಚಟುವಟಿಕೆಗಳನ್ನು ನಿಷೇಧಿಸಲಾಗುತ್ತದೆ. ದ್ವೀಪಕ್ಕೆ ಪ್ರವೇಶ ನಿಷೇಧವು ಹಾರ್ಬರ್ ಕ್ರಾಫ್ಟ್ ನಿಯಮಗಳಿಗೆ ಅನುಗುಣವಾಗಿದೆ. ಈ ಅವಧಿಯಲ್ಲಿ ಜಿಲ್ಲಾಡಳಿತಕ್ಕೆ ಸಹಕರಿಸುವಂತೆ ಪ್ರವಾಸಿಗರನ್ನು ವಿನಂತಿಸಲಾಗಿದೆ.



ಉದಯವಾಹಿನಿ ಚಿತ್ರ

**ಜಲ ಸಾಹಸ ಕ್ರೀಡೆಗಳು ಸ್ಥಗಿತ**

**ಮುಂಗಾರು ಮುನ್ಸೂಚನೆ ಮತ್ತು ಸಂಬಂಧಿತ ಸುರಕ್ಷತಾ ನಿಯಮಗಳ ಕಾರಣದಿಂದಾಗಿ ಜಲಸಾಹಸ ಕ್ರೀಡೆ ಚಟುವಟಿಕೆಗಳು ಮತ್ತು ಸೈಂಟ್ ಮೇರಿಸ್ ದ್ವೀಪಕ್ಕೆ ಪ್ರವೇಶವನ್ನು ಸ್ಥಗಿತಗೊಳಿಸಲಾಗಿದೆ. ಆದಾಗ್ಯೂ, ಪ್ರವಾಸಿಗರು ಇನ್ನೂ ಕಡಲತೀರಕ್ಕೆ ಭೇಟಿ ನೀಡಲು ಅನುಮತಿಸಲಾಗಿದೆ. ಜೂನ್ 1 ರಿಂದ, ಹೆಚ್ಚುವರಿ ಸುರಕ್ಷತಾ ಕ್ರಮವಾಗಿ ಕಡಲತೀರದ ಉದ್ದಕ್ಕೂ ಬ್ಯಾರಿಕೇಡ್‌ಗಳನ್ನು ಹಾಕಲಾಗುವುದು ಎಂದು ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಚಂದ್ರಶೇಖರ್ ತಿಳಿಸಿದ್ದಾರೆ.**

## ಹೇಮರಡ್ಡಿ ಮಲ್ಲಮ್ಮನವರ ಜಯಂತಿ ಆಚರಣೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬಾದಾಮಿ

ಯಾವುದೇ ಜೀವಿಗೆ ಹುಟ್ಟು ಸಾವು ಇರುತ್ತದೆ. ಇದರ ಮದ್ಯದಲ್ಲಿ ಜೀವನ ಹೇಗೆ ನಡೆಸಬೇಕು. ಬದುಕುವ ಕಲೆಯನ್ನು ಕಲಿಸಿದ ಹೇಮರಡ್ಡಿ ಮಲ್ಲಮ್ಮನವರ ಜೀವನ ಮಹಿಳೆಯರಿಗೆ ಸ್ಫೂರ್ತಿಯಾಗಿದೆ ಎಂದು ಶಾಸಕ ಭೀಮಸೇನ ಚಿಮ್ಮನಕಟ್ಟಿ ಹೇಳಿದರು.

ಅವರು ನಗರದ ಹೇಮರಡ್ಡಿ ಮಲ್ಲಮ್ಮ ಸಮುದಾಯ ಭವನದಲ್ಲಿ ಹೇಮ ವೇಮ ಚಾರಿಟೇಬಲ್ ಸಂಸ್ಥೆಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಮಹಾಸಾಧ್ವಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ 603 ನೇ ಜಯಂತ್ಯೋತ್ಸವ–2025 ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಹೇಮರೆಡ್ಡಿ ಮಲ್ಲಮ್ಮ 14 ನೇ ಶತಮಾನದಲ್ಲಿ ಮಹಿಳಾ ಸಂತರಾಗಿದ್ದರು.

ಅವಳು ಶ್ರೀಶೈಲಂ ಮಲ್ಲಿಕಾರ್ಜುನ (ಜ್ಯೋತಿಲಿರ್ಂಗಗಳಲ್ಲಿ ಒಂದು) ರೂಪದಲ್ಲಿ ಭಗವಾನ್ ಶಿವನ ಉತ್ಕಟ ಭಕ್ತೆಯಾಗಿದ್ದಳು. ಅವಳು ತನ್ನ ಸಹ–ಸಹೋದರಿಯರಿಂದ ಸಾಕಷ್ಟು ಚಿತ್ರಹಿಂಸೆಗಳನ್ನು ಅನುಭವಿಸಿದಳು ಮತ್ತು ಅವರಿಂದ ಕೊಲೆ ಪ್ರಯತ್ನಗಳನ್ನು ಸಹ ಸ್ವೀಕರಿಸಿದಳು ಮತ್ತು ಅವರಿಂದ ಮನೆಯಿಂದ ಹೊರಹಾಕಲ್ಪಟ್ಟಳು. ನಂತರ ಹೇಮರೆಡ್ಡಿ ಮಲ್ಲಮ್ಮ ಕಾಡಿನಲ್ಲಿ ವಾಸಿಸಲು ಪ್ರಾರಂಭಿಸಿದರು ಮತ್ತು ತನ್ನ ಭಕ್ತಿಯ ಅಭ್ಯಾಸಗಳನ್ನು ಮುಂದುವರೆಸಿದರು. ಶ್ರೀಶೈಲ ಮಲ್ಲಿಕಾರ್ಜುನ ಆಕೆಯ ಭಕ್ತಿಯಿಂದ ಪ್ರಸನ್ನನಾದನು, ಅವಳ ಮುಂದೆ ಕಾಣಿಸಿಕೊಂಡು ವರವನ್ನು ಕೇಳಿದನು. ಅವರಿಂದ ಚಿತ್ರಹಿಂಸೆಗೊಳಗಾದರೂ ತನ್ನ ಕುಟುಂಬಕ್ಕೆ ಸಂಪತ್ತನ್ನು ನೀಡುವಂತೆ ಕೇಳಿಕೊಂಡಳು. ತನ್ನ ಕುಟುಂಬಕ್ಕೆ ಸಂಪತ್ತು, ದಾನ, ಅಹಂಕಾರ ಬೇಡ ಎಂದು ಸಲಹೆ ನೀಡಿದರು. ಸಾಹಿತ್ಯ ಅಕಾಡಮಿ ಸದಸ್ಯ ಮೈತ್ರಾಯಿನಿ ಗದಿಗೆಪ್ಪಗೌಡರ ಉಪನ್ಯಾಸ ನೀಡಿ ಮಾತನಾಡಿ ಈ ಜಗತ್ತಿನಲ್ಲಿ ಹೆಚ್ಚಾಗಿ ಮಹಿಳೆಯರ ಹೆಸರಿನಲ್ಲಿ ದೇವಸ್ಥಾನಗಳಿವೆ. ಮಹಿಳೆಯರಲ್ಲಿ ಸಹನಾ ಶಕ್ತಿ ಹೆಚ್ಚಿಗಿರುತ್ತದೆ. ಕುಟುಂಬ ನಿರ್ವಹಣೆ ಜವಾಬ್ದಾರಿ ಹೆಚ್ಚಿನ ಪಾಲು ಮಹಿಳೆಯದ್ದಾಗಿರುತ್ತದೆ ಎಂದು ಹೇಮರಡ್ಡಿ ಮಲ್ಲಮ್ಮಳ ಜೀವನ ಸಾಧನೆ ಕುರಿತು ಮಾತನಾಡಿದರು.

> **ಹರಿಹರ ತಾಲ್ಲೂಕಿನ ಎರೆಹೊಸಳ್ಳಿ ವೇಮನ ಸಂಸ್ಥಾನಮಠದ ರಡ್ಡಿಗುರುಪೀಠದ ಶ್ರೀ ವೇಮನಾನಂದ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿ ಮಾತನಾಡಿ ಹೇಮರೆಡ್ಡಿ ಮಲ್ಲಮ್ಮ ಅವರು ವಚನಗಳನ್ನು ಬರೆದಿಲ್ಲ ಆದರೆ ಅವರ ಜೀವನವು ಮಹಿಳೆಯರಿಗೆ ಸ್ಫೂರ್ತಿಯಾಗಿದೆ. ಆಕೆಯನ್ನು ಮಹಾಸಾಧ್ವಿ ಎಂದರೆ ಶ್ರೇಷ್ಠ ಮಹಿಳೆ ಎಂದು ಕರೆಯಲಾಗುತ್ತದೆ**
> **–ಶ್ರೀ ವೇಮನಾನಂದ ಮಹಾಸ್ವಾಮಿಗಳು**

### ● ಕೆರೆಗಳು ಸದ್ಯ ಸಂಪೂರ್ಣವಾಗಿ ಬತ್ತಿ ಹೋಗಿವೆ ● ಕೆರೆಯ ಸುತ್ತ ಮುಳ್ಳಿನ ಗಿಡಗಳು ಬೆಳೆದು ನಿಂತಿವೆ

## ಐತಿಹಾಸಿಕ ಕೆರೆಗಳ ಪುನಶ್ಚೇತನಕ್ಕೆ ಸಾರ್ವಜನಿಕರ ಆಗ್ರಹ

• ಉದಯವಾಹಿನಿ, ನರೇಗಲ್

ಹಿಂದೊಮ್ಮೆ ಪಟ್ಟಣ ಹಾಗೂ ಸುತ್ತಲಿನ ಗ್ರಾಮಗಳಿಗೆ ಕುಡಿಯಲು ಹಾಗೂ ಕೃಷಿ ಭೂಮಿಗೆ ನೀರು ಒದಗಿಸುತ್ತಿದ್ದ ನರೇಗಲ್ ಕೆರೆಗಳು ಸದ್ಯ ಸಂಪೂರ್ಣವಾಗಿ ಬತ್ತಿ ಹೋಗಿವೆ. ಕೆರೆಯ ಸುತ್ತ ಮುಳ್ಳಿನ ಗಿಡಗಳು ಬೆಳೆದು ನಿಂತಿವೆ. ಹೂಳು ತುಂಬಿವೆ. ಹೀಗಿದ್ದರೂ ಸ್ಥಳೀಯ ಪಟ್ಟಣ ಪಂಚಾಯಿತಿ, ತಾಲ್ಲೂಕು ಮತ್ತು ಜಿಲ್ಲಾಡಳಿತಗಳು ಕೆರೆ ಪುನಶ್ಚೇತನಕ್ಕೆ ಮುಂದಾಗಿಲ್ಲ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ನಡುವೆ ಇಲ್ಲಿನ ನೆಲ ಜಲ ಅಭಿವೃದ್ಧಿ ಸಮಿತಿ, ರೈತರು, ನರೇಗಲ್ ಅಭಿವೃದ್ಧಿ ಸಮಿತಿಯವರು ಸಮುದಾಯದ ಸಹಭಾಗಿತ್ವದಲ್ಲಿ ಆಗಾಗ ತಮ್ಮ ಕೈಲಾದಷ್ಟು ಕೆರೆ ಹೂಳೆತ್ತುವ ಕಾಯಕ ಮಾಡುತ್ತಿದ್ದಾರೆ. ಆದರೆ ಪೂರ್ಣಪ್ರಮಾಣದ ಅಭಿವೃದ್ಧಿ ಕಾರ್ಯ ನಡೆಯದೇ ಇರುವ ಕಾರಣ ನರೇಗಲ್ ಪಟ್ಟಣದ ಕೆರೆಗಳು ಬೆಳಿಗ್ಗೆ ಬಯಲು ಶೌಚದ ಜಾಗವಾದರೆ, ಸಂಜೆ ಕುಡುಕರು, ಪುಂಡರ ಅಡ್ಡೆಯಾಗಿ ಪರಿವರ್ತನೆಯಾಗುತ್ತಿವೆ. ಆದರೂ, ಆಡಳಿತ ವ್ಯವಸ್ಥೆಗೆ ನಾಚಿಕೆ ಬಂದಿಲ್ಲ ಎಂದು ಪ್ರಜ್ಞಾವಂತ ಜನರು ಕಿಡಿಕಾರಿದ್ದಾರೆ.

ನರೇಗಲ್ ಪಟ್ಟಣದ ಮೂಲಕ ಯಾವುದೇ ನದಿ, ಕಾಲುವೆಗಳು ಹಾಯ್ದು ಹೋಗಿಲ್ಲ. ಕೃಷಿಗೆ ಹೇಳಿಕೊಳ್ಳುವಂತ ಯಾವುದೇ ಜಲಮೂಲಗಳಿಲ್ಲ. ಬಹುತೇಕ ರೈತರು ಒಣ ಬೇಸಾಯ ಹಾಗೂ ಕೊಳವೆಬಾವಿ ನೀರಿನಿಂದ ಕೃಷಿ ಮಾಡುತ್ತಿದ್ದಾರೆ. ಕೊಳವೆಬಾವಿಗಳಿಗೆ ಜಲ ಮರುಪೂರಣ ಮಾಡುವ ಬೃಹತ್ ಕೆರೆಗಳು ಸರ್ಕಾರ ಹಾಗೂ ಜನಪ್ರತಿನಿಧಿಗಳ ಇಚ್ಛಾಶಕ್ತಿ ಕೊರತೆಯಿಂದ ಮಳೆಗಾಲದಲ್ಲಿ ಮಳೆ ನೀರನ್ನೂ ಸಂಗ್ರಹಿಸಿಟ್ಟುಕೊಳ್ಳದಷ್ಟು ಹೂಳು ತುಂಬಿಕೊಂಡು, ಕೆರೆ ಅಂಗಳದಲ್ಲಿ ಜಾಲಿ ಕಂಟಿಗಳು ಬೆಳೆದು ನಿಂತಿವೆ. ಹೊಸ ಬಸ್ ನಿಲ್ದಾಣದಿಂದ ಅಬ್ಬಿಗೇರಿ ಮಾರ್ಗದ ಕಡೆಗೆ ಹೋಗುವಾಗ ಎಡಭಾಗಕ್ಕೆ ಬರುವ ಐತಿಹಾಸಿಕ ಹಿರೇಕೆರೆ ನರೇಗಲ್ ಪಟ್ಟಣದ ಜನರ ಪ್ರಮುಖ ಜಲಮೂಲವಾಗಿದೆ. ಅಂದಾಜು 30 ಎಕರೆ ವಿಸ್ತೀರ್ಣ ಹೊಂದಿರುವ ಈ ಕೆರೆಯನ್ನು 4 ಚಿಕ್ಕ ಕೆರೆಗಳಾಗಿ ವಿಂಗಡಿಸಲಾಗಿದೆ. ಕೋಡಿಕೊಪ್ಪದ ಭಾಗದಿಂದ ಎರಡು ಕೆರೆಗಳ ಹೂಳನ್ನು ರೈತರು ತಾವೇ ಸ್ವಯಂ ಪ್ರೇರಣೆಯಿಂದ 2020ರಲ್ಲಿ ತೆಗೆದಿದ್ದರು. ಮತ್ತೆ ಮರಳಿ ಹೂಳು, ಮುಳ್ಳಿನ ಕಂಟಿಗಳು ಬೆಳೆಯಲು ಆರಂಭಿಸಿವೆ. ಮೂರನೇ ಕೆರೆಯನ್ನು ಸಹ ರೈತರು ಈಚೆಗೆ ಹೂಳು ತೆಗೆಯಲು ಆರಂಭಿಸಿ ನಂತರ ನಿಲ್ಲಿಸಿದ್ದಾರೆ. ಆದರೆ ವೈಜ್ಞಾನಿಕವಾಗಿ ಹೂಳು ತೆಗೆಯುವ ಕಾರ್ಯ ನಡೆಯದೇ ಇರುವ ಕಾರಣ ಕೆಲವು ಕಡೆಗಳಲ್ಲಿ ಆಳವಾದ ತಗ್ಗು ಪ್ರದೇಶವಿದ್ದರೆ, ಇತರೆ ಕಡೆ ಎತ್ತರ ಪ್ರದೇಶ ನಿರ್ಮಾಣವಾಗಿದೆ. ಇದನ್ನು ಸಂಬಂಧಪಟ್ಟ ಇಲಾಖೆಯವರು ವೈಜ್ಞಾನಿಕ ಸ್ವರೂಪ ನೀಡಲು ಮುಂದಾಗಬೇಕು ಎನ್ನುವುದು ಗ್ರಾಮದ ಜನರ ಆಗ್ರಹವಾಗಿದೆ. ಅದೇ ರೀತಿ ನಾಲ್ಕನೇ ಕೆರೆಯಲ್ಲೂ ಹೂಳು ತುಂಬಿದ್ದು, ಪಟ್ಟಣದ ಚರಂಡಿ ನೀರು ಇಲ್ಲಿಗೆ ಬಂದು ಸೇರುತ್ತದೆ. ಇದರಿಂದಾಗಿ ಕೆಟ್ಟ ದುರ್ವಾಸನೆ ಬೀರುತ್ತಿದೆ.

ಚರಂಡಿ ನೀರು ಹರಿದು ಹೋಗಲು ಪರ್ಯಾಯ ವ್ಯವಸ್ಥೆ ಮಾಡಿ, ಮಳೆ ನೀರು ಸಂಗ್ರಹ ಮಾಡಿದರೆ ಉಪಯೋಗವಾಗುತ್ತದೆ ಎನ್ನುವುದು ಜನರ ಅಭಿಪ್ರಾಯವಾಗಿದೆ.

ಅದೇ ರೀತಿ, ಹಿರೇಕೆರೆಗೆ ಹರಿದು ಬರುವ ಮಳೆ ನೀರಿನ ಮಾರ್ಗಗಳನ್ನು ಗುರುತಿಸಿ ಅಭಿವೃದ್ಧಿ ಪಡಿಸಬೇಕು. ಕೆರೆ ತುಂಬಿದರೆ ಮಾತ್ರ ನರೇಗಲ್, ಕೋಡಿಕೊಪ್ಪ, ಕೋಚಲಾಪುರ, ತೋಟಗಂಟಿ, ಮಲ್ಲಾಪುರ, ಬೂದಿಹಾಳ ಸೇರಿದಂತೆ ಸುತ್ತಲಿನ ಗ್ರಾಮಗಳಲ್ಲಿರುವ ಕೊಳವೆ ಬಾವಿಗಳು ಮರುಪೂರಣಗೊಳ್ಳುತ್ತವೆ. ಇಲ್ಲವಾದರೆ ಜನರು ತೊಂದರೆಗೆ ಒಳಗಾಗುತ್ತಾರೆ.





ಉದಯವಾಹಿನಿ ಚಿತ್ರ

> **ನಮ್ಮಲ್ಲಿ ಕೆರೆ ಅಳತೆಗಳು ಮುಗಿದಿವೆ. ಆದರೂ ನರೇಗಲ್ ಹಿರೇಕೆರೆ ಅಳತೆ ಮಾಡಿರುವ ಬಗ್ಗೆ ಮರು ಪರಿಶೀಲನೆ ನಡೆಸಲಾಗುವುದು**
> **–ರುದ್ರನಗೌಡ, ಡಿಡಿಎಲ್‌ಆರ್**

**ಕುಡುಕರು, ಪುಂಡರ ಅಡ್ಡೆ**

> **ಮುಂಬರುವ ಯೋಜನೆ ಹಾಗೂ ಅನುದಾನದಲ್ಲಿ ಪಟ್ಟಣದ ಹಿರೇಕೆರೆ ಅಭಿವೃದ್ಧಿ ಕಾರ್ಯ ಕೈಗೊಳ್ಳಲಾಗುವುದು**
> **–ಮಹೇಶ ಬಿ.ನಿಡಶೇಶಿ, ನರೇಗಲ್ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ**

# ಉಕ್ರೇನ್ ಮೇಲೆ ರಷ್ಯಾದಿಂದ ಡ್ರೋನ್‌ಗಳ ಸುರಿಮಳೆ



**ಮಾಸ್ಕೋ:** ಉಕ್ರೇನ್ ಮೇಲೆ ರಷ್ಯಾ ಭಾನುವಾರ ತೀವ್ರ ಡ್ರೋನ್ ದಾಳಿ ನಡೆಸಿದೆ. 2022ರಲ್ಲಿ ಯುದ್ಧ ಶುರುವಾದಾಗಿನಿಂದ ಉಕ್ರೇನ್ ಮೇಲೆ ಇಂತಹ ದೊಡ್ಡ ದಾಳಿ ನಡೆದಿರುವುದು ಇದೇ ಮೊದಲು. ಶಾಂತಿ ಮಾತುಕತೆ ವಿಫಲವಾದ ಬಳಿಕ ಉಕ್ರೇನ್ ಮೇಲಿನ ದಾಳಿಯನ್ನು ರಷ್ಯಾ ತೀವ್ರಗೊಳಿಸಿದೆ. ಉಕ್ರೇನ್, ರಷ್ಯಾ ನಡುವೆ ಹಲವು ವರ್ಷಗಳ ನಂತರ ನಡೆದ ಮೊದಲ ನೇರ ಮಾತುಕತೆ, ಯಾವುದೇ ಒಪ್ಪಂದವಿಲ್ಲದೆ ಮುರಿದುಬಿತ್ತು. ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರ ಭೇಟಿ ಆಹ್ವಾನವನ್ನು ತಿರಸ್ಕರಿಸಿದ್ದಾರೆ. ಇದರ ಬೆನ್ನಲ್ಲೇ ಉಕ್ರೇನ್ ಮೇಲೆ ಡ್ರೋನ್ ದಾಳಿ ನಡೆದಿದೆ.

ಇಸ್ತಾನ್‌ಬುಲ್‌ನಲ್ಲಿ ನಡೆದ ಮಾತುಕತೆ ಕೇವಲ ಎರಡು ಗಂಟೆಗಳಲ್ಲಿ ಮುಕ್ತಾಯವಾಯಿತು. ಆದರೆ, ಎರಡೂ ಕಡೆಯವರು ತಲಾ 1,000 ಯುದ್ಧ ಕೈದಿಗಳನ್ನು ವಿನಿಮಯ ಮಾಡಿಕೊಳ್ಳಲು ಒಪ್ಪಿಕೊಂಡಿದ್ದಾರೆ. ಮುಂದಿನ ವಾರವೇ ಈ ವಿನಿಮಯ ನಡೆಯಬಹುದು ಎಂದು ಉಕ್ರೇನ್‌ನ ಗುಪ್ತಚರ ಮುಖ್ಯಸ್ಥ ಕೈರಿಲೊ ಬುಡಾನೊವ್ ಹೇಳಿದ್ದಾರೆ.

ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸೋಮವಾರ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ದೂರವಾಣಿಯಲ್ಲಿ ಮಾತನಾಡಲಿದ್ದಾರೆ. ಇದಾದ ಬಳಿಕ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ, ನ್ಯಾಟೋ ದೇಶಗಳ ನಾಯಕರೊಂದಿಗೆ ಯುದ್ಧವನ್ನು ಕೊನೆಗೊಳಿಸುವ ಬಗ್ಗೆ ಟ್ರಂಪ್ ಚರ್ಚಿಸಲಿದ್ದಾರೆ.

**ಮುಗಿಯುವುದೆಂದು ಈ ವಿನಾಶದ ರುದ್ರತಾಂಡವ?**

ಉಕ್ರೇನ್‌ನ ವಾಯುಸೇನೆ ಭಾನುವಾರ ರಷ್ಯಾ 273 ಡ್ರೋನ್‌ಗಳನ್ನು ಹಾರಿಸಿದೆ ಎಂದು ಹೇಳಿದೆ. ಅದರಲ್ಲಿ 88 ಡ್ರೋನ್‌ಗಳನ್ನು ಹೊಡೆದುರುಳಿಸಲಾಗಿದೆ. 128 ಡ್ರೋನ್‌ಗಳು ಎಲೆಕ್ಟ್ರಾನಿಕ್ ಅಡಚಣೆಯಿಂದಾಗಿ ನಾಶವಾಗಿವೆ. ಈ ದಾಳಿಗಳು ಕೈವ್, ಡ್ನಿಪ್ರೊಪೆಟ್ರೊವ್ಸ್ಕ ಮತ್ತು ಡೊನೆಟ್ಸ್ಕ ಪ್ರದೇಶಗಳನ್ನು ಗುರಿಯಾಗಿಸಿಕೊಂಡು ನಡೆದವು. ಉಕ್ರೇನ್ ವಾಯುಸೇನೆಯ ವಕ್ತಾರ ಯೂರಿ ಇಗ್ನಾಟ್ ಹೇಳುವಂತೆ, ಇದು ಪೂರ್ಣ ಪ್ರಮಾಣದ ಆಕ್ರಮಣ ಪ್ರಾರಂಭವಾದ ನಂತರ ನಡೆದ ಅತಿದೊಡ್ಡ ಡ್ರೋನ್ ದಾಳಿ. ಈ ಹಿಂದೆ ರಷ್ಯಾ 267 ಡ್ರೋನ್‌ಗಳನ್ನು ಬಳಸಿ ದಾಳಿ ಮಾಡಿತ್ತು. ಕೈವ್ ಪ್ರದೇಶದ ಗವರ್ನರ್ ಮೈಕೋಲಾ ಕಲಾಶ್ನಿಕ್ ಪ್ರಕಾರ, ರಷ್ಯಾದ ಡ್ರೋನ್ ದಾಳಿಯಲ್ಲಿ 28 ವರ್ಷದ ಮಹಿಳೆ ಸಾವನ್ನಪ್ಪಿದ್ದು, ನಾಲ್ಕು ವರ್ಷದ ಮಗು ಸೇರಿದಂತೆ ಮೂವರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಈ ಕುರಿತು ಮಾಹಿತಿ ನೀಡಿರುವ ರಷ್ಯಾದ ರಕ್ಷಣಾ ಸಚಿವಾಲಯ, ನಮ್ಮ ವಾಯು ರಕ್ಷಣಾ ವ್ಯವಸ್ಥೆ ಏಳು ಉಕ್ರೇನಿಯನ್ ಡ್ರೋನ್‌ಗಳನ್ನು ಹೊಡೆದುರುಳಿಸಿದೆ. ಭಾನುವಾರ ಬೆಳಿಗ್ಗೆ ಮತ್ತೆ 18 ಡ್ರೋನ್‌ಗಳನ್ನು ನಾಶಪಡಿಸಿದೆ ಎಂದು ಹೇಳಿದೆ.

## ಪಾಕ್‌ನ ಐಎಸ್‌ಐಗೆ ರಕ್ಷಣಾ ಮಾಹಿತಿ ರವಾನಿಸಿದ್ದ ಇಬ್ಬರು ಗೂಢಚಾರಿಗಳ ಬಂಧನ

**ನವದೆಹಲಿ:** ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ, ಪೊಲೀಸ್ ಆಡಳಿತವು ಜಾಗರೂಕ ಸ್ಥಿತಿಯಲ್ಲಿದ್ದು, ಪಾಕಿಸ್ತಾನಿ ಗೂಢಚಾರರ ಮೇಲೆ ನಿರಂತರವಾಗಿ ನಿಗಾವಹಿಸಿವೆ. ಏತನ್ಮಧ್ಯೆ, ಪಂಜಾಬ್ ಪೊಲೀಸರು ಇಬ್ಬರು ಪಾಕಿಸ್ತಾನಿ ಗೂಢಚಾರರನ್ನು ಬಂಧಿಸಿದ್ದಾರೆ. ಈ ಬಗ್ಗೆ ಪಂಜಾಬ್ ಡಿಜಿಪಿ ಗೌರವ್ ಯಾದವ್ ಮಾಹಿತಿ ನೀಡಿದ್ದಾರೆ. ಸೂಕ್ಷ್ಮ ಮಿಲಿಟರಿ ಮಾಹಿತಿಯನ್ನು ಸೋರಿಕೆ ಮಾಡುವಲ್ಲಿ ಭಾಗಿಯಾಗಿರುವ ಇಬ್ಬರು ವ್ಯಕ್ತಿಗಳನ್ನು ಬಂಧಿಸುವ ಮೂಲಕ ಗುರುದಾಸ್ಪುರ ಪೊಲೀಸರು ರಾಷ್ಟ್ರೀಯ ಭದ್ರತೆಯನ್ನು ರಾಜಿ ಮಾಡಿಕೊಳ್ಳುವ ಪ್ರಯತ್ನವನ್ನು ವಿಫಲಗೊಳಿಸಿದ್ದಾರೆ ಎಂದು ಪಂಜಾಬ್ ಡಿಜಿಪಿ ಗೌರವ್ ಯಾದವ್ ಟ್ವೀಟ್ ಮಾಡಿದ್ದಾರೆ.



**ಭಾರತದಲ್ಲೇ ಇದ್ದಾರೆ ದೇಶದ್ರೋಹಿಗಳು**

ಮೇ 15ರಂದು ಸುಖ್‌ಪ್ರೀತ್ ಸಿಂಗ್, ಕರಣ್ ಬೀರ್ ಸಿಂಗ್ ಎಂಬುವರು ಪಂಜಾಬ್, ಹಿಮಾಚಲ ಪ್ರದೇಶ, ಜಮ್ಮು, ಕಾಶ್ಮೀರದಲ್ಲಿನ ಸೈನಿಕರ ಚಲನವಲನಗಳು, ಪ್ರಮುಖ ಕಾರ್ಯತಂತ್ರದ ಸ್ಥಳಗಳು ಸೇರಿದಂತೆ ಆಪ ರೇಷನ್ ಸಿಂಧೂರ್‌ಗೆ ಸಂಬಂಧಿಸಿದ ಮಾಹಿತಿಯನ್ನು ಪಾಕಿಸ್ತಾನದ ಗುಪ್ತಚರ ಸಂಸ್ಥೆ ಐಎಸ್‌ಐ ಜೊತೆ ಹಂಚಿಕೊಳ್ಳುವಲ್ಲಿ ನಿರತರಾಗಿದ್ದಾರೆ ಎಂದು ವಿಶ್ವಾಸಾರ್ಹ ಗುಪ್ತಚರ ಮಾಹಿತಿಗಳು ಸಿಕ್ಕಿದ್ದವು ಎಂದರು. ಪೊಲೀಸರು ತಕ್ಷಣ ಕ್ರಮ ಕೈಗೊಂಡು ಇಬ್ಬರೂ ಶಂಕಿತರನ್ನು ಬಂಧಿಸಿದರು ಎಂದು ಯಾದವ್ ಹೇಳಿದರು. ಪೊಲೀಸ್ ತಂಡವು ಆರೋಪಿಗಳ ಬಳಿಯಿಂದ ಮೂರು ಮೊಬೈಲ್ ಫೋನ್‌ಗಳು, ಎಂಟು ಲೈವ್ ಕಾರ್ಟ್ರಿಡ್ಜ್‌ಗಳನ್ನು ವಶಪಡಿಸಿಕೊಂಡಿದೆ. ಡಿಜಿಪಿ ಪ್ರಕಾರ, ಆರೋಪಿಗಳು ಐಎಸ್‌ಐ ನಿರ್ವಾಹಕರೊಂದಿಗೆ ನೇರ ಸಂಪರ್ಕದಲ್ಲಿದ್ದು, ಭಾರತೀಯ ಸಶಸ್ತ್ರ ಪಡೆಗಳಿಗೆ ಸಂಬಂಧಿಸಿದ ಪ್ರಮುಖ ಮಾಹಿತಿಯನ್ನು ರವಾನಿಸಿದ್ದಾರೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ಈ ಪ್ರಕರಣದಲ್ಲಿ ದೋರಂಗಲ ಪೊಲೀಸ್ ಠಾಣೆಯಲ್ಲಿ ಅಧಿಕೃತ ರಹಸ್ಯ ಕಾಯ್ದೆಯಡಿ ಎಫ್‌ಐಆರ್ ದಾಖಲಿಸಲಾಗಿದೆ.

ಇದಕ್ಕೂ ಮೊದಲು, ಹರಿಯಾಣದ ನುಹ್ ಜಿಲ್ಲೆಯಿಂದ ತಾರಿಫ್ ಎಂಬ ಪಾಕಿಸ್ತಾನಿ ಗೂಢಚಾರನನ್ನು ಬಂಧಿಸಲಾಗಿತ್ತು. ದೆಹಲಿಯಲ್ಲಿರುವ ಪಾಕಿಸ್ತಾನ ಹೈಕಮಿಷನ್‌ನಲ್ಲಿ ನಿಯೋಜಿತರಾಗಿರುವ ಇಬ್ಬರು ಉದ್ಯೋಗಿಗಳಿಗೆ ತಾರಿಫ್ ವಾಟ್ಸಾಪ್ ಮೂಲಕ ಭಾರತೀಯ ಮಿಲಿಟರಿ ಚಟುವಟಿಕೆಗಳಿಗೆ ಸಂಬಂಧಿಸಿದ ಗೌಪ್ಯ ಮಾಹಿತಿಯನ್ನು ಕಳುಹಿಸುತ್ತಿದ್ದನು ಎಂದು ಆರೋಪಿಸಲಾಗಿದೆ. ಮಾಹಿತಿಯ ಪ್ರಕಾರ, ನುಹ್ ಪೊಲೀಸರು ಭಾರತೀಯ ದಂಡ ಸಂಹಿತೆ, ಅಧಿಕೃತ ರಹಸ್ಯ ಕಾಯ್ದೆ, 1923 ಮತ್ತು ದೇಶದ್ರೋಹ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

### ಗಾಜಾ ಜನರಿಗಾಗಿ ಒಪ್ಪೊತ್ತಿನ ಊಟದ ವ್ಯವಸ್ಥೆಗೆ ಸಿದ್ಧ ಎಂದ ಇಸ್ರೇಲ್; ಪರಿಸ್ಥಿತಿ ಭೀಕರ

## ಗಾಜಾದಲ್ಲಿ ತೀವ್ರ ಆಹಾರ ಕೊರತೆ ಸಮಸ್ಯೆ

**ಜೆರುಸಲೇಂ:** ಆಲ್ ಆಫ್ ಗಾಜಾದ ಹುಮ್ಮಸ್ಸಿನಲ್ಲಿರುವ ಇಸ್ರೇಲ್, ಗಾಜಾ ಪಟ್ಟಿಯ ಜನರ ಸಂಕಷ್ಟಗಳಿಗೆ ಕಿವಿಯಾಗುತ್ತಿಲ್ಲ ಎಂಬ ಆರೋಪಗಳು ಕೇಳಿಬರುತ್ತಿವೆ. ಗಾಜಾದಲ್ಲಿ ತೀವ್ರ ಆಹಾರ ಕೊರತೆ ಸಮಸ್ಯೆ ಎದುರಾಗಿದ್ದು, ಜನರು ತುತ್ತು ಅನ್ನಕ್ಕಾಗಿ ಪರದಾಡುವಂತಾಗಿದೆ. ಆದರೆ ಅಂತಾರಾಷ್ಟ್ರೀಯ ಮನವಿಯ ಹೊರತಾಗಿಯೂ, ಇಸ್ರೇಲ್ ಗಾಜಾ ಮೇಲಿನ ತನ್ನ ದಿಗ್ಬಂಧನವನ್ನು ಮುಂದುವರೆಸಿದೆ. ಆದರೆ ಗಾಜಾ ಜನರ ಹಸಿವಿನ ಕೂಗು ಕೇಳಿಸಿಕೊಂಡಿರುವ ಇಸ್ರೇಲ್ ಪ್ರಧಾನಿ ಬೆಂಜ ಮಿನ್ ನೆತನ್ಯಾಹು, ಗಾಜಾಗೆ ಸೀಮಿತ ಪ್ರಮಾಣದ ಆಹಾರ ಸರಬರಾಜು ಮಾಡಲು ಸಿದ್ಧ ಎಂದು ಘೋಷಿಸಿದ್ದಾರೆ. ಇದರಿಂದ ತೀವ್ರ ಸಂಕಷ್ಟ ಎದುರಿಸುತ್ತಿರುವ ಗಾಜಾ ಜನರಿಗೆ ಮಾನವೀಯ ನೆರವು ದೊರೆಯಲಿದೆ. ಇಸ್ರೇಲ್ ಡಿಫೆನ್ಸ್ ಫೋರ್ಸಸ್ ಗಾಜಾದ ಉತ್ತರ, ದಕ್ಷಿಣ ಭಾಗಗಳಲ್ಲಿ ವಿಸ್ತಾರವಾದ ಕಾರ್ಯಾಚರಣೆಗಳನ್ನು ಪ್ರಾರಂಭಿಸಿದೆ.

**ಆಹಾರ ತಲುಪಿಸುವ ಕಾರ್ಯ**

ಇದರಿಂದ ಗಾಜಾವನ್ನು ಸಂಪರ್ಕಿಸುವ ಬಹುತೇಕ ಎಲ್ಲಾ ರಸ್ತೆಗಳು ಸಂಪೂರ್ಣವಾಗಿ ಬಂದ್ ಆಗಿವೆ. ಹೀಗಾಗಿ ಗಾಜಾಗೆ ಆಹಾರ ಸರಬರಾಜು ಮಾಡುವ ಮಾನವೀಯ ಪ್ರಯತ್ನಗಳು ಸ್ಥಗಿತಗೊಂಡಿವೆ. ಆಹಾರಕ್ಕಾಗಿ ಗಾಜಾ ಜನರು ಮೊರೆ ಇಡುತ್ತಿದ್ದು, ಸೀಮಿತ ಪ್ರಮಾಣದ ಆಹಾರ ಸರಬರಾಜು ಮಾಡಲು ದಿಗ್ಬಂಧನ ತೆರವುಗೊಳಿಸುವುದಾಗಿ ಇಸ್ರೇಲ್ ಘೋಷಿಸಿದೆ. ಕಳೆದ ಮಾರ್ಚ್‌ನಲ್ಲಿ ವಿಧಿಸಿರುವ ನೆರವು ದಿಗ್ಬಂಧನ ತೆರವುಗೊಳಿಸುವಂತೆ ಇಸ್ರೇಲ್ ಮೇಲೆ ಜಾಗತಿಕ ಒತ್ತಡ ಹೆಚ್ಚುತ್ತಿದೆ. ಗಾಜಾ ಪಟ್ಟಿ ಬರಗಾಲ ಅಪಾಯವನ್ನು ಎದುರಿ ಸಲಿದೆ ಎಂದು ತಜ್ಞರು ಎಚ್ಚರಿಸಿದ್ದು, ಈ ಹಿನ್ನೆಲೆಯಲ್ಲಿ ಗಾಜಾ ಜನರಿಗೆ ಸೀಮಿತ ಪ್ರಮಾಣದ ಆಹಾರ ಪೂರೈಸಲು ಇಸ್ರೇಲ್ ಒಪ್ಪಿಗೆ ಸೂಚಿಸಿದೆ. ಈ ಕುರಿತು ಮಾತನಾಡಿರುವ ವಿಶ್ವಸಂಸ್ಥೆ ನೆರವು ಮುಖ್ಯಸ್ಥ ಟಾಮ್ ಫ್ಲೆಚರ್ ಅವರ ವಕ್ತಾರ ಎರಿ ಕನೆಕೊ, ಇಸ್ರೇಲಿ ಅಧಿಕಾರಿಗಳು ಗಾಜಾ ಜನರಿಗೆ ಸೀಮಿತ



- ಗಾಜಾದಲ್ಲಿ ಆಹಾರಕ್ಕಾಗಿ ಹಾಹಾಕಾರ, ತುತ್ತು ಅನ್ನಕ್ಕಾಗಿ ಪರದಾಡುತ್ತಿರುವ ಪ್ಯಾಲೆಸ್ಟೈನ್ ಜನತೆ
- ಗಾಜಾಗೆ ಸೀಮಿತ ಪ್ರಮಾಣ'ದ ಆಹಾರ ಸರಬರಾಜು ಮಾಡಲು ಸಿದ್ಧ ಎಂದ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು
- ಉತ್ತರ ಗಾಜಾದಲ್ಲಿ ಕಾರ್ಯಾಚರಣೆ ತೀವ್ರಗೊಳಿಸಿದ ಇಸ್ರೇಲ್ ಡಿಫೆನ್ಸ್ ಫೋರ್ಸಸ್, ಪರಿಸ್ಥಿತಿ ಮತ್ತಷ್ಟು ಭೀಕರ

ಪ್ರಮಾಣದ ಆಹಾರ ಪೂರೈಕೆಗೆ ಒಪ್ಪಿಗೆ ಸೂಚಿಸಿದ್ದು, ಈ ಕೂಡಲೇ ಆಹಾರ ಪೂರೈಕೆ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುವುದು. ಈಗಾಗಲೇ ಲಾಜಿಸ್ಟಿಕ್ಸ್ ವ್ಯವಸ್ಥೆ ಬಗ್ಗೆ ಚರ್ಚೆ ನಡೆಸಿದ್ದು, ಆದಷ್ಟು ಶೀಘ್ರವಾಗಿ ಗಾಜಾ ಜನರಿಗೆ ಆಹಾರ ತಲುಪಿಸುವ ಕಾರ್ಯ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಹಮಾಸ್‌ನ್ನು ನಿಯಂತ್ರಿಸಲು ಗಾಜಾ ಮೇಲಿನ ದಾಳಿಯನ್ನು ಇಸ್ರೇಲ್ ತೀವ್ರಗೊಳಿಸಿದೆ. ಪ್ಯಾಲೆಸ್ಟೀನಿಯನ್ ಆರೋಗ್ಯ ಅಧಿಕಾರಿಗಳು ಕಳೆದ ವಾರ ನಡೆದ ದಾಳಿಯಲ್ಲಿ ನೂರಾರು ಜನರು ಕೊಲ್ಲಲ್ಪಟ್ಟಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ಈ ಕುರಿತು ಮಾತನಾಡಿರುವ ಗಾಜಾ ಆರೋಗ್ಯ ಸಚಿವಾಲಯದ ವಕ್ತಾರ ಖಲೀಲ್ ಅಲ್-ದೇಖ್ರಾನ್, ಇದುವರೆಗಿನ ಸಾವಿನ ಸಂಖ್ಯೆ 53,000 ದಾಟಿದೆ ಎಂದು ಹೇಳಿರುವುದು ಜಾಗತಿಕ ಆತಂಕವನ್ನು ಹೆಚ್ಚಿಸಿದೆ. ಕದನ ವಿರಾಮ ಒಪ್ಪಂದವನ್ನು ಜಾರಿಗೊಳಿಸುವ ಕುರಿತು ಇಸ್ರೇಲ್, ಹಮಾಸ್ ನಡುವೆ ಕತಾರ್‌ನಲ್ಲಿ ಮಾತುಕತೆಗಳು ನಡೆದಿವೆ. ಆದರೆ ಈ ಮಾತುಕತೆಗಳು ಅಷ್ಟೇನೂ ಫಲಪ್ರದವಾಗಿಲ್ಲ. ಗಾಜಾವನ್ನು ಮಿಲಿಟರಿ ಮುಕ್ತ ವಲಯವನ್ನಾಗಿ ಮಾಡುವ ಇಸ್ರೇಲ್ ಪ್ರಸ್ತಾವನೆಗೆ ಹಮಾಸ್ ಒಪ್ಪದಿರುವುದು, ಪರಿಸ್ಥಿತಿಯನ್ನು ಮತ್ತಷ್ಟು ಬಿಗಡಾಯಿಸಿದೆ ಎಂದು ಮೂಲಗಳು ತಿಳಿಸಿವೆ.

ಗಾಜಾದ ಆರೋಗ್ಯ ವ್ಯವಸ್ಥೆ ಸಂಪೂರ್ಣವಾಗಿ ಕುಸಿದಿದೆ. ನೆರವು ಮೇಲಿನ ದಿಗ್ಬಂಧನ, ಇಸ್ರೇಲ್‌ನ ನಿರಂತರ ದಾಳಿ ಪರಿಸ್ಥಿತಿಯನ್ನು ಇನ್ನಷ್ಟು ಹದಗೆಡಿಸಿದೆ. ಹೆಚ್ಚುತ್ತಿರುವ ಸಾವು-ನೋವುಗಳು ಜಾಗತಿಕ ಆತಂಕವನ್ನು ಮತ್ತಷ್ಟು ಹೆಚ್ಚಿಸಿದ್ದು, ಈ ಮಧ್ಯೆ, ಗಾಜಾ ಜನರಿಗಾಗಿ ಸಿಮೀತ ಆಹಾರ ಪೂರೈಕೆಗೆ ಇಸ್ರೇಲ್ ಒಪ್ಪಿಗೆ ಸೂಚಿಸಿರುವುದು ಶಾಂತಿಯ ಭರವಸೆಯ ಬೆಳಕೊಂದು ಕಂಡಂತಾಗಿದೆ.

**ಆಹಾರ ಸರಬರಾಜು ಮಾಡಲು**

**ಗಾಜಾ ಪಟ್ಟಿಯನ್ನು ಸಂಪೂರ್ಣವಾಗಿ ವಶಪಡಿಸಿಕೊಳ್ಳುವವರೆಗೆ ವಿರಮಿಸುವುದಿಲ್ಲ ಎಂದು ಘೋಷಿಸಿರುವ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಕಾರ್ಯಾಚರಣೆಯನ್ನು ತೀವ್ರಗೊಳಿಸುವಂತೆ ಇಸ್ರೇಲ್ ಡಿಫೆನ್ಸ್ ಫೋರ್ಸಸ್‌ಗೆ ಸೂಚನೆ ನೀಡಿದ್ದಾರೆ. ಈ ಮಧ್ಯೆ ಗಾಜಾದ ಜನರು ತೀವ್ರ ಆಹಾರ ಕೊರತೆ ಎದುರಿಸುತ್ತಿದ್ದು, ಗಾಜಾಗೆ ಸೀಮಿತ ಪ್ರಮಾಣದ ಆಹಾರ ಸರಬರಾಜು ಮಾಡಲು ಇಸ್ರೇಲ್ ಸಿದ್ಧ ಎಂದು ಬೆಂಜಮಿನ್ ನೆತನ್ಯಾಹು ಸ್ಪಷ್ಟಪಡಿಸಿದ್ದಾರೆ. ಆಹಾರ ಸರಬರಾಜು ಮಾಡಲು ದಿಗ್ಬಂಧನವನ್ನು ಸಡಿಲಗೊಳಿಸುವುದಾಗಿ ನೆತನ್ಯಾಹು ಭರವಸೆ ನೀಡಿದ್ದಾರೆ.**

## ಉತ್ತರ ಪ್ರದೇಶದಲ್ಲಿ ಶಂಕಿತ ಐಎಸ್‌ಐ ಏಜೆಂಟ್ ಅರೆಸ್ಟ್



**ಲಖ್ನೋ:** ಪಾಕಿಸ್ತಾನದ ಇಂಟರ್-ಸರ್ವೀಸಸ್ ಇಂಟೆಲಿಜೆನ್ಸ್‌ಗಾಗಿ ಬೇಹುಗಾರಿಕೆಯಲ್ಲಿ ತೊಡಗಿರುವ ಆರೋಪದ ಹಿನ್ನಲೆಯಲ್ಲಿ ವ್ಯಕ್ತಿಯೊಬ್ಬನನ್ನು ಉತ್ತರಪ್ರದೇಶದ ಭಯೋತ್ಪಾದನಾ ನಿಗ್ರಹ ದಳ ಬಂಧಿಸಿದೆ.

ಬಂಧಿತ ಆರೋಪಿಯನ್ನು ಶೆಹಜಾದ್ ಎಂದು ಗುರುತಿಸಲಾಗಿದೆ. ರಾಂಪುರ ಜಿಲ್ಲೆಯ ನಿವಾಸಿಯಾಗಿದ್ದು, ಮೊರಾದಾಬಾದ್‌ನಿಂದ ಕಸ್ಟಡಿಗೆ ತೆಗೆದುಕೊಳ್ಳಲಾಗಿದೆ. ಪಾಕಿಸ್ತಾನಿ ಗುಪ್ತಚರ ಸಂಸ್ಥೆಗಳಿಗೆ ಬೇಹುಗಾರಿಕೆ ನಡೆಸುತ್ತಿರುವ ವ್ಯಕ್ತಿಗಳ ಮೇಲೆ ರಾಷ್ಟ್ರವ್ಯಾಪಿ ದಮನದ ನಡುವೆ ಶೆಹ್ವಾದ್‌ನನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈಗಾಗಲೇ ಸಾಮಾಜಿಕ ಮಾಧ್ಯಮದ ಪ್ರಭಾವಿಗಳು, ಯೂಟ್ಯೂಬರ್‌ಗಳು ಸೇರಿದಂತೆ ಹಲವಾರು ಜನರನ್ನು ಬಂಧಿಸಲಾಗಿದೆ. ಎಟಿಎಸ್ ಬಿಡುಗಡೆ ಮಾಡಿದ ಪತ್ರಿಕಾ ಪ್ರಕಟಣೆಯ ಪ್ರಕಾರ, ಇಸ್ಲಾಮಾಬಾದ್‌ನ ಗುಪ್ತಚರ ಸಂಸ್ಥೆಯ ರಕ್ಷಣೆಯಡಿ ಭಾರತ-ಪಾಕಿಸ್ತಾನ ಗಡಿಯಾದ್ಯಂತ ಕಳ್ಳಸಾಗಣೆಯಲ್ಲಿ ತೊಡಗಿಸಿಕೊಂಡಿದ್ದನ್ನು ಸೂಚಿಸುವ ವಿಶ್ವಾಸಾರ್ಹ ಗುಪ್ತಚರ ಮಾಹಿತಿಯ ನಂತರ ಶೆಹ್ವಾದ್ ಕಣ್ಗಾವಲಿಗೆ ಒಳಗಾಗಿದ್ದ.

ಪಾಕಿಸ್ತಾನಕ್ಕೆ ಹಲವು ಬಾರಿ ಪ್ರಯಾಣಿಸಿದ್ದು, ಸೌಂದರ್ಯ ವರ್ಧಕ ಗಳು, ಬಟ್ಟೆಗಳು, ಮಸಾಲೆಗಳು, ಇತರ ಸರಕುಗಳ ಅಕ್ರಮ ಗಡಿಯಾಚೆಗಿನ ವ್ಯಾಪಾರ ದಲ್ಲಿ ತೊಡಗಿದ್ದರು ಎಂದು ತನಿಖೆಯಿಂದ ತಿಳಿದುಬಂದಿದೆ. ಕಳ್ಳಸಾಗಣೆ ದಂಧೆಯು ಆತನ ಬೇಹುಗಾರಿಕೆ ಚಟುವಟಿಕೆಗಳಿಗೆ ಒಂದು ಭಾಗವಾಗಿ ಕಾರ್ಯನಿರ್ವಹಿಸುತ್ತಿತ್ತು.

ಶೆಹ್ವಾದ್ ಅನೇಕ ಐಎಸ್ ಐ ಕಾರ್ಯಕರ್ತರೊಂದಿಗೆ ನಿಕಟ ಸಂಪರ್ಕವನ್ನು ಹೊಂದಿದ್ದ, ಭಾರತದ ರಾಷ್ಟ್ರೀಯ ಭದ್ರತೆಗೆ ಸಂಬಂಧಿಸಿದ ಸೂಕ್ಷ್ಮ, ಗೌಪ್ಯ ಮಾಹಿತಿಯನ್ನು ಒದಗಿಸಿದ ಆರೋಪವಿದೆ. ಆರೋಪಿಯು ಗುಪ್ತಚರ ಮಾಹಿತಿಗಳನ್ನು ರವಾನಿಸುವುದಲ್ಲದೆ ಭಾರತದೊಳಗೆ ಐಎಸ್‌ಐಗೆ ಕಾರ್ಯಾಚರಣೆಯನ್ನು ಭದ್ರಪಡಿಸಲು ಹೊಂಚು ಹಾಕಿದ್ದ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಐಎಸ್‌ಐ ಸೂಚನೆಯ ಮೇರೆಗೆ ಶೆಹಜಾದ್ ಭಾರತದಲ್ಲಿ ಕಾರ್ಯನಿರ್ವಹಿಸುತ್ತಿರುವ ಪಾಕಿಸ್ತಾನಿ ಏಜೆಂಟ್‌ಗಳಿಗೆ ಹಣವನ್ನು ವರ್ಗಾವಣೆ ಮಾಡಿರುವುದು ಹೆಚ್ಚಿನ ತನಿಖೆಯಿಂದ ತಿಳಿದುಬಂದಿದೆ. ರಾಮುರ, ಉತ್ತರ ಪ್ರದೇಶದ ಇತರ ಭಾಗಗಳಿಂದ ಜನರನ್ನು ಕಳ್ಳಸಾಗಾಣಿಕೆಯ ನೆಪದಲ್ಲಿ ಪಾಕಿಸ್ತಾನಕ್ಕೆ ಕಳು ಹಿಸಲು ಅವರು ಸಹಾಯ ಮಾಡಿದ್ದರು. ಪೊಲೀಸರ ಪ್ರಕಾರ, ಈ ವ್ಯಕ್ತಿಗಳಿಗೆ ವೀಸಾ. ಪ್ರಯಾಣದ ದಾಖಲೆಗಳನ್ನು ಐಎಸ್‌ಐ ಕಾರ್ಯಕರ್ತರ ಸಹಾಯದಿಂದ ಜೋಡಿಸಲಾಗಿದೆ ಎಂದು ವರದಿಯಾಗಿದೆ. ಶೆಹಜಾದ್ ಅವರು ಭಾರತೀಯ ಸಿಮ್ ಕಾರ್ಡ್‌ಗಳನ್ನು ಐಎಸ್‌ಐ ಏಜೆಂಟ್‌ಗಳಿಗೆ ಖರೀದಿಸಿ ತಲುಪಿಸಿದ್ದಾರೆ ಎಂದು ಹೇಳಲಾಗುತ್ತದೆ, ವಿಧ್ವಂಸಕ ಉದ್ದೇಶಗಳಿಗಾಗಿ ಸಂವಹನಕ್ಕೆ ಸಂಭಾವ್ಯವಾಗಿ ಸಹಾಯ ಮಾಡುತ್ತದೆ. ಲಕ್ನದ ಎಟಿಎಸ್ ಪೊಲೀಸ್ ಠಾಣೆಯಲ್ಲಿ ಶೆಹಜಾದ್ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 148, 152ರ ಅಡಿಯಲ್ಲಿ ಪ್ರಕರಣ ದಾಖಲಾಗಿದೆ. ಆರೋಪಿಯನ್ನು ಮ್ಯಾಜಿಸ್ಟ್ರೇಟ್ ಮುಂದೆ ಹಾಜರುಪಡಿಸಲಾಗಿದ್ದು, ಮುಂದಿನ ಕಾನೂನು ಪ್ರಕ್ರಿಯೆ ನಡೆಯುತ್ತಿದೆ.

## ಲಷ್ಕರ್ ಉಗ್ರ ಸೈಫುಲ್ಲಾ ಅಪರಿಚಿತ ರಿಂದ ಹತ್ಯೆ




**ನವದೆಹಲಿ:** 2006ರಲ್ಲಿ ಆರ್‌ಎಸ್‌ಎಸ್ ಪ್ರಧಾನ ಕಚೇರಿಯ ಮೇಲೆ ನಡೆದ ದಾಳಿಯ ಹಿಂದಿನ ಮಾಸ್ಟರ್ ಮೈಂಡ್ ಲಷ್ಕರ್-ಎ-ತೊಯ್ಬಾ ಭಯೋತ್ಪಾದಕ ರಜವುಲ್ಲಾ ನಿಜಾಮಿ ಅಲಿಯಾಸ್ ಅಬು ಸೈಯುಲ್ಲಾನನ್ನು ಪಾಕಿಸ್ತಾನದ ಸಿಂದ್ ಪ್ರಾಂತ್ಯದಲ್ಲಿ ಅಪರಿಚಿತ ಬಂದೂಕುಧಾರಿಗಳು ಗುಂಡಿಕ್ಕಿ ಭಾನುವಾರ ಹತ್ಯೆ ಮಾಡಿದ್ದಾರೆ. ಲಷ್ಕರ್ ಭಯೋತ್ಪಾದಕ ಅಬು ಸೈಫುಲ್ಲಾ ನೇಪಾಳದ ಮೂಲಕ ಭಯೋತ್ಪಾದಕ ಜಾಲವನ್ನು ನಿರ್ವಹಿಸುತ್ತಿದ್ದ.

ಲಷ್ಕರ್ ಉಗ್ರ ರಜಾವುಲ್ಲಾ ನಿಝಾಮನಿ ಭಾರತದಲ್ಲಿ ಮೂರು ಉಗ್ರ ದಾಳಿ ನಡೆಸಿದ್ದ. ಇದರ ಜೊತೆಗೆ ಹಲವು ದಾಳಿಗೆ ನೆರವು ನೀಡಿದ್ದ. 2006ರಲ್ಲಿ ನಾಗ್ಪುರದ ಆರ್‌ಎಸ್‌ಎಸ್ ಮುಖ್ಯ ಕಚೇರಿ ಮೇಲೆ ನಡೆಸಿದ ಉಗ್ರ ದಾಳಿ, 2005ರಲ್ಲಿ ಬೆಂಗಳೂರಿನ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್ ಮೇಲೆ ನಡೆಸಿದ ಉಗ್ರ ದಾಳಿ, 2001ರಲ್ಲಿ ರಾಂಪುರದ ಸಿಆರ್‌ಪಿಎಫ್ ಮೇಲೆ ನಡೆಸಿದ ಉಗ್ರ ದಾಳಿ ಮಾಸ್ಟರ್ ಮೈಂಡ್ ಈತ. ಭಾರತಕ್ಕೆ ಬೇಕಾಗಿದ್ದ ಈ ಉಗ್ರನನ್ನು ಸಿಂಧ್ ಪ್ರಾಂತ್ಯದಲ್ಲಿ ಅಪರಿಚಿತರು ಹತ್ಯೆ ಮಾಡಿದ್ದಾರೆ. ವಿನೋದ್ ಕುಮಾರ್, ಮೊಹಮ್ಮದ್ ಸಲೀಂ, ಖಾಲಿದ್, ವನಿಯಾಲ್, ವಾಜಿದ್, ಸಲೀಂ ಭಾಯ್ ಸೇರಿದಂತೆ ಬಹು ಅಲಿಯಾಸ್‌ಗಳಿಂದ ಕರೆಯಲ್ಪಡುವ ಸೈಫುಲ್ಲಾ, ಎಲ್‌ಇಟಿಯ ಕಾರ್ಯಾಚರಣೆಗಳು, ನೇಮಕಾತಿ, ನಿಧಿಸಂಗ್ರಹಣೆ, ಗಡಿಯಾಚೆಗಿನ ಒಳನುಸುಳುವಿಕೆಯಲ್ಲಿ ಪ್ರಮುಖ ವ್ಯಕ್ತಿಯಾಗಿದ್ದ.

ಲಷ್ಕರ್-ಎ-ತೊಯ್ಬಾದ ಉನ್ನತ ಕಮಾಂಡರ್ ಅಬು ಸೈಫುಲ್ಲಾ ಭಾರತದಲ್ಲಿ ಭಯೋತ್ಪಾದಕ ದಾಳಿಗಳನ್ನು ನಡೆಸುತ್ತಿದ್ದ. ಅಬು ಸೈಫುಲ್ಲಾ ಅಲಿಯಾಸ್ ಮೊಹಮ್ಮದ್ ಸಲೀಂ ನೇಪಾಳದಲ್ಲಿ ತನ್ನ ಭಯೋತ್ಪಾದಕ ಜಾಲವನ್ನು ಹರಡಿದ್ದ, ಅಲ್ಲಿಂದ ಭಾರತದ ವಿರುದ್ಧ ಭಯೋತ್ಪಾದಕ ಪಿತೂರಿಗಳನ್ನು ನಡೆಸುತ್ತಿದ್ದ. ಭಾರತದ ಭದ್ರತಾ ಸಂಸ್ಥೆಗಳು ಅಬು ಸೈಫುಲ್ಲಾನನ್ನು ಮೋಸ್ಟ್ ವಾಂಟೆಡ್ ಭಯೋತ್ಪಾದಕರ ಪಟ್ಟಿಯಲ್ಲಿ ಸೇರಿಸಿದ್ದವು. ಇದರಿಂದಾಗಿ ಆತ ನೇಪಾಳ ಬಿಟ್ಟು ಪಾಕಿಸ್ತಾನಕ್ಕೆ ಪಲಾಯನ ಮಾಡಿದ್ದ. ಅವರು ಪಾಕಿಸ್ತಾನದಲ್ಲಿ ವಾಸಿಸುತ್ತಿದ್ದಾಗ ಅಪರಿಚಿತ ದಾಳಿಕೋರರಿಂದ ಹತ್ಯೆಗೀಡಾಗಿದ್ದಾನೆ ಎಂದು ವರದಿಯಾಗಿದೆ.

## ಮಾಜಿ ಅಧ್ಯಕ್ಷ ಜೋ ಬೈಡನ್‌ಗೆ ಪ್ರಾಸ್ಟೇಟ್ ಕ್ಯಾನ್ಸರ್



**ನ್ಯೂಯಾರ್ಕ್:** ಅಮೆರಿಕದ ಮಾಜಿ ಅಧ್ಯಕ್ಷ 82 ವರ್ಷದ ಜೋ ಬೈಡನ್ ಅವರಿಗೆ ಪ್ರಾಸ್ಟೇಟ್ ಕ್ಯಾನ್ಸರ್ ಇರುವುದು ಪತ್ತೆಯಾಗಿದೆ. ಜೋ ಬೈಡನ್ ಅವರಿಗೆ ಪ್ರಾಸ್ಟೇಟ್ ಕ್ಯಾನ್ಸರ್ ಬಾಧಿಸುತ್ತಿರುವುದನ್ನು ಅವರ ಕಚೇರಿ ಅಧಿಕೃತವಾಗಿ ಪ್ರಕಟಿಸಿದೆ. ಅವರ ವೈದ್ಯಕೀಯ ತಪಾಸಣೆಗಳು ಭಯಾನಕ ಬೆಳವಣಿಗೆಯನ್ನು ಬಹಿರಂಗಪಡಿಸಿದ ಬೆನ್ನಲ್ಲೇ ಕ್ಯಾನ್ಸರ್ ರೋಗಲಕ್ಷಣ ಪತ್ತೆಯಾಗಿದೆ.

ಮೂತ್ರನಾಳದ ರೋಗಲಕ್ಷಣಗಳು ಕಳೆದ ವಾರ ಪತ್ತೆಯಾದ ಬೆನ್ನಲ್ಲೇ ವೈದ್ಯರು ತೀವ್ರ ವೈದ್ಯಕೀಯ ಪರೀಕ್ಷೆಗಳನ್ನು ನಡೆಸಿದ್ದರು. ಅವರ ಜನನೇಂದ್ರಿಯ ಗ್ರಂಥಿಯಲ್ಲಿ ಸಣ್ಣ ಗಂಟು ದೈಹಿಕ ತಪಾಸಣೆ ವೇಳೆ ಕಂಡು ಬಂದಿತ್ತು. ಇದರಿಂದಾಗಿ ಹೆಚ್ಚಿನ ವೈದ್ಯಕೀಯ ಪರೀಕ್ಷೆ ನಡೆಸಲಾಗಿತ್ತು. ಶುಕ್ರವಾರ ಪ್ರಾಸ್ಟೇಟ್ ಕ್ಯಾನ್ಸರ್ ಇರುವುದನ್ನು ವೈದ್ಯರ ಪತ್ತೆ ಮಾಡಿದ್ದು, ಇದರ ಕಣಗಳು ಈಗಾಗಲೇ ಎಲುಬುಗಳಿಗೂ ಹರಡಿವೆ ಎಂದು ತಿಳಿದುಬಂದಿದೆ.

ಇದು ಹೆಚ್ಚಿನ ಆಕ್ರಮಣಕಾರಿ ವಿಧಾನದ ರೋಗವಾಗಿದ್ದು, ಇದು ಹಾರ್ಮೋನ್ ಸೂಕ್ಷ್ಮ ಕ್ಯಾನ್ಸರ್ ಆಗಿದ್ದು, ಪರಿಣಾಮಕಾರಿಯಾಗಿ ನಿರ್ವಹಿಸುವುದು ಅನಿವಾರ್ಯವಾಗಿದೆ ಎಂದು ಅಧಿಕೃತ ಹೇಳಿಕೆಯಲ್ಲಿ ಸ್ಪಷ್ಟಪಡಿಸಲಾಗಿದೆ.

ಲಭ್ಯ ವಿರುವ ಚಿಕಿತ್ಸೆ ಬಗ್ಗೆ ಬೈಡನ್ ಹಾಗೂ ಅವರ ಕುಟುಂಬ ಸದಸ್ಯರು ವೈದ್ಯರ ಜತೆ ಸಮಾಲೋಚಿಸುತ್ತಿದ್ದಾರೆ. ಪ್ರಾಸ್ಟೇಟ್ ಕ್ಯಾನ್ಸರ್ ತೀವ್ರತೆಯನ್ನು ಗ್ಲೇಸನ್ ಸ್ಕೋರ್ ನಿಂದ ರೇಟಿಂಗ್ ಮಾಡಲಾಗುತ್ತದೆ. ಇದು ಆರೋಗ್ಯಕರ ಕಣಗಳಿಗೆ ಹೋಲಿಸಿದರೆ ಕ್ಯಾನ್ಸರ್ ಕಣಗಳು ಹೇಗೆ ಅಸಹಜವಾಗಿ ಕಂಡುಬರುತ್ತವೆ ಎನ್ನುವುದನ್ನು ತೋರಿಸುತ್ತದೆ. ಬೈಡನ್ ಅವರ ಸ್ಕೋರ್ 9 ಆಗಿದ್ದು, ಕ್ಯಾನ್ಸರ್ ಅತ್ಯಂತ ಆಕ್ರಮಣಕಾರಿ ವಿಧಾನದ್ದಾಗಿದೆ ಎಂದು ತಿಳಿಸುತ್ತದೆ. ಅಮೆರಿಕದ ಇತಿಹಾಸದಲ್ಲಿ ಜೋ ಬೈಡನ್ ಅವರು ವಯಸ್ಸಿನಲ್ಲಿ ಅತ್ಯಂತ ಹಿರಿಯ ಅಧ್ಯಕ್ಷನಾಗಿ ನಿರ್ಗಮಿಸಿದ್ದಾರೆ.

## ಉಗ್ರರ ಸಹಚರರಿಬ್ಬರ ಬಂಧನ, ಶಸ್ತಾಸ್ತ್ರ ವಶ



**ಶೋಪಿಯಾನ್:** ಜಮ್ಮು, ಕಾಶ್ಮೀರದ ಶೋಫಿಯಾನ್‌ನಲ್ಲಿ ಡಿಕೆ ಪೋರಾ ಪ್ರದೇಶದಲ್ಲಿ ಭಾರತೀಯ ಸೇನೆಯ 34 ರಾಷ್ಟ್ರೀಯ ರೈಫಲ್ಸ್ ಸೇರಿದಂತೆ ವಿವಿಧ ಭದ್ರತಾ ಪಡೆಗಳು ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ ಇಬ್ಬರು ಭಯೋತ್ಪಾದಕ ಸಹಚರರನ್ನು ಭದ್ರತಾ ಪಡೆಗಳು ಬಂಧಿಸುವಲ್ಲಿ ಯಶಸ್ವಿಯಾಗಿವೆ. ಬಂಧಿತರಿಂದ ಭದ್ರತಾ ಪಡೆಗಳು ಎರಡು ಪಿಸ್ತೂಲ್‌ಗಳು, ನಾಲ್ಕು ಗ್ರೆನೇಡ್‌ಗಳು, 43 ಲೈವ್ ರೌಂಡ್‌ಗಳು, ಇತರ ದೋಷಾರೋಪಣೆ ವಸ್ತುಗಳನ್ನು ವಶಪಡಿಸಿಕೊಂಡಿವೆ ಎಂದು ಭದ್ರತಾ ಪಡೆಯ ಮೂಲಗಳು ತಿಳಿಸಿವೆ. ಶೋಪಿಯಾನ್ ಪೊಲೀಸರು ಬಂಧಿತರ ವಿರುದ್ಧ ಎಫ್‌ಐಆರ್ ದಾಖಲಿಸಿದ್ದು ಅವರ ಸಂಪರ್ಕಗಳು, ಚಟುವಟಿಕೆಗಳನ್ನು ತನಿಖೆ ಮಾಡಲು ಹೆಚ್ಚಿನ ತನಿಖೆ ನಡೆಯುತ್ತಿದೆ. ಈ ಬಂಧನದಿಂದ ಕಣಿವೆ ಪ್ರದೇಶದಲ್ಲಿ ಕಾನೂನುಬಾಹಿರ ಮತ್ತು ವಿಧ್ವಂಸಕ ಚಟುವಟಿಕೆಗಳ ಕುರಿತು ನಡೆಯುತ್ತಿರುವ ತನಿಖೆಯಲ್ಲಿ ಮಹತ್ವದ ಮೈಲಿಗಲ್ಲು ಗುರುತಿಸುತ್ತದೆ. ರಾಷ್ಟ್ರೀಯ ಭದ್ರತೆಗೆ ಬೆದರಿಕೆಗಳನ್ನು ತಟಸ್ಥಗೊಳಿಸಲು, ಶಾಂತಿ, ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳಲು ಶೋಪಿಯಾನ್ ಪೊಲೀಸರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತವಾಗಿದೆ.

ಮೇ 13 ರಂದು, ದಕ್ಷಿಣ ಕಾಶ್ಮೀರದ ಶೋಪಿಯಾನ್ ಜಿಲ್ಲೆಯ ಕೆಲ್ಲರ್‌ನ ಶುಕ್ರೂ ಅರಣ್ಯ ಪ್ರದೇಶದಲ್ಲಿ ಲಷ್ಕರ್-ಎ-ತೊಯ್ಬಾ ಗೆ ಸಂಬಂಧಿಸಿದ ಮೂವರು ಭಯೋತ್ಪಾದಕರನ್ನು ಹತ್ಯೆ ಮಾಡಲಾಗಿತ್ತು ಎಂದು ಪೊಲೀಸ್ ಮೂಲ ಗಳು ಖಚಿತಪಡಿಸಿವೆ. ಉನ್ನತ ಪೊಲೀಸ್ ಅಧಿಕಾರಿಯ ಪ್ರಕಾರ, ಕೆಲವು ಭಯೋತ್ಪಾದಕರ ಉಪಸ್ಥಿತಿಯ ಬಗ್ಗೆ ನಿರ್ದಿಷ್ಟ ಮಾಹಿತಿ ಪಡೆದ ನಂತರ ಕೆಲರ್ ಅರಣ್ಯದಲ್ಲಿ ಬೃಹತ್ ಕಾರ್ಡನ್, ಶೋಧ ಕಾರ್ಯಾಚರಣೆ ನಡೆಸಲಾಗಿತ್ತು ಎಂದು ತಿಳಿಸಿದ್ದಾರೆ. ಕೆಲ್ಲರ್‌ನ ಶುಕ್ರೂ ಅರಣ್ಯ ಪ್ರದೇಶದಲ್ಲಿ ಭದ್ರತಾ ಪಡೆಗಳು ಕೂಂಬಿಂಗ್ ಕಾರ್ಯಾಚರಣೆ ಪ್ರಾರಂಭಿಸುತ್ತಿದ್ದಂತೆ, ಈ ಪ್ರದೇಶದಲ್ಲಿ ಅಡಗಿರುವ ಭಯೋತ್ಪಾದಕರು ಪೊಲೀಸ್ ಮತ್ತು ಸೇನಾ ಸಿಬ್ಬಂದಿಯ ಜಂಟಿ ತಂಡದ ಮೇಲೆ ಗುಂಡು ಹಾರಿಸಿದರು, ಇದು ತೀವ್ರ ಗುಂಡಿನ ಚಕಮಕಿ ಯನ್ನು ಪ್ರಾರಂಭಿಸಿತು.

ಪಹಲ್ಗಾಮ್ ದಾಳಿಯ ನಂತರ, ಶ್ರೀನಗರ ಪೊಲೀಸರು ಕಾನೂನು ಬಾಹಿರ ಚಟುವಟಿಕೆಗಳ ಕಾಯ್ದೆ ಯುಎಪಿಎ ಅಡಿಯಲ್ಲಿ ದಾಖಲಾದ ಪ್ರಕರಣಗಳ ತನಿಖೆಯ ಮುಂದುವರಿಕೆಗಾಗಿ ನೆಲದ ಕಾರ್ಮಿಕರು, ನಿಷೇಧಿತ ಭಯೋತ್ಪಾದಕ ಸಂಘಟನೆಗಳ ಭಯೋತ್ಪಾದಕ ಸಹಚರರ ನಿವಾಸಗಳಲ್ಲಿ ನಗರದಾದ್ಯಂತ ಅನೇಕ ಸ್ಥಳಗಳಲ್ಲಿ ವ್ಯಾಪಕ ಶೋಧಗಳನ್ನು ನಡೆಸಿದರು. ಆಪರೇಷನ್ ಸಿಂಧೂರ್‌ನಲ್ಲಿ ಭಾರತ ಅದ್ಭುತ ಯಶಸ್ಸನ್ನು ಸಾಧಿಸಿದ ಬೆನ್ನಲ್ಲೇ ಈ ಕಾರ್ಯಾಚರಣೆ ನಡೆದಿದೆ.

## ದೆಹಲಿ ಟಾರ್ಗೆಟ್ ಮಾಡಿ ಶಹೀನ್ ಕ್ಷಿಪಣಿ ಹಾರಿಸಿದ್ದ ಪಾಕಿಸ್ತಾನ

### ರಷ್ಯಾದ ಎಸ್ 400 ವಾಯು ರಕ್ಷಣಾ ವ್ಯವಸ್ಥೆ ಬಳಸಿದ್ದ ಭಾರತದ ವಾಯುಪಡೆ

**ಹೊಸದಿಲ್ಲಿ:** ಭಾರತದ ಸೇನೆಯು ಮಹತ್ವದ ಮಾಹಿತಿಯೊಂದನ್ನು ಹಂಚಿಕೊಂಡಿದೆ. ಆಪರೇಷನ್ ಸಿಂಧೂರ್ ಕಾರ್ಯಾಚರಣೆಯನ್ನು ಭಾರತ ನಡೆಸುತ್ತಿದ್ದ ವೇಳೆ, ಪಾಕಿಸ್ತಾನದ ಆರ್ಮಿಗಳು ಶಹೀನ್ ಕ್ಷಿಪಣಿಯನ್ನು ಪ್ರಯೋಗಿಸಿತ್ತು, ಅದೂ ರಾಷ್ಟ್ರ ರಾಜಧಾನಿ ದೆಹಲಿಯನ್ನು ಗುರಿಯಾಗಿಸಿಕೊಂಡು ಎಂದು ಭಾರತದ ಸೇನಾಧಿಕಾರಿಗಳು ಹೇಳಿದ್ದಾರೆ. ಈ ಸಂಬಂಧ ವಿಡಿಯೋ ಬಿಡುಗಡೆ ಮಾಡಿರುವ ಭಾರತದ ಮಿಲಿಟರಿ, ಭಾರತದ ರಕ್ಷಣಾ ವ್ಯವಸ್ಥೆಯು ಇದನ್ನು ಯಶಸ್ವಿಯಾಗಿ ತಡೆದಿದೆ, ಪಾಕಿಸ್ತಾನದ ಪ್ರಯತ್ನವನ್ನು ವಿಫಲಗೊಳಿಸಿದೆ ಎಂದು ಭಾರತದ ಮಿಲಿಟರಿ ಅಧಿಕಾರಿಗಳು ಹೇಳಿದ್ದಾರೆ. ಕ್ಷಿಪಣಿಯ ಅವಶೇಷಗಳೂ ಲಭ್ಯವಾಗದ ಬಗ್ಗೆಯೂ ವರದಿಯಲ್ಲಿ ಉಲ್ಲೇಖವಾಗಿದೆ.




ಶಹೀನ್ ಕ್ಷಿಪಣಿಯನ್ನು ಪ್ರಯೋಗಿಸಿ, ಭಾರತಕ್ಕೆ ದೊಡ್ಡ ಹಿನ್ನಡೆಯನ್ನು ತರಲು ಪಾಕಿಸ್ತಾನ ಪ್ರಯತ್ನಿಸಿತ್ತು. ನಮ್ಮ ರಕ್ಷಣಾ ವ್ಯವಸ್ಥೆಯು ಅದನ್ನು ಹಿಮ್ಮೆಟ್ಟಿಸಿತ್ತು. ಆದರೆ, ಕ್ಷಿಪಣಿಯ ಅವಶೇಷಗಳು ಸಿಗಬೇಕಿತ್ತಲ್ಲವೇ ಎನ್ನುವ ಪ್ರಶ್ನೆ ಉದ್ಭವಿಸುವುದು ಸಹಜ. ಇದು ಭಾರತದ ಮಿಲಿಟರಿಯ ಹೊಸ ಕಾರ್ಯತಂತ್ರ, ದೇಶದ ಭದ್ರತೆ, ಗುಪ್ತಚರದ ಹಿನ್ನಲೆಯಲ್ಲಿ ಇದನ್ನು ಬಹಿರಂಗ ಪಡಿಸಲು ಸಾಧ್ಯವಿಲ್ಲ ಎಂದು ಮಿಲಿಟರಿ ಅಧಿಕಾರಿಗಳು ಹೇಳಿದ್ದಾರೆ. ಭಾರತೀಯ ಸೇನೆಯ ಅಧಿಕೃತ ವಿಡಿಯೋ ಪ್ರಕಾರ ಪಾಕಿಸ್ತಾ ನವು ಶಹೀನ್ ಕ್ಷಿಪಣಿಯ ಜೊತೆಗೆ, ಚೀನಾ ನಿರ್ಮಿತ ಎ-100, ಫತೇ ಬಳಸಿಕೊಂಡಿತ್ತು. ಇದಕ್ಕೆ ಕೌಂಟರ್ ಕೊಡಲು ಭಾರತವು ತನ್ನ Smerch MLRS ಅನ್ನು ಪ್ರಯೋಗಿಸಿತು. ಶಹೀನ್ ಕ್ಷಿಪಣಿಯು, ಪಾಕಿಸ್ತಾನದಲ್ಲಿ ಅಭಿವೃದ್ಧಿಪಡಿಸಲಾದ, ಪರಮಾಣು ಸಾಮರ್ಥ್ಯದ ಕ್ಷಿಪಣಿ ಯಾಗಿದೆ. ಇದನ್ನು, ಭಾರತದ ವಿವಿಧ ನಗರಗಳನ್ನು ಗುರಿಯಾಗಿಸಿಯೇ ವಿನ್ಯಾಸಗೊಳಿಸಲಾಗಿದೆ. ಪಾಕಿಸ್ತಾನ ಈ ಬಾರಿ ಪ್ರಯೋಗಿಸಿದ್ದ ಕ್ಷಿಪಣಿಯಲ್ಲಿ ಪರಮಾಣು ಸಿಡಿತಲೆ ಇರಲಿಲ್ಲ.




ಸಾಂಪ್ರದಾಯಿಕವಾಗಿ ಇದನ್ನು ಪಾಕಿಸ್ತಾನ ಬಳಸಿಕೊಂಡಿತ್ತು. ಆದರೆ, ಭಾರತ ಇದನ್ನು ಹೊಡೆದು ಹಾಕಿದ ಮೇಲೆ, ಪಾಕಿಸ್ತಾನದ ಜಂಘಾ ಬಲ ಅಡುಗಿ ಹೋಗಿದೆ. ಶಹೀನ್ ಕ್ಷಿಪಣಿಯನ್ನು ಭಾರತ ತಡೆದ ರೀತಿ ಭಾರತದ ಅಡ್ವಾನ್ಸ್ ಟೆಕ್ನಾಲಜಿ ಹೊಂದಿರುವ ರೀತಿಯನ್ನು ತೋರಿಸುತ್ತದೆ ಎಂದು ವಿಶ್ಲೇಷಿಸಲಾಗುತ್ತಿದೆ. ಪಾಕಿಸ್ತಾನದ ಫತೇ, MLRS ಅಸ್ತ್ರವು, ಪಾಕಿಸ್ತಾನದ ಸೇನೆಯು ಚೀನಾದ ವಿಜ್ಞಾನಿಗಳ ಸಹಾಯದೊಂದಿಗೆ ಮೇಲ್ದರ್ಜೆಗೇರಿಸಿಕೊಂಡಿದೆ. ಭಾರತದ ವಿವಿದ ನಗರಗಳನ್ನು ಗುರಿಯಾಗಿಸಿಕೊಂಡು ಸುಮಾರು 400 ಡ್ರೋನ್ ಅನ್ನು ಪಾಕಿಸ್ತಾನ ಪ್ರಯೋಗಿಸಿತ್ತು ಎಂದು ಕರ್ನಲ್ ಸೋಫಿಯಾ ಖುರೇಷಿ ಹೇಳಿದ್ದರು. ಪಂಜಾಬ್ ರಾಜ್ಯದ ಅಮೃತಸರ್‌ನಲ್ಲಿರುವ ಐತಿಹಾಸಿಕ ಸ್ವರ್ಣಮಂದಿರದ ಮೇಲೆಯೂ ಡ್ರೋನ್ ದಾಳಿ ನಡೆಸುವ ಪ್ರಯತ್ನವನ್ನು ಪಾಕಿಸ್ತಾನ ಮಾಡಿತ್ತು.

ಭಾರತ ತನ್ನ ಅತ್ಯಾಧುನಿಕ ವಾಯು ರಕ್ಷಣಾ ವ್ಯವಸ್ಥೆಯಿಂದ ಇದನ್ನು ಹೊಡೆದು ಹಾಕಲಾಯಿತು ಎಂದು ಭಾರತೀಯ ಸೇನೆಯ ಮೇಜರ್ ಜನರಲ್ ಕಾರ್ತಿಕ್ ಶೇಷಾದ್ರಿ, ಹೇಳಿದ್ದರು.

**ಅವಶೇಷ ಪತ್ತೆಯಾಗಿಲ್ಲ ಎಂದ ಭಾರತೀಯ ಸೇನೆ**

**ಪಾಕಿಸ್ತಾನದ ಶಹೀನ್ ಕ್ಷಿಪಣಿಯನ್ನು ತಡೆಯಲು ರಷ್ಯಾದ ಎಸ್ - 400 ಮತ್ತು ಭಾರತದಲ್ಲೇ ನಿರ್ಮಿಸಲಾದ ಆಕಾಶ್ ಕ್ಷಿಪಣಿಯನ್ನು ಭಾರತದ ಮಿಲಿಟರಿ ಬಳಸಿಕೊಂಡಿತ್ತು. ಭಾರತೀಯ ವಾಯುಸೇನೆಯ ವಿಡಿಯೋವನ್ನು ಅವಲೋಕಿಸಿದಾಗ, ಪಾಕಿಸ್ತಾನ ಹಲವಾರು ಪ್ರಬಲ ಅಸ್ತ್ರಗಳನ್ನು ಭಾರತದ ವಿರುದ್ಧ ಬಳಸಿತ್ತು.**

## ಮಿನಿ ನ್ಯೂಸ್

### ಆಂಧ್ರಪ್ರದೇಶ : ಕಾರಿನಲ್ಲಿ ಸಿಲುಕಿ ಉಸಿರುಗಟ್ಟಿ ನಾಲ್ವರು ಮಕ್ಕಳು ಸಾವು

**ವಿಜಯನಗರ:** ಆಟವಾಡುವಾಗ ಕಾರಿನೊಳಗೆ ಸಿಲುಕಿ ನಾಲ್ವರು ಮಕ್ಕಳು ಉಸಿರುಗಟ್ಟಿ ಸಾವನ್ನಪ್ಪಿರುವ ಘಟನೆ ದ್ವಾರಕಪುಡಿ ಗ್ರಾಮದಲ್ಲಿ ಇಲ್ಲಿ ನಡೆದಿದೆ. ಮನೆಯ ಹೊರಗೆ ಆಟವಾಡುತ್ತಿದ್ದ ಮಕ್ಕಳು ನಿಲ್ಲಿಸಿದ್ದ ಲಾಕ್ ಮಾಡದೆ ಇದ್ದ ಕಾರಿನೊಳಗೆ ಪ್ರವೇಶಿಸಿದರು. ನಂತರ ಸ್ವಯಂಚಾಲಿತವಾಗಿ ಲಾಕ್ ಆಗಿದ್ದರಿಂದ ಅವರು ಹೊರಬರಲು ಸಾಧ್ಯವಾಗಲಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಮಕ್ಕಳು ಒಳಗೆ ಹೋದ ನಂತರ ಕಾರಿನ ಆಟೋ-ಲಾಕ್ ವ್ಯವಸ್ಥೆಯಿಂದ ಸಿಕ್ಕಿಹಾಕಿಕೊಂಡಿರಬಹುದು ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದರು, ರಾತ್ರಿ ಮಕ್ಕಳು ಕಾಣದಿದ್ದಾಗ ಹುಡುಕಾಟ ನಡೆಸಿದಾಗ ಕಾರಿನೊಳಗೆ ಶವಗಳು ಪತ್ತೆಯಾಗಿವೆ ಎಂದು ಹೇಳಿದರು.

ಮತಪಟ್ಟ ಮಕ್ಕಳು 8 ರಿಂದ 6 ವರ್ಷ ವಯಸ್ಸಿನವರಾಗಿದ್ದರು. ನಾಲ್ವರು ಮಕ್ಕಳಲ್ಲಿ ಇಬ್ಬರು ಒಡಹುಟ್ಟಿದವರು, ಇತರರು ಪ್ರತ್ಯೇಕ ಕುಟುಂಬಗಳಿಗೆ ಸೇರಿದವರು ಎಂದು ಗೊತ್ತಾಗಿದೆ. ಪ್ರಕರಣ ದಾಖಲಿಸಿಕೊಂಡ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

### ಐಎಂಎಫ್: ಪಾಕಿಸ್ತಾನ ಮೇಲೆ 11 ಹೊಸ ಷರತ್ತು

**ಇಸ್ಲಾಮಾಬಾದ್:** ಅಂತಾರಾಷ್ಟ್ರೀಯ ಹಣಕಾಸು ನಿಧಿ ಆರ್ಥಿಕ ಸಂಕಷ್ಟ ಪರಿಸ್ಥಿತಿಯಲ್ಲಿ ಹಣ ಬಿಡುಗಡೆ ಮಾಡಲು ಪಾಕಿಸ್ತಾನಕ್ಕೆ 11 ಹೊಸ ಷರತ್ತುಗಳನ್ನು ವಿಧಿಸಿದೆ. ಭಾರತದೊಂದಿಗಿನ ಉದ್ವಿಗ್ನತೆ ಮಧ್ಯೆ ಹಣಕಾಸು, ಬಾಹ್ಯ, ಸುಧಾರಣಾ ಗುರಿಗಳಿಗೆ ಅಪಾಯವನ್ನು ಹೆಚ್ಚಿಸಬಹುದು ಎಂದು ಮಾಧ್ಯಮ ವರದಿಯೊಂದು ತಿಳಿಸಿದೆ.

ಪಾಕಿಸ್ತಾನದ ಮೇಲೆ ವಿಧಿಸಲಾದ ಹೊಸ ಷರತ್ತುಗಳಲ್ಲಿ 17.6 ಟ್ರಿಲಿಯನ್ ರೂಪಾಯಿಗಳ ಹೊಸ ಬಜೆಟ್‌ಗೆ ಸಂಸತ್ತಿನ ಅನುಮೋದನೆ, ವಿದ್ಯುತ್ ಬಿಲ್‌ಗಳ ಮೇಲಿನ ಸಾಲ ಸೇವಾ ಸರ್‌ಚಾರ್ಜ್‌ನಲ್ಲಿ ಹೆಚ್ಚಳ ಮತ್ತು ಮೂರು ವರ್ಷಗಳಿಗಿಂತ ಹೆಚ್ಚು ಹಳೆಯದಾದ ಬಳಸಿದ ಕಾರುಗಳ ಆಮದಿನ ಮೇಲಿನ ನಿರ್ಬಂಧಗಳನ್ನು ತೆಗೆದುಹಾಕುವುದು ಸೇರಿವೆ.

ಅಂತಾರಾಷ್ಟ್ರೀಯ ಹಣಕಾಸು ನಿಧಿ ಬಿಡುಗಡೆ ಮಾಡಿದ ಸಿಬ್ಬಂದಿ ಮಟ್ಟದ ವರದಿಯು ಭಾರತ, ಪಾಕಿಸ್ತಾನದ ನಡುವಿನ ಹೆಚ್ಚುತ್ತಿರುವ ಉದ್ವಿಗ್ನತೆಗಳು ಮುಂದುವರಿದರೆ, ಮತ್ತಷ್ಟು ಹದಗೆಟ್ಟರೆ, ಕಾರ್ಯಕ್ರಮದ ಹಣಕಾಸು, ಬಾಹ್ಯ, ಸುಧಾರಣಾ ಗುರಿಗಳಿಗೆ ಅಪಾಯಗಳನ್ನು ಹೆಚ್ಚಿಸಬಹುದು ಎಂದು ಎಕ್ಸ್‌ಪ್ರೆಸ್ ಟ್ರಿಬ್ಯೂನ್ ಪತ್ರಿಕೆ ಹೇಳಿದೆ.

ಕಳೆದ ಎರಡು ವಾರಗಳಲ್ಲಿ ಪಾಕಿಸ್ತಾನ ಮತ್ತು ಭಾರತ ನಡುವಿನ ಉದ್ವಿಗ್ನತೆ ಹೆಚ್ಚಾಗಿದೆ ಎಂದು ವರದಿ ಹೇಳಿದೆ, ಆದರೆ ಇಲ್ಲಿಯವರೆಗೆ, ಮಾರು ಕಟ್ಟೆಯ ಪ್ರತಿಕ್ರಿಯೆ ಸಾಧಾರಣವಾಗಿದೆ, ಷೇರು ಮಾರುಕಟ್ಟೆ ತನ್ನ ಇತ್ತೀಚಿನ ಲಾಭಗಳಲ್ಲಿ ಹೆಚ್ಚಿನದನ್ನು ಉಳಿಸಿಕೊಂಡಿದೆ. ಐಎಂಎಫ್ ವರದಿಯು ಮುಂದಿನ ಹಣಕಾಸು ವರ್ಷದ ರಕ್ಷಣಾ ಬಜೆಟ್‌ನ್ನು 2.414 ಟ್ರಿಲಿಯನ್ ರೂಪಾಯಿಗಳೆಂದು ತೋರಿಸಿದೆ, ಇದು 252 ಬಿಲಿಯನ್ ರೂಪಾಯಿಗಳಾಗಿದ್ದು ಶೇಕಡಾ 12ರಷ್ಟು ಹೆಚ್ಚಾಗಿದೆ. ಐಎಂಎಫ್‌ನ ಅಂದಾಜಿಗೆ ಹೋಲಿಸಿದರೆ, ಈ ತಿಂಗಳ ಆರಂಭದಲ್ಲಿ ಭಾರತದೊಂದಿಗೆ ಮುಖಾಮುಖಿಯಾದ ನಂತರ ಸರ್ಕಾರವು 2.5 ಟ್ರಿಲಿಯನ್ ರೂಪಾಯಿಗಿಂತಲೂ ಹೆಚ್ಚು ಅಥವಾ ಶೇಕಡಾ 18ರಷ್ಟು ಹೆಚ್ಚಿನ ಬಜೆಟ್ ನ್ನು ನಿಗದಿಪಡಿಸುವ ಸೂಚನೆಯನ್ನು ನೀಡಿದೆ.

### ಮೆಕ್ಸಿಕನ್ ನೌಕಾಪಡೆಯ ತರಬೇತಿ ಹಡಗು ಢಿಕ್ಕಿ : ಇಬ್ಬರು ಸಾವು

**ನ್ಯೂಯಾರ್ಕ್:** 277 ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಮೆಕ್ಸಿಕನ್ ನೌಕಾಪಡೆಯ ಹಡಗು ವಿದ್ಯುತ್ ಕಡಿತಗೊಂಡು ಬ್ರೂಕ್ಲಿನ್ ಸೇತುವೆಗೆ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಮೃತಪಟ್ಟು 19 ಜನರು ಗಾಯಗೊಂಡಿದ್ದಾರೆ ಎಂದು ನ್ಯೂಯಾರ್ಕ್ ನಗರದ ಮೇಯರ್ ಎರಿಕ್ ಆಡಮ್ಸ್ ತಿಳಿಸಿದ್ದಾರೆ.

ಎಕ್ಸ್ ಪೋಸ್ಟ್‌ನಲ್ಲಿ ನಡೆದ ಘಟನೆಯ ವಿವರಗಳನ್ನು ಹಂಚಿಕೊಂಡ ನ್ಯೂಯಾರ್ಕ್ ನಗರದ ಮೇಯರ್, ಸ್ಥಳೀಯ ಕಾಲಮಾನ ಸೋಮವಾರ ನಸುಕಿನ ಜಾವ ಮೆಕ್ಸಿಕನ್ ನೌಕಾಪಡೆಯ ಎತ್ತರದ ಹಡಗು ಕ್ಯುಹ್ಟೆಮೊಕ್ ವಿದ್ಯುತ್ ಕಡಿತಗೊಂಡು ಬ್ರೂಕ್ಲಿನ್ ಸೇತುವೆಗೆ ಡಿಕ್ಕಿ ಹೊಡೆದಿದೆ. ಈ ಸಮಯದಲ್ಲಿ, ಹಡಗಿನಲ್ಲಿದ್ದ 277 ಜನರಲ್ಲಿ 19 ಜನರಿಗೆ ಗಾಯಗಳಾಗಿದ್ದು, ಅವರಲ್ಲಿ ಇಬ್ಬರು ಗಂಭೀರ ಸ್ಥಿತಿಯಲ್ಲಿದ್ದಾರೆ ಮತ್ತು ಇನ್ನೂ ಇಬ್ಬರು ಮೃತಪಟ್ಟಿದ್ದಾರೆ ಎಂದಿದ್ದಾರೆ.


ಇದಕ್ಕೂ ಮೊದಲು, ನ್ಯೂಯಾರ್ಕ್ ಪೊಲೀಸ್ ಇಲಾಖೆಯ ಮುಖ್ಯಸ್ಥ ವಿಲ್ಸನ್ ಅರಾಂಬೋಲ್ಸ್ ಪತ್ರಿಕಾಗೋಷ್ಠಿಯಲ್ಲಿ ವಿವರ ನೀಡಿ, ಹಡಗು ರಾತ್ರಿ 8:20ರ ಸುಮಾರಿಗೆ ವಿದ್ಯುತ್ ಕಡಿತಗೊಂಡಿದೆ ಎಂದು ಹೇಳಿದರು, ಕ್ಯಾಪ್ಟನ್ ಹಡಗನ್ನು ಕುಶಲತೆಯಿಂದ ನಡೆಸುತ್ತಿದ್ದರು, ಇದು ಹಡಗನ್ನು ಸೇತುವೆಯ ಕಂಬದ ಕಡೆಗೆ ತಳ್ಳಿ ಹಡಗಿನ ಮಾಸ್ಟ್ ಸೇತುವೆಗೆ ಡಿಕ್ಕಿ ಹೊಡೆದಿದೆ ಎಂದು ಸಿಎನ್‌ಎನ್ ವರದಿ ಮಾಡಿದೆ.

### ಗೋಲ್ಡನ್ ಟೆಂಪಲ್ ಗುರಿಯಾಗಿಸಿ ಪಾಕ್ ಕ್ಷಿಪಣಿ, ಡ್ರೋನ್ ದಾಳಿ

**ನವದೆಹಲಿ:** ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ ಭಾರತ 'ಆಪರೇಷನ್ ಸಿಂಧೂರ' ಕಾರ್ಯಾಚರಣೆಯಡಿ ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿದ್ದ ಒಂಬತ್ತು ಉಗ್ರರ ನೆಲೆಗಳನ್ನು ಧ್ವಂಸಗೊಳಿಸಿದ ಬಳಿಕ ಪಾಕಿಸ್ತಾನ ಪಂಜಾಬ್‌ನ ಅಮೃತಸರದ ಗೋಲ್ಡನ್ ಟೆಂಪಲ್ ಅನ್ನು ಕ್ಷಿಪಣಿಗಳು, ಡ್ರೋನ್‌ಗಳ ಮೂಲಕ ಗುರಿಯನ್ನಾಗಿಸಿಕೊಂಡಿತ್ತು. ಸೇನಾ ವಾಯು ರಕ್ಷಣಾ ಗನ್ನರ್‌ಗಳು ಗೋಲ್ಡನ್ ಟೆಂಪಲ್ ಗುರಿಯಾಗಿಸಿಕೊಂಡಿದ್ದ ಎಲ್ಲಾ ಡ್ರೋನ್‌ಗಳು ಮತ್ತು ಕ್ಷಿಪಣಿಗಳನ್ನು ಹೊಡೆದುರುಳಿಸಿದವು ಎಂದು15 ನೇ ಪದಾತಿ ದಳ ವಿಭಾಗದ ಜನರಲ್ ಆಫೀಸರ್ ಕಮಾಂಡಿಂಗ್ ಮೇಜರ್ ಜನರಲ್ ಕಾರ್ತಿಕ್ ಸಿ ಶೇಷಾದ್ರಿ, ಸೋಮವಾರ ಬಹಿರಂಗಪಡಿಸಿದ್ದಾರೆ.

ಗೋಲ್ಡನ್ ಟೆಂಪಲ್‌ನಂತಹ ಧಾರ್ಮಿಕ ಸ್ಥಳಗಳು ಸೇರಿದಂತೆ ನಾಗರಿಕ ಹಾಗೂ ಮಿಲಿಟರಿ ಕಟ್ಟಡಗಳನ್ನು ಗುರಿಯಾಗಿಸುವ ಪಾಕಿಸ್ತಾನದ ನಡೆಯನ್ನು ಭಾರತೀಯ ಸೇನೆಯು ನಿರೀಕ್ಷಿಸಿತ್ತು. ಇವುಗಳಲ್ಲಿ ಗೋಲ್ಡನ್ ಟೆಂಪಲ್ ಪ್ರಮುಖವಾಗಿತ್ತು. ಗೋಲ್ಡನ್ ಟೆಂಪಲ್ ರಕ್ಷಿಸಲು ಹೆಚ್ಚುವರಿ ಆಧುನಿಕ ವಾಯು ರಕ್ಷಣಾ ವ್ಯವಸ್ಥೆ ಮಾಡಲಾಗಿತ್ತು.

ಪಾಕಿಸ್ತಾನ ಮೇ 8 ರಂದು ಮಾನವ ರಹಿತ ವೈಮಾನಿಕ ಡ್ರೋನ್‌ಗಳು ಹಾಗೂ ಕ್ಷಿಪಣಿಗಳೊಂದಿಗೆ ಬೃಹತ್ ವಾಯುದಾಳಿ ನಡೆಸಿತು ನಾವು ಇದನ್ನು ನಿರೀಕ್ಷಿಸಿದ್ದರಿಂದ ನಾವು ಸಂಪೂರ್ಣವಾಗಿ ಸಿದ್ಧರಾಗಿದ್ದೇವು ಎಂದು ಅವರು ತಿಳಿಸಿದರು. ನಮ್ಮ ಸೇನಾ ವಾಯು ರಕ್ಷಣಾ ಗನ್ನರ್‌ಗಳು ಪಾಕಿಸ್ತಾನದ ಸೇನೆಯ ಹೀನಕೃತ್ಯವನ್ನು ವಿಫಲಗೊಳಿಸಿದವು. ಗೋಲ್ಡನ್ ಟೆಂಪಲ್ ಗುರಿಯಾಗಿಸಿಕೊಂಡ ಎಲ್ಲಾ ಡ್ರೋನ್‌ಗಳು ಮತ್ತು ಕ್ಷಿಪಣಿಗಳನ್ನು ಹೊಡೆದುರುಳಿಸಿದವು. ಹೀಗಾಗಿ ನಮ್ಮ ಪವಿತ್ರ ಗೋಲ್ಡನ್ ಟೆಂಪಲ್‌ಗೆ ಒಂದು ಗೀರು ಕೂಡ ಬರಲು ಅವಕಾಶ ನೀಡಲಿಲ್ಲ ಎಂದು ಅವರು ಹೇಳಿದರು.



## ದಿ ಗರ್ಲ್‌ಫ್ರೆಂಡ್ ಸಿನಿಮಾ ಏನಾಯ್ತು?

ರಶ್ಮಿಕಾ ಮಂದಣ್ಣ ನಟನೆಯ 'ದಿ ಗರ್ಲ್‌ಫ್ರೆಂಡ್' ಸಿನಿಮಾ ಬಗ್ಗೆ ಏನು ಅಪಡೇಟ್ ಸಿಗದಿರೋ ಹಿನ್ನೆಲೆ ಫ್ಯಾನ್ಸ್ ಬೇಸರಗೊಂಡಿದ್ದಾರೆ. #Release-TheGirlfriend ಅಂತ ಎಕ್ಸ್‌ನಲ್ಲಿ ಹ್ಯಾಶ್ ಟ್ಯಾಗ್ ಬಳಸಿ ಟ್ರೆಂಡಿಂಗ್ ಮಾಡೋ ಮೂಲಕ ಸಿನಿಮಾ ಬಗ್ಗೆ ಅಪ್‌ಡೇಟ್ ಕೊಡಿ ಎಂದು ಶ್ರೀವಲ್ಲಿ ಫ್ಯಾನ್ಸ್ ಪಟ್ಟು ಹಿಡಿದಿದ್ದಾರೆ. ಅದಕ್ಕೀಗ ರಶ್ಮಿಕಾ ಕಡೆಯಿಂದ ಫ್ಯಾನ್ಸ್‌ಗೆ ಗುಡ್ ನ್ಯೂಸ್ ಸಿಕ್ಕಿದೆ. 'ದಿ ಗರ್ಲ್‌ಫ್ರೆಂಡ್' ಸಿನಿಮಾ ಏನಾಯ್ತು ಎಂದು ಕಾತರದಿಂದ ಕಾಯುತ್ತಿದ್ದ ಫ್ಯಾನ್ಸ್ ರಶ್ಮಿಕಾ ರಿಯಾಕ್ಟ್ ಮಾಡಿದ್ದಾರೆ. ಹಾಯ್ ಮೈ ಲವ್ಲಿಸ್, ನಾನು ನಿಮ್ಮ ತಾಳ್ಮೆಯನ್ನು ಪರೀಕ್ಷಿಸುತ್ತಿದ್ದೇನೆ ಎಂದು ತಿಳಿದಿದ್ದೇನೆ. ಖಂಡಿತವಾಗಿಯೂ ನಿಮ್ಮ ಕಾಯುವಿಕೆಯನ್ನು ನಿರಾಸೆ ಮಾಡಲ್ಲ. ನಿಮಗೆ ಅತ್ಯುತ್ತಮ ಔಟ್‌ಪುಟ್ ನೀಡಲು ಕೆಲಸ ಮಾಡುತ್ತಿದ್ದೇವೆ. ವಿಶೇಷ ಸಿನಿಮಾಗಳಲ್ಲಿ ಇದು ಕೂಡ ಒಂದಾಗಿದೆ ಎಂದು ಎಕ್ಸ್‌ನಲ್ಲಿ ಬರೆದುಕೊಂಡಿದ್ದಾರೆ. ಇದು ಹೆಚ್ಚು ಮಾತನಾಡದ ವಿಷಯಗಳ ಮಾತನಾಡುವ ಚಿತ್ರವಿದು. ಶುದ್ಧ ಪಾತ್ರಗಳನ್ನು ಆಧರಿಸಿದ ಸಿನಿಮಾವಿದು, ಇದೇ ಸಿನಿಮಾದ ಬ್ಯೂಟಿ ಆಗಿದೆ ಎಂದು ನಟಿ ಬಣ್ಣಿಸಿದ್ದಾರೆ. ನಿಮ್ಮೆಲ್ಲರಿಗೂ ಅತ್ಯುತ್ತಮವಾಗಿರೋದನ್ನು ನೀಡಲು ಬಯಸುತ್ತೇವೆ. ಸಿನಿಮಾ ಬಗ್ಗೆ ನಾವು ಭರವಸೆ ನೀಡುತ್ತೇವೆ. ನಿಮ್ಮ ಪ್ರೀತಿಗೆ ಧನ್ಯವಾದಗಳು ಎಂದು ರಶ್ಮಿಕಾ ಮಂದಣ್ಣ ಹೇಳಿದ್ದಾರೆ. ಸದ್ಯದಲ್ಲೇ ಸಿನಿಮಾ ಬಗ್ಗೆ ಅಪ್‌ಡೇಟ್ ಕೊಡೋದಾಗಿ ಹೇಳಿದ್ದಾರೆ. ಈ ಸಿನಿಮಾವನ್ನು ಅಲ್ಲು ಅರವಿಂದ್ ಅವರ 'ಗೀತಾ ಆರ್ಟ್ಸ್' ನಿರ್ಮಾಣ ಮಾಡಿದೆ. ಕನ್ನಡದ ದೀಕ್ಷಿತ್ ಶೆಟ್ಟಿ ಮತ್ತು ರಶ್ಮಿಕಾ ಮಂದಣ್ಣ ಜೋಡಿಯಾಗಿದ್ದಾರೆ. ಇದರಲ್ಲಿ ಇಬ್ಬರೂ ಕಾಲೇಜ್ ಸ್ಟುಡೆಂಟ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. 'ಪುಷ್ಪ 2' ಸಕ್ಸಸ್ ಬಳಿಕ ಕುಬೇರ, ಥಾಮಾ, ಶಾಹಿದ್ ಕಪೂರ್ ಜೊತೆ ಕಾಕ್‌ಟೈಲ್ 2, ಅನಿಮಲ್ ಪಾರ್ಕ್ 2 ಸೇರಿದಂತೆ ಹಲವು ಸಿನಿಮಾಗಳು ನಟಿಯ ಕೈಯಲ್ಲಿವೆ.

## ಕಾನ್ ಫಿಲ್ಮ್ ಫೆಸ್ಟಿವಲ್‌ನಲ್ಲಿ ಕಂಗೊಳಿಸಿದ ನಟಿ ಮೌನಿ





ಕನ್ನಡದ 'ಕೆಜಿಎಫ್' ಚಿತ್ರದಲ್ಲಿ ಯಶ್ ಜೊತೆ ಸೊಂಟ ಬಳುಕಿಸಿದ್ದ ಮೌನಿ ರಾಯ್ ಅವರು 78ನೇ ಕಾನ್ ಫಿಲ್ಮ್ ಫೆಸ್ಟಿವಲ್‌ನಲ್ಲಿ ಭಾಗಿಯಾಗಿದ್ದಾರೆ. ಶೋಲ್ಡರ್‌ಲೆಸ್ ಡ್ರೆಸ್‌ನಲ್ಲಿ ಮೌನಿ ಕಂಗೊಳಿಸಿದ್ದಾರೆ. ಕನ್ನಡದ ನಟಿ ದಿಶಾ ಮದನ್ ಬಳಿಕ ಬಳಕುವ ಬಳ್ಳಿಯಂತಿರುವ ಮೌನಿ ರಾಯ್ ಕೂಡ ಕಾನ್ ಸಿನಿಮಾ ಹಬ್ಬದಲ್ಲಿ ಭಾಗಿಯಾಗಿದ್ದಾರೆ. ಅದಕ್ಕಾಗಿ ಫ್ರಾನ್ಸ್‌ಗೆ ತೆರಳಿದ್ದಾರೆ. ಕಪ್ಪು ಬಣ್ಣದ ಡ್ರೆಸ್‌ಗೆ ನೀಲಿ ಬಣ್ಣದ ಕಸೂತಿ ಮಾಡಲಾಗಿದೆ. ಅದಕ್ಕೆ ದುಬಾರಿ ನೆಕ್ಲೆಸ್ ಅನ್ನು ನಟಿ ಧರಿಸಿದ್ದಾರೆ. ಶೋಲ್ಡರ್ ಲೆಸ್ ಡ್ರೆಸ್‌ನಲ್ಲಿ ನಟಿ ಮಿಂಚಿದ್ದಾರೆ. ಸಖತ್ ಹಾಟ್ ಆಗಿ ಪೋಸ್ ನೀಡಿದ್ದಾರೆ. ಈ ಕಾರ್ಯಕ್ರಮಕ್ಕೆ ಭಾಗಿಯಾಗಲು ಫಿಲ್ಮ್ ಫೆಸ್ಟಿವಲ್ ಆಯೋಜಕರು ಟೀಮ್ ಅಳೆದು ತೂಗಿ ಕೆಲವೇ ಕೆಲವು ತಾರೆಯರಿಗೆ ಮಾತ್ರ ಆಮಂತ್ರಣ ನೀಡುತ್ತಾರೆ. ಅದರಂತೆ ನಟಿ ಮೌನಿ ರಾಯ್ ಅವರಿಗೂ ಆಹ್ವಾನ ನೀಡಲಾಗಿದೆ. ಹೀಗಾಗಿ ಅವರು ಕೂಡ ಈ ಕಾರ್ಯಕ್ರಮಕ್ಕೆ ಹಾಜರಿ ಹಾಕಿದ್ದಾರೆ. ಫ್ರಾನ್ಸ್‌ನಲ್ಲಿ ಈ ಸಿನಿಮಾ ಹಬ್ಬಕ್ಕೆ ಅದ್ಧೂರಿಯಾಗಿ ಚಾಲನೆ ನೀಡಲಾಗಿದೆ. ಅತೀ ದೊಡ್ಡ ಚಲನಚಿತ್ರೋತ್ಸವಕ್ಕೆ ದೇಶ ವಿದೇಶದ ನಟ-ನಟಿಯರು ಭಾಗಿಯಾಗಿದ್ದಾರೆ. ಈ ಚಲನಚಿತ್ರೋತ್ಸವ ಮೇ 13ರಿಂದ 24ರವರೆಗೆ ನಡೆಯಲಿದೆ. ಮೌನಿ ಅವರು ವರುಣ್ ಧವನ್ ನಟನೆಯ ಸಿನಿಮಾದಲ್ಲಿ ಪ್ರಸ್ತುತ ನಟಿಸುತ್ತಿದ್ದಾರೆ. ಕೈತುಂಬಾ ಸಿನಿಮಾಗಳು ನಟಿಯ ಕೈಯಲ್ಲಿವೆ.

## ಸೂರ್ಯ 46 ಅದ್ಧೂರಿ ಚಾಲನೆ



ರೆಟ್ರೋ ಹೀರೋಗೆ ಪ್ರೇಮಲು ನಟಿ ಜೋಡಿ

'ರೆಟ್ರೋ' ಸಿನಿಮಾ ಬಳಿಕ ಸೂರ್ಯ ಹೊಸ ಚಿತ್ರಕ್ಕೆ ಗ್ರೀನ್ ಸಿಗ್ನಲ್ ನೀಡಿದ್ದಾರೆ. ಇಂದು (ಮೇ 19) ಹೈದರಾಬಾದ್‌ನಲ್ಲಿ ಸಿನಿಮಾಗೆ ಅದ್ಧೂರಿಯಾಗಿ ಚಾಲನೆ ನೀಡಲಾಗಿದೆ. ಸೂರ್ಯ ನಟನೆಯ ಈ ಸಿನಿಮಾಗೆ 'ಪ್ರೇಮಲು' ನಟಿ ಮಮಿತಾ ಬೈಜು ಜೋಡಿಯಾಗಿದ್ದಾರೆ. 'ಲಕ್ಕಿ ಭಾಸ್ಕರ್' ನಿರ್ದೇಶಕ ವೆಂಕಿ ಅವರು 'ಸೂರ್ಯ 46' ಚಿತ್ರಕ್ಕೆ ನಿರ್ದೇಶನ ಮಾಡಲಿದ್ದಾರೆ. ಈ ಸಿನಿಮಾದಲ್ಲಿ ಸೂರ್ಯಗೆ ನಾಯಕಿಯಾಗಿ ಮಮಿತಾ ಬೈಜು ನಟಿಸಲಿದ್ದಾರೆ. ಇಂದು ಈ ಚಿತ್ರದ ಮುಹೂರ್ತ ಕಾರ್ಯಕ್ರಮ ಜರುಗಿದೆ. ಖ್ಯಾತ ನಿರ್ದೇಶಕ ತ್ರಿವಿಕ್ರಮ್ ಶ್ರೀನಿವಾಸ್ ಅವರು ಸೂರ್ಯ ಸಿನಿಮಾಗೆ ಕ್ಲ್ಯಾಪ್ ಮಾಡಿ ವಿಶ್ ಮಾಡಿದ್ದಾರೆ.

ಸಿತಾರಾ ಸಂಸ್ಥೆಯಡಿ ಈ ಚಿತ್ರ ನಿರ್ಮಾಣವಾಗಲಿದ್ದು, 'ಕೆಜಿಎಫ್ 2' ನಟಿ ರವೀನಾ ಟಂಡನ್, ರಾಧಿಕಾ ಶರತ್ ಕುಮಾರ್ ಕೂಡ ಮುಖ್ಯ ಪಾತ್ರದಲ್ಲಿ ನಟಿಸಲಿದ್ದಾರೆ. ಕಂಗುವ, ರೆಟ್ರೋ ಸಿನಿಮಾಗಳಿಗೆ ನಿರೀಕ್ಷಿಸಿದ ಯಶಸ್ಸು ಸಿಗಲಿಲ್ಲ. ಹೀಗಾಗಿ ಯುವ ನಟಿ ಮಮಿತಾ ಮತ್ತು ಲಕ್ಕಿ ಭಾಸ್ಕರ್ ಮೂಲಕ ಯಶಸ್ಸು ಕಂಡಿರುವ ನಿರ್ದೇಶಕ ವೆಂಕಿ ಜೊತೆ ಸೂರ್ಯ ಕೈಜೋಡಿಸಿದ್ದಾರೆ.

## ರೆಡ್ಡಿ ಮಗನ ಜೊತೆ ಶ್ರೀಲೀಲಾ ಡ್ಯುಯೆಟ್

ಜೂನಿಯರ್ ಚಿತ್ರದ ಸಾಂಗ್ ಔಟ್



ಕಿರೀಟಿ ರೆಡ್ಡಿ

ಕನ್ನಡತಿ ಶ್ರೀಲೀಲಾಗೆ ಸೌತ್‌ನಲ್ಲಿ ಭಾರೀ ಬೇಡಿಕೆಯಿದೆ. ಇದೀಗ 3 ವರ್ಷಗಳ ಬಳಿಕ ಕನ್ನಡಕ್ಕೆ ಶ್ರೀಲೀಲಾ ಬರುತ್ತಿದ್ದಾರೆ. ಜನಾರ್ದನ ರೆಡ್ಡಿ ಮಗ ಕಿರೀಟಿಗೆ ನಾಯಕಿಯಾಗಿ 'ಜೂನಿಯರ್' ಚಿತ್ರದಲ್ಲಿ ನಟಿಸಿದ್ದಾರೆ. ಈ ಸಿನಿಮಾದ ಮೊದಲ ಸಾಂಗ್ ರಿಲೀಸ್ ಆಗಿದೆ. ರೆಡ್ಡಿ ಮಗನೊಂದಿಗೆ ನಟಿ ಡ್ಯುಯೆಟ್ ಹಾಡಿದ್ದಾರೆ. ಇಂದು (ಮೇ 19) ಬೆಂಗಳೂರಿನಲ್ಲಿ ಅದ್ಧೂರಿಯಾಗಿ ಸಾಂಗ್ ರಿಲೀಸ್ ಕಾರ್ಯಕ್ರಮ ಜರುಗಿದೆ. 'ಲೆಟ್ಸ್ ಲಿವ್ ದಿ ಮೂಮೆಂಟ್' ಎಂಬ ರೊಮ್ಯಾಂಟಿಕ್ ಸಾಂಗ್ ಕನ್ನಡ ಸೇರಿದಂತೆ ಬಹುಭಾಷೆಗಳಲ್ಲಿ ರಿಲೀಸ್ ಆಗಿದೆ. ಮಸ್ತ್ ಆಗಿ ಕಿರೀಟಿ ಜೊತೆ ನಟಿ ಕುಣಿದು ಕುಪ್ಪಳಿಸಿದ್ದಾರೆ. ಈ ಹಾಡಿಗೆ ಅಭಿಮಾನಿಗಳಿಂದ ಉತ್ತಮ ರೆಸ್ಪಾನ್ಸ್ ಸಿಕ್ಕಿದೆ. ಇದೇ ಜುಲೈ 18ಕ್ಕೆ ಸಿನಿಮಾ ರಿಲೀಸ್‌ಗೆ ಸಿದ್ಧವಾಗಿದೆ. 'ಮಾಯಾಬಜಾರ್' ಸಿನಿಮಾ ಖ್ಯಾತಿಯ ರಾಧಾಕೃಷ್ಣ ರೆಡ್ಡಿ ನಿರ್ದೇಶನದಲ್ಲಿ 'ಜೂನಿಯರ್' ಸಿನಿಮಾ ತಯಾರಾಗಿದೆ. ದಕ್ಷಿಣ ಭಾರತದ ಖ್ಯಾತ ನಿರ್ಮಾಣ ಸಂಸ್ಥೆ ವರಾಹಿ ಫಿಲ್ಮಂ ಪ್ರೊಡಕ್ಷನ್ ಕಿರೀಟಿ ಮೊದಲ ಚಿತ್ರಕ್ಕೆ ಬಂಡವಾಳ ಹೂಡಿದ್ದು, ಬಿಗ್ ಬಜೆಟ್‌ನಲ್ಲಿ ಸಿನಿಮಾ ನಿರ್ಮಾಣ ಚಿತ್ರ ಮೂಡಿಬಂದಿದೆ. ಬಹುದೊಡ್ಡ ಹಾಗೂ ಸ್ಟಾರ್ ತಾರಾಗಣ ಈ ಸಿನಿಮಾದ ಮತ್ತೊಂದು ಹೈಲೈಟ್. ಶ್ರೀಲೀಲಾ, ಕಿರೀಟಿ ಜೊತೆ ರವಿಚಂದ್ರನ್, ಜೆನಿಲಿಯಾ ರಿತೇಶ್ ದೇಶ್‌ಮುಖ್ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. 'ಜೂನಿಯರ್' ಸಿನಿಮಾದ ತಾಂತ್ರಿಕ ಬಳಗ ಶ್ರೀಮಂತಿಕೆಯಿಂದ ಕೂಡಿದೆ.

## ಗೃಹಪ್ರವೇಶದ ಸಂಭ್ರಮದಲ್ಲಿ ಅನಸೂಯ



'ಪುಷ್ಪ 2'ನಟಿ ಅನಸೂಯ ಭಾರಧ್ವಾಜ್ ಅವರು ಅದ್ಧೂರಿಯಾಗಿ ಗೃಹಪ್ರವೇಶ ಮಾಡಿ ಹೊಸ ಮನೆಗೆ ಕಾಲಿಟ್ಟಿದ್ದಾರೆ. ಈ ಕುರಿತು ನಟಿಯೇ ಸೋಷಿಯಲ್ ಮೀಡಿಯಾದಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ.

ಹೊಸ ಮನೆ ಖರೀದಿಸೋದು ನಟಿಯ ಹಲವು ವರ್ಷಗಳ ಕನಸಾಗಿತ್ತು. ಅದರಂತೆ ಐಷಾರಾಮಿ ಮನೆ ಖರೀದಿಸಿ ಕುಟುಂಬ ಸಮೇತ ಹೊಸ ಮನೆಗೆ ಕಾಲಿಟ್ಟಿದ್ದಾರೆ. ಸತ್ಯನಾರಾಯಣ ವ್ರತ, ಹೋಮಗಳನ್ನು ಮಾಡಿಸಿದ್ದಾರೆ. ಮನೆಗೆ 'ಶ್ರೀರಾಮ ಸಂಜೀವಿನಿ' ಎಂದು ಮನೆಗೆ ಹೆಸರಿಟ್ಟಿದ್ದಾರೆ. ಗೃಹಪ್ರವೇಶದ ಖುಷಿಯಲ್ಲಿರುವ ನಟಿಗೆ ಫ್ಯಾನ್ಸ್ ಶುಭಕೋರುತ್ತಿದ್ದಾರೆ.

ರಂಗಸ್ಥಳಂ, ಕ್ಷಣಂ, ವಿಮಾನಂ, ಪುಷ್ಪ, ಪುಷ್ಪ 2 ಸಿನಿಮಾಗಳಲ್ಲಿ ಅನಸೂಯ ನಟಿಸಿದ್ದಾರೆ.

## ಏಷ್ಯಾ ಕಪ್ ಬಗ್ಗೆ ಬಿಗ್ ಅಪ್‌ಡೇಟ್ ನೀಡಿದ ಬಿಸಿಸಿಐ ಕಾರ್ಯದರ್ಶಿ

ಭಾರತ ಮತ್ತು ಪಾಕಿಸ್ತಾನದ ನಡುವಿನ ರಾಜಕೀಯ ಉದ್ವಿಗ್ನತೆಯ ನಡುವೆ, ಭಾರತೀಯ ಕ್ರಿಕೆಟ್ ತಂಡವು 2025ರ ಏಷ್ಯಾಕಪ್‌ನಿಂದ ಹಿಂದೆ ಸರಿಯುತ್ತದೆ ಎಂಬ ವದಂತಿಗಳು ಹಬ್ಬಿದ್ದವು. ಆದರೆ, ಬಿಸಿಸಿಐ ಈ ವದಂತಿಗಳನ್ನು ಸಂಪೂರ್ಣವಾಗಿ ತಳ್ಳಿಹಾಕಿದೆ. ಬಿಸಿಸಿಐ ಕಾರ್ಯದರ್ಶಿ ದೇವಜಿತ್ ಸೈಕಿಯಾ ಅವರು ಏಷ್ಯನ್ ಕ್ರಿಕೆಟ್ ಕೌನ್ಸಿಲ್ ಜೊತೆ ಯಾವುದೇ ಚರ್ಚೆ ನಡೆದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಭಾರತ ಮತ್ತು ಪಾಕಿಸ್ತಾನ ನಡುವಿನ ಉದ್ವಿಗ್ನತೆಯಿಂದಾಗಿ ಉಭಯ ದೇಶಗಳ ನಡುವೆ ಎಲ್ಲಾ ರೀತಿಯ ಸಂಬಂಧ ಮುರಿದು ಬಿದ್ದಿದೆ. ಇದರ ಜೊತೆಗೆ ಉಭಯ ದೇಶಗಳ ನಡುವೆ ಕ್ರಿಕೆಟ್ ಸಂಬಂಧವೂ ಇರಬಾರದು ಎಂಬುದು ಭಾರತೀಯರ ಅಭಿಪ್ರಾಯವಾಗಿದೆ. ಇದಕ್ಕೆ ಪೂರಕವಾಗಿ ಮುಂಬರುವ ಏಷ್ಯಾಕಪ್‌ನಿಂದ ಟೀಂ ಇಂಡಿಯಾ ಹೊರ ನಡೆದಿದೆ ಎಂಬ ಸುದ್ದಿ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿತ್ತು. ಅಲ್ಲದೆ ಬಿಸಿಸಿಐ , ತನ್ನ ಈ ನಿರ್ಧಾರದ ಬಗ್ಗೆ ಏಷ್ಯನ್ ಕ್ರಿಕೆಟ್ ಕೌನ್ಸಿಲ್‌ಗೂ ತಿಳಿಸಿದೆ ಎಂದು ವರದಿಯಾಗಿತ್ತು. ಆದರೆ ಈಗ ಈ ಸುದ್ದಿಯ ಕುರಿತು ಬಿಸಿಸಿಐನಿಂದ ದೊಡ್ಡ ನವೀಕರಣ ಹೊರಬಿದ್ದಿದೆ.

### ಸ್ಪಷ್ಟನೆ ನೀಡಿದ ಬಿಸಿಸಿಐ ಕಾರ್ಯದರ್ಶಿ

ಅದರಲ್ಲಿ ಯಾವುದೇ ಸತ್ಯವಿಲ್ಲ

ವಾಸ್ತವವಾಗಿ, ಏಷ್ಯಾಕಪ್‌ನಲ್ಲಿ ಟೀಂ ಇಂಡಿಯಾ ಭಾಗವಹಿಸುವುದಿಲ್ಲ ಎಂಬ ಸುದ್ದಿಯನ್ನು ಬಿಸಿಸಿಐ ಸಂಪೂರ್ಣವಾಗಿ ತಿರಸ್ಕರಿಸಿದೆ. ಪ್ರಸ್ತುತ ಏಷ್ಯನ್ ಕ್ರಿಕೆಟ್ ಕೌನ್ಸಿಲ್ ಪಂದ್ಯಾವಳಿಗಳ ಕುರಿತು ಯಾವುದೇ ಚರ್ಚೆಗಳು ನಡೆದಿಲ್ಲ ಎಂದು ಬಿಸಿಸಿಐ ಕಾರ್ಯದರ್ಶಿ ದೇವ್ಜಿತ್ ಸೈಕಿಯಾ ಪಿಟಿಐಗೆ ತಿಳಿಸಿದ್ದಾರೆ. ಈ ಬಗ್ಗೆ ಮಾತನಾಡಿರುವ ಅವರು, ಇಂದು ಬೆಳಿಗ್ಗೆಯಿಂದ, ಏಷ್ಯಾಕಪ್ ಮತ್ತು ಮಹಿಳಾ ಉದಯೋನ್ಮುಖ ತಂಡ ಏಷ್ಯಾಕಪ್ ಎರಡರಲ್ಲೂ ಭಾಗವಹಿಸದಿರಲು ಬಿಸಿಸಿಐ ನಿರ್ಧಾರ ತೆಗೆದುಕೊಂಡಿರುವ ಬಗ್ಗೆ ಕೆಲವು ಸುದ್ದಿಗಳು ನಮ್ಮ ಗಮನಕ್ಕೆ ಬಂದಿವೆ. ಆದರೆ ಅಂತಹ ಸುದ್ದಿಗಳಲ್ಲಿ ಯಾವುದೇ ಸತ್ಯವಿಲ್ಲ.



### ಸೆಪ್ಟೆಂಬರ್‌ನಲ್ಲಿ ಏಷ್ಯಾ ಕಪ್

**2025 ರ ಏಷ್ಯಾಕಪ್ ಸೆಪ್ಟೆಂಬರ್‌ನಲ್ಲಿ ನಡೆಯಲಿದೆ. ಈ ಬಾರಿ ಪಂದ್ಯಾವಳಿಯ ಆತಿಥ್ಯ ಭಾರತದ ಬಳಿ ಇದೆ. ಕಳೆದ ಬಾರಿ ಈ ಪಂದ್ಯಾವಳಿಯನ್ನು ಪಾಕಿಸ್ತಾನ ಆತಿಥ್ಯದಲ್ಲಿ ಆಡಲಾಗಿತ್ತು. ಆದರೆ ಟೀಂ ಇಂಡಿಯಾ, ಪಾಕಿಸ್ತಾನ ಪ್ರವಾಸ ಮಾಡಿರಲಿಲ್ಲ. ಅದರ ಬದಲಿಗೆ ತನ್ನ ಎಲ್ಲಾ ಪಂದ್ಯಗಳನ್ನು ಶ್ರೀಲಂಕಾದಲ್ಲಿ ಆಡಿತ್ತು. ಪಂದ್ಯಾವಳಿಯ ಫೈನಲ್ ಪಂದ್ಯ ಕೂಡ ಶ್ರೀಲಂಕಾದಲ್ಲಿ ನಡೆದಿತ್ತು. ಅದರಲ್ಲಿ ಟೀಂ ಇಂಡಿಯಾ ಏಕಪಕ್ಷೀಯವಾಗಿ ಗೆಲುವು ಸಾಧಿಸಿತ್ತು.**

ಏಕೆಂದರೆ ಇಲ್ಲಿಯವರೆಗೆ ಬಿಸಿಸಿಐ, ಎಸಿಸಿಯ ಮುಂಬರುವ ಈವೆಂಟ್‌ಗಳ ಬಗ್ಗೆ ಚರ್ಚಿಸಿಲ್ಲ ಅಥವಾ ಅಂತಹ ಯಾವುದೇ ಕ್ರಮವನ್ನು ತೆಗೆದುಕೊಂಡಿಲ್ಲ.

ಪ್ರಸ್ತುತ ನಮ್ಮ ಮುಖ್ಯ ಗಮನವು ಪ್ರಸ್ತುತ ಐಪಿಎಲ್ ಮತ್ತು ಇಂಗ್ಲೆಂಡ್ ಸರಣಿಯ ಮೇಲಿದೆ. ಏಷ್ಯಾಕಪ್ ವಿಷಯ ಅಥವಾ ಯಾವುದೇ ಇತರ ಎಸಿಸಿ ಈವೆಂಟ್ ವಿಷಯವು ಯಾವುದೇ ಮಟ್ಟದಲ್ಲಿ ಚರ್ಚೆಗೆ ಬಂದಿಲ್ಲ. ಆದ್ದರಿಂದ ಅದರ ಬಗ್ಗೆ ಪ್ರಕಟವಾಗಿರುವ ಸುದ್ದಿ ಅಥವಾ ವರದಿಗಳು ಸಂಪೂರ್ಣವಾಗಿ ಕಾಲ್ಪನಿಕವಾಗಿವೆ. ಎಸಿಸಿಯ ಯಾವುದೇ ಕಾರ್ಯಕ್ರಮದ ಕುರಿತು ಬಿಸಿಸಿಐ ಚರ್ಚೆ ನಡೆಸಿದಾಗ ಮತ್ತು ಯಾವುದೇ ಪ್ರಮುಖ ನಿರ್ಧಾರ ತೆಗೆದುಕೊಂಡಾಗ, ಅದನ್ನು ಮಾಧ್ಯಮಗಳ ಮೂಲಕ ಪ್ರಕಟಿಸಲಾಗುತ್ತದೆ ಎಂದು ಬಿಸಿಸಿಐ ಕಾರ್ಯದರ್ಶಿ ದೇವಜಿತ್ ಸೈಕಿಯಾ ಸ್ಪಷ್ಟಪಡಿಸಿದ್ದಾರೆ.

## ಆರ್‌ಸಿಬಿ ತಂಡಕ್ಕೆ ಝಿಂಬಾಬ್ವೆ ವೇಗಿ ಎಂಟ್ರಿ

ಇಂಡಿಯನ್ ಪ್ರೀಮಿಯರ್ ಲೀಗ್‌ನ ಪ್ಲೇಆಫ್ ಪಂದ್ಯಕ್ಕೂ ಮುನ್ನ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಪ್ರಮುಖ ವೇಗಿ ಲುಂಗಿ ಎನ್‌ಗಿಡಿ ತವರಿಗೆ ಮರಳುವುದು ಖಚಿತವಾಗಿದೆ. ಮುಂಬರುವ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್ ಪಂದ್ಯದ ತಯಾರಿಗಾಗಿ ಸೌತ್ ಆಫ್ರಿಕಾ ಆಟಗಾರರು ಮೇ 26 ರಂದು ತವರಿಗೆ ತೆರಳಲಿದ್ದಾರೆ. ಹೀಗಾಗಿ ಲುಂಗಿ ಎನ್‌ಗಿಡಿ ಆರ್‌ಸಿಬಿ ತಂಡದ ಪ್ಲೇಆಫ್ ಪಂದ್ಯಗಳಿಗೆ ಅಲಭ್ಯರಾಗಲಿದ್ದಾರೆ. ಇತ್ತ ಲುಂಗಿ ಎನ್‌ಗಿಡಿ ಹೊರಗುಳಿಯುವುದು ಖಚಿತವಾಗುತ್ತಿದ್ದಂತೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ ಬದಲಿ ಆಟಗಾರನನ್ನು ಆಯ್ಕೆ ಮಾಡಿಕೊಂಡಿದೆ. ಅದರಂತೆ ಆರ್‌ಸಿಬಿ ತಂಡದ ಪ್ಲೇಆಫ್ ಪಂದ್ಯಗಳಿಗೆ ಝಿಂಬಾಬ್ವೆ ವೇಗಿ ಬ್ಲೆಸಿಂಗ್ ಮುಝುರಬಾನಿ ಆಯ್ಕೆಯಾಗಿದ್ದಾರೆ.

ಬ್ಲೆಸಿಂಗ್ ಮುಝುರಬಾನಿ ಝಿಂಬಾಬ್ವೆ ಪರ ಈವರೆಗೆ 70 ಟಿ20 ಪಂದ್ಯಗಳನ್ನಾಡಿದ್ದಾರೆ. ಈ ವೇಳೆ 1449 ಎಸೆತಗಳನ್ನು ಎಸೆದಿರುವ ಅವರು 78 ವಿಕೆಟ್‌ಗಳನ್ನು ಕಬಳಿಸಿದ್ದಾರೆ. ಅದು ಕೂಡ ಕೇವಲ 7.03 ರನ್ ಎಕಾನಮಿ ರೇಟ್‌ನಲ್ಲಿ ಎಂಬುದು ವಿಶೇಷ. ಹೀಗಾಗಿಯೇ ಇದೀಗ ಬ್ಲೆಸಿಂಗ್ ಮುಝುರಬಾನಿ ಅವರನ್ನು ಲುಂಗಿ ಎನ್‌ಗಿಡಿ ಬದಲಿಯಾಗಿ ಆರ್‌ಸಿಬಿ ಮಾಡಿಕೊಂಡಿದೆ. ಇನ್ನು ಆರ್‌ಸಿಬಿ ತಂಡವು ತನ್ನ ಮುಂದಿನ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಕಣಕ್ಕಿಳಿಯಲಿದೆ. ಮೇ 23 ರಂದು ನಡೆಯಲಿರುವ ಈ ಪಂದ್ಯವು ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ನಡೆಯಲಿದೆ. ಇದಾದ ಬಳಿಕ ಆರ್‌ಸಿಬಿ ತಂಡವು ಲಕ್ನೋ ಸೂಪರ್ ಜೈಂಟ್ಸ್ ತಂಡವನ್ನು ಎದುರಿಸಲಿದೆ. ಈ ಪಂದ್ಯವು ಮೇ 27 ರಂದು ಲಕ್ನೋದಲ್ಲಿ ನಡೆಯಲಿದೆ. ಹೀಗಾಗಿ ಬ್ಲೆಸಿಂಗ್ ಮುಝುರಬಾನಿ ಮೇ 27 ರಿಂದ ಆರ್‌ಸಿಬಿ ಪರ ಕಣಕ್ಕಿಳಿಯಲು ಅರ್ಹರಾಗಲಿದ್ದಾರೆ. ಅದರಂತೆ ಆರ್‌ಸಿಬಿ ತಂಡದ ಕೊನೆಯ ಲೀಗ್ ಮ್ಯಾಚ್ ಹಾಗೂ ಪ್ಲೇಆಫ್ ಪಂದ್ಯಗಳ ವೇಳೆ ಝಿಂಬಾಬ್ವೆ ವೇಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದಲ್ಲಿ ಕಾಣಿಸಿಕೊಳ್ಳಲಿದ್ದಾರೆ.



## ಎಲ್‌ಎಸ್‌ಜಿ ವಿರುದ್ಧ ಎಸ್‌ಆರ್‌ಎಚ್‌ಗೆ 6 ವಿಕೆಟ್‌ಗಳ ಭರ್ಜರಿ ಗೆಲುವು

ಲಖನೌನ ಏಕಾನಾ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಗೆದ್ದ ಸನ್ ರೈಸರ್ಸ್ ಹೈದರಾಬಾದ್ ತಂಡ, ಮೊದಲು ಬೌಲಿಂಗ್ ಆಯ್ಕೆ ಮಾಡಿಕೊಂಡಿತು. ಲಖನೌ: ಇಂಡಿಯನ್ ಪ್ರೀಮಿಯರ್ ಲೀಗ್‌ನ 61ನೇ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ಸೋಮವಾರ ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ಭರ್ಜರಿ ಗೆಲುವು ದಾಖಲಿಸಿದೆ. ಲಖನೌನ ಏಕಾನಾ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಗೆದ್ದ ಸನ್ ರೈಸರ್ಸ್ ಹೈದರಾಬಾದ್ ತಂಡ, ಮೊದಲು ಬೌಲಿಂಗ್ ಆಯ್ಕೆ ಮಾಡಿಕೊಂಡಿತು. ಆದರೆ ಟಾಸ್ ಸೋತರೂ ಮೊದಲು ಬ್ಯಾಟಿಂಗ್ ಮಾಡುವ ಅವಕಾಶ ಪಡೆದ ಲಕ್ನೋ ಸೂಪರ್ ಜೈಂಟ್ಸ್, ಭರ್ಜರಿ ಆರಂಭ ಪಡೆಯಿತು. ಆರಂಭಿಕರಾಗಿ ಕಣಕ್ಕಿಳಿದ ಮಿಚೆಲ್ ಮಾರ್ಷ್(65) ಮತ್ತು ಏಯ್ಡನ್ ಮಾರ್ಕ್ರಾಮ್(61) ಅವರ ಅಬ್ಬರದ ಅರ್ಧಶತಕಗಳ ನೆರವಿನಿಂದ ಲಕ್ನೋ ಸೂಪರ್ ಜೈಂಟ್ಸ್ ನಿಗದಿತ 20 ಓವರ್‌ಗಳಲ್ಲಿ ಏಳು ವಿಕೆಟ್ ನಷ್ಟಕ್ಕೆ ಬರೋಬ್ಬರಿ 205 ರನ್ ಕಲೆ ಹಾಕಿತು. ಗೆಲುವಿಗೆ 206ರನ್ ಗಳ ಬೃಹತ್ ಗುರಿ ಬೆನ್ನತ್ತಿದ ಸನ್ ರೈಸರ್ಸ್ ಹೈದರಾಬಾದ್ ತಂಡ ಅಭಿಷೇಕ್ ಶರ್ಮಾ(59) ಅವರ ಅಬ್ಬರದ ಬ್ಯಾಟಿಂಗ್ ನೆರವಿನಿಂದ 18.2 ಓವರ್ ಗಳಲ್ಲಿ ನಾಲ್ಕು ವಿಕೆಟ್ ಕಳೆದುಕೊಂಡು 206 ರನ್ ಗಳಿಸುವ ಮೂಲಕ ಆರು ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸಿತು.



ಅಭಿಷೇಕ್ ಅಬ್ಬರದ ಬ್ಯಾಟಿಂಗ್

## ವಿದೇಶಿ ತಂಡದ ಪರ ಕೊಹ್ಲಿ ಕಣಕ್ಕೆ!

ನಿವೃತ್ತಿ ಬೆನ್ನಲ್ಲೇ ಬಿಗ್ ಆಫರ್

ವಿರಾಟ್ ಕೊಹ್ಲಿ ಟೆಸ್ಟ್ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದ ಬೆನ್ನಲ್ಲೇ ಬಿಗ್ ಆಫರ್‌ವೊಂದು ಬಂದಿದೆ. ಅದು ಸಹ ಇಂಗ್ಲೆಂಡ್‌ನಿಂದ ಎಂಬುದು ವಿಶೇಷ. ದೀರ್ಘಾವಧಿ ಕ್ರಿಕೆಟ್‌ಗೆ ದಿಢೀರ್ ನಿವೃತ್ತಿ ಘೋಷಿಸಿರುವ ವಿರಾಟ್ ಕೊಹ್ಲಿಯನ್ನು ಕೌಂಟಿ ಕ್ರಿಕೆಟ್‌ನಲ್ಲಿ ಕಣಕ್ಕಿಳಿಸಲು ಮಿಡ್ಲ್‌ಸೆಕ್ಸ್ ಕ್ಲಬ್ ಮುಂದಾಗಿದೆ.

ವಿರಾಟ್ ಕೊಹ್ಲಿ ಈ ಪೀಳಿಗೆಯ ಅತ್ಯಂತ ಪ್ರತಿಮಾ ರೂಪದ ಆಟಗಾರ. ಆದರಿಂದ ಅವರನ್ನು ನಮ್ಮ ಕ್ಲಬ್ ಪರ ಕಣಕ್ಕಿಳಿಸಲು ನಾವು ಉತ್ಸುಕರಾಗಿದ್ದೇವೆ. ಇದಕ್ಕಾಗಿ ಮಾತುಕತೆ ನಡೆಸಲು ಆಸಕ್ತರಾಗಿದ್ದೇವೆ ಎಂದು ಮಿಡ್ಲ್‌ಸೆಕ್ಸ್ ಕ್ರಿಕೆಟ್ ನಿರ್ದೇಶಕ ಅಲನ್ ಕೋಲ್ಮನ್ ದಿ ಗಾರ್ಡಿಯನ್‌ಗೆ ತಿಳಿಸಿದ್ದಾರೆ. ದಿ ಗಾರ್ಡಿಯನ್ ವರದಿ ಪ್ರಕಾರ, ವಿರಾಟ್ ಕೊಹ್ಲಿಯನ್ನು ಕೌಂಟಿ ಕ್ರಿಕೆಟ್‌ಗೆ ಕರೆತರುವ ವೆಚ್ಚವನ್ನು ಹಂಚಿಕೊಳ್ಳಲು ಮಿಡ್ಲ್‌ಸೆಕ್ಸ್ ಅಧಿಕಾರಿಗಳು ಇಚ್ಛೆ ವ್ಯಕ್ತಪಡಿಸಿದ್ದಾರೆ. ಹೀಗಾಗಿ ಕೊಹ್ಲಿ ಜೊತೆ ಮೊದಲಿಗೆ ಮಾತುಕತೆ ನಡೆಯಲಿದ್ದು, ಈ ವೇಳೆ ಅವರ ಡಿಮ್ಯಾಂಡ್‌ಗಳನ್ನು ಆಲಿಸಿ ಬಿಗ್ ಆಫರ್ ನೀಡುವ ಸಾಧ್ಯತೆಯಿದೆ. ಅತ್ತ ಬಿಡುವಿನ ಅವಧಿಯಲ್ಲಿ ಲಂಡನ್‌ನಲ್ಲಿ ಕಾಣಿಸಿಕೊಳ್ಳುವ ವಿರಾಟ್ ಕೊಹ್ಲಿ ಮಿಡ್ಲ್‌ಸೆಕ್ಸ್ ಕ್ಲಬ್ ಜೊತೆ ಒಪ್ಪಂದ ಮಾಡಿಕೊಂಡರೂ ಅಚ್ಚರಿಪಡಬೇಕಿಲ್ಲ. ಏಕೆಂದರೆ ಈ ವರ್ಷ ವಿರಾಟ್ ಕೊಹ್ಲಿ ಟೀಮ್ ಇಂಡಿಯಾ ಪರ ಆಡಲಿರುವುದು ಕೇವಲ 9 ಪಂದ್ಯಗಳನ್ನು ಮಾತ್ರ. ಅಂದರೆ ಟಿ20 ಹಾಗೂ ಟೆಸ್ಟ್ ಕ್ರಿಕೆಟ್‌ಗೆ ವಿದಾಯ ಹೇಳಿರುವ ವಿರಾಟ್ ಕೊಹ್ಲಿ ಏಕದಿನ ಸರಣಿಗಳಲ್ಲಿ ಮಾತ್ರ ಕಾಣಿಸಿಕೊಳ್ಳಲಿದ್ದಾರೆ. ಅದರಂತೆ ಈ ವರ್ಷ ಬಾಂಗ್ಲಾದೇಶ್, ಸೌತ್ ಆಫ್ರಿಕಾ ಹಾಗೂ ಆಸ್ಟ್ರೇಲಿಯಾ ವಿರುದ್ಧ ತಲಾ 3 ಏಕದಿನ ಪಂದ್ಯಗಳನ್ನು ಮಾತ್ರ ಆಡಲಿದ್ದಾರೆ.

ಈ ಮೂರು ಸರಣಿಗಳನ್ನು ಹೊರತುಪಡಿಸಿದರೆ, ವಿರಾಟ್ ಕೊಹ್ಲಿ ಸಂಪೂರ್ಣ ಫ್ರೀ ಆಗಿರಲಿದ್ದಾರೆ. ಹೀಗಾಗಿ ಕಿಂಗ್ ಕೊಹ್ಲಿ ಬಿಡುವಿನ ವೇಳೆ ಕೌಂಟಿ ಕ್ರಿಕೆಟ್‌ನಲ್ಲಿ ಕಾಣಿಸಿಕೊಳ್ಳಲಿದ್ದಾರಾ ಎಂಬುದೇ ಈಗ ಕುತೂಹಲ. ಒಟ್ಟಿನಲ್ಲಿ ಟೆಸ್ಟ್ ಕ್ರಿಕೆಟ್‌ಗೆ ವಿರಾಟ್ ಕೊಹ್ಲಿ ನಿವೃತ್ತಿ ಘೋಷಿಸುತ್ತಿದ್ದಂತೆ, ಕೌಂಟಿ ಕ್ರಿಕೆಟ್‌ನಲ್ಲಿ ಕಿಂಗ್ ಕೊಹ್ಲಿಯನ್ನು ಪರಿಚಯಿಸಲು ಮಿಡ್ಲ್‌ಸೆಕ್ಸ್ ಕ್ಲಬ್ ಮುಂದಾಗಿದೆ. ಈ ಮೂಲಕ ಕೌಂಟಿ ಚಾಂಪಿಯನ್‌ಶಿಪ್ ಅನ್ನು ವಿಶ್ವಕ್ರಿಕೆಟ್‌ನ ಕೇಂದ್ರ ಬಿಂದುವಾಗಿಸಲು ಎಂಸಿಸಿ ಪ್ಲ್ಯಾನ್ ರೂಪಿಸಿದೆ.



## ಆರ್‌ಸಿಬಿ ತಂಡದ ಮುಂದಿನ ಗುರಿ 17+4



ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-18 ರಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಪ್ಲೇ ಆಫ್‌ಗೆ ಪ್ರವೇಶಿಸಿದೆ. ಆಡಿರುವ 12 ಪಂದ್ಯಗಳಲ್ಲಿ 8 ಜಯ ಸಾಧಿಸಿರುವ ಆರ್‌ಸಿಬಿ ಸದ್ಯ ಅಂಕ ಪಟ್ಟಿಯಲ್ಲಿ ದ್ವಿತೀಯ ಸ್ಥಾನದಲ್ಲಿದೆ. ರಾಯಲ್ ಪಡೆಗೆ ಇನ್ನೂ 2 ಪಂದ್ಯಗಳು ಬಾಕಿಯಿದ್ದು, ಈ ಮೂಲಕ ಆರ್‌ಸಿಬಿ ಹೆಚ್ಚುವರಿ 4 ಅಂಕಗಳನ್ನು ಕಲೆಹಾಕಬಹುದು.

ಅಂದರೆ 17 ಅಂಕಗಳನ್ನು ಪಡೆದಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಮುಂದಿನ ಎರಡು ಪಂದ್ಯಗಳಲ್ಲಿ ಜಯ ಸಾಧಿಸಿದರೆ, ಅಂಕ ಪಟ್ಟಿಯಲ್ಲಿ ಮೊದಲ ಅಥವಾ ದ್ವಿತೀಯ ಸ್ಥಾನ ಅಲಂಕರಿಸಬಹುದು. ಈ ಮೂಲಕ ಮೊದಲ ಕ್ವಾಲಿಫೈಯರ್ ಪಂದ್ಯವಾಡುವ ಅವಕಾಶವನ್ನು ಎದುರು ನೋಡಬಹುದು. ಗೆಲ್ಲುವ ತಂಡ ನೇರವಾಗಿ ಫೈನಲ್‌ಗೆ ಎಂಟ್ರಿ ಕೊಡಲಿದೆ. ಇಲ್ಲಿ ಮೊದಲ ಕ್ವಾಲಿಫೈಯರ್ ಪಂದ್ಯವಾಡುವುದರಿಂದ ಸಿಗುವ ಲಾಭವೆಂದರೆ, ಸೋತರೂ ಮತ್ತೊಂದು ಪಂದ್ಯವಿರುವುದು. ಅಂದರೆ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಅಂಕ ಪಟ್ಟಿಯಲ್ಲಿ ಮೊದಲ ಮತ್ತು ಎರಡನೇ ಸ್ಥಾನಗಳಲ್ಲಿರುವ ತಂಡಗಳು ಮುಖಾಮುಖಿಯಾಗಲಿದೆ. ಈ ಪಂದ್ಯದಲ್ಲಿ ಗೆಲ್ಲುವ ತಂಡ ನೇರವಾಗಿ ಫೈನಲ್‌ಗೆ ಎಂಟ್ರಿ ಕೊಡಲಿದೆ. ಇನ್ನು ಮೊದಲ ಕ್ವಾಲಿಫೈಯರ್‌ನಲ್ಲಿ ಸೋಲುವ ತಂಡ ಟೂರ್ನಿಯಿಂದ ಹೊರಬೀಳುವುದಿಲ್ಲ. ಬದಲಾಗಿ ದ್ವಿತೀಯ ಕ್ವಾಲಿಫೈಯರ್ ಪಂದ್ಯವಾಡಲು ಅವಕಾಶ ಇರಲಿದೆ. ಅದರಂತೆ ಎಲಿಮಿನೇಟರ್ ಪಂದ್ಯದಲ್ಲಿ ಗೆಲ್ಲುವ ತಂಡದೊಡನೆ ದ್ವಿತೀಯ ಕ್ವಾಲಿಫೈಯರ್‌ನಲ್ಲಿ ಮೊದಲ ಕ್ವಾಲಿಫೈಯರ್‌ನಲ್ಲಿ ಸೋತ ತಂಡ ಕಣಕ್ಕಿಳಿಯಲಿದೆ. ಈ ಪಂದ್ಯದಲ್ಲಿ ಗೆಲ್ಲುವ ಮೂಲಕ ಫೈನಲ್‌ಗೇರಲು ಅವಕಾಶ ಸಿಗಲಿದೆ.


**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news


**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**